ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮೇ 16 ಶುಕ್ರವಾರ 2025

46

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 30 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ನಮ್ಮ ತಲೆ ಮೇಲೆ ಹೊಡೆದರು! ನಾವು ಅವರ ಎದೆ ಸೀಳಿದೆವು!!

ಪಾಕ್ ವಿರುದ್ಧ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಘರ್ಜನೆ

● ಶ್ರೀನಗರ ಬಳಿ ರಕ್ಷಣಾ ಪಡೆಗಳ ಭೇಟಿಯಾಗಿ ಸಂವಾದ ● ರಾಕ್ಷಸ ರಾಷ್ಟ್ರದ ಕೈಯಲ್ಲಿ ಪರಮಾಣು ಅಣ್ವಸ್ತ್ರ ಇರುವುದು ಸುರಕ್ಷಿತವೇ?; ವಿಶ್ವ ನಾಯಕರಿಗೆ ರಕ್ಷಣಾ ಸಚಿವರ ಗಂಭೀರ ಪ್ರಶ್ನೆ

ಶ್ರೀನಗರ, ಮೇ 15– ಅವರು (ಪಾಕ್) ನಮ್ಮ ತಲೆಯ ಮೇಲೆ ಹೊಡೆದರು, ನಾವು ಅವರ ಎದೆ ಸೀಳಿ ಪರಾಕ್ರಮ ಮೆರೆದಿದ್ದೇವೆ ಎಂದು ಪಾಕಿಸ್ತಾನ ವಿರುದ್ಧ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಘರ್ಜಿಸಿದ್ದಾರೆ.

ರಾಜನಾಥ್ ಸಿಂಗ್ ಅವರು ಇಂದು ಜಮ್ಮು ಮತ್ತು ಕಾಶ್ಮೀರದ ಶ್ರೀನಗರದ ಹೊರವಲಯದಲ್ಲಿರುವ ಬಾದಾಮಿ ಬಾಗ್ ಕಂಟೋನ್ಮೆಂಟ್‌ನಲ್ಲಿ ಭಾರತೀಯ ಸಶಸ್ತ್ರ ಪಡೆಗಳ ಸೈನಿಕರೊಂದಿಗೆ ಸಂವಾದ ನಡೆಸಿದರು. ಗುರುವಾರ ವೀರಯೋಧರನ್ನು ಹುರಿದುಂಬಿಸಿ, ಮಾತನಾಡಿದ ಅವರು, ಪಾಕಿಸ್ತಾನ ನಮ್ಮ ತಲೆಯ ಮೇಲೆ ದಾಳಿ ಮಾಡಿತು, ನಾವು ಅವರ ಎದೆಯ ಮೇಲೆ ದಾಳಿ ನಡೆಸಿದವು ಎಂದು ಯಶಸ್ವಿ ಪ್ರತೀಕಾರದ ಬಗ್ಗೆ ತಿಳಿಸಿದರು.

ಮುಂದುವರೆದು, ರಾಕ್ಷಸ ರಾಷ್ಟ್ರದ ಕೈಯ್ಯಲ್ಲಿ ಪರಮಾಣು ಅಣ್ವಸ್ತ್ರ ಇರುವುದು ಸುರಕ್ಷಿತವೇ ಎಂದು ರಕ್ಷಣಾ ಸಚಿವರು, ವಿಶ್ವ ನಾಯಕರಿಗೆ ಪ್ರಶ್ನೆ ಮಾಡಿದರು. ಇದೇ ವೇಳೆ ಪರಮಾಣು ಅಣ್ವಸ್ತ್ರಗಳನ್ನು ನಿರ್ವಹಿಸುವ ಪಾಕಿಸ್ತಾನದ ಸಾಮರ್ಥ್ಯವನ್ನು ಟೀಕಿಸಿದರು. ಪಾಕಿಸ್ತಾನದಂತಹ ರಾಕ್ಷಸ ರಾಷ್ಟ್ರದ ಕೈಯಲ್ಲಿ ಪರಮಾಣು ಅಣ್ವಸ್ತ್ರ ಇರುವುದು ಸುರಕ್ಷಿತವಾಗಿದೆಯೇ ಎಂದು ಪ್ರಶ್ನಿಸಿದರು.



ಶ್ರೀನಗರದ ಹೊರವಲಯದಲ್ಲಿರುವ ಬಾದಾಮಿಬಾಗ್ ಕಂಟೋನ್ಮೆಂಟ್‌ನಲ್ಲಿ ಭಾರತೀಯ ಸಶಸ್ತ್ರ ಪಡೆಗಳ ಸೈನಿಕರನ್ನು ಗುರುವಾರ ರಕ್ಷಣಾ ಸಚಿವ ರಾಜನಾಥ ಸಿಂಗ್ ಅಭಿನಂದಿಸಿದರು.

ಮೊದಲನೆಯದಾಗಿ, ಭಯೋತ್ಪಾದನೆ ಮತ್ತು ಭಯೋತ್ಪಾದಕರ ವಿರುದ್ಧ ಹೋರಾಡುವಾಗ ವೀರ ಯೋಧರ ಅತ್ಯುನ್ನತ ತ್ಯಾಗಕ್ಕೆ ನಾನು ತಲೆಬಾಗುತ್ತೇನೆ. ಅವರ ಸ್ಮರಣೆಗೆ ನಾನು ಗೌರವ ಸಲ್ಲಿಸುತ್ತೇನೆ. ಪಹಲ್ಗಾಮ್‌ನಲ್ಲಿ ಕೊಲ್ಲಲ್ಪಟ್ಟ ಮುಗ್ಧ ನಾಗರಿಕರಿಗೂ ನಾನು ಗೌರವ ಸಲ್ಲಿಸುತ್ತೇನೆ. ಗಾಯಗೊಂಡ ಸೈನಿಕರ ಶೌರ್ಯಕ್ಕೂ ನಾನು ನಮಸ್ಕರಿಸುತ್ತೇನೆ, ಅವರು ಆದಷ್ಟು ಬೇಗ ಚೇತರಿಸಿಕೊಳ್ಳಲಿ ಎಂದು ದೇವರಲ್ಲಿ ಪ್ರಾರ್ಥಿಸುತ್ತೇನೆ. ಶತ್ರುಗಳನ್ನು ನಾಶ ಮಾಡುವ ನಿಮ್ಮ ಶಕ್ತಿಯನ್ನು ನಾನು ■6ನೇ ಪುಟಕ್ಕೆ

ಪಾಕಿಸ್ತಾನ ಭಾರತಕ್ಕೆ ದ್ರೋಹ ಬಗೆದಿದೆ

ಸುಮಾರು ಇಪ್ಪತ್ತೊಂದು ವರ್ಷಗಳ ಹಿಂದೆ, ಇದೇ ಪಾಕಿಸ್ತಾನವು ಇಸ್ಲಾಮಾಬಾದ್‌ನಲ್ಲಿ ಅಟಲ್ ಜಿ ಅವರ ಮುಂದೆ ತನ್ನ ನೆಲದಿಂದ ಇನ್ನು ಮುಂದೆ ಭಯೋತ್ಪಾದನೆಯನ್ನು ರಫ್ತು ಮಾಡುವುದಿಲ್ಲ ಎಂದು ಘೋಷಿಸಿತ್ತು. ಆದರೆ, ಪಾಕಿಸ್ತಾನ ಭಾರತಕ್ಕೆ ದ್ರೋಹ ಬಗೆದಿದೆ. ಇಂದಿಗೂ ದ್ರೋಹ ಮಾಡಲಾಗುತ್ತಿದೆ. ಈಗ ಇದಕ್ಕಾಗಿ ಅವರು ಭಾರಿ ಬೆಲೆ ತೆರಬೇಕಾಗಿದೆ. ಈ ಬೆಲೆ ನಿರಂತರವಾಗಿ ಹೆಚ್ಚಾಗುತ್ತಲೇ ಇರುತ್ತದೆ.

ಪ್ರಧಾನಿ ಮೋದಿ ಅವರು ಭಯೋತ್ಪಾದನೆ ವಿರುದ್ಧ ಭಾರತದ ನೀತಿಯನ್ನು ಸ್ಪಷ್ಟವಾಗಿ ವ್ಯಾಖ್ಯಾನಿಸಿದ್ದಾರೆ, ಇದು ಭಾರತದ ನೆಲದಲ್ಲಿ ಯಾವುದೇ ಭಯೋತ್ಪಾದಕ ದಾಳಿಯನ್ನು ಯುದ್ಧದ ಕೃತ್ಯವೆಂದು ಪರಿಗಣಿಸಲಾಗುತ್ತದೆ ಎಂದು ಹೇಳುತ್ತದೆ. ಗಡಿಯುದ್ಧಕ್ಕೂ ಯಾವುದೇ ಅನುಚಿತ ಕ್ರಮ ಕೈಗೊಳ್ಳಬಾರದು ■6ನೇ ಪುಟಕ್ಕೆ

ಪಾಕ್ ಭಯೋತ್ಪಾದನೆ ನಿಲ್ಲದ ಹೊರತು ಸಿಂಧೂ ಜಲ ಒಪ್ಪಂದ ಪರಿಶೀಲನೆ ಇಲ್ಲ

ನವದೆಹಲಿ, ಮೇ 15– ಭಾರತದ ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರು ಪಾಕಿಸ್ತಾನದ ವಿರುದ್ಧ ಭಾರತದ ನಿಲುವನ್ನು ಗುರುವಾರ ಮತ್ತೊಮ್ಮೆ ಪುನರುಚ್ಚರಿಸಿದ್ದಾರೆ. ನವದೆಹಲಿಯಲ್ಲಿ ಹೊಂಡುರಾಸ್ ರಾಯಭಾರ ಕಚೇರಿಯ ಉದ್ಘಾಟನಾ ಸಮಾರಂಭದಲ್ಲಿ ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ಅವರು, ಭಯೋತ್ಪಾದನೆ ಬಗೆಹರಿಯುವವರೆಗೆ ಪಾಕಿಸ್ತಾನದೊಂದಿಗೆ ಯಾವುದೇ ಸಾಮಾನ್ಯ ಮಾತುಕತೆ ಸಾಧ್ಯವಿಲ್ಲ. ಪಾಕಿಸ್ತಾನವು ಗಡಿಯಾಚೆಗಿನ ಭಯೋತ್ಪಾದನೆಗೆ ಪರಿಹಾರ ಕಂಡುಕೊಳ್ಳುವವರೆಗೆ ಸಿಂಧೂ ನದಿ ಜಲ ಒಪ್ಪಂದದ ಬಗ್ಗೆ ಪ್ರಸ್ತಾಪವೇ ಇಲ್ಲ ಎಂದು ಖಡಾಖಂಡಿತವಾಗಿ ಹೇಳಿದ್ದಾರೆ.



ಜೈಶಂಕರ್

ಸಿಂಧೂ ಜಲ ಒಪ್ಪಂದವನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. ಪಾಕಿಸ್ತಾನವು ■6ನೇ ಪುಟಕ್ಕೆ

ಪುಲ್ವಾಮಾದಲ್ಲಿ ಭದ್ರತಾ ಪಡೆಗಳೊಂದಿಗೆ ಗುಂಡಿನ ಚಕಮಕಿ

ಮೂವರು ಜೈಶ್ ಉಗ್ರರ ಹತ್ಯೆ

ಶ್ರೀನಗರ, ಮೇ 15– ಜಮ್ಮು ಮತ್ತು ಕಾಶ್ಮೀರದ ಪುಲ್ವಾಮಾದಲ್ಲಿ ನಡೆದ ಭಾರಿ ಗುಂಡಿನ ಚಕಮಕಿಯಲ್ಲಿ ಭದ್ರತಾ ಪಡೆಗಳು ಮೂವರು ಜೈಶ್ ಉಗ್ರರನ್ನು ಹತ್ಯೆ ಮಾಡಿರುವುದಾಗಿ ಹಿರಿಯ ಸೇನಾಧಿಕಾರಿಗಳು ತಿಳಿಸಿದ್ದಾರೆ.




ಅಮೀರ್ ನಜೀರ್

ಪುಲ್ವಾಮಾ ಜಿಲ್ಲೆಯ ಉಪನಗರವಾದ ಅಮತಿಪೋರಾದ ನಾಡರ್ ಮತ್ತು ಟ್ರಾಲ್ ಪ್ರದೇಶಗಳಲ್ಲಿ ಇಂದು ಬೆಳಗ್ಗೆ ನಡೆದ ಗುಂಡಿನ ಚಕಮಕಿಯಲ್ಲಿ ಭಾರತೀಯ ಸೇನೆ ಉಗ್ರರನ್ನು ಹೊಡೆದುರುಳಿಸಿದೆ. ಕಳೆದ ಮೂರು ದಿನಗಳಲ್ಲಿ ನಡೆದ 2ನೇ ಎನ್‌ಕೌಂಟರ್ ಇದಾಗಿದೆ. ಹತ್ಯೆಗೀಡಾದ ಮೂವರು ಜೈಶ್ ಎ ಮೊಹಮ್ಮದ್ ಸಂಘಟನೆಗೆ ಸೇರಿದವರು ಎಂದು ಉನ್ನತ ಮೂಲಗಳು ತಿಳಿಸಿರುವುದಾಗಿ ವರದಿಯಾಗಿದೆ. ■6ನೇ ಪುಟಕ್ಕೆ

ಭಾರತ–ಪಾಕಿಸ್ತಾನ ಕದನ ವಿರಾಮ: ಉಲ್ಟಾ ಹೊಡೆದ ಡೊನಾಲ್ಡ್ ಟ್ರಂಪ್

ಕತಾರ್, ಮೇ 15–ಇತ್ತೀಚೆಗೆ ಭಾರತ ಮತ್ತು ಪಾಕಿಸ್ತಾನದ ನಡುವೆ ಘೋಷಣೆಯಾಗಿದ್ದ ಕದನ ವಿರಾಮಕ್ಕೆ ನಾನೇ ಮಧ್ಯಸ್ಥಿಕೆ ವಹಿಸಿದ್ದೇನೆ ಎಂದು ಹೇಳಿಕೊಂಡಿದ್ದ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇದೀಗ ಉಲ್ಟಾ ಹೊಡೆದಿದ್ದಾರೆ.



ಪಹಲ್ಗಾವ್ ಭೀಕರ ಭಯೋತ್ಪಾದಕ ದಾಳಿಯ ನಂತರ ಉಭಯ ದೇಶಗಳ ನಡುವೆ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿತ್ತು ಎರಡೂ ದೇಶಗಳು ಯುದ್ಧದತ್ತ ಮುಖ ಮಾಡಿದ್ದವು. ನಂತರ ನಾನೇ ಮಧ್ಯಪ್ರವೇಶಿಸಿ ಕದನ ವಿರಾಮಕ್ಕೆ ಕಾರಣವಾದೆ ಎನ್ನುವ ಅರ್ಥದಲ್ಲಿ ಡೊನಾಲ್ಡ್ ಟ್ರಂಪ್ ಹೇಳಿದ್ದರು. ಆದರೆ ಇದೀಗ ತಮ್ಮ ಮಾತು ಬದಲಿಸಿದ್ದಾರೆ. ■6ನೇ ಪುಟಕ್ಕೆ

ರಾಜ್ಯದ ಅತಿಥಿ ಶಿಕ್ಷಕರು, ಉಪನ್ಯಾಸಕರ ಗೌರವ ಸಂಭಾವನೆ 2,000 ರೂ. ಹೆಚ್ಚಳ

ಬೆಂಗಳೂರು, ಮೇ 15– ರಾಜ್ಯದ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರು ಮತ್ತು ಉಪನ್ಯಾಸಕರಿಗೆ ರಾಜ್ಯ ಸರ್ಕಾರವು ಸಿಹಿ ಸುದ್ದಿ ನೀಡಿದೆ.

ಅವರ ಬಹುದಿನದ ಬೇಡಿಕೆಯಂತೆ, ಈ ಎಲ್ಲಾ ಅತಿಥಿ ಬೋಧಕರ ಮಾಸಿಕ ಗೌರವಧನವನ್ನು ತಲಾ 2,000 ರೂ. ಹೆಚ್ಚಿಸಿ ಸರ್ಕಾರ ಆದೇಶ ಹೊರಡಿಸಿದೆ. ಈ ಆದೇಶವು ತಕ್ಷಣದಿಂದಲೇ ಜಾರಿಗೆ ಬರಲಿದ್ದು, ಮುಂದಿನ ಆದೇಶದವರೆಗೆ ಈ ಪರಿಷ್ಕೃತ ಗೌರವ ಸಂಭಾವನೆ ಜಾರಿಯಲ್ಲಿರಲಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ. ಈ ಹಿಂದೆ ಸರ್ಕಾರ ಪ್ರಾಥಮಿಕ ಶಾಲಾ ಅತಿಥಿ ಶಿಕ್ಷಕರಿಗೆ ರೂ. 10,000 ಹಾಗೂ ಪ್ರೌಢಶಾಲಾ ■6ನೇ ಪುಟಕ್ಕೆ

ಮೈಸೂರಿನ ಕೆಲವೆಡೆ ಧಾರಾಕಾರ ಮಳೆ

ಧರೆಗುರುಳಿದ ಮರ, ಎರಡು ಕಾರು ಸೇರಿ ಹಲವು ವಾಹನಗಳಿಗೆ ಹಾನಿ



ಮೈಸೂರಿನ ಮುಡಾ ಆವರಣದಲ್ಲಿದ್ದ ಮರ ಉರುಳಿ ಕಾರಿಗೆ ಹಾನಿಯಾಗಿರುವುದು.



ಧನ್ವಂತ್ರಿ ರಸ್ತೆ ಪೆಟ್ರೋಲ್ ಬಂಕ್ ಬಳಿ ಕಾರೊಂದರ ಮೇಲೆ ಮರ ಉರುಳಿರುವುದು.

ಮೈಸೂರು, ಮೇ 15(ಎಸ್‌ಬಿಡಿ)– ಮೈಸೂರಿನ ಕೆಲವೆಡೆ ಗುರುವಾರ ಸಂಜೆ ಧಾರಾಕಾರ ಮಳೆ ಸುರಿದ ಪರಿಣಾಮ ಮೂರ್ನಾಲ್ಕು ಮರಗಳು ಧರೆಗುರುಳಿ, ವಾಹನಗಳಿಗೆ ಹಾನಿಯಾಗಿದೆ.

ನಗರದ ದೇವರಾಜ ಮೊಹಲ್ಲಾ, ಅಗ್ರಹಾರ, ಕೆಜಿ.ಕೊಪ್ಪಲು, ಜಯನಗರ, ಶಾರದಾದೇವಿನಗರ, ರಾಮಕೃಷ್ಣನಗರ, ಎನ್.ಆರ್.ಮೊಹಲ್ಲಾ ಸೇರಿದಂತೆ ಕೆಲವೆಡೆ ಇಂದು ಸಂಜೆ ಸುಮಾರು ಐದು ಗಂಟೆಯಿಂದ ಅರ್ಧ ಗಂಟೆಗೂ ಹೆಚ್ಚು ಕಾಲ ಭಾರಿ ಮಳೆ ಸುರಿಯಿತು. ಕೆಲವೆಡೆ ಸಾಧಾರಣ ಮಳೆಯಾಗಿದ್ದು, ರಿಂಗ್ ರಸ್ತೆ ಭಾಗದಲ್ಲಿ ತುಂತುರು ಮಳೆ ಸುರಿದಿದೆ.

ಉರುಳಿದ ಮರಗಳು: ಧನ್ವಂತ್ರಿ ರಸ್ತೆ ಪೆಟ್ರೋಲ್ ಬಂಕ್ ಬಳಿ ಮರವೊಂದು ರಸ್ತೆ ಬದಿ ನಿಲ್ಲಿಸಿದ್ದ ಕಾರಿನ(ಕೆಎ–09, ಝಡ್–8451) ಬಾನೆಟ್ ಮೇಲೆ ಬಿದ್ದಿದೆ. ಹಾಗೆಯೇ ಮುಡಾ ಆವರಣದಲ್ಲಿದ್ದ ಮರವೊಂದು ಉರುಳಿ, ಜೆಎಲ್‌ಬಿ ರಸ್ತೆ ಕಡೆಗೆ ಬಿದ್ದ ಪರಿಣಾಮ ರಸ್ತೆ ಬದಿ ಪಾರ್ಕ್ ಮಾಡಿದ್ದ ಎಕ್ಸ್‌ಯುವಿ ಕಾರು (ಹೆಚ್‌ಆರ್–26, ಬಿಪಿ–0523) ಹಾನಿಗೊಳಲಾಗಿದೆ. ಗಾಂಧಿನಗರದ ಎಫ್‌ಟಿಎಸ್ ವೃತ್ತದ ಬಳಿ ಹಾಗೂ ಕೃಷ್ಣಮೂರ್ತಿಪುರಂನಲ್ಲೂ ಮರ ಬಿದ್ದು ಕೆಲವು ದ್ವಿಚಕ್ರ ವಾಹನಗಳಿಗೆ ಹಾನಿಯಾಗಿರುವುದಾಗಿ ತಿಳಿದು ಬಂದಿದೆ. ಇನ್ನೂ ಕೆಲವೆಡೆ ಮರದ ಕೊಂಬೆಗಳು ಮುರಿದು ಬಿದ್ದಿದ್ದು, ಸದ್ಯ ಯಾವುದೇ ಅಪಾಯ ಸಂಭವಿಸಿಲ್ಲ.

ಜೋರು ಮಳೆ ಸುರಿದ ಭಾಗದಲ್ಲಿ ರಸ್ತೆಗಳೆಲ್ಲಾ ಜಲಮಯವಾಗಿದ್ದವು. ರಾಮಾನುಜ ರಸ್ತೆ 8ನೇ ಕ್ರಾಸ್‌ನಲ್ಲಿ ಮ್ಯಾನ್‌ಹೋಲ್ ಉಕ್ಕಿ ಹರಿದು ಸಾರ್ವಜನಿಕರಿಗೆ ತೊಂದರೆಯಾಗಿತ್ತು. ಮೈಸೂರು ನಗರಪಾಲಿಕೆ ಕಂಟ್ರೋಲ್ ರೂಂಗೆ ದೂರುಗಳು ಬಂದ ಕೂಡಲೇ ಅಭಯ ತಂಡಗಳ ಮೂಲಕ ಉರುಳಿ ಬಿದ್ದಿದ್ದ ಮರಗಳನ್ನು ತೆರವುಗೊಳಿಸುವುದರ ಜೊತೆಗೆ ಮ್ಯಾನ್‌ಹೋಲ್ ದುರಸ್ತಿಪಡಿಸಲಾಯಿತು.

ಎಂಡಿಎ ಅಸ್ತಿತ್ವಕ್ಕೆ ಬರುತ್ತಿದ್ದಂತೆ ಮುಡಾದ 94 ಹೊರಗುತ್ತಿಗೆ ನೌಕರರಿಗೆ ಕೊಕ್

ಮೊದಲ ದಿನದಿಂದಲೇ ಹಾಜರಾತಿ; ಸಂಬಳಕ್ಕೆ ಕತ್ತರಿ

ಮೈಸೂರು, ಮೇ 15(ಆರ್‌ಕೆ)– ಸರ್ಕಾರದ ಕಟ್ಟಾಜ್ಞೆಯಂತೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (MUDA)ದಲ್ಲಿ ಹಲವು ವರ್ಷಗಳಿಂದ ಕೆಲಸ ಮಾಡುತ್ತಿದ್ದ 94 ಹೊರಗುತ್ತಿಗೆ ನೌಕರರ ಸೇವೆಯನ್ನು ಅಂತ್ಯಗೊಳಿಸಲಾಗಿದೆ.

ಮೈಸೂರು ಅಭಿವೃದ್ಧಿ ಪ್ರಾಧಿಕಾರ (MDA) ಅಸ್ತಿತ್ವಕ್ಕೆ ಬಂದ ಮೊದಲ ದಿನ (ಮೇ15) ದಿಂದ ಹೊರಗುತ್ತಿಗೆ ಆಧಾರದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ 94 ಮಂದಿಗೆ ಕೊಕ್ ನೀಡಿದ್ದು, ಅವರಿಗೆ ಹಾಜರಾತಿ, ಸಂಬಳ ನೀಡುವುದಿಲ್ಲ ಎಂದು ತಿಳಿಸಲಾಗಿದೆ.

ಸರ್ಕಾರ ಕಳೆದ ಒಂದು ತಿಂಗಳ ಹಿಂದೆ ಈ ಸಂಬಂಧ ಆದೇಶ ಹೊರಡಿಸಿದ್ದು, ಆರ್ಥಿಕ ಇಲಾಖೆ ಅನುಮೋದನೆ ಪಡೆಯದೇ, ಟೆಂಡರ್ ಪ್ರಕ್ರಿಯೆಯನ್ನು ಸಹ ಮಾಡದೇ ನೇರವಾಗಿ 'ಡಿ' ಗ್ರೂಪ್, ಬೆರಳಚ್ಚುಗಾರರು, ಡೇಟಾ ಎಂಟ್ರಿ ಆಪರೇಟರ್(DEO), ವಾಹನ ಚಾಲಕರನ್ನು ಹೊರಗುತ್ತಿಗೆ ಮೇಲೆ ನೇಮಿಸಿಕೊಂಡಿರುವುದರಿಂದ ಸರ್ಕಾರಕ್ಕೆ ಹೊರೆ



ಯಾಗುತ್ತಿರುವ ಕಾರಣ ಅಂತಹ ನೌಕರರನ್ನು ವಜಾಗೊಳಿಸಿ ಕ್ರಮ ಕೈಗೊಂಡ ಬಗ್ಗೆ ಅನುಪಾಲನಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಸೂಚನೆ ನೀಡಲಾಗಿತ್ತು.

ಅದರನ್ವಯ ಪೂರ್ವ ಮಾಹಿತಿ ನೀಡಿ ಇಂದಿನಿಂದ (ಮೇ 15) ಕೆಲಸಕ್ಕೆ ಬರಬೇಡಿ, ನೀವು ಬಂದರೂ ಅಟೆಂಡೆನ್ಸ್‌ಗೆ ಸಹಿ ಮಾಡುವಂತಿಲ್ಲ. ಸಂಬಳವನ್ನೂ ಕೊಡುವುದಿಲ್ಲ ಎಂದು ಹಿರಿಯ ಅಧಿಕಾರಿಗಳು ತಿಳಿಸಿದ್ದರು. ಹಾಗಾಗಿ ಕೆಲವು ಬೆರಳೆಣಿಕೆಯಷ್ಟು ನೌಕರರನ್ನು ಹೊರತುಪಡಿಸಿ ಉಳಿದವರು ಇಂದು ಕೆಲಸಕ್ಕೆ ಬಂದಿಲ್ಲ. ಬಂದವರಿಗೂ ಎಂಡಿಎ ಕಚೇರಿ ಶಾಖಾ ವ್ಯವಸ್ಥಾಪಕರು ■6ನೇ ಪುಟಕ್ಕೆ

ಚುಂಚನಕಟ್ಟೆ ಶ್ರೀರಾಮ ಸಕ್ಕರೆ ಕಾರ್ಖಾನೆಯಲ್ಲಿ ಪ್ರಸಕ್ತ ವರ್ಷವೇ ಕಬ್ಬು ಅರೆಯುವ ಕಾರ್ಯ

● ತೂಕದ ಮೋಸದ ಬಗ್ಗೆ ತನಿಖಾ ವರದಿ ನಂತರ ಕ್ರಮ
● ಕಳಪೆ ಗುಣಮಟ್ಟದ ಬೀಜ ವಿತರಿಸಿದರೆ ಸಹಿಸಲ್ಲ
● ಪ್ರತಿ ಮನೆಗೂ ಶುದ್ಧ ಕುಡಿಯುವ ನೀರು

ರೈತರ ಕುಂದು–ಕೊರತೆ ಸಭೆಯಲ್ಲಿ ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ ರೆಡ್ಡಿ ಭರವಸೆ

ಮೈಸೂರು, ಮೇ15(ಬಿಎಲ್‌ಯು)– ಮೈಸೂರಿನ ಕೆ.ಆರ್.ನಗರ ತಾಲೂಕು ಚುಂಚನಕಟ್ಟೆಯ ಶ್ರೀರಾಮ ಸಕ್ಕರೆ ಕಾರ್ಖಾನೆಯಲ್ಲಿ ಪೂರ್ಣ ಪ್ರಮಾಣದಲ್ಲಿ ಕಬ್ಬು ಅರೆಯಲು ಇದ್ದ ಎಲ್ಲಾ ತೊಡಕು ನಿವಾರಿಸಲಾಗಿದ್ದು, ಈ ವರ್ಷದಿಂದ ಕಬ್ಬು ಅರೆಯುವ ಕಾರ್ಯ ಆರಂಭವಾಗಲಿದೆ ಎಂದು ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತರೆಡ್ಡಿ ಭರವಸೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿಯ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಇಂದು ಆಯೋಜಿಸಿದ್ದ ಜಿಲ್ಲಾ ಮಟ್ಟದ ರೈತರ ಕುಂದುಕೊರತೆ ಸಭೆಯಲ್ಲಿ ಮಾತನಾಡಿದ ಅವರು, ಮೈಸೂರಿನ ನಂಜನಗೂಡು ಬಳಿ ಇರುವ ಬಣ್ಣಾರಿ ಅಮ್ಮನ್ ಸಕ್ಕರೆ ಕಾರ್ಖಾನೆಯಲ್ಲಿ ತೂಕದಲ್ಲಿನ ಮೋಸದ ಬಗ್ಗೆ ತನಿಖೆ ನಡೆಯುತ್ತಿದ್ದು, ವರದಿ ಬಂದ ನಂತರ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ರೈತ ಸಿ.ಕೆ.ರವೀಂದ್ರ ಮಾತನಾಡಿ, ಚುಂಚನಕಟ್ಟೆ ಸಕ್ಕರೆ ಕಾರ್ಖಾನೆಯಲ್ಲಿ 1.75 ಲಕ್ಷ ಟನ್ ಕಬ್ಬು ಅರೆಯುವ ಸಾಮರ್ಥ್ಯ ಇದ್ದರೂ 25 ಸಾವಿರ ಟನ್ ಮಾತ್ರ ಅರೆಯುತ್ತಿದ್ದು, ಉಳಿದ ಕಬ್ಬನ್ನು ಬೇರೆಡೆ ಸಾಗಾಟ ಮಾಡಲಾಗುತ್ತಿದೆ. ಕಾರ್ಖಾನೆಯ ಎಲ್ಲಾ ಯಂತ್ರ ಸುಸ್ಥಿತಿಯಲ್ಲಿದ್ದರೂ ಕಬ್ಬು ಅರೆಯದಿರಲು ಕಾರಣವೇನು ಎಂದು ಪ್ರಶ್ನಿಸಿದರು.

ಕರ್ನಾಟಕ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಮಾತನಾಡಿ, ಬಣ್ಣಾರಿ ಅಮ್ಮನ್ ಸಕ್ಕರೆ ಕಾರ್ಖಾನೆಯಲ್ಲಿ ತೂಕದ ಯಂತ್ರ ಅಳವಡಿಸಿಲ್ಲ. ತೂಕದಲ್ಲಿ ಮೋಸ ಆಗುತ್ತಿದೆ. ಈ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರು



ಮೈಸೂರು ಜಿಪಂನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ ರೆಡ್ಡಿ ರೈತರ ಸಭೆ ನಡೆಸಿದರು.

ಹಾಗೂ ಸಕ್ಕರೆ ಸಚಿವರ ಸಮ್ಮುಖದಲ್ಲಿ ಸಭೆ ಕರೆದು ಕಬ್ಬು ಬೆಳೆಗಾರರ ಸಮಸ್ಯೆ ಪರಿಹಾರ ಮಾಡಬೇಕೆಂದು ಮನವಿ ಮಾಡಿದರು.

ಇದಕ್ಕೆ ಪ್ರತಿಕ್ರಿಯೆ ನೀಡಿದ ಜಿಲ್ಲಾಧಿಕಾರಿ ಲಕ್ಷ್ಮಿಕಾಂತರೆಡ್ಡಿ ಅವರು, ಶ್ರೀರಾಮ ಸಹಕಾರ ಸಕ್ಕರೆ ಕಾರ್ಖಾನೆ ಕಳೆದ ನಾಲ್ಕೈದು ವರ್ಷದಿಂದ ಸ್ಥಗಿತಗೊಂಡಿತ್ತು. ಹಲವು ವರ್ಷದ ನಂತರ ಈಗ ಆರಂಭವಾಗಲಿದೆ. ಈಗ ಹೊಸ ಯಂತ್ರೋಪಕರಣ ಅಳವಡಿಸಿ ಕಬ್ಬು ಅರೆಯುವ ಪ್ರಕ್ರಿಯೆ ಆರಂಭಿಸಲಾಗುವುದು ಎಂದರು.

ತೂಕದಲ್ಲಿನ ಮೋಸದ ಬಗ್ಗೆ ತನಿಖೆ ನಡೆಸಲು ರಾಜ್ಯ ಮಟ್ಟದಲ್ಲಿ ಸಮಿತಿ ರಚನೆ ಮಾಡಿದ್ದು, ಅವರು ತನಿಖೆ ಮಾಡಿ ವರದಿ ನೀಡಲಿದ್ದು, ತಪ್ಪೆಸಗಿದ್ದರೆ ಕ್ರಮ ಕೈಗೊಳ್ಳಲಾಗುವುದು. ರೈತರು ಹೆಚ್ಚುವರಿಯಾಗಿ 150 ರೂಪಾಯಿ ಕೇಳುತ್ತಿದ್ದು, ಇದನ್ನು ಪರಿಶೀಲನೆ ನಡೆಸಲಾಗುವುದು ಎಂದು ಹೇಳಿದರು.

ರೈತರಿಗೆ ಗುಣಮಟ್ಟದ ಬಿತ್ತನೆ ಬೀಜ ವಿತರಣೆ ಮಾಡುವುದು ಕೃಷಿ ಮತ್ತು ತೋಟಗಾರಿಕೆ ಇಲಾಖೆಯ ಅಧಿಕಾರಿಗಳ ಜವಾಬ್ದಾರಿಯಾಗಿದ್ದು, ಈ ಬಗ್ಗೆ ನಿರ್ಲಕ್ಷ್ಯ ತೋರಿ ಕಳಪೆ ಗುಣಮಟ್ಟದ ಬಿತ್ತನೆ ಬೀಜ ವಿತರಣೆ ಮಾಡಿದರೆ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಲಕ್ಷ್ಮಿಕಾಂತರೆಡ್ಡಿ ಎಚ್ಚರಿಸಿದರು. ಪ್ರತಿ ಮನೆಗೂ ಟ್ಯಾಪ್ ಮೂಲಕ ಶುದ್ಧ ಕುಡಿಯುವ ನೀರು ಸರಬರಾಜು ಮಾಡುವುದು ಕೇಂದ್ರ ಸರ್ಕಾರದ ಜಲಜೀವನ್ ಮಿಷನ್ ಯೋಜನೆಯಾಗಿದೆ. ಈ ಯೋಜನೆ ಪೂರ್ಣ ಪ್ರಮಾಣದಲ್ಲಿ ಅನುಷ್ಠಾನ ಮಾಡುವಂತೆ ಜಿಲ್ಲಾ ಪಂಚಾಯತ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ರೈತರು ಸಂಕಷ್ಟದ ಸಮಯದಲ್ಲಿ ಚಿನ್ನ ಗಿರವಿ ಇಡಲು ಬ್ಯಾಂಕ್‌ಗೆ ಬಂದಾಗ ಅಧಿಕಾರಿಗಳು ತಗಾದೆ ತೆಗೆಯುವುದನ್ನು ತಪ್ಪಿಸಬೇಕು ಎಂದು ಸ್ಥಳದಲ್ಲಿದ್ದ ಲೀಡ್ ಬ್ಯಾಂಕ್ ವ್ಯವಸ್ಥಾಪಕರಿಗೆ ಲಕ್ಷ್ಮಿಕಾಂತರೆಡ್ಡಿ ಸೂಚನೆ ನೀಡಿದರು.

ಮೈಸೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಷ್ಣುವರ್ಧನ್, ಡಿಸಿಎಫ್ ಕೆ.ಎನ್.ಬಸವರಾಜು, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಕೃಷ್ಣಂರಾಜು, ಸವಿತಾ, ಜಂಟಿ ಕೃಷಿ ನಿರ್ದೇಶಕ ರವಿ ಸೇರಿದಂತೆ ಹಲವು ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

ಶೀಘ್ರ ಎಂಡಿಎ ನಾಮಫಲಕ ಅಳವಡಿಕೆ

ಮೈಸೂರು, ಮೇ 15 (ಆರ್‌ಕೆ)– ರಾಜ್ಯಪಾಲರ ಅಂಕಿತದೊಂದಿಗೆ ಗೆಜೆಟ್‌ನಲ್ಲಿ ಪ್ರಕಟವಾಗಿರುವುದರಿಂದ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಎಂದಿರುವ ನಾಮಫಲಕವನ್ನು ಶೀಘ್ರ ಮೈಸೂರು ಅಭಿವೃದ್ಧಿ ಪ್ರಾಧಿಕಾರ (ಎಂಡಿಎ) ಎಂದು ಬದಲಾಯಿಸಲಾಗುವುದು ಎಂದು ಮುಡಾ ಕಾರ್ಯದರ್ಶಿ ಪ್ರಸನ್ನಕುಮಾರ್ ತಿಳಿಸಿದ್ದಾರೆ.



ಪ್ರಸನ್ನಕುಮಾರ್

ರಾಜ್ಯ ಸರ್ಕಾರವು ಪ್ರಸ್ತುತ ಇರುವ ಮುಡಾವನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ (ಬಿಡಿಎ) ಮಾದರಿಯಲ್ಲಿ ಮೈಸೂರು ಅಭಿವೃದ್ಧಿ ಪ್ರಾಧಿಕಾರ (ಎಂಡಿಎ) ಎಂಬ ಪ್ರಾಧಿಕಾರವನ್ನು ಅಸ್ತಿತ್ವಕ್ಕೆ ತಂದಿರುವುದರಿಂದ ಹೊಸ ಪ್ರಾಧಿಕಾರವು ಇಂದಿನಿಂದ ಜಾರಿಗೆ ಬರುವುದರಿಂದ ಶೀಘ್ರ ಕಚೇರಿ ಕಟ್ಟಡದಲ್ಲಿರುವ ನಾಮಫಲಕವನ್ನು ಬದಲಿಸುತ್ತೇವೆ ಎಂದು ತಿಳಿಸಿದರು.

ಅದೇ ರೀತಿ ಹೊಸ ಹೆಸರಿನಲ್ಲಿ ಪ್ರಾಧಿಕಾರದ ಕಚೇರಿ ಕಡತಗಳು, ಲೆಟರ್ ಹೆಡ್‌ಗಳು, ಮುದ್ರೆಯಲ್ಲೂ ಹೆಸರು ಬದಲಿಸಬೇಕಾಗುತ್ತದೆ. ಮೈಸೂರು ಅಭಿವೃದ್ಧಿ ಪ್ರಾಧಿಕಾರದ ಕಾರ್ಯಾದೇಶವು ನಗರಾಭಿವೃದ್ಧಿ ಇಲಾಖೆಯಿಂದ ಬರಬೇಕಾಗಿದ್ದು, ನಂತರವಷ್ಟೇ ಹೊಸ ನಿಯಮದಡಿ ಕಾರ್ಯನಿರ್ವಹಿಸಲಿದೆ ಎಂದು ಪ್ರಸನ್ನಕುಮಾರ್ ತಿಳಿಸಿದರು.

ಕಾರುಗಳಿಗೆ ಕೂಲಿಂಗ್ ಪೇಪರ್ ಅಂಟಿಸಬೇಡಿ

ಸಂಚಾರ ಪೊಲೀಸರಿಂದ ಬುಧವಾರ ವಿಶೇಷ ಕಾರ್ಯಾಚರಣೆ, ನಿಯಮ ಉಲ್ಲಂಘಿಸಿದ 100ಕ್ಕೂ ಹೆಚ್ಚು ಪ್ರಕರಣ, ದಂಡ ವಸೂಲಿ

ಮೈಸೂರು,ಮೇ15(ಆರ್‌ಕೆ)– ಕೂಲಿಂಗ್ ಪೇಪರ್ (ಟೆಂಟೆಡ್ ಗ್ಲಾಸ್) ಅಂಟಿಸಿದ ಕಾರುಗಳ ವಿರುದ್ಧ ವಿಶೇಷ ಕಾರ್ಯಾಚರಣೆ ನಡೆಸುತ್ತಿರುವ ಮೈಸೂರು ನಗರ ಸಂಚಾರ ಪೊಲೀಸರು, ನಿಯಮ ಉಲ್ಲಂಘಿಸಿದವರಿಗೆ ದಂಡ ವಿಧಿಸುತ್ತಿದ್ದಾರೆ.

ಬುಧವಾರ ಮೈಸೂರು ನಗರದ ದೇವರಾಜ, ಕೃಷ್ಣರಾಜ, ನರಸಿಂಹರಾಜ, ವಿವಿಪುರಂ ಹಾಗೂ ಸಿದ್ಧಾರ್ಥನಗರ ಸಂಚಾರ ಠಾಣೆ ಪೊಲೀಸರು ತಮ್ಮ ವ್ಯಾಪ್ತಿಯಲ್ಲಿ ವಿಶೇಷ ಕಾರ್ಯಾಚರಣೆ ನಡೆಸಿ ಕಾರಿನ ಕಿಟಕಿ ಗಾಜುಗಳಿಗೆ ಕೂಲಿಂಗ್ ಪೇಪರ್ ಅಂಟಿಸಿದ ಕಾರುಗಳನ್ನು ತಡೆದು ನಿಲ್ಲಿಸಿ ಪ್ರತೀ ಕಾರಿಗೆ 500 ರೂ. ನಂತೆ ದಂಡ ವಿಧಿಸಿದರಲ್ಲದೆ, ಸ್ಥಳದಲ್ಲೇ ಕಪ್ಪು ಬಣ್ಣದ ಟೆಂಟೆಡ್ ಪೇಪರ್ ಅನ್ನು ತೆರವುಗೊಳಿಸಿದರು.

ಮೋಟಾರು ವಾಹನ ಕಾಯ್ದೆ ಪ್ರಕಾರ ಸುರಕ್ಷತೆ ದೃಷ್ಟಿಯಿಂದ ಕಾರಿನಲ್ಲಿ ಕುಳಿತವರು ಹೊರಗಿನಿಂದ ಕಾಣಿಸಬೇಕು. ಹಾಗೂ ಒಳಗಿನವರಿಗೆ ಹೊರಗಡೆಯ ಚಿತ್ರಣ ಸ್ಪಷ್ಟವಾಗಿ ಗೋಚರಿಸಬೇಕೆಂಬ ಉದ್ದೇಶದಿಂದ ಕೂಲಿಂಗ್ ಪೇಪರ್ ಬಳಸಬಾರದೆಂದು ನಿಯಮ ರೂಪಿಸಲಾಗಿದೆ ಎಂದು ಮೈಸೂರು ನಗರ ಸಂಚಾರ ವಿಭಾಗದ ಎಸಿಪಿ ಎಂ.ಶಿವಶಂಕರ್ ತಿಳಿಸಿದ್ದಾರೆ.



ಕೂಲಿಂಗ್ ಪೇಪರ್ ಅಂಟಿಸಿದ ಕಾರುಗಳ ವಿರುದ್ಧ ಮೈಸೂರು ನಗರ ಸಂಚಾರ ಪೊಲೀಸರು, ಕಾರ್ಯಾಚರಣೆ ನಡೆಸಿ, ದಂಡ ವಿಧಿಸುತ್ತಿರುವುದು.

ಐಷಾರಾಮಿ ಕಾರು, ಎಸ್‌ಯುವಿಗಳಲ್ಲಿ ಕಪ್ಪು ರಾರಾಜಿಸುತ್ತಿದೆ

“ಮೈಸೂರಲ್ಲಿ ಐಷಾರಾಮಿ ಕಾರು, ಎಸ್‌ಯುವಿಗಳಿಗೆ ರಾಜಾರೋಷವಾಗಿ ಟೆಂಟೆಡ್ ಅಳವಡಿಸಿಕೊಂಡು ಓಡಿಸುತ್ತಿದ್ದರೂ ಸಂಚಾರಿ ಪೊಲೀಸರು ಅಂತ ವಾಹನಗಳು ಕಂಡರೂ ಕಾಣದಂತೆ ವರ್ತಿಸುತ್ತಿದ್ದಾರೆ. ಬಹುತೇಕ ರಾಜಕಾರಣಿಗಳು ಹಾಗೂ ನಾನಾ ಸಂಘ ಸಂಸ್ಥೆಗಳ ಪದಾಧಿಕಾರಿಗಳ ವಾಹನಗಳಲ್ಲಿ ಕಪ್ಪು ಗಾಜು ರಾರಾಜಿಸುತ್ತಿರುವುದು ದಿನ ನಿತ್ಯವು ಮೈಸೂರಲ್ಲಿ ಕಣ್ಣಿಗೆ ಬೀಳುತ್ತಿದೆ. ಇದರ ಬಗ್ಗೆ ಮೊದಲು ಕ್ರಮ ಕೈಗೊಳ್ಳಲಿ ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಮೈಸೂರು ನಗರಾದ್ಯಂತ ಟೆಂಟೆಡ್ ಗ್ಲಾಸ್ ಕಾರುಗಳು ಓಡಾಡುತ್ತಿರುವುದನ್ನು ಗಮನಿಸಿದ ಪೊಲೀಸರು, ಕಾರ್ಯಾಚರಣೆ ನಡೆಸಿದಾಗ ಬುಧವಾರ ಒಂದೇ ದಿನ ಎಲ್ಲಾ ಸಂಚಾರ ಠಾಣೆಗಳ ವ್ಯಾಪ್ತಿಯಲ್ಲಿ 100ಕ್ಕೂ ಹೆಚ್ಚು ಪ್ರಕರಣಗಳು ಪತ್ತೆಯಾಗಿದ್ದು, ಅಂತಹ ವಾಹನಗಳ ಆರ್‌ಸಿ, ಮಾಲೀಕರಿಂದ ತಲಾ 500 ರೂ. ದಂಡ ವಸೂಲಿ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ನಿಯಮ ಪಾಲನೆ ಜೊತೆಗೆ ಕಾರಿನಲ್ಲಿ ಪ್ರಯಾಣಿಸುವವರ ಸುರಕ್ಷತೆ ಹಾಗೂ ಟೆಂಟೆಡ್ ಗ್ಲಾಸ್‌ರಹಿತವಾಗಿ ಕಾರನ್ನು ನಿರ್ವಹಿಸಬೇಕೆಂದೂ ಶಿವಶಂಕರ ತಿಳಿಸಿದ್ದು, ಕಪ್ಪು ಬಣ್ಣದ ಕೂಲಿಂಗ್ ಪೇಪರ್ ಅಳವಡಿಸುವವರ ವಿರುದ್ಧವೂ ಕ್ರಮ ವಹಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ವಿಶೇಷ ಕಾರ್ಯಾಚರಣೆ ವೇಳೆ ಪತ್ತೆಯಾದ ಕೂಲಿಂಗ್ ಪೇಪರ್ ಅನ್ನು ಸ್ಥಳದಲ್ಲೇ ತೆಗೆಸಲಾಗಿದೆ. ಮುಂದೆ ಮತ್ತೆ ಹಾಕಬಾರದೆಂದು ಎಚ್ಚರಿಕೆ ನೀಡಿ ದಂಡ ವಿಧಿಸಲಾಗಿದೆ. ಈ ತಪಾಸಣೆಯನ್ನು ಮುಂದುವರಿಸಲಾಗುವುದು ಎಂದು ಶಿವಶಂಕರ್ ಎಚ್ಚರಿಕೆ ನೀಡಿದ್ದಾರೆ.

ಬ್ಯಾಂಕಾಕ್‌ನಲ್ಲಿ ನಡೆಯುವ ಥಾಯ್ ಮಾರ್ಷಲ್ ಆರ್ಟ್ಸ್ ಗೇಮ್ಸ್‌ಗೆ ಮೈಸೂರಿನ ಮೂವರು ಕಿಕ್ ಬಾಕ್ಸಿಂಗ್ ಪಟುಗಳು



ಏಶೋಕೈ ಮಾರ್ಷಲ್ ಆರ್ಟ್ಸ್ ಅಕಾಡೆಮಿ ಮುಖ್ಯ ತರಬೇತಿದಾರ ಎಸ್.ಕೃಷ್ಣಮೂರ್ತಿ ಮಾತನಾಡಿದರು.

ಮೈಸೂರು,ಮೇ 15(ಎಂಟಿವೈ)– ಥೈಲ್ಯಾಂಡ್‌ನ ಬ್ಯಾಂಕಾಕ್‌ನಲ್ಲಿ ಮೇ 18ರಿಂದ 22ರವರೆಗೆ ನಡೆಯಲಿರುವ 7ನೇ ಅಂತರರಾಷ್ಟ್ರೀಯ ಥಾಯ್ ಮಾರ್ಷಲ್ ಆರ್ಟ್ಸ್ ಗೇಮ್‌ನಲ್ಲಿ ಮೈಸೂರಿನ ಓಶೋಕೈ ಮಾರ್ಷಲ್ ಆರ್ಟ್ಸ್ ಅಕಾಡೆಮಿಯ ಮೂವರು ಕಿಕ್ ಬಾಕ್ಸಿಂಗ್ ಪಟುಗಳು ಪಾಲ್ಗೊಳ್ಳಲಿದ್ದಾರೆ ಎಂದು ಅಕಾಡೆಮಿಯ ಮುಖ್ಯ ತರಬೇತುದಾರ ಎಸ್.ಕೃಷ್ಣಮೂರ್ತಿ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಓಶೋಕೈ ಮಾರ್ಷಲ್ ಆರ್ಟ್ಸ್ ಅಕಾಡೆಮಿಯ ಎನ್.ಸಂತೋಷ್‌ಕುಮಾರ್, ಆರ್.ದೀಪಿಕಾ, ಜಿ.ಆರ್.ಕರಣ್ ಥೈಲ್ಯಾಂಡ್‌ನ ಬ್ಯಾಂಕಾಕ್‌ನಲ್ಲಿ ನಡೆಯಲಿರುವ ಮಾರ್ಷಲ್ ಆರ್ಟ್ಸ್ ಗೇಮ್‌ನಲ್ಲಿ ಪಾಲ್ಗೊಳ್ಳಲು ಆಯ್ಕೆಯಾಗಿದ್ದಾರೆ. ರಾಜ್ಯದಿಂದ ಎಂಟು ಸ್ಪರ್ಧಿಗಳು ಸ್ಪರ್ಧೆಯಲ್ಲಿ ಭಾಗವಹಿಸಲಿದ್ದಾರೆ. ಸಂತೋಷ್ 2004ರಲ್ಲಿ ರಾಷ್ಟ್ರೀಯ ಕಿಕ್ ಬಾಕ್ಸಿಂಗ್ ಚಾಂಪಿಯನ್ ಶಿಪ್‌ನಲ್ಲಿ ಚಿನ್ನದ ಪದಕ ಪಡೆದಿದ್ದಾರೆ. ಅದೇ ಸ್ಪರ್ಧೆಯಲ್ಲಿ ಕರಣ್ ಕಂಚಿನ ಪದಕ ಪಡೆದರು. ಮಹಿಳಾ ವಿಭಾಗದಲ್ಲಿ ದೀಪಿಕಾ ಚಿನ್ನದ ಪದಕ ಪಡೆದು ಮೂವರೂ ಅಂತರರಾಷ್ಟ್ರೀಯ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ ಎಂದರು. ಗೋಷ್ಠಿಯಲ್ಲಿ ಏಶೋಕೈ ಮಾರ್ಷಲ್ ಆರ್ಟ್ಸ್ ಅಕಾಡೆಮಿ ವಿದ್ಯಾರ್ಥಿಗಳಾದ ಆರ್.ಚಂದ್ರು, ಸಂತೋಷ್ ಕುಮಾರ್, ದೀಪಿಕಾ ಇದ್ದರು.

ಮೈಸೂರು, ಚಾ.ನಗರದಲ್ಲಿ ಬ್ರಾಹ್ಮಣ ಮಹಾಸಭಾ ಸದಸ್ಯ ಅಭಿಯಾನ

ಹೆಚ್ಚಿನ ಸದಸ್ಯರ ನೋಂದಾಯಿಸಲು ಕರೆ



ಮೈಸೂರು, ಮೇ 15–ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಸದಸ್ಯತ್ವ ಅಭಿಯಾನವನ್ನು ಮೈಸೂರು ಮತ್ತು ಚಾಮರಾಜನಗರದಲ್ಲಿ ಮಾಡಿದಂತಹ 200ಕ್ಕೂ ಹೆಚ್ಚು ಅರ್ಜಿಗಳನ್ನು ಮುಡಾ ಮಾಜಿ ಅಧ್ಯಕ್ಷರು ಹಾಗೂ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ರಾಜ್ಯ ಉಪಾಧ್ಯಕ್ಷ ಎಚ್.ವಿ.ರಾಜೀವ್ ಸಮ್ಮುಖದಲ್ಲಿ ಮಹಾಸಭಾದ ನೂತನ ಅಧ್ಯಕ್ಷ ಎಸ್.ರಘುನಾಥ್, ಸಭಾದ ಹಿರಿಯ ಉಪಾಧ್ಯಕ್ಷ ಲಕ್ಷ್ಮಿಕಾಂತ್ ಅವರಿಗೆ ಹಸ್ತಾಂತರಿಸಲಾಯಿತು.

ಮಹಾಸಭೆ ಅಧ್ಯಕ್ಷ ಎಸ್.ರಘುನಾಥ್ ಮಾತನಾಡಿ, ಚುನಾವಣೆ ಮುಗಿದ ನಂತರ ಕರ್ನಾಟಕದಲ್ಲಿ ಮೊದಲ ಸದಸ್ಯತ್ವ ಅಭಿಯಾನವನ್ನು ಮೈಸೂರಿನಲ್ಲಿ ಆರಂಭ ಮಾಡಿದ ವಿಪ್ರ ಯುವ ಮುಖಂಡರಾದ ಎಸ್.ರಂಗನಾಥ ಮತ್ತು ತಂಡದವರಿಗೆ ವಿಶೇಷವಾಗಿ ಅಭಿನಂದನೆ ಸಲ್ಲಿಸಿ ರಾಜ್ಯದಲ್ಲಿರುವ ಎಲ್ಲಾ ವಿಪ್ರರು ಸದಸ್ಯರಾಗಬೇಕೆಂದು ಮನವಿ ಮಾಡಿದರು.

ಮಹಾಸಭಾದ ಹಿರಿಯ ಉಪಾಧ್ಯಕ್ಷ ಲಕ್ಷ್ಮಿಕಾಂತ್, ಮೈಸೂರು ಹಾಗೂ ಚಾಮರಾಜನಗರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸದಸ್ಯರನ್ನು ನೋಂದಾಯಿಸಲು ಕರೆ ನೀಡಿದರು. ಈ ವೇಳೆ ಪ್ರಶಾಂತ್, ಶೇಷಪ್ರಸಾದ್, ವಿಶ್ವನಾಥ್, ಕೃಷ್ಣಮೂರ್ತಿ ಇತರರಿದ್ದರು.

ಗ್ರೇಡ್ ಮೈಂಡ್ಸ್ ಚೆಸ್ ಅಕಾಡೆಮಿ ಸ್ಥಾಪನೆ

ಮೈಸೂರು,ಮೇ 15(ಎಂಟಿವೈ)– ಉದಯೋನ್ಮುಖ ಚೆಸ್ ಪಟುಗಳನ್ನು ತಯಾರು ಮಾಡುವ ನಿಟ್ಟಿನಲ್ಲಿ ಮೈಸೂರಿನ ಸರಸ್ವತಿಪುರಂನಲ್ಲಿ ಗ್ರೇಡ್ ಮೈಂಡ್ಸ್ ಚೆಸ್ ಆಕಾಡೆಮಿ ಸ್ಥಾಪಿಸಲಾಗಿದ್ದು, ಮೇ 23ರಿಂದ ಕಾರ್ಯಾರಂಭ ಮಾಡಲಿದೆ ಎಂದು ಸಂಸ್ಥೆಯ ಮುಖ್ಯಸ್ಥ ಜಿ.ಎಂ.ತೇಜ್‌ಕುಮಾರ್ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗ್ರೇಟ್ ಮೈಂಡ್ಸ್ ಚೆಸ್ ಅಕಾಡೆಮಿ(ಜಿಎಂಸಿಎ)ಗೆ ರಾಜ್ಯದ ಮೊದಲ ಗ್ರಾಂಡ್ ಮಾಸ್ಟರ್ ಎಂ.ಎಸ್.ತೇಜಕುಮಾರ್ ಮುಖ್ಯ ಕೋಚ್ ಆಗಿ ಕಾರ್ಯನಿರ್ವಹಿಸಲಿದ್ದಾರೆ. ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಸಾಧನೆ ಮಾಡಿರುವ ಹಲವು ಚೆಸ್ ಪಟುಗಳು ಅಕಾಡೆಮಿಯಲ್ಲಿದ್ದಾರೆ. ಪ್ರಾದೇಶಿಕ ಪ್ರತಿಭೆಗಳನ್ನು ಬೆಳೆಸುವ ಉದ್ದೇಶದಿಂದ ಈ ಶಾಖೆ ಆರಂಭಿಸಲಾಗುತ್ತಿದೆ ಎಂದರು. ಗೋಷ್ಠಿಯಲ್ಲಿ ಸಂಸ್ಥೆಯ ಜಯಶ್ರೀ ಇದ್ದರು.

ಮಹಾರಾಜ ಪದವಿ ಪೂರ್ವ ಕಾಲೇಜಿನ ನಿವೃತ್ತ ಪ್ರಾಂಶುಪಾಲ ಟಿ.ಆರ್.ಸಿದ್ದಪ್ಪ ನಿಧನ



ಮೈಸೂರು,ಮೇ 15– ಮೈಸೂರಿನ ಮಹಾರಾಜ ಪದವಿ ಪೂರ್ವ ಕಾಲೇಜಿನ ನಿವೃತ್ತ ಪ್ರಾಂಶುಪಾಲರಾದ ಟಿ.ಆರ್.ಸಿದ್ದಪ್ಪ (74) ನಿನ್ನೆ (ಬುಧವಾರ) ತಮ್ಮ ಸ್ವಗೃಹದಲ್ಲಿ ನಿಧನರಾಗಿದ್ದು, ನಾಳೆ (ಮೇ 16) ಅವರ ದೇಹವನ್ನು ಜೆಎಸ್‌ಎಸ್ ವೈದ್ಯಕೀಯ ಮಹಾವಿದ್ಯಾಲಯಕ್ಕೆ ನೀಡಲು ಕುಟುಂಬ ಸದಸ್ಯರು ನಿರ್ಧರಿಸಿದ್ದಾರೆ.

ಮೈಸೂರು, ಚಾಮರಾಜನಗರ ಜಿಲ್ಲೆಗಳ ವಿವಿಧ ಪದವಿ ಪೂರ್ವ ಕಾಲೇಜುಗಳಲ್ಲಿ ಕನ್ನಡ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ್ದ ಟಿ.ಆರ್.ಸಿದ್ದಪ್ಪ ಅವರು ಟಿಆರ್‌ಎಸ್ ಎಂದೇ ಚಿರಪರಿಚಿತರಾಗಿದ್ದರು. ಮಹಾರಾಜ ಪದವಿ ಪೂರ್ವ ಕಾಲೇಜಿನಲ್ಲಿ ಪ್ರಾಂಶುಪಾಲರಾಗಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ್ದರು. ಮೈಸೂರಿನ ಕುವೆಂಪುನಗರದ ಅನಿಕೇತನ ರಸ್ತೆಯ 4ನೇ ಕ್ರಾಸ್‌ನಲ್ಲಿ ಪತ್ನಿ ಶ್ರೀಮತಿ ಗೌರಮ್ಮ ಅವರೊಂದಿಗೆ ನೆಲೆಸಿದ್ದರು. ಅಮೆರಿಕಾದಲ್ಲಿರುವ ಪುತ್ರ ಹಾಗೂ ಆಸ್ಟ್ರೇಲಿಯಾದಲ್ಲಿರುವ ಪುತ್ರಿ ಇಂದು ರಾತ್ರಿ ಮೈಸೂರಿಗೆ ಆಗಮಿಸುತ್ತಿದ್ದು, ನಾಳೆ ಬೆಳಗ್ಗೆ ಮನೆಯಲ್ಲಿ ಕುದೇರು ಮಠಾಧೀಶರ ಸಮ್ಮುಖದಲ್ಲಿ ವಿಧಿವಿಧಾನದ ಪೂಜಾ ಕಾರ್ಯ ಪೂರ್ಣಗೊಂಡ ಬಳಿಕ ದೇಹವನ್ನು ಜೆಎಸ್‌ಎಸ್ ಮೆಡಿಕಲ್ ಕಾಲೇಜಿಗೆ ನೀಡಲಾಗುತ್ತದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ಮೃತರು ಅಪಾರ ಬಂಧು–ಬಳಗ, ಹಿತೈಷಿಗಳು ಹಾಗೂ ವಿದ್ಯಾರ್ಥಿ ಬಳಗವನ್ನು ಅಗಲಿದ್ದಾರೆ.

111 ವರ್ಷದ ಜಯಲಕ್ಷ್ಮಿ



ಮೈಸೂರು, ಮೇ 15– ಮೈಸೂರು ಕೆ.ಆರ್.ಎಸ್. ರಸ್ತೆಯಲ್ಲಿರುವ ಸಾಧನಹಳ್ಳಿ ಶ್ರೀ ಸಪ್ತರ್ಷಿ ಗುರುಕುಲ ಸೇವಾಶ್ರಮದ ನಿವಾಸಿ ಶತಾಯುಷಿ ಜಯಲಕ್ಷ್ಮಿ (111) ವಯೋಸಹಜ ಖಾಯಿಲೆಯಿಂದ ನಿನ್ನೆ ಆಶ್ರಮದಲ್ಲಿ ನಿಧನರಾದರು. ಇವರಿಗೆ ಶ್ರೀ ಸಪ್ತರ್ಷಿ ಗುರುಕುಲ ಸೇವಾಶ್ರಮದ ಸಂಸ್ಥಾಪಕರಾದ ಅಭಿನವ ರಾಮಾನುಜ ಜೀಯರ್ ಸೇರಿದಂತೆ ಇಬ್ಬರು ಪುತ್ರರು, ಮೂವರು ಪುತ್ರಿಯರು ಹಾಗೂ ಮೊಮ್ಮಕ್ಕಳನ್ನು ಅಗಲಿದ್ದಾರೆ. ಇವರ ನಿಧನಕ್ಕೆ ಆಶ್ರಮದ ಭಕ್ತಾದಿಗಳು, ಅಪಾರ ಬಂಧುಬಳಗ ಸಂತಾಪ ವ್ಯಕ್ತಪಡಿಸಿದ್ದಾರೆ. ಮೃತರ ಅಂತ್ಯಕ್ರಿಯೆ ಸೇವಾಶ್ರಮದ ತೋಟದಲ್ಲಿ ನೆರವೇರಿತು.

ಮಂತ್ರ ಮಹರ್ಷಿಗಳ 140ನೇ ಜಯಂತಿ



ಮೈಸೂರಿನ ಶ್ರೀ ಸುತ್ತೂರು ಶಾಖಾ ಮಠದಲ್ಲಿ ಗುರುವಾರ ಮಂತ್ರ ಮಹರ್ಷಿಗಳ 140ನೇ ಜಯಂತಿ ಆಚರಿಸಲಾಯಿತು.

ಮೈಸೂರು, ಮೇ 15– ಮೈಸೂರಿನ ಶ್ರೀ ಸುತ್ತೂರು ಶಾಖಾ ಮಠದಲ್ಲಿ ಗುರುವಾರ ಶ್ರೀಮಠದ 22ನೇ ಪೀಠಾಧಿಪತಿಗಳಾಗಿದ್ದ ಮಂತ್ರಮಹರ್ಷಿ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರೀಶ್ವರ ಮಹಾಸ್ವಾಮಿಗಳವರ 140ನೇ ಜಯಂತಿಯನ್ನು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ಸಾನ್ನಿಧ್ಯದಲ್ಲಿ ಸರಳವಾಗಿ ಆಚರಿಸಲಾಯಿತು.

ಪೂಜ್ಯರ ಭಾವಚಿತ್ರಕ್ಕೆ ವಿಶೇಷ ಪೂಜೆ ನೆರವೇರಿಸಿ, ಪುಷ್ಪಾಂಜಲಿ ಸಲ್ಲಿಸಲಾಯಿತು. ಸಂಸದ ಯದುವೀರ ಒಡೆಯರ್, ಶಾಸಕ ಟಿ.ಎಸ್. ಶ್ರೀವತ್ಸ, ಮಾಜಿ ಶಾಸಕ ಎಲ್. ನಾಗೇಂದ್ರ ಉಪಸ್ಥಿತರಿದ್ದರು. ಭಕ್ತಾದಿಗಳು, ಸಾರ್ವಜನಿಕರು ಶ್ರೀಮಠದ ಗುರುಕುಲದ ಸಾಧಕರು ಹಾಗೂ ಸೇವಾ ಸಿಬ್ಬಂದಿ ವರ್ಗದವರು ಪಾಲ್ಗೊಂಡಿದ್ದರು. ಗೋಕಾಕದ ಶ್ರೀಮತಿ ವಿದ್ಯಾ ಸೋಮಶೇಖರ್ ಮಗದುಂ ಹಾಗೂ ಜೆಎಸ್‌ಎಸ್ ಲಲಿತಕಲಾ ತಂಡದವರು ಪ್ರಾರ್ಥನೆ ಮತ್ತು ವಚನಗಾಯನ ನಡೆಸಿಕೊಟ್ಟರು.

ರಾಜೇಂದ್ರನಗರದಲ್ಲಿ ಹಾಪ್‌ಕಾಮ್ಸ್ ಅಂಗಡಿ ಪುನರ್ ಆರಂಭಿಸಲು ಮನವಿ



ಮೈಸೂರು, ಮೇ 15– ರೈತರಿಂದ ರೈತರಿಗಾಗಿ ಇರುವ ಹಾಪ್‌ಕಾಮ್ಸ್ ರೈತರಿಗೆ ನೆರವಾಗುವ ದೃಷ್ಟಿಯಿಂದ ನೇರವಾಗಿ ರೈತರಿಂದಲೇ ತರಕಾರಿ, ಹಣ್ಣು ಹಂಪಲನ್ನು ಖರೀದಿಸಿ ವ್ಯಾಪಾರ ವಹಿವಾಟು ನಡೆಸುವ ಉದ್ದೇಶ ಹೊಂದಿದೆ.

ಈ ಮಹತ್ವಾಕಾಂಕ್ಷಿ ಯೋಜನೆ ದಿನದಿಂದ ದಿನಕ್ಕೆ ತನ್ನ ವಹಿವಾಟಿನಲ್ಲಿ ಆಸಕ್ತಿ ಕಳೆದುಕೊಳ್ಳುತ್ತಿದೆ. ಇದಕ್ಕೆ ನಿದರ್ಶನ, ಮೈಸೂರಿನ ರಾಜೇಂದ್ರನಗರದ ಮುಖ್ಯ ರಸ್ತೆಯಲ್ಲಿ ಹಾಪ್‌ಕಾಮ್ಸ್ ಅಂಗಡಿ ನಡೆಯುತ್ತಿತ್ತು. ಆದರೆ ಕೆಲವು ದಿನಗಳಿಂದ ಅದನ್ನು ಮುಚ್ಚಲಾಗಿದೆ. ರಸ್ತೆಬದಿಯಲ್ಲಿ ಹಣ್ಣು ಹಂಪಲು ಖರೀದಿಸಲು ದುಬಾರಿ ಬೆಲೆ ತೆರಬೇಕಾಗಿದೆ. ಹಾಪ್‌ಕಾಮ್ಸ್‌ನಲ್ಲಿ ರಿಯಾಯಿತಿ ಬೆಲೆಯಲ್ಲಿ ತಾಜಾ ಹಾಗೂ ಪರಿಶುದ್ಧ ತರಕಾರಿ, ಹಣ್ಣುಗಳು ಸಿಗುತ್ತಿತ್ತು. ಆದರೆ ಈಗ ಅಂಗಡಿ ಮುಚ್ಚಿರುವುದರಿಂದ ಮಾರ್ಟ್ ಮತ್ತು ಫ್ರೆಶ್‌ಗಳ ಮೂಲಕ ದುಬಾರಿ ಹಣ ಕೊಟ್ಟು ಖರೀದಿ ಮಾಡಬೇಕಿದೆ. ಮೈಸೂರಿನ ಜಿಲ್ಲಾ ಹಾಪ್‌ಕಾಮ್ಸ್ ಹಾಗೂ ಸಂಬಂಧಿತ ಅಧಿಕಾರಿಗಳು ಶೀಘ್ರ ಈ ಮಳಿಗೆ ಪುನರ್ ಆರಂಭಿಸುವಂತೆ ನಿವಾಸಿಗಳು ಮನವಿ ಮಾಡಿದ್ದಾರೆ.

ಭಾರತೀಯ ಸೇನೆಗೆ ಗೌರವ, ಬೆಂಬಲ ನೀಡಿ: ಟಿ.ಎಸ್.ಶ್ರೀವತ್ಸ

ಮೈಸೂರು, ಮೇ 15– ಪಾಕ್ ಉಗ್ರರು ಪಹಲ್ಗಾಮ್‌ನಲ್ಲಿ ನಡೆಸಿದ ಕೃತ್ಯಕ್ಕೆ ಪ್ರತೀಕಾರವಾಗಿ ಭಾರತೀಯ ಸೈನಿಕರು ತೋರಿದ ಸಾಹಸಕ್ಕೆ ಪ್ರಸಾದ್ ಸ್ಕೂಲ್ ಆಫ್ ರಿದಮ್ ವತಿಯಿಂದ ರಾಮಾನುಜ ರಸ್ತೆಯಲ್ಲಿ ಮಕ್ಕಳಿಂದ ದೇಶಪ್ರೇಮದ ವಾದ್ಯಗಳ ಮೂಲಕ ಕೃತಜ್ಞತೆ ಸಲ್ಲಿಸಲಾಯಿತು.

ನಂತರ ನಿವೃತ್ತ ಯೋಧರಾದ ನವೀನ್, ನವನೀತ್, ಗಿರೀಶ್, ಮಂಜುನಾಥ್, ಅಜಯ್‌ಕುಮಾರ್ ಜೈನ್ ಅವರನ್ನು ಸನ್ಮಾನಿಸಿ ಮಾತನಾಡಿದ ಶಾಸಕ ಟಿಎಸ್ ಶ್ರೀವತ್ಸ, ಭಾರತೀಯ ಸೇನೆಯು ಶತ್ರು ರಾಷ್ಟ್ರದ ಹೆಡೆಮುರಿ ಕಟ್ಟುವ ಮೂಲಕ ಸರಿಯಾದ ಪಾಠ ಕಲಿಸಿದೆ. ನಾಗರಿಕರ ಬೆಂಬಲವಿಲ್ಲದೆ ಯಾವುದೇ ಸೈನ್ಯ ಯಶಸ್ಸು ಸಾಧಿಸಲು ಸಾಧ್ಯವಿಲ್ಲ. ನಮ್ಮ ಸೇನೆಯ ಸೇವೆಗೆ ಗೌರವ ಹಾಗೂ ಬೆಂಬಲ ನೀಡಿ, ಅವರ ಜೊತೆಗೆ ನಿಂತುಕೊಳ್ಳುವುದು ಪ್ರತಿಯೊಬ್ಬರ ಕರ್ತವ್ಯ ಎಂದರು.



ಭಾರತೀಯ ಸೇನೆಗೆ ಕೃತಜ್ಞತೆ ಸಲ್ಲಿಸುವ ಕಾರ್ಯಕ್ರಮದಲ್ಲಿ ನಿವೃತ್ತ ಯೋಧರನ್ನು ಸನ್ಮಾನಿಸಲಾಯಿತು.

ಇದೇ ಸಂದರ್ಭದಲ್ಲಿ ಪಾಲಿಕೆ ಮಾಜಿ ಸದಸ್ಯರಾದ ಮ.ವಿ.ರಾಮಪ್ರಸಾದ್, ಬಿ.ವಿ. ಮಂಜುನಾಥ್, ಚಲನಚಿತ್ರ ನಟ ಶಿವಾಜಿ ರಾವ್ ಜಾದವ್, ಶಾಲೆಯ ಸಂಸ್ಥಾಪಕ ಆರ್.ರಾಘವೇಂದ್ರ ಪ್ರಸಾದ್, ಸುಚೇಂದ್ರ, ರಾಜಕುಮಾರ್, ನಾಗಶ್ರೀ ಸುಚಿಂದ್ರ, ರಂಗನಾಥ್ ಇನ್ನಿತರರು ಹಾಜರಿದ್ದರು.

ಉಚಿತ ಆರೋಗ್ಯ ತಪಾಸಣಾ ಶಿಬಿರ

ಮೈಸೂರು: ಹಾರ್ಟ್ ಸಂಸ್ಥೆ, ಮೈಸೂರು ರೋಟರಿ ಕ್ಲಬ್ ಆಫ್ ಮೈಸೂರು ವೆಸ್ಟ್, ತಾಲೂಕು ಆರೋಗ್ಯ ಇಲಾಖೆ, ಹೆಚ್.ಡಿ.ಕೋಟೆ ಗ್ರಾಪಂ ಮಾದಾಪುರ ಸಂಯುಕ್ತಾಶ್ರಯದಲ್ಲಿ ಮೇ 16ರ ಬೆಳಗ್ಗೆ 10ರಿಂದ ಮಧ್ಯಾಹ್ನ 1ರವರೆಗೆ ಮಾದಾಪುರದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಶಿಬಿರದಲ್ಲಿ ಕಣ್ಣಿನ ಪರೀಕ್ಷೆ, ಮಧುಮೇಹ, ರಕ್ತದೊತ್ತಡ, ಹೃದಯ ಸಂಬಂಧಿತ ತೊಂದರೆಗಳು, ಮಹಿಳೆಯರಿಗೆ ಪ್ಯಾಪ್‌ಸ್ಮೀಯರ್ ಪರೀಕ್ಷೆ, ಶ್ವಾಸಕೋಶದ ಕಾರ್ಯ ಪರೀಕ್ಷೆ ಹಾಗೂ ಸಾಮಾನ್ಯ ರೋಗ ತಪಾಸಣೆಯನ್ನು ನಡೆಸಲಾಗುವುದು. ಹೆಚ್ಚಿನ ಮಾಹಿತಿಗೆ ಮೊ.8970901102, 9353630903 ಸಂಪರ್ಕಿಸಬಹುದು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

16.05.2025 ಶುಕ್ರವಾರ, ಮಳೆ ನಕ್ಷತ್ರ: ಕೃತ್ತಿಕ 11.05.2025 ರಿಂದ 24.05.2025
ವಿಶ್ವವಸು ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ವೈಶಾಖ ಮಾಸ,
ಕೃಷ್ಣ ಪಕ್ಷ, ತಿಥಿ: ಚೌತಿ, ನಕ್ಷತ್ರ: ಮೂಲ, ರಾಹುಕಾಲ: ಬೆಳಗ್ಗೆ 10.30ರಿಂದ 12ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಬೊಜ್ಜು ನಿವಾರಣಾ ಚಿಕಿತ್ಸಾ ಶಿಬಿರ, ಆರೋಗ್ಯಾಯುಷ್ಯ ಆರೋಗ್ಯ ವರ್ಧಕ ಶಿಬಿರ ಮತ್ತು ಶಾಲಾಕ್ಯ ತಂತ್ರ ಸ್ನಾತಕೋತ್ತರ ವಿಭಾಗದಿಂದ ಕಣ್ಣಿಗೆ ಸಂಬಂಧಿಸಿದ ಸಮಸ್ಯೆಗಳ ಬಗ್ಗೆ ವಿಶೇಷ ಬೇಸಿಗೆ ಆರೋಗ್ಯ ಶಿಬಿರ, ಮೂತ್ರಪಿಂಡ (ಕಿಡ್ನಿ) ಕಾಯಿಲೆಗೆ ಚಿಕಿತ್ಸಾ ಶಿಬಿರ ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿ ರಸ್ತೆ, ಆಲನಹಳ್ಳಿ, ಬೆಳಗ್ಗೆ 9 ರಿಂದ.

■ **ಶಾರದಾ ವಿಲಾಸ ಕಾಲೇಜು :** ಮುಂದಿನ ಪೀಳಿಗೆಯ ವಾಣಿಜ್ಯ ಬೋಧನೆ: ಸಿದ್ಧಾಂತ ಮತ್ತು ಅಭ್ಯಾಸವನ್ನು ಸೇತುವೆ ಮಾಡುವುದು ಕುರಿತು ಕಾರ್ಯಾಗಾರ, ಮುಖ್ಯ ಅತಿಥಿಗಳು : ಸಿಇಓ ಡಾ. ಪ್ರದೀಪ್ ಕುಮಾರ್, ಗೌರವ ಅತಿಥಿಗಳು : ಕಾಲೇಜು ಅಧ್ಯಕ್ಷ ಡಾ. ಬಿ.ಎಂ. ಸುಬ್ರಾಯ, ಕಾರ್ಯದರ್ಶಿ ಆರ್. ನರಸಿಂಹ, ಉದ್ಘಾಟನೆ : ಪ್ರೊ. ಸತ್ಯನಾರಾಯಣ, ಅಧ್ಯಕ್ಷತೆ : ಕಾಲೇಜು ಪ್ರಿನ್ಸಿಪಾಲ್ ಡಾ. ಎಂ. ದೇವಿಕಾ, ಸ್ಥಳ : ಕಾಮರ್ಸ್ ಲ್ಯಾಬ್, ಕಾಲೇಜು ಆವರಣ, ಬೆಳಗ್ಗೆ 9.30ಕ್ಕೆ.

■ **ಸೇಂಟ್ ಜೋಸೆಫ್ ಪ್ರಥಮ ದರ್ಜೆ ಕಾಲೇಜು :** ಪದವೀಧರರ ದಿನಾಚರಣೆ, ಅಧ್ಯಕ್ಷತೆ : ಅಪೋಸ್ಟಲಿಕ್ ಅಡ್ಮಿನಿಸ್ಟ್ರೇಟರ್ ರೆ. ಡಾ.ಬರ್ನಾರ್ಡ್ ಮೊರಾಸ್, ಉಪಸ್ಥಿತರು : ಕಾರ್ಯದರ್ಶಿ ಎಡ್ವರ್ಡ್ ವಿಲಿಯಮ್ ಸಾಲ್ಡಾನಾ, ಖಜಾಂಚಿ ನವೀನ್ ಕುಮಾರ್, ಮೈಸೂರು ವಿವಿ ಕುಲಸಚಿವ ಪ್ರೊ. ಎನ್. ನಾಗರಾಜ, ಸಿಇಓ ಸೆಬಿ ಮಾವೆಲಿ, ಸ್ಥಳ: ಬಿ.ಎಡ್ ಸಭಾಂಗಣ, ಕಾಲೇಜು ಆವರಣ, ಜಯಲಕ್ಷ್ಮಿಪುರಂ, ಬೆಳಗ್ಗೆ 10ಕ್ಕೆ

■ **ಕೆ. ಪುಟ್ಟಸ್ವಾಮಿ ಪ್ರಥಮ ದರ್ಜೆ ಕಾಲೇಜು :** ಸಮಾರೋಪ ಸಮಾರಂಭ, ಸಮಾರೋಪ ಭಾಷಣ : ಸ್ವಾಮಿ ಮಹಾಮೇದಾನಂದಜೀ, ಅಧ್ಯಕ್ಷತೆ : ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪಗೌಡ, ಮುಖ್ಯ ಅತಿಥಿಗಳು : ಕಾರ್ಯದರ್ಶಿ ಪಿ. ವಿಶ್ವನಾಥ್, ಖಜಾಂಚಿ ಶ್ರೀಶೈಲ ರಾಮಣ್ಣವರ್, ಪ್ರಿನ್ಸಿಪಾಲ್ ಡಾ. ಎಂ. ಶಿವಲಿಂಗೇಗೌಡ, ಸ್ಥಳ: ಟ್ರೈನಿಂಗ್ ಅಂಡ್ ಪ್ಲೇಸ್‌ಮೆಂಟ್ ಸೆಲ್, ಬೆಳಗ್ಗೆ 10ಕ್ಕೆ

■ **ಶ್ರೀ ಶ್ರೀನಿವಾಸಸ್ವಾಮಿ ಕೈಂಕರ್ಯ ಸಭಾ :** ಶ್ರೀ ಶ್ರೀನಿವಾಸಸ್ವಾಮಿಯವರ ವಾರ್ಷಿಕ ಮಹೋತ್ಸವ, ಸಂಜೆ 6ಕ್ಕೆ ಅಂಕುರಾರ್ಪಣ, ಸ್ಥಳ: ಸಭಾ ಆವರಣ, ತಿಲಕ್‌ನಗರ.

■ **ಜೆಎಸ್‌ಎಸ್ ಆಸ್ಪತ್ರೆ, ಜೆಎಸ್‌ಎಸ್ ಕಾಲೇಜ್ ಆಫ್ ನರ್ಸಿಂಗ್ ಮತ್ತು ಸ್ಕೂಲ್ ಆಫ್ ನರ್ಸಿಂಗ್:** ವಿಶ್ವ ಶುಶ್ರೂಷಕರ ದಿನಾಚರಣೆ, ಸಾನ್ನಿಧ್ಯ: ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಅಧ್ಯಕ್ಷತೆ: ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ.ಸಿ.ಜಿ.ಬೆಟಸೂರ ಮಠ, ಮುಖ್ಯ ಅತಿಥಿಗಳು: ಜಿಲ್ಲಾ ಕ್ಷಯರೋಗ ಅಧಿಕಾರಿ ಡಾ.ಎಂ.ಎಸ್.ಜಯಂತ್, ವೈದ್ಯಕೀಯ ಶಿಕ್ಷಣ ವಿಭಾಗದ ನಿರ್ದೇಶಕ ಆರ್.ಮಹೇಶ್, ಜೆಎಸ್‌ಎಸ್ ಆಸ್ಪತ್ರೆ ನಿರ್ದೇಶಕ ಡಾ.ಸಿ.ಪಿ.ಮಧು, ಶ್ರೀಮತಿ ಸುಧಾ ಮೃತ್ಯುಂಜಯಪ್ಪ, ಸ್ಥಳ: ಶ್ರೀ ರಾಜೇಂದ್ರ ಶತಮಾನೋತ್ಸವ ಭವನ, ಬೆಳಗ್ಗೆ 11ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಸಾಧನ– ಶೋಧನ ಗ್ರಾಮೀಣ ಪರಿಸರದ ಉಪಕರಣಗಳು, ಲೇಖನ : ಡಾ. ಎಂ. ಎನ್. ಚಿಕ್ಕಮಾದು, ಪ್ರಸ್ತುತಿ : ಡಾ. ಮೈಸೂರು ಉಮೇಶ್, 6.40 ಅರಿವಿನ ಶಿಖರ –ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ –ಸಿ.ವಿಶ್ವನಾಥ್, ವ್ಯಾಖ್ಯಾನ–ಡಾ. ಪ್ರದೀಪ್ ಕುಮಾರ್ ಹೆಬ್ರಿ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಯೋಗ ಕುರಿತ ವಿಶೇಷ ಸರಣಿ ಮಹಾಯೋಗ, 9.00 ವಿಶೇಷ ಹಿಂದಿ ವಾರ್ತೆ, 9.10 ವಿಶೇಷ ಇಂಗ್ಲೀಷ್ ವಾರ್ತೆ, 9.20 ಕನ್ನಡ ಚಿತ್ರಗೀತೆಗಳು, 9.30 ಗಾಂಧಿ ಸ್ಮೃತಿ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಹೆಚ್. ಟಿ. ಹರೀಶ್ ಸ್ಯಾಕ್ಸೋಫೋನ್, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಸೈಕಲ್ ಸವಾರಿ ಮಾತಿನ ಲಹರಿ, ಪ್ರಸ್ತುತಿ : ಜಾಂಪಣ್ಣ ಆಶೀಹಾಳ್

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ–ಶ್ರೀ ಹರ್ಷ, 12.45 ಕಾದಂಬರಿ ವಿಹಾರ – ಎಂ.ಆರ್. ಶ್ರೀನಿವಾಸಮೂರ್ತಿಯವರ ರಂಗಣ್ಣನ ಕನಸಿನ ದಿನಗಳು ಕಾದಂಬರಿಯ ಬಾನುಲಿ ಓದು. ಪ್ರಸ್ತುತಿ : ಉಮೇಶ್. ಎಸ್.ಎಸ್., 1.00 ಪ್ರಗತಿ ಪಥ– ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು–ಜಿ.ಎಸ್. ಲಕ್ಷ್ಮೀ, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.40 ದಾರಿದೀಪ–ಪ್ರಾಯೋಜಿತ ಕಾರ್ಯಕ್ರಮ. ಪ್ರಾಯೋಜಕರು: FEBA India, 2.55 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ : ಜಿ.ಕೆ. ರವೀಂದ್ರಕುಮಾರ್, 3.00 ವಿಶೇಷ ಹಿಂದಿ ವಾರ್ತೆಗಳು, 3.10 ವಿಶೇಷ ಇಂಗ್ಲೀಷ್ ವಾರ್ತೆಗಳು, 3.20 ಕನ್ನಡ ಚಿತ್ರಗೀತೆಗಳು, 4.00 ಮಹಿಳಾರಂಗ, 4.30 ವೃತ್ತಿ ಮಾರ್ಗದರ್ಶನ, 6.50 ಕೃಷಿರಂಗ –ತೋಟಗಾರಿಕಾ ಇಲಾಖೆ ಅಭಿವೃದ್ಧಿ ಯೋಜನೆಗಳನ್ನು ಕುರಿತ ನೇರ ಫೋನ್–ಇನ್ ಕಾರ್ಯಕ್ರಮ, ಭಾಗವಹಿಸುತ್ತಾರೆ–ಮೈಸೂರು ಜಿಲ್ಲಾ ತೋಟಗಾರಿಕಾ ಇಲಾಖೆಯ ಉಪನಿರ್ದೇಶಕರಾದ ಮಂಜುನಾಥ್ ಅಂಗಡಿ, ಪ್ರಸ್ತುತಿ: ಎನ್. ಕೇಶವಮೂರ್ತಿ, 7.45 ಕನ್ನಡದಲ್ಲಿ ಭಾಷಣ–ಯಾರು ಕಾಣದ ಪ್ರವಾಸಿ ತಾಣ, 8.00 ವಿಶೇಷ ಹಿಂದಿ ವಾರ್ತೆಗಳು, 8.10 ವಿಶೇಷ ಇಂಗ್ಲೀಷ್ ವಾರ್ತೆಗಳು, 8.20 ಹಿಂದಿ ಚಿತ್ರಗೀತೆಗಳು, 9.15 ವಿಶೇಷ ಸಂವಾದ ಕಾರ್ಯಕ್ರಮ, 10.00 ಸುದ್ದಿ ಆಧಾರಿತ ವಿಶೇಷ ಕಾರ್ಯಕ್ರಮ ಸುಖಿಯೋಮೆ ಇದರ ಧ್ವನಿ ಮುದ್ರಣ, 10.25 ಸವಿನೆನಪು–ಹಳೆಯ ಕನ್ನಡ ಚಿತ್ರಗೀತೆಗಳು

■ **ಶ್ರೀ ಶೃಂಗೇರಿ ಜಗದ್ಗುರು ಶಂಕರಾಚಾರ್ಯ ಮಹಾಸಂಸ್ಥಾನಮ್, ದಕ್ಷಿಣಾಮ್ನಾಯ ಶ್ರೀ ಶಾರದಾ ಪೀಠಮ್, ಶೃಂಗೇರಿ ಶ್ರೀ ಶಂಕರ ಮಠ :** 45ನೇ ವರ್ಷದ ಮೂರ್ತಿ ಪ್ರತಿಷ್ಠಾ ಮಹೋತ್ಸವ, ಬೆಳಗ್ಗೆ 8.30ಕ್ಕೆ ಮಹಾಗಣಪತಿ ಸನ್ನಿಧಿಯಲ್ಲಿ ಅಷ್ಟೋತ್ತರ ಶತವಾರ ಗಣಪತಿ ಅಥರ್ವಶೀರ್ಷ ಮಹಾಭಿಷೇಕ, 10.30ಕ್ಕೆ ಸಹಸ್ರಮೋದಕ ಮಹಾಗಣಪತಿ ಹೋಮ, ಮ. 12.30ಕ್ಕೆ ಪೂರ್ಣಾಹುತಿ, ಮಹಾಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ, ಸಂಜೆ 6.30ಕ್ಕೆ ವಿದುಷಿ ಕು. ಶಾರದಾ ಹರೀಶ್ ಶೃಂಗೇರಿ ಮತ್ತು ವೃಂದದವರಿಂದ ಸಂಗೀತ ಗಾಯನ, 9ಕ್ಕೆ ಮಹಾಮಂಗಳಾರತಿ, ಪ್ರಸಾದ ವಿನಿಯೋಗ, ಸ್ಥಳ: ಶೃಂಗೇರಿ ಶ್ರೀ ಶಂಕರಮಠ.

■ **ಮೈಸೂರು ವಿಶ್ವವಿದ್ಯಾನಿಲಯ, ಗ್ರಂಥಾಲಯ, ಮಾಹಿತಿ ವಿಜ್ಞಾನ ಅಧ್ಯಯನ ವಿಭಾಗ :** ಉಪನ್ಯಾಸ ಸರಣಿ ಮಾಲಿಕೆ, ರಾಘವನ್ ಅವರಿಂದ ಗ್ರಂಥಪಾಲಕತ್ವದಲ್ಲಿ ಯಶಸ್ವಿ ವೃತ್ತಿಜೀವನಕ್ಕೆ ಅಗತ್ಯವಾದ ಕೌಶಲಗಳು ಮತ್ತು ಗುಣಗಳು ಕುರಿತು ಉಪನ್ಯಾಸ, ಅಧ್ಯಕ್ಷತೆ : ವಿಭಾಗದ ಮುಖ್ಯಸ್ಥ ಪ್ರೊ. ಎಂ. ಚಂದ್ರಶೇಖರ, ಸ್ಥಳ: ಡಾ. ಎಸ್.ಆರ್. ರಂಗನಾಥನ್ ಸಭಾಂಗಣ, ಗ್ರಂಥಾಲಯ ವಿಭಾಗ, ಸಂಜೆ 4ಕ್ಕೆ.

■ **ಪ್ರಜ್ಞಾ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್ :** ಪ್ರಜ್ಞಾ ರಂಗೋತ್ಸವ–2025, ಬೆಲ್ಲದ ದೋಣಿ ನಾಟಕ ಪ್ರದರ್ಶನ, ರಚನೆ : ಹನೂರು ಚೆನ್ನಪ್ಪ, ನಿರ್ದೇಶನ : ರೂಬಿನ್ ಸಂಜಯ್, ಸ್ಥಳ: ಕಿರುರಂಗ ಮಂದಿರ, ಕಲಾಮಂದಿರ ಆವರಣ, ಸಂಜೆ 6ಕ್ಕೆ.

ಮೈಸೂರು ಮಿತ್ರ

ಕೃಷ್ಣರಾಜ ಕ್ಷೇತ್ರದ ಬಿಜೆಪಿ ಕಚೇರಿ ಕಾರ್ಯಾರಂಭವು ಪಕ್ಷ ಸಂಘಟನೆ ದೃಷ್ಟಿಯಿಂದ ಸಕಾರಾತ್ಮಕ ಬೆಳವಣಿಗೆ

ಉದ್ಘಾಟನೆ ನೆರವೇರಿಸಿದ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅಭಿಮತ

ಮೈಸೂರು,ಮೇ 15(ಪಿಎಂ)– ಮೈಸೂರಿನಲ್ಲಿ ಕೃಷ್ಣರಾಜ (ಕೆಆರ್ ಕ್ಷೇತ್ರ) ಕ್ಷೇತ್ರದ ಬಿಜೆಪಿ ಕಚೇರಿ ಕಾರ್ಯಾರಂಭ ಮಾಡುತ್ತಿರುವುದು ಪಕ್ಷ ಸಂಘಟನೆ ದೃಷ್ಟಿಯಿಂದ ಸಕಾರಾತ್ಮಕ ಬೆಳವಣಿಗೆ ಎಂದು ಮೈಸೂರು–ಕೊಡಗು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಹೇಳಿದರು.



ಮೈಸೂರಿನಲ್ಲಿ ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಬಿಜೆಪಿ ಕಚೇರಿಯನ್ನು ಗುರುವಾರ ಉದ್ಘಾಟಿಸಲಾಯಿತು.

ಮೈಸೂರಿನ ಜಯನಗರದಲ್ಲಿ ಕೆಆರ್ ಕ್ಷೇತ್ರದ ನೂತನ ಬಿಜೆಪಿ ಕಚೇರಿಯನ್ನು (ನಂ.37, 18ನೇ ಕ್ರಾಸ್, ಜಯನಗರ) ಭಾರತಾಂಬೆ ಫೋಟೋ ಹಾಗೂ ಶ್ಯಾಮ್ ಪ್ರಸಾದ್ ಮುಖರ್ಜಿ ಮತ್ತು ದೀನ್ ದಯಾಳ್ ಉಪಾಧ್ಯಾಯ ಅವರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಬಹುಶಃ ನಮ್ಮ ಬಿಜೆಪಿ ಹೋರಾಟ ಮೈಸೂರಿನಲ್ಲಿ ಕೆಆರ್ ವಿಧಾನಸಭಾ ಕ್ಷೇತ್ರದಿಂದ ಶುರುವಾಗಿದೆ ಎಂದರೆ ತಪ್ಪಾಗಲಾರದು. ಮೈಸೂರಿನ ಸ್ಥಳೀಯ ಕ್ಷೇತ್ರಗಳ ಪೈಕಿ ಕೆಆರ್ ಕ್ಷೇತ್ರದಲ್ಲಿ ಪ್ರಥಮವಾಗಿ ಪಕ್ಷದ ಕಚೇರಿ ಕಾರ್ಯಾರಂಭವಾಗಿರುವುದು ಸಂತೋಷದ ವಿಚಾರ. ಇದು ನಿಜಕ್ಕೂ ಸಕಾರಾತ್ಮಕ ಬೆಳವಣಿಗೆ ಹಾಗೂ ಪಕ್ಷ ದೊಡ್ಡ ಮಟ್ಟದಲ್ಲಿ ಬೆಳೆದಿದೆ ಎಂಬುದರ ಸೂಚಕವಾಗಿದೆ. ಮೈಸೂರು ನಗರ ಬೆಳೆಯುತ್ತಿರುವ ಈ ಸಂದರ್ಭದಲ್ಲಿ ಕೆಆರ್ ಕ್ಷೇತ್ರದಲ್ಲಿ ಪಕ್ಷದ ಕಚೇರಿ ಆರಂಭಿಸಿರುವುದು ಪಕ್ಷದ ಸಂಘಟನೆಗೆ ಸಹಕಾರಿ ಎಂದು ಹೇಳಿದರು.

ತಿರಂಗಾ ಯಾತ್ರೆಯಲ್ಲಿ ಭಾಗವಹಿಸಿ: ಪಹಲ್ಗಾಮ್‌ನಲ್ಲಿ ಭಯೋತ್ಪಾದಕರ ದಾಳಿಗೆ ಅಮಾಯಕರು ಬಲಿಯಾದ ನಂತರ ಕೇಂದ್ರ ಸರ್ಕಾರ ಸೂಕ್ತ ಕ್ರಮ ಕೈಗೊಂಡ ಹಿನ್ನೆಲೆಯಲ್ಲಿ ಭಾರತೀಯ ಸೇನೆಯು ಭಯೋತ್ಪಾದಕರ ತಾಣಗಳನ್ನು ಯಶಸ್ವಿಯಾಗಿ ನಾಶಪಡಿಸಿದೆ. ಆ ಮೂಲಕ ಸಂತ್ರಸ್ತರಿಗೆ ನ್ಯಾಯ ಕೊಡುವ ಕೆಲಸವಾಗಿದ್ದು, ಅದಕ್ಕಾಗಿ ನಮ್ಮ ಭಾರತೀಯ ಸೇನೆಗೆ ಜವಾಬ್ದಾರಿಯುತ ನಾಗರಿಕರಾಗಿ ನಾಳೆ ಬೆಳಗ್ಗೆ ನಾವು ತಿರಂಗಾ ಯಾತ್ರೆ ಏರ್ಪಡಿಸಿದ್ದು, ಇದು ಪಕ್ಷಾತೀತವಾಗಿ ನಡೆಯುತ್ತಿದೆ. ಇದರಲ್ಲಿ ಪಕ್ಷದ ಮುಖಂಡರು, ಕಾರ್ಯಕರ್ತರು ಎಲ್ಲರೂ ಭಾಗವಹಿಸಬೇಕಿದೆ. ಪಕ್ಷದ ದೃಷ್ಟಿಗೆ ಬದಲಾಗಿ ನಾವು ನಾಗರಿಕರಾಗಿ ನಮ್ಮ ಭಾರತೀಯ ಸೇನೆಗೆ ಗೌರವ, ಬೆಂಬಲ ಹಾಗೂ ಅಭಿನಂದನೆ ಸಲ್ಲಿಸಬೇಕಿದೆ ಎಂದು ಯದುವೀರ್ ಒಡೆಯರ್ ತಿಳಿಸಿದರು.

ಆರ್‌ಎಸ್‌ಎಸ್ ಹಿರಿಯ ಮುಖಂಡ ಮಾ.ವೆಂಕಟರಾವ್ ಮಾತನಾಡಿ, ಮುಂದಿನ ದಿನಗಳಲ್ಲಿ ಬಿಜೆಪಿ ರಾಜ್ಯದಲ್ಲಿ ಆಡಳಿತಕ್ಕೆ ಬರುವಂತಾಗಬೇಕು. ಇದಕ್ಕೆ ಪೂರಕವಾಗಿ ಕೆಆರ್ ಕ್ಷೇತ್ರದ ಬಿಜೆಪಿ ಕಚೇರಿ ಕಾರ್ಯನಿರ್ವಹಿಸಬೇಕು. ನಮ್ಮ ಧ'ರ್ಮ–ಸಂಸ್ಕೃತಿ ಸಂರಕ್ಷಿಸಲು ಶ್ರಮಿಸೋಣ ಎಂದು ಹೇಳಿದರು.

ಬಿಜೆಪಿ ನಗರಾಧ್ಯಕ್ಷರೂ ಆದ ಮಾಜಿ ಶಾಸಕ ಎಲ್.ನಾಗೇಂದ್ರ ಮಾತನಾಡಿ, ಇಡೀ ರಾಜ್ಯದಲ್ಲಿ ಕೆಆರ್ ಕ್ಷೇತ್ರ ಬಿಜೆಪಿಯ ಭದ್ರ ಕೋಟೆ. ಬಿಜೆಪಿ ಕಾರ್ಯಕರ್ತರು ಶಕ್ತಿಯುತವಾಗಿರುವ ಕ್ಷೇತ್ರ ಇದು. ಈ ಕ್ಷೇತ್ರದಲ್ಲಿ ನೂತನವಾಗಿ ಕಚೇರಿ ಆರಂಭಿಸುವ ಮೂಲಕ ಕ್ಷೇತ್ರದ ಶಾಸಕ ಶ್ರೀವತ್ಸ ಪಕ್ಷದ ಕಾರ್ಯಕರ್ತರಿಗೆ ಅನುಕೂಲ ಮಾಡಿಕೊಟ್ಟಿದ್ದಾರೆ. ಅವರು ಈ ಕ್ಷೇತ್ರದಿಂದ ಮತ್ತೆ ಮತ್ತೆ ಆಯ್ಕೆಯಾಗುವ ಮೂಲಕ ರಾಜ್ಯದಲ್ಲಿ ಸಚಿವರಾಗಿ ಸೇವೆ ಸಲ್ಲಿಸುವ ಅವಕಾಶ ಅವರಿಗೆ ದೊರೆಯಲಿ ಎಂದು ಹಾರೈಸಿದರು.

ಮಾಜಿ ಸಂಸದ ಪ್ರತಾಪ್ ಸಿಂಹ ಮಾತನಾಡಿ, ಕೆಆರ್ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಅವರು ಈ ಕಚೇರಿ ಆರಂಭಗೊಳ್ಳಲು ಕಾರಣೀಭೂತರು. ಈ ಕಾರ್ಯಕ್ರಮಕ್ಕೆ ತಪ್ಪದೇ ಖುಷಿಯಿಂದ ಭಾಗವಹಿಸಿದ್ದೇನೆ. ಕಾರಣ 2014ರಲ್ಲಿ ನಿಮ್ಮೆಲ್ಲರ ಆಶೀರ್ವಾದದಿಂದ ನಾನು ಸಂಸದನಾಗಿ ಆಯ್ಕೆಯಾದಾಗ, ಏನಾದರೂ ಪಕ್ಷದ ಕಾರ್ಯಕ್ರಮ ಮಾಡಲು ಮುಂದಾದರೆ ಅಂದು ಮೃಗಾಲಯ ಬಳಿ ಇದ್ದ ಪಕ್ಷದ ಕಚೇರಿಯಲ್ಲಿ ಸಮರ್ಪಕ ಮೂಲಸೌಲಭ್ಯಗಳಿಲ್ಲದೇ ತೊಂದರೆಯಾಗುತ್ತಿತ್ತು. ನಮ್ಮ ಪಕ್ಷದ್ದೇ ಒಂದು ಕಚೇರಿ ಬೇಕಲ್ಲವೇ ಎನ್ನಿಸಿತು. ಆಗ ಪಕ್ಷದ ಉಪಾಧ್ಯಕ್ಷ ಎಂ.ರಾಜೇಂದ್ರ ಅವರ ಬಳಿ ಈ ಸಂಬಂಧ ಮಾತನಾಡುವಂತೆ ನನ್ನ ಗುರುಗಳಾದ ವಿಶ್ವೇಶ್ವರ ಭಟ್ ಅವರನ್ನು ನಾನು ಕೇಳಿಕೊಂಡೆ. ಅಂತೆಯೇ ಅವರು ಮಾತುಕತೆ ನಡೆಸಿದರು. ಅಂದು ಪಕ್ಷದ ರಾಷ್ಟ್ರೀಯ ಪದಾಧಿಕಾರಿಗಳಾಗಿದ್ದ ಸಂತೋಷ್ ಅವರು ಸಹ ಕೋರಿಕೆ ಮೇರೆಗೆ ಸಹಕಾರ ನೀಡಿದರು. ಹೀಗೆ ಪ್ರತಿಯೊಬ್ಬರು ಕೈಜೋಡಿಸಿದರು. ಆ ಮೂಲಕ ಇಂದು ಅದ್ಭುತವಾದಂತಹ ನಗರ ಬಿಜೆಪಿ ಕಚೇರಿ ಮಾಡಿದ್ದೇವೆ. ಶ್ರೀವತ್ಸ ಅವರಿಂದಾಗಿ ಇಂದು ಕೆಆರ್ ಕ್ಷೇತ್ರದಲ್ಲಿಯೂ ಪಕ್ಷದ ಒಳ್ಳೆಯ ಕಚೇರಿ ಕಾರ್ಯಾರಂಭ ಮಾಡಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಮಾತನಾಡಿ, ಪಕ್ಷದ ಚಟುವಟಿಕೆ ನಿರಂತರ ಹಾಗೂ ಸಕ್ರಿಯವಾಗಿ ನಡೆಯಬೇಕೆಂಬ ಕಾರಣಕ್ಕೆ ಕ್ಷೇತ್ರದಲ್ಲಿ ಪಕ್ಷದ ಕಚೇರಿ ಆರಂಭಿಸಲಾಗಿದೆ ಎಂದು ತಿಳಿಸಿದರು. ಬಿಜೆಪಿ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಕೆಆರ್ ಕ್ಷೇತ್ರದ ಬಿಜೆಪಿ ಅಧ್ಯಕ್ಷ ಗೋಪಾಲರಾಜ್ ಅರಸ್, ಬಿಜೆಪಿ ನಗರ ಪ್ರಧಾನ ಕಾರ್ಯದರ್ಶಿ ಗಿರಿಧರ್, ಮಾಜಿ ಮೇಯರ್ ಶಿವಕುಮಾರ್ ಸೇರಿದಂತೆ ಮತ್ತಿತರರು ಹಾಜರಿದ್ದರು.

> **ಭವಿಷ್ಯದಲ್ಲಿ ಬಾಡಿಗೆ ಕಟ್ಟಡ ಬದಲು ಸ್ವಂತ ಕಟ್ಟಡ**
>
> ಖಂಡಿತ 2028ಕ್ಕೆ ಟಿ.ಎಸ್.ಶ್ರೀವತ್ಸ ಅವರು ಶಾಸಕರಾಗಿ ಪುನರಾಯ್ಕೆ ಆಗೇ ಆಗುತ್ತಾರೆ. ರಾಜ್ಯದಲ್ಲಿ ಉನ್ನತ ಸ್ಥಾನಕ್ಕೆ ಹೋಗುತ್ತಾರೆ. ಆಗ ಬಾಡಿಗೆ ಕಟ್ಟಡದಲ್ಲಿ ಕಾರ್ಯಾರಂಭ ಮಾಡಿರುವ ಕೆಆರ್ ಕ್ಷೇತ್ರದ ಬಿಜೆಪಿ ಕಚೇರಿಗೆ ಸ್ವಂತ ಕಟ್ಟಡ ಭಾಗ್ಯ ಕಲ್ಪಿಸುವ ಭರವಸೆ ನನಗಿದೆ. ಅವರಿಗೆ ಅಂತಹ ಶಕ್ತಿ ಇದೆ. ಸದಾ ಕಾರ್ಯಕರ್ತರ ಜೊತೆ ಪ್ರೀತಿಯಿಂದ ಇರುವಂತಹ ವ್ಯಕ್ತಿತ್ವ ಅವರದು.
>
> -ಪ್ರತಾಪ್ ಸಿಂಹ

ರಾಜ್ಯ ಹೈಕೋರ್ಟ್‌ನಲ್ಲಿ ಅತ್ಯಂತ ಮಹತ್ವ, ಐತಿಹಾಸಿಕ ತೀರ್ಪು ನೀಡಿದ ಹೆಗ್ಗಳಿಕೆ ಹೊಂದಿರುವ

ನ್ಯಾ.ಕೃಷ್ಣ ಎಸ್.ದೀಕ್ಷಿತ್ ಒರಿಸ್ಸಾ ಹೈಕೋರ್ಟ್ ನ್ಯಾಯಮೂರ್ತಿಯಾಗಿ ಪದಗ್ರಹಣ



ಮೈಸೂರು,ಮೇ 15(ಪಿಎಂ)– ರಾಜ್ಯ ಹೈಕೋರ್ಟ್‌ನಲ್ಲಿ ಅತ್ಯಂತ ಮಹತ್ವದ ಹಾಗೂ ಐತಿಹಾಸಿಕ ತೀರ್ಪುಗಳನ್ನು ನೀಡುವ ಮೂಲಕ ಎಲ್ಲರ ಮೆಚ್ಚುಗೆಗೆ ಪಾತ್ರರಾಗಿರುವ ನ್ಯಾಯಮೂರ್ತಿ ಕೃಷ್ಣ ಎಸ್. ದೀಕ್ಷಿತ್ ಅವರು ಒರಿಸ್ಸಾ ಹೈಕೋರ್ಟ್‌ನ ನ್ಯಾಯಮೂರ್ತಿಯಾಗಿ ಪದಗ್ರಹಣ ಮಾಡಿದ್ದಾರೆ.

ಮಾನವೀಯ ಕಳಕಳಿಯುಳ್ಳ ನ್ಯಾಯಮೂರ್ತಿಗಳು ಎಂದೇ ಕೃಷ್ಣ ದೀಕ್ಷಿತರು ರಾಜ್ಯದಲ್ಲಿ ಮನೆ ಮಾತಾಗಿದ್ದಾರೆ. ಆಧ್ಯಾತ್ಮಿಕ, ಪ್ರಚಲಿತ, ರಾಜ್ಯ, ಅಂತರ್ ರಾಜ್ಯ, ರಾಷ್ಟ್ರ ಹಾಗೂ ಅಂತಾರಾಷ್ಟ್ರೀಯ ವಿದ್ಯಮಾನಗಳ ಬಗ್ಗೆ ಅಪಾರ ಜ್ಞಾನ ಹೊಂದಿರುವ ಕೃಷ್ಣ ದೀಕ್ಷಿತ್ ಅವರು, ರಾಜ್ಯ ಹೈಕೋರ್ಟ್‌ನ ನ್ಯಾಯಮೂರ್ತಿಯಾಗಿ ಅತ್ಯಂತ ಮಹತ್ವದ ತೀರ್ಪುಗಳನ್ನು ನೀಡಿದ್ದಾರೆ. ಇವರು ಅನ್ಯಾಯಕ್ಕೊಳಗಾದ ಕಕ್ಷಿದಾರರಿಗೆ ನ್ಯಾಯ ಒದಗಿಸಿಕೊಡುವುದಕ್ಕೆ ಹೆಚ್ಚಿನ ಆದ್ಯತೆ ನೀಡುವಲ್ಲಿ ಕಾಳಜಿಯುಳ್ಳವರು. ಒರಿಸ್ಸಾ ಹೈಕೋರ್ಟ್‌ನಲ್ಲಿ ನಡೆದ ಪದಗ್ರಹಣ ಕಾರ್ಯಕ್ರಮದಲ್ಲಿ ನೂರಾರು ವಕೀಲರು ಭಾಗವಹಿಸಿದ್ದರು.

ಬಿಬಿಎಂಪಿ ಬದಲು ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆ

ಬೆಂಗಳೂರು, ಮೇ 15(ಕೆಎಂಶಿ)– ಗ್ರೇಟರ್ ಬೆಂಗಳೂರು ಆಡಳಿತ ಕಾಯ್ದೆಗೆ ರಾಜ್ಯಪಾಲರ ಅಂಕಿತ ದೊರೆತಿದ್ದು, ಇಂದಿನಿಂದ 'ಗ್ರೇಟರ್ ಬೆಂಗಳೂರು' ಅಸ್ತಿತ್ವಕ್ಕೆ ಬಂದಿದೆ. ಬಿಬಿಎಂಪಿ ಬದಲು ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆಯಾಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ಪ್ರಕಟಿಸಿದ್ದಾರೆ.

ಇನ್ನು ಮುಂದೆ ಬೆಂಗಳೂರು, ಗ್ರೇಟರ್ ಬೆಂಗಳೂರು ಆಗಲಿದೆ. ಇದರಡಿ ಕನಿಷ್ಠ ಮೂರು ಪಾಲಿಕೆ ರಚನೆಯಾಗುವ ಸಾಧ್ಯತೆಯಿದೆ. ರಾಜ್ಯದ ಮುಖ್ಯಮಂತ್ರಿಗಳು ಪ್ರಾಧಿಕಾರದ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಲಿದ್ದು, ಮುಂದಿನ ದಿನಗಳಲ್ಲಿ ಈ ಬಗ್ಗೆ ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು ಎಂದರು.

ರಾಜ್ಯದಲ್ಲಿ ಮಳೆಯಿಂದಾಗಿ ಅನಾಹುತಗಳು ಸಂಭವಿಸುತ್ತಿದ್ದು, ಸರ್ಕಾರದ ಕ್ರಮದ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿ, ಮಳೆಯಿಂದಾಗಿ ಸಂಭವಿಸುವ ಅನಾಹುತಗಳಿಗೆ ಪರಿಹಾರ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಊಟಿಯಲ್ಲಿ ಜೀವನೋತ್ಸಾಹ ಶಿಬಿರ

ಮೈಸೂರು, ಮೇ 15– ಸುತ್ತೂರು ಶ್ರೀಮಠ, ಜೆಎಸ್‌ಎಸ್ ಮಹಾವಿದ್ಯಾಪೀಠ ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಗಳ ಸಂಯುಕ್ತಾಶ್ರಯದಲ್ಲಿ ಮೇ 16 ರಿಂದ 21ರವರೆಗೆ ಊಟಿಯಲ್ಲಿ ಜೀವನೋತ್ಸಾಹ ಶಿಬಿರವನ್ನು ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ಏರ್ಪಡಿಸಲಾಗಿದೆ.

ಉದ್ಯಮಿಗಳು ಹಾಗೂ ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾದ ರಾಜ್ಯ ಉಪಾಧ್ಯಕ್ಷ ಕೆ.ಬಿ. ಶ್ರೀನಿವಾಸ ರೆಡ್ಡಿ ಅಧ್ಯಕ್ಷತೆ ವಹಿಸಲಿದ್ದು, ಚಾಮರಾಜನಗರ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ. ಎಂ.ಆರ್. ಗಂಗಾಧರ್‌ರವರು ಶಿಬಿರ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಊಟಿಯ ಕರ್ನಾಟಕ ಸಿರಿ ತೋಟಗಾರಿಕೆ ಉದ್ಯಾನವನದ ಸಹಾಯಕ ನಿರ್ದೇಶಕ ಬಿ.ಕೆ. ಕೃಷ್ಣಮೂರ್ತಿ ಭಾಗವಹಿಸಲಿದ್ದಾರೆ.

ಭಾರತೀಯ ಸಂಸ್ಕೃತಿ, ಸೈಬರ್ ಸುರಕ್ಷತೆ, ಜನಪದ–ದೇವರು, ಅಂಗೈಯಲ್ಲಿ ಆರೋಗ್ಯ, ಮೌಲ್ಯಯುತ ಜೀವನ, ಸಾರ್ಥಕ ಜೀವನ, ಹಿರಿಯರೆ ನಮ್ಮ ಸಿರಿ, ಸ್ಥಿತಪ್ರಜ್ಞತೆ, ಶರಣರ ಬದುಕು–ಆದರ್ಶ, ಸಂಬಂಧಗಳ ಮಹತ್ವ ಮತ್ತು ನಗುವೆಂಬ ಅಮೃತ — ಈ ವಿಷಯಗಳನ್ನು ಕುರಿತು ಅನುಕ್ರಮವಾಗಿ ಪ್ರೊ.ಕೆ.ಅನಂತರಾಮು, ಡಾ.ಡಿ.ವಿ. ಗುರುಪ್ರಸಾದ್, ಜಿ.ಗುರುರಾಜ ಮೈಸೂರು, ಡಾ.ವೀಣಾ ಜಿ.ರಾವ್, ಎಸ್.ಎಸ್. ಉಮೇಶ್, ಶ್ರೀ ಹಿರೇಮಗಳೂರು ಕಣ್ಣನ್ ಮತ್ತು ಶ್ರೀಮತಿ ನಾಗಶ್ರೀ ತ್ಯಾಗರಾಜ್, ಡಾ.ಬಿ.ವಿ.ಆರತಿ, ಡಾ.ನಿರಂಜನ ವಾನಳ್ಳಿ, ಡಾ.ಕವಿತಾ ರೈ, ಗುಬ್ಬಿಗೂಡು ರಮೇಶ್ ಮತ್ತು ಎಂ.ಎಸ್. ನರಸಿಂಹಮೂರ್ತಿ– ಇವರುಗಳಿಂದ ಉಪನ್ಯಾಸ ಏರ್ಪಡಿಸಲಾಗಿದೆ

'ಆಪರೇಷನ್ ಸಿಂಧೂರ' ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದ ಯೋಧರಿಗೆ ಬಿಜೆಪಿ ತಿರಂಗ ಯಾತ್ರೆ ಮೂಲಕ ವಂದನೆ–ಅಭಿನಂದನೆ



ಬೆಂಗಳೂರು, ಮೇ 15(ಕೆಎಂಶಿ)– ಪಾಕಿಸ್ತಾನದ ವಿರುದ್ಧದ 'ಆಪರೇಷನ್ ಸಿಂಧೂರ' ಸೇನಾ ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದ ಯೋಧರಿಗೆ ರಾಜ್ಯ ಬಿಜೆಪಿ ಇಂದಿಲ್ಲಿ ತಿರಂಗ ಯಾತ್ರೆ ಮೂಲಕ ವಂದನೆ–ಅಭಿನಂದನೆ ಸಲ್ಲಿಸಿತು.

ತಿರಂಗ ಯಾತ್ರೆಯಲ್ಲಿ ನೂರಾರು ನಾಯಕರು, ನಾಗರಿಕರು, ಶಾಲಾ–ಕಾಲೇಜಿನ ವಿದ್ಯಾರ್ಥಿಗಳು ಮತ್ತು ಮಹಿಳೆಯರು ಸೇರಿದಂತೆ ಸಾವಿರಾರು ಮಂದಿ ಪಾಲ್ಗೊಂಡಿದ್ದರು. ಬೃಹತ್ ತ್ರಿವರ್ಣ ಧ್ವಜದಡಿ ಜನತೆ ಸೇರಿ ಸೇನಾ ಕಾರ್ಯಾಚರಣೆಗೆ ಬೆಂಬಲ ಸೂಚಿಸಿದರು.

ನಿವೃತ್ತ ಏರ್ ಮಾರ್ಷಲ್ ಎ.ವಿ. ಮುರುಳಿ ಮಾತನಾಡಿ, ಆಪರೇಷನ್ ಸಿಂಧೂರ್ ಮುಗಿದಿಲ್ಲ. ಇನ್ನೊಮ್ಮೆ ನಡೆದರೆ ಪಾಕಿಸ್ತಾನ ನಿರ್ನಾಮವಾಗಲಿದೆ. ಪಿಒಕೆ ನಮ್ಮದಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಪಾಕಿಸ್ತಾನಕ್ಕೆ ಬುದ್ಧಿ ಕಲಿಸಬೇಕೆಂಬುದು ದೇಶದ ನಿಲುವಾಗಿತ್ತು. ಪ್ರಧಾನಿಯವರು ರಾಜಕೀಯ ಇಚ್ಛಾಶಕ್ತಿ ಪ್ರದರ್ಶಿಸಿದರು ಎಂದು ಮೆಚ್ಚುಗೆ ಸೂಚಿಸಿದರು. ಜನರು ಬಯಸಿದ್ದನ್ನು ನಾವು ಮಾಡಿ ತೋರಿಸಿದೆವು. ಸೈನಿಕರ ಹಿಂದೆ ಇಡೀ ರಾಷ್ಟ್ರ ನಿಂತಿತ್ತು ಎಂದರು. ಪಾಕಿಸ್ತಾನಕ್ಕೆ ಮಹಿಳೆಯರು ಸಮರ್ಥ ಉತ್ತರ ನೀಡಿದ್ದಾರೆ ಎಂದು ವಿವರಿಸಿದರು.

ಆಪರೇಷನ್ ಸಿಂಧೂರ ಯಶಸ್ವಿಯಾಗಿ ಪೂರ್ಣಗೊಳಿಸಿದ ಭಾರತದ ಸೈನಿಕರಿಗೆ ಬೆಂಬಲ ಮತ್ತು ಧನ್ಯವಾದ ಸಲ್ಲಿಸುವ ಸಲುವಾಗಿ 'ರಾಷ್ಟ್ರ ರಕ್ಷಣೆಗಾಗಿ ನಾಗರಿಕರು' ಅಡಿಯಲ್ಲಿ ಈ ಯಾತ್ರೆ ನೆರವೇರಿತು. ಮೊದಲಿಗೆ ಭಾರತ್ ಮಾತಾ ಕೀ ಜೈ, ಪಾಕಿಸ್ತಾನಕ್ಕೆ ಪಾಠ ಕಲಿಸಿದ ದೇಶಭಕ್ತ ಸೈನಿಕರಿಗೆ ಜೈ ಮತ್ತು ಭಾರತಕ್ಕೆ ವಿಶ್ವದಲ್ಲಿ ಗೌರವವನ್ನು ತಂದುಕೊಟ್ಟಿರುವ ವೀರಸೇನಾನಿಗಳಿಗೆ ಜೈ ಎಂಬ ಘೋಷವಾಕ್ಯಗಳನ್ನು ಕೂಗಲಾಯಿತು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಖ್ಯಾತ ವಕೀಲರಾದ ಕ್ಷಮಾ ನರಗುಂದ ಅವರು, ಯಾವ ಹೆಣ್ಣು ಮಕ್ಕಳ ಸಿಂಧೂರವನ್ನು ಅಳಿಸಿದ್ದ ಭಯೋತ್ಪಾದಕರ ವಿರುದ್ಧ ಆಪರೇಷನ್ ಸಿಂಧೂರ ಕಾರ್ಯಾಚರಣೆ ಮೂಲಕ ಪ್ರತೀಕಾರ ತೀರಿಸಿಕೊಂಡಿದೆ ಎಂದು ಮೆಚ್ಚುಗೆ ಸೂಚಿಸಿದರು.

ಅಪರೇಷನ್ ಸಿಂಧೂರದ ಮೂಲಕ 72 ತಾಸುಗಳಲ್ಲಿ ಪಾಕಿಸ್ತಾನಕ್ಕೆ ನಮ್ಮ ಸೈನ್ಯವು ತಕ್ಕ ಉತ್ತರ ಕೊಟ್ಟಿದೆ. ಪಾಕಿಸ್ತಾನದ ಸುಮಾರು 16 ಕ್ಕೂ ಹೆಚ್ಚು ವಾಯುನೆಲೆಗಳ ಮೇಲೆ ದಾಳಿ ಮಾಡಿ ನಾಶಪಡಿಸಿದೆ. ಆದ್ದರಿಂದ ನಮ್ಮ ಸೈನಿಕರಿಗೆ ಕೃತಜ್ಞತೆ ಸಲ್ಲಿಸಲು ಈ ಯಾತ್ರೆಯನ್ನು ಮಾಡಲಾಗುತ್ತಿದೆ ಎಂದು ತಿಳಿಸಿದರು.

ಅಕ್ಕಮಹಾದೇವಿ, ಅಲ್ಲಮಪ್ರಭು, ಬಸವಣ್ಣನವರ ಜಯಂತಿ ಆಚರಣೆ

ಇಡೀ ಜಗತ್ತಿನ ಇತಿಹಾಸದಲ್ಲೇ ಬಸವಾದಿ ಶರಣರ ಕಾಯಕ ಸಂಸ್ಕೃತಿ ಅನನ್ಯ

ಶರಣ ಸಂಸ್ಕೃತಿ ಚಿಂತಕ ಶಂಕರ್ ದೇವನೂರು ಅಭಿಮತ



ಮೈಸೂರಿನ ಶಿವಸನ್ನಿಧಿ ಕಚೇರಿಯಲ್ಲಿ ಗುರುವಾರ ಅಕ್ಕಮಹಾದೇವಿ, ಅಲ್ಲಮಪ್ರಭು ಹಾಗೂ ಬಸವಣ್ಣನವರ ಫೋಟೋಗಳಿಗೆ ಪುಷ್ಪ ನಮನ ಸಲ್ಲಿಸಲಾಯಿತು.

ಮೈಸೂರು, ಮೇ 15(ಪಿಎಂ)– ಇಡೀ ಜಗತ್ತಿನ ಇತಿಹಾಸದಲ್ಲಿ 12ನೇ ಶತಮಾನದ ಬಸವಾದಿ ಶರಣರ ಕಾಯಕ ಸಂಸ್ಕೃತಿಯು ಅನನ್ಯವಾದುದು ಎಂದು ಶರಣ ಸಂಸ್ಕೃತಿ ಚಿಂತಕ ಶಂಕರ್ ದೇವನೂರು ಹೇಳಿದರು.

ಮೈಸೂರಿನ ಅಗ್ರಹಾರದ ನೂರೊಂದು ಗಣಪತಿ ದೇವಸ್ಥಾನ ವೃತ್ತದ ಬಳಿಯ ಶಿವಸನ್ನಿಧಿ ಕಚೇರಿಯಲ್ಲಿ ಶಿವಸನ್ನಿಧಿ ಸಮಾನ ಮನಸ್ಕ ಗೆಳೆಯರ ಬಳಗದ ವತಿಯಿಂದ ಗುರುವಾರ ಹಮ್ಮಿಕೊಂಡಿದ್ದ ಅಕ್ಕ–ಅಲ್ಲಮ–ಬಸವ ಜಯಂತ್ಯುತ್ಸವವನ್ನು ಅಕ್ಕಮಹಾದೇವಿ, ಅಲ್ಲಮಪ್ರಭು ಹಾಗೂ ಬಸವಣ್ಣನವರ ಫೋಟೋಗಳಿಗೆ ಪುಷ್ಪ ನಮನ ಸಲ್ಲಿಸಿ 'ವಿಶ್ವ ಶಾಂತಿಗೆ ಶರಣರ ಕೊಡುಗೆ' ಕುರಿತು ಮಾತನಾಡಿದರು.

ಬಸವಾದಿ ಶರಣರ ಪರಂಪರೆಯು ಕಾಯಕದಿಂದ ಬರುವ ಜ್ಞಾನವೇ ಶ್ರೇಷ್ಠವೆಂದು ಜಗತ್ತಿಗೆ ಸಾರಿದ ಉನ್ನತ ಪರಂಪರೆ. ಹೀಗಾಗಿ ವಚನ ಸಂಸ್ಕೃತಿಯ ಮಹತ್ವವನ್ನು ನಾವು ಅರಿಯಬೇಕು. ಭಾರತದ ಸಾಮಾಜಿಕ ಮತ್ತು ಧಾರ್ಮಿಕ ಇತಿಹಾಸದಲ್ಲಿ ಬಸವಾದಿ ಶರಣರ ಚಿಂತನೆಗಳು ಮತ್ತು ತತ್ವಗಳು ಅತ್ಯಂತ ಮಹತ್ವಾದವು ಎಂದರು.

ಶರಣರ ಚಿಂತನೆಗಳು ಅತ್ಯಂತ ಪವಿತ್ರವಾದವು. ಏಕೆಂದರೆ 21ನೇ ಶತಮಾನದಲ್ಲೂ ಯಾವುದಾದರೂ ಒಂದು ಶತಮಾನದ ಬಗ್ಗೆ ಅರ್ಥೈಸಿಕೊಂಡು, ಪುಳಕಿತವಾಗಿ ಮಾತನಾಡುತ್ತಿದ್ದೇವೆ ಅಂದರೆ ಅದು 12ನೇ ಶತಮಾನದ ಶರಣ ಪರಂಪರೆಯಾಗಿದೆ. ಕಾರಣ ಬಸವಾದಿ ಶರಣರ ಪರಂಪರೆಯು ಜೀವಪರ ಹಾಗೂ ನಿಸರ್ಗ ಪರವಾದುದು ಎಂದು ಹೇಳಿದರು.

ಇಂದಿನ ವಿಜ್ಞಾನ ಮತ್ತು ತಾಂತ್ರಿಕ ಯುಗದಲ್ಲಿ ನಾವು ನೈತಿಕವಾಗಿ ಸೋಲುತ್ತಿದ್ದೇವೆ. ಶರಣರ ಚಿಂತನೆಗಳು ನಮಗೆ ನೈತಿಕ ಮೌಲ್ಯಗಳನ್ನು ತಿಳಿಸಿಕೊಡಲಿವೆ. ಶರಣರ ಸಿದ್ಧಾಂತವೆಂದರೆ ಎಲ್ಲರನ್ನೂ ಒಳಗೊಳ್ಳುವುದಾಗಿದೆ. ಅತ್ಯಂತ ಕಟ್ಟಕಡೆಯ ಕಾಯಕ ಜೀವಿಗಳನ್ನು ತಮ್ಮ ಆವರಣಕ್ಕೆ ತೆಗೆದುಕೊಂಡು ಅವರಿಗೆಲ್ಲಾ ಘನತೆಯನ್ನು ತಂದು ಕೊಟ್ಟ ಮಹಾನುಭಾವ ಬಸವಣ್ಣ ಎಂದು ಸ್ಮರಿಸಿದರು.

ಇದಕ್ಕೂ ಮುನ್ನ ನಿವೃತ್ತ ಕನ್ನಡ ಉಪನ್ಯಾಸಕರು ಹಾಗೂ ಗಾಯನ ರಾಜ್ಯ ಪ್ರಶಸ್ತಿ ಪುರಸ್ಕೃತ ಹರವೆ ಬಸವರಾಜು ನೇತೃತ್ವ ತಂಡದಿಂದ ವಚನ ಗಾಯನ ಕಾರ್ಯಕ್ರಮ ನಡೆಯಿತು. ಜೆಪಿ ನಗರದ ಅರಿವಿನ ಮನೆ ಮಹಿಳಾ ಬಳಗದ ಅಧ್ಯಕ್ಷೆ ಲೀಲಾಂಬಿಕೆ, ಅಖಿಲ ಭಾರತ ವೀರಶೈವ ಜಿಲ್ಲಾ ಘಟಕದ ಮಾಜಿ ಅಧ್ಯಕ್ಷ ಶಿವಮೂರ್ತಿ ಕಾನ್ಯ, ಅನಿಕೇತನ ಸೇವಾ ಸಂಸ್ಥೆ ಅಧ್ಯಕ್ಷ ಕೆ.ವಿ.ಮಲ್ಲೇಶ್, ಸರ್ಕಾರಿ ನೌಕರರ ಸಂಘದ ನಿರ್ದೇಶಕ ಮಾಲಂಗಿ ಸುರೇಶ್, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಕಾರ್ಯನಿರ್ವಾಹಕ ನಿರ್ದೇಶಕ ಆಯರಹಳ್ಳಿ ಪಿ.ವಿರೂಪಾಕ್ಷ, ಶಿವ ಸನ್ನಿಧಿ ಗೆಳೆಯರ ಬಳಗದ ಅಧ್ಯಕ್ಷ ಪರಮೇಶ್ ಮಾಸ್ಟರ್ ಮತ್ತಿತರರು ಹಾಜರಿದ್ದರು.

ರೋಹಿತ್ ಆರ್.ಪ್ರಸಾದ್ ಉನ್ನತ ಶ್ರೇಣಿಯಲ್ಲಿ ತೇರ್ಗಡೆ



ಮೈಸೂರು,ಮೇ 15(ಪಿಎಂ)– ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದ್ರೆಯ ಆಳ್ವಾಸ್ ಸೆಂಟ್ರಲ್ ಸ್ಕೂಲ್‌ನ ವಿದ್ಯಾರ್ಥಿ ರೋಹಿತ್ ಆರ್.ಪ್ರಸಾದ್ ಸಿಬಿಎಸ್‌ಇ 10ನೇ ತರಗತಿಯ ಪರೀಕ್ಷೆಯಲ್ಲಿ ಶೇ.93.6ರಷ್ಟು ಅಂಕಗಳನ್ನು ಗಳಿಸುವ ಮೂಲಕ ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ಇಂಗ್ಲಿಷ್‌ನಲ್ಲಿ 93, ಸಂಸ್ಕೃತದಲ್ಲಿ 87, ಗಣಿತದಲ್ಲಿ 72, ವಿಜ್ಞಾನದಲ್ಲಿ 93, ಸಮಾಜ ವಿಜ್ಞಾನದಲ್ಲಿ 95 ಹಾಗೂ ಹೆಚ್ಚುವರಿ ವಿಷಯವಾಗಿ ಆಯ್ಕೆ ಮಾಡಿಕೊಂಡಿದ್ದ ಇನ್ಫರ್‌ಮೇಷನ್ ಟೆಕ್ನಾಲಜಿಯಲ್ಲಿ 100 ಅಂಕಗಳನ್ನು ಪಡೆದಿದ್ದು, ಇವರು ಮೈಸೂರಿನ ಜಲಪುರಿ ನಿವಾಸಿಯಾಗಿದ್ದಾರೆ. ರೋಹಿತ್ ಆರ್.ಪ್ರಸಾದ್ ಅವರ ತಂದೆ ಹೆಚ್.ಎಂ.ರಾಘವೇಂದ್ರ ಪ್ರಸಾದ್ ಖಾಸಗಿ ಸಂಸ್ಥೆಯಲ್ಲಿ ಸೀನಿಯರ್ ಸ್ಟೋರ್ ಆಫೀಸರ್ ಆಗಿ ಕಾರ್ಯನಿರ್ವಹಿಸುತ್ತಿದ್ದರೆ, ತಾಯಿ ಶೃತಿಪ್ರಸಾದ್ ಮೈಸೂರಿನ ಪೊಲೀಸ್ ಪಬ್ಲಿಕ್ ಶಾಲೆಯಲ್ಲಿ ಶಿಕ್ಷಕಿಯಾಗಿದ್ದಾರೆ.

'ಶಿಕ್ಷಣ ರತ್ನ ಪ್ರಶಸ್ತಿ'ಗೆ ಟಿ.ಸತೀಶ್ ಜವರೇಗೌಡ ಆಯ್ಕೆ



ಮೈಸೂರು, ಮೇ 15– ಆತ್ಮಶ್ರೀ ಕನ್ನಡ ಸಾಂಸ್ಕೃತಿಕ ಪ್ರತಿಷ್ಠಾನ ಹಾಗೂ ಕನ್ನಡಾಂಬೆ ಸಾಮಾಜಿಕ ಮತ್ತು ಸಾಂಸ್ಕೃತಿಕ ಸಂಸ್ಥೆಯ ಸಂಯುಕ್ತ ಆಶ್ರಯದಲ್ಲಿ ನೀಡಲಾಗುವ 'ಶಿಕ್ಷಣ ರತ್ನ ಪ್ರಶಸ್ತಿ'ಗೆ ತಾಲೂಕಿನ ಮೆಲ್ಲಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕ ಹಾಗೂ ಕವಿ ಟಿ. ಸತೀಶ್ ಜವರೇಗೌಡ ಆಯ್ಕೆಯಾಗಿದ್ದಾರೆ ಎಂದು ಪ್ರತಿಷ್ಠಾನದ ಅಧ್ಯಕ್ಷ ಡಾ.ಗುಣವಂತ ಮಂಜು ತಿಳಿಸಿದ್ದಾರೆ.

ನಗರದ ಜಿಲ್ಲಾ ಕನ್ನಡ ಸಾಹಿತ್ಯ ಭವನದಲ್ಲಿ ಮೇ 18 ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ಅಧ್ಯಕ್ಷತೆಯಲ್ಲಿ ನಡೆಯಲಿರುವ ಮೈಸೂರು ಸಾಂಸ್ಕೃತಿಕ ಉತ್ಸವದಲ್ಲಿ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಹಾಗೂ ಖ್ಯಾತ ಸಾಹಿತಿ ನಾಡೋಜ ಮಲ್ಲೇಪುರಂ ಜಿ. ವೆಂಕಟೇಶ್ ಪ್ರಶಸ್ತಿ ಪ್ರದಾನ ಮಾಡುವರು. ಸಮಾರಂಭವನ್ನು ದಕ್ಷ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಡಾ.ಪಿ. ಜಯಚಂದ್ರ ರಾಜು ಉದ್ಘಾಟಿಸುವರು ಎಂದು ಪ್ರಕಟಣೆ ತಿಳಿಸಿದೆ.

ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರಕ್ಕೆ 2 ವರ್ಷ

ಮೇ 20ರಂದು ಹೊಸಪೇಟೆಯಲ್ಲಿ ಭಾರಿ ಸಮಾವೇಶ

- ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಇನ್ನಿತರೆ ನಾಯಕರು ಭಾಗಿ
- ಸಮಾವೇಶದ ಪೂರ್ಣ ವೆಚ್ಚ ಸರ್ಕಾರ, ಕಾಂಗ್ರೆಸ್‌ನದು
- ಸಮಾವೇಶದ ಯಶಸ್ಸಿಗೆ ಸಚಿವರು, ಶಾಸಕರ ಒಳಗೊಂಡ ಸಮಿತಿ ರಚನೆ



ಬೆಂಗಳೂರು, ಮೇ 15(ಕೆಎಂಶಿ)–ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಎರಡು ವರ್ಷ ಪೂರೈಸಿರುವ ಹಿನ್ನೆಲೆಯಲ್ಲಿ ವಿಜಯನಗರದ ಹೊಸಪೇಟೆಯಲ್ಲಿ ಮೇ 20ರಂದು ಬೃಹತ್ ಸಮಾವೇಶ ಹಮ್ಮಿಕೊಳ್ಳಲಾಗಿದೆ.

ಸಮಾವೇಶಕ್ಕೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಸೇರಿದಂತೆ ಪಕ್ಷದ ದೆಹಲಿಯ ನಾಯಕರಿಗೆ ಆಹ್ವಾನ ನೀಡಿದ್ದು, ಅವರೆಲ್ಲರೂ ಭಾಗವಹಿಸುತ್ತಿದ್ದಾರೆ.

ಖರ್ಗೆ ಮತ್ತು ರಾಹುಲ್ ಗಾಂಧಿ ಭಾಗವಹಿಸುವ ಈ ಸಮಾವೇಶದ ಪೂರ್ಣ ಖರ್ಚು–ವೆಚ್ಚವನ್ನು ಸರ್ಕಾರವೇ ಭರಿಸುತ್ತಿದೆ. ಇತಿಹಾಸದಲ್ಲಿ ಅಚ್ಚಳಿಯದಂತೆ ಉಳಿಯುವ ಸಮಾವೇಶವನ್ನಾಗಿ ಮಾಡಲು ಸರ್ಕಾರ ಮತ್ತು ಕಾಂಗ್ರೆಸ್ ನಿಶ್ಚಯಿಸಿವೆ.

ಸಮಾವೇಶದ ಯಶಸ್ಸಿಗಾಗಿ ಸಚಿವರಾದ ಕೃಷ್ಣಬೈರೇಗೌಡ, ಸತೀಶ್ ಜಾರಕಿಹೊಳಿ, ಡಾ. ಶರಣಪ್ರಕಾಶ್ ಪಾಟೀಲ್, ಡಾ.ಹೆಚ್.ಸಿ.ಮಹದೇವಪ್ಪ, ಎನ್.ಎಸ್.ಬೋಸರಾಜ್, ಪ್ರಿಯಾಂಕ್ ಖರ್ಗೆ, ಎಸ್.ಎಸ್.ಮಲ್ಲಿಕಾರ್ಜುನ್, ಮಂಕಾಳ ವೈದ್ಯ, ಶಿವಾನಂದ ಪಾಟೀಲ್, ಶಿವರಾಜ ತಂಗಡಗಿ, ಕೆ.ಎನ್.ರಾಜಣ್ಣ, ಎನ್.ಚಲುವರಾಯಸ್ವಾಮಿ, ಲಕ್ಷ್ಮೀ ಹೆಬ್ಬಾಳ್ಕರ್, ಈಶ್ವರ್ ಖಂಡ್ರೆ, ಎಚ್.ಕೆ. ಪಾಟೀಲ್, ಎಂ.ಬಿ.ಪಾಟೀಲ್, ಮಧು ಬಂಗಾರಪ್ಪ, ಶರಣಬಸಪ್ಪ ದರ್ಶನಾಪುರ್, ದಿನೇಶ್ ಗುಂಡೂರಾವ್, ಸಂತೋಷ್ ಲಾಡ್ ಸೇರಿದಂತೆ 64 ಹಿರಿಯ ಶಾಸಕರನ್ನೊಳಗೊಂಡ ಸಮಿತಿ ರಚಿಸಿ ಅವರಿಗೆ ನಿರ್ದಿಷ್ಟ ಹೊಣೆಗಾರಿಕೆ ನೀಡಲಾಗಿದೆ.

ಇವರಿಗೆ ಕಲ್ಯಾಣ ಕರ್ನಾಟಕ ಹಾಗೂ ಮುಂಬೈ ಕರ್ನಾಟಕದ ಕೆಲವು ಭಾಗಗಳಲ್ಲಿನ ವಿಧಾನಸಭಾ ಕ್ಷೇತ್ರಗಳಲ್ಲಿ ತಮಗೆ ವಹಿಸಿದ ಜವಾಬ್ದಾರಿಯಂತೆ ಸಭೆಗಳನ್ನು ನಡೆಸಿ ಸಮಾವೇಶಕ್ಕೆ ಜನರನ್ನು ಕರೆತರುವಂತೆ ನಿರ್ದೇಶನ ನೀಡಲಾಗಿದೆ.

ಸರ್ಕಾರ ಎರಡು ವರ್ಷ ಪೂರೈಸಿರುವ ಹಿನ್ನೆಲೆಯಲ್ಲಿ ವಿವಿಧ ತಾಂಡಗಳಲ್ಲಿ ವಾಸಿಸುವ ಒಂದು ಲಕ್ಷ ಕುಟುಂಬಗಳಿಗೆ ಹಕ್ಕುಪತ್ರ ನೀಡಲು ಸಜ್ಜಾಗಿದೆ.

ಹಟ್ಟಿ, ಹಾಡಿ, ತಾಂಡ, ಪಾಳ್ಯ, ಮಜರೆ ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಿ ಅಲ್ಲಿ ವಾಸಿಸುತ್ತಿರುವ ಅಷ್ಟೂ ಮಂದಿಗೆ ಕಂಪ್ಯೂಟರೈಸ್ಡ್ ನೋಂದಾಯಿತ ದಾಖಲೆಗಳನ್ನು ನೀಡಲಿದ್ದಾರೆ,

ಸಚಿವರು ಮತ್ತು ಶಾಸಕರು ಇಂತಹ ಜನವಸತಿಗಳಿಗೆ ತೆರಳಿ ಸರ್ಕಾರ ಕೈಗೊಂಡಿರುವ ನಿರ್ಧಾರವನ್ನು ತಲುಪಿಸಿ ಅವರಿಗೆ ಅಧಿಕಾರಿಗಳಿಂದ ದಾಖಲೆಗಳು ತಲುಪಿವೆಯೇ ಎಂದು ಪರಿಶೀಲನೆ ಮಾಡಿ ಅವರು ಸಮಾವೇಶಕ್ಕೆ ಬರುವಂತೆ ನೋಡಿಕೊಳ್ಳುವ ಹೊಣೆಗಾರಿಕೆ ನೀಡಲಾಗಿದೆ.

ಜನವಸತಿಗಳಿಂದ ಬರುವ ಈ ಫಲಾನುಭವಿಗಳ ಸಾರಿಗೆ ಹಾಗೂ ಊಟದ ವ್ಯವಸ್ಥೆಯನ್ನು ಸರ್ಕಾರ ಮಾಡುವುದರ ಜೊತೆಗೆ ಆಯ್ದ ಕೆಲವರಿಗೆ ರಾಹುಲ್ ಗಾಂಧಿ ಮತ್ತು ಖರ್ಗೆ ಅವರು ಹಕ್ಕುಪತ್ರವನ್ನು ವಿತರಿಸಲಿದ್ದಾರೆ.

ಸಚಿವರು ಮತ್ತು ಶಾಸಕರು ತಮಗೆ ವಹಿಸಿರುವ ತಾಲೂಕು ಅಥವಾ ಕ್ಷೇತ್ರಗಳಿಗೆ ಈಗಾಗಲೇ ತೆರಳಿ ಸ್ಥಳೀಯ ಮುಖಂಡರ ಸಭೆ ನಡೆಸಿದ್ದಾರೆ.

ಮುಖಂಡರ ಸಭೆಯ ಬಳಿಕ ಜನವಸತಿಗಳಿಗೆ ಭೇಟಿ ನೀಡಿ ಸರ್ಕಾರದ ಕಾರ್ಯಕ್ರಮಗಳ ಬಗ್ಗೆ ಜಾಗೃತಿ ಮೂಡಿಸುವ ಕೆಲಸ ಮಾಡಿದ್ದಾರೆ ಎಂದು ಸರ್ಕಾರದ ಉನ್ನತ ಮೂಲಗಳು ತಿಳಿಸಿವೆ.

ನಕ್ಕರೆ ಅದೇ ಸ್ವರ್ಗ

ಗಂಡ – ಹೆಂಡತಿ ಪ್ರತಿದಿನ ಜಗಳ ಆಡ್ತಾ ಇದ್ರೂ...

ಗಂಡ : ಈ ಮನೆಗೆ ಶಾಂತಿ ಬೇಕು.

ಹೆಂಡತಿ : ನಿಮಗೆ 'ಶಾಂತಿ' ಬೇಕಿದ್ರೆ, ನನಗೆ 'ಸಂತೋಷ' ಬೇಕು.

ಮೈಸೂರು ಮಿತ್ರ

ಶುಕ್ರವಾರ, 16 ಮೇ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ

(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ.........

ಕಾಂಕ್ರೀಟ್ ಗೋಡೆಗಳ ನಡುವೆ...
ಯಂತ್ರಗಳ ಮಧ್ಯೆ...
ಕಳೆದು ಹೋದ ಭಾವನೆಗಳ ಹುಡುಕಿ...– ತೇಜು ಹುಲಿಕಲ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ನೀರಿನಲ್ಲಿ ಮುಳುಗಿದವನಿಗೆ ಚಳಿಯೇನು, ಮಳೆಯೇನು?

ನಿಮ್ಮ ಪತ್ರಗಳು

■ ಅಂತ್ಯಸಂಸ್ಕಾರದಲ್ಲೂ ಸುಲಿಗೆ ಸರಿಯೇ?

ಮಾನ್ಯರೇ,

ಮೈಸೂರು ಮಹಾನಗರ ಪಾಲಿಕೆ ಇದೀಗ ತನ್ನ ಸಂಪನ್ಮೂಲಗಳನ್ನು ಕ್ರೋಢೀಕರಿಸುವ ಸಲುವಾಗಿ ಮೈಸೂರಿನ ನಾಲ್ಕು ಚಿತಾಗಾರಗಳಲ್ಲಿ ಅಂತ್ಯಕ್ರಿಯೆಯ ಶುಲ್ಕವನ್ನು 500 ರೂ. ನಿಗದಿಪಡಿಸಿದೆ (ಮೈ ಮಿ 15.5.2025). ಇದು ನಿಜಕ್ಕೂ ನಾಚಿಕೆಗೇಡು ಹಾಗೂ ದುರದೃಷ್ಟಕರ ಸಂಗತಿಯೇ ಹೌದು.

ಸತ್ತವರು ಸಾಯುತ್ತಾರೆ, ಹೇಗೋ ಅವರಿಗೊಂದು ಸದ್ಗತಿ ದೊರಕಿಸಲೆಂದು ಅಲ್ಲಿಗೆ ಬರುವವರು ನೆಮ್ಮದಿಯಿಂದ ಅವರ ಕ್ರಿಯೆಗಳನ್ನು ಮಾಡಿ ಹೋಗುತ್ತಾರೆ. ಬದುಕಿರುವವರೆಗೂ ವಿವಿಧ ತೆರಿಗೆಗಳೆಂಬ ಬರೆಗಳನ್ನು ಹಾಕುವ ಸರ್ಕಾರಗಳು, ಸತ್ತ ಮೇಲೂ ನೆಮ್ಮದಿಯಾಗಿರಲು ಬಿಡದೆ ಹೀಗೆ ತೆರಿಗೆಗಳನ್ನು ವಿಧಿಸುತ್ತಾ ಜನರ ನೆಮ್ಮದಿಯನ್ನು ಹಾಳುಗೆಡವುತ್ತಿದೆ. ಈಗಾಗಲೇ ಪಾಲಿಕೆಯು ಆಸ್ತಿ ತೆರಿಗೆಯಲ್ಲಿ ಪ್ರತಿ ಮನೆಗೂ ಸ್ಮಶಾನ ತೆರಿಗೆ ಎಂದು 150 ರೂ.ಗಳನ್ನು ಸಂದಾಯ ಮಾಡಿಸಿಕೊಳ್ಳಲಿದ್ದು, ಬಹುಶಃ ಅಂತಹ ಮನೆಯಲ್ಲಿನ ಸದಸ್ಯರ ಮರಣಕ್ಕಿಂತಲೂ ಹೆಚ್ಚೇ ಸ್ಮಶಾನ ತೆರಿಗೆ ಸಂದಾಯವಾಗುತ್ತದೆ ಅಲ್ಲವೇ. ಅಷ್ಟಕ್ಕೂ ಪ್ರತಿ ವರುಷವೂ ಸ್ಮಶಾನಕ್ಕೆ ತೆರಿಗೆದಾರರು ಹೋಗಿ ಬರುತ್ತಾರೆಯೇ ಎಂಬ ವಿವೇಚನೆಯೂ ಇಲ್ಲವಲ್ಲ. ಒಟ್ಟಿನಲ್ಲಿ ಈ ಸರ್ಕಾರಕ್ಕೆ 'ಹಣ ಸೂರೆ ಹೆಣ ಸೂರೆ' ಎಂಬ ಗಾದೆ ಮಾತು ಸೂಕ್ತವಾಗಿ ಅನ್ವಯಿಸುತ್ತದೆ. ಗ್ಯಾರಂಟಿಗಳಿಂದ ಜರ್ಜರಿತವಾಗಿ ಸಂಪನ್ಮೂಲ ಕ್ರೋಢೀಕರಣೆಗೆ ಹೊಸ ಹೊಸ ಆವಿಷ್ಕಾರಗಳ ಅನ್ವೇಷಣೆ ನಡೆಸುತ್ತಿರುವ ಸರ್ಕಾರ, ಮುಂದಿನ ದಿನಗಳಲ್ಲಿ ಹುಟ್ಟಿದರೂ ಜನನ ತೆರಿಗೆ ಎಂತಲೂ ವಿಧಿಸುವ ಕಾಲ ದೂರವಿಲ್ಲವಷ್ಟೆ. ಜನತೆ ಇಂತಹ ಮತ್ತಷ್ಟು ಅಸಹನೀಯ ಹೊಡೆತಗಳನ್ನು ಅನುಭವಿಸಲೇಬೇಕು.

–ವಿಜಯ್ ಹೆಮ್ಮಿಗೆ, ಮೈಸೂರು

■ ಕೆಆರ್‌ಎಸ್ ಸಂಪರ್ಕಿಸುವ ರಸ್ತೆಗಳನ್ನು ದುರಸ್ತಿ ಮಾಡಲಿ



ಮಾನ್ಯರೇ,

ಶ್ರೀರಂಗಪಟ್ಟಣ ತಾಲೂಕಿನ ಕೃಷ್ಣರಾಜಸಾಗರ ಅಣೆಕಟ್ಟೆಯ ಬೃಂದಾವನ ಉದ್ಯಾನವನ್ನು 2,663 ಕೋಟಿ ರೂ. ವೆಚ್ಚದಲ್ಲಿ ವಿಶ್ವದರ್ಜೆಯ ಪ್ರವಾಸೋದ್ಯಮ ಆಕರ್ಷಣೀಯ ಕೇಂದ್ರವನ್ನಾಗಿ ಉನ್ನತೀಕರಣಗೊಳಿಸುವ ಯೋಜನೆಗೆ ಕಾಂಗ್ರೆಸ್ ಸರ್ಕಾರ ಅನುಮೋದನೆ ನೀಡಿರುವುದೇನೋ ಸ್ವಾಗತಾರ್ಹ. ಆದರೆ, ಮೈಸೂರು ನಗರ ಮತ್ತು ಶ್ರೀರಂಗಪಟ್ಟಣ ಮಾರ್ಗವಾಗಿ ಕೆಆರ್‌ಎಸ್ ತಲುಪಲು ಪ್ರವಾಸಿಗರು ಹಾಗೂ ಪ್ರಯಾಣಿಕರು ದಿನನಿತ್ಯ ಹರಸಾಹಸ ಪಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಇಲ್ಲಿಗೆ ತಲುಪುವ ರಸ್ತೆಗಳು ಬಹಳ ಹದಗೆಟ್ಟಿದ್ದು ಎಲ್ಲೆಂದರಲ್ಲಿ ಹಳ್ಳ–ಕೊಳ್ಳಗಳಿಂದ ಕೂಡಿದೆ. ಪಂಪಹೌಸ್ ಬಳಿ ಇರುವ ತಿರುವಿನಲ್ಲಿ ದೊಡ್ಡದೊಂದು ಹಳ್ಳವಿದ್ದು ವರ್ಷವಾದರೂ ಅದನ್ನು ದುರಸ್ತಿ ಮಾಡಿಲ್ಲ. ಜೆಕೆ ಟೈರ್ಸ್ ಕಾರ್ಖಾನೆ ಕಳೆಯುತ್ತಿದ್ದಂತೆ ಹೆಜ್ಜೆ ಹೆಜ್ಜೆಗೂ ಹಳ್ಳಗಳು ಪ್ರವಾಸಿಗರನ್ನು ಸ್ವಾಗತಿಸುತ್ತವೆ. ಆದ್ದರಿಂದ ಈ ಮಾರ್ಗದಲ್ಲಿ ಪ್ರತಿನಿತ್ಯ ದ್ವಿಚಕ್ರವಾಹನ, ಕಾರು, ಆಟೋ ಮತ್ತು ಟೆಂಪೋಗಳು ಅಪಘಾತಕ್ಕೀಡಾಗುತ್ತಿವೆ. ಇನ್ನು ಮಳೆಗಾಲ ಪ್ರಾರಂಭವಾದರೆ ರಸ್ತೆಯಲ್ಲಿರುವ ಹಳ್ಳಗಳಿಗೆ ಮಳೆ ನೀರು ತುಂಬಿ ಅಪಘಾತಗಳ ಸಂಖ್ಯೆ ಹೆಚ್ಚಾಗುಬಹುದು. ಸರ್ಕಾರ ಬೃಂದಾವನ ಉದ್ಯಾನವನ್ನು ವಿಶ್ವದರ್ಜೆ ಮಟ್ಟಕ್ಕೆ ತೆಗೆದುಕೊಂಡು ಹೋಗುವ ಮೊದಲು ಅದನ್ನು ಸಂಪರ್ಕಿಸುವ ರಸ್ತೆಗಳನ್ನು ದುರಸ್ತಿ ಮಾಡಲಿ.

–ಪವನ್ ಕುಮಾರ್.ಎನ್.ಎಸ್., ಡಿ.ಬನುಮಯ್ಯ ಕಾಲೇಜು, ಮೈಸೂರು.

■ ಯಾವ ಪುರುಷಾರ್ಥಕ್ಕೆ ಸಂಭ್ರಮಾಚರಣೆ

ಮಾನ್ಯರೆ,

ಇದೇ ಮೇ ತಿಂಗಳ 20ಕ್ಕೆ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಎರಡು ವರ್ಷಗಳು ಪೂರ್ಣಗೊಳ್ಳುತ್ತಿದೆ. ಈ ಎರಡು ವರ್ಷಗಳು ಪೂರ್ಣಗೊಳಿಸಿದ್ದೇ ದೊಡ್ಡ ಸಾಧನೆ ಎನ್ನುವಂತೆ ಅದ್ದೂರಿ ಸಂಭ್ರಮಾಚರಣೆ ಆಚರಿಸುವುದಾಗಿ ಡಿಸಿಎಂ ಡಿ.ಕೆ. ಶಿವಕುಮಾರ್ ಮಾಧ್ಯಮಗಳ ಮುಂದೆ ಹೇಳಿದ್ದಾರೆ.

ಕಾಂಗ್ರೆಸ್ ಪಕ್ಷದ ಸರ್ಕಾರ ಈ ಎರಡು ವರ್ಷಗಳ ಅವಧಿಯಲ್ಲಿ ಸಾಧಿಸಿದ್ದು ಅಷ್ಟರಲ್ಲೇ ಇದೆ. ಅಧಿಕಾರಕ್ಕೆ ಬರುವ ಏಕೈಕ ಉದ್ದೇಶದಿಂದ ಪಂಚ ಗ್ಯಾರಂಟಿಗಳ ಆಶ್ವಾಸನೆ ನೀಡಿ ಅಧಿಕಾರಕ್ಕೆ ಬಂದ ನಂತರ ಈ ಗ್ಯಾರಂಟಿಗಳಿಗಾಗಿ ಹಣ ಹೊಂದಿಸಲು ಹೆಣಗಾಡುವ ಸ್ಥಿತಿ ಇದೆ. ಗೃಹ ಲಕ್ಷ್ಮಿ ಯೋಜನೆಯಲ್ಲಿ 3 ತಿಂಗಳಿಗೊಮ್ಮೆ ಹಣ ನೀಡುತ್ತಿದ್ದಾರೆ. ಯುವನಿಧಿಯಂತೂ ಹಳ್ಳ ಹಿಡಿದಿದೆ. ಕಳೆದ ಎರಡು ವರ್ಷಗಳಿಂದ ಎಷ್ಟು ಜನ ಯುವ ನಿರುದ್ಯೋಗಿ ಯುವಕರಿಗೆ ಹಣ ನೀಡಿದ್ದಾರೆ ಹೇಳಲಿ. ಸಾರ್ವಜನಿಕವಾಗಿ ಯಾವ – ಯಾವ ಅಭಿವೃದ್ಧಿ ಕೆಲಸಗಳಾಗಿವೆ ಎಂಬುದನ್ನು ಬಹಿರಂಗಪಡಿಸಲಿ.

ಶಕ್ತಿ ಮತ್ತು ಗೃಹಜ್ಯೋತಿ ಯೋಜನೆಗಳನ್ನು ಬಿಟ್ಟರೆ, ಬೇರೆ ಯಾವುದೇ ಗ್ಯಾರಂಟಿ ಯೋಜನೆಗಳು ಸರಿಯಾಗಿ ಸಾರ್ವಜನಿಕರಿಗೆ ತಲುಪುತ್ತಿಲ್ಲ. ಈಗ ಇದನ್ನೇ ದೊಡ್ಡ ಸಾಧನೆ ಎಂದು ಸರ್ಕಾರ ಹೇಳಿಕೊಳ್ಳುತ್ತಿದೆ. ಈ ವರ್ಷದ ಬಜೆಟ್ ಜನ ಸಾಮಾನ್ಯರ ಪರವೂ ಇಲ್ಲ. ಸರ್ಕಾರದ ಮಂತ್ರಿಯೊಬ್ಬರು ಅಭಿವೃದ್ಧಿ ಕೆಲಸಗಳಿಗೆ ಸರ್ಕಾರದ ಬಳಿ ಹಣ ಇಲ್ಲ ಎಂದು ಬಹಿರಂಗವಾಗಿಯೇ ಹೇಳಿದ್ದಾರೆ.

ಈ ಎರಡು ವರ್ಷಗಳ ಅವಧಿಯಲ್ಲಿ ಇವರು ಮಾಡಿದ ದೊಡ್ಡ ಸಾಧನೆ ಎಂದರೆ, ಮುಖ್ಯಮಂತ್ರಿಯಾಗಿ ಯಾರು ಇರಬೇಕು? ಇಲ್ಲ ಯಾರು ಬರಬೇಕು ಎಂಬುದರಲ್ಲೇ ಕಳೆದು ಹೋಯಿತು. ಇದಕ್ಕೆ ಏನು ಇವರ ಸಂಭ್ರಮಾಚರಣೆ?

–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು



ಡಾ. ವಿ. ರಂಗನಾಥ್
ಲೇಖಕರು ಹಾಗೂ ನಿವೃತ್ತ ತಹಸೀಲ್ದಾರರು
ಮೊ: 94482 08746/ 97421 79000

ಚಿಂತನೆ

ತನ್ನದ್ದಲ್ಲದ್ದರ ಆಕರ್ಷಣೆ ಸಂಕಷ್ಟ...!!

> ನಾವು ಮನಸ್ಸು ಮಾಡಿದರೆ ಯಾವುದೂ ಅಸಾಧ್ಯವಲ್ಲ. ಅದಕ್ಕೆ ನಾವು ಪರರ ಅನುಕರಣೆ ಹಾಗೂ ನಮ್ಮ ಅಗತ್ಯದ ಪರಿಗಣನೆ ಮಾಡಬೇಕಾಗುತ್ತದೆ. ಈಗಲೂ ಮನಸ್ಸಿದ್ದರೆ ಮಾರ್ಗ ಎಂಬಂತೆ ನಾವು ಜೀವನ ಮಾಡಬಹುದು. ನಾವು ನೋಡುವ ನೋಟ ಹಾಗೂ ನಮ್ಮ ವಿವೇಚನೆ ಎಂತಹ ಬದಲಾವಣೆಯನ್ನೂ ತರಬಹುದು.

ನಮಗೆ ನಮ್ಮಲ್ಲಿರುವುದಕ್ಕಿಂತ ಇತರರಲ್ಲಿರುವುದರ ಮೇಲೆ ಹೆಚ್ಚಿನ ಆಕರ್ಷಣೆ. ಇದೊಂದು ಮಾನವ ಸ್ವಭಾವ. ನಮಗೆ ಬೇಕಾದ್ದೆಲ್ಲವೂ ನಮ್ಮ ಬಳಿ ಇರುತ್ತದೆ. ಆದರೂ ಮನಸ್ಸು ಇತರರಲ್ಲಿರುವುದರ ಕಡೆಗೆ ಆಕರ್ಷಿತವಾಗುತ್ತದೆ. ಹೀಗಾಗಿಯೇ ನಮ್ಮ ಮನೆಗಳಲ್ಲಿ ನಮಗೆ ಅಗತ್ಯವಿರುವುದಕ್ಕಿಂತ ಹೆಚ್ಚು ಪದಾರ್ಥಗಳು ಇರುತ್ತವೆ. ಆದರೆ ಅವುಗಳ ಉಪಯೋಗ ಕಡಿಮೆಯೇ. ನಮ್ಮ ಮನೆಯಲ್ಲಿರುವಂತಹುದೇ ವಸ್ತು ಬೇರೆ ರೂಪದಲ್ಲಿ ಮತ್ತೊಬ್ಬರಲ್ಲಿ ಕಂಡಾಗ ನಮಗೆ ಅದರ ಬಗ್ಗೆ ಆಸೆ ಮೂಡುತ್ತದೆ. ಹೀಗಾಗಿ ನಮ್ಮ ಆಸೆಯು ಬಗೆಬಗೆಯ ವಸ್ತುಗಳನ್ನು ಕೊಳ್ಳುವುದರತ್ತಲೇ ಆಕರ್ಷಣೆಗೆ ಒಳಗಾಗುತ್ತದೆ.

ನಾವು ಅನೇಕ ಸಲ ವಸ್ತುಪ್ರದರ್ಶನಗಳು ಇಲ್ಲವೇ ದೊಡ್ಡದೊಡ್ಡ ಮಾಲುಗಳಿಗೆ ಹೋದಾಗ ನಮ್ಮ ಅಗತ್ಯದ ವಸ್ತುವಿಗಿಂತ, ನಾವು ಜಾಹೀರಾತುಗಳಲ್ಲಿ ನೋಡಿದ, ಅವರಿವರ ಮನೆಗಳಲ್ಲಿ ಕಂಡಂತಹ ವಸ್ತುಗಳನ್ನೇ ಹೆಚ್ಚಾಗಿ ಖರೀದಿಸುತ್ತೇವೆ. ಅವುಗಳು ಅಷ್ಟು ಅಗತ್ಯವೇ? ಎಂಬುದನ್ನೂ ಯೋಚಿಸುವುದಿಲ್ಲ. ದೊಡ್ಡದೊಡ್ಡ ಅಂಗಡಿಗಳಲ್ಲಿ ಅವರು ಹೇಳಿದ್ದೇ ಬೆಲೆ. ನಾವು ಸಣ್ಣಪುಟ್ಟ ವ್ಯಾಪಾರಿಗಳ ಬಳಿ ಚೌಕಾಸಿ ಮಾಡಿದಂತೆ ಅಲ್ಲಿ ಮಾಡಲಾಗದು.

ಅದು ನಮ್ಮ ಪ್ರೆಸ್ಟೀಜ್‌ಗೆ ಧಕ್ಕೆ ತರುವಂತಹುದು!. ಹಾಗಾಗಿ ಅವರು ಕೇಳಿದಷ್ಟು ಹಣ ಕೊಟ್ಟು ಅದನ್ನು ಖರೀದಿಸಿ ತರುತ್ತೇವೆ. ಸಣ್ಣಪುಟ್ಟ ವ್ಯಾಪಾರಿಗಳ ಬಳಿ ಚೌಕಾಸಿ ಮಾಡುತ್ತೇವೆ. ಅರ್ಧ ಬೆಲೆಗೆ ನೀಡುವಂತೆ ಆಗ್ರಹಿಸುತ್ತೇವೆ. ಇದು ನಮಗೆ ನಾವೇ ಮಾಡಿಕೊಳ್ಳುತ್ತಿರುವ ಮೋಸದಂತೆ ಕಂಡುಬರುತ್ತಲ್ಲವೆ?

ನಮಗೆ ಅಗತ್ಯವಿರುವುದರ ಬಗ್ಗೆ ನಾವು ಖರ್ಚು ಮಾಡುವುದು ಸೂಕ್ತ ಎನ್ನಿಸುತ್ತದೆ. ನಮಗೆ ನಮ್ಮ ಮನೆಯಲ್ಲಿರುವ ಟಿವಿ ಸಾಕು. ನಾವು ಅದರಲ್ಲಿಯೂ ಕಾರ್ಯಕ್ರಮಗಳನ್ನು ನೋಡಬಹುದು. ಆದರೆ ಯಾರದ್ದೋ ಮನೆಗೆ ಹೋದಾಗ ಅಲ್ಲಿ ದೊಡ್ಡ ಟಿವಿ ಕಂಡಾಗ ನಮ್ಮ ಮನೆಯಲ್ಲಿ ಇರುವುದು ಚಿಕ್ಕದು, ಅದನ್ನು ಬದಲಿಸಬೇಕು ಎಂದು ಮನಸ್ಸಾಗುತ್ತದೆ. ನಾನು ಗಮನಿಸಿದಂತೆ ಈ ರೀತಿ ಯಾವುದೋ ಆಕರ್ಷಣೆಗೆ ಒಳಗಾಗಿ ತಂದ ದೊಡ್ಡ ಟಿವಿಗೆ ಸೂಕ್ತ ಸ್ಥಳಾವಕಾಶವೇ ಆ ಮನೆಯಲ್ಲಿ ಇರುವುದಿಲ್ಲ. ಹಾಗೂ ಹಠಕ್ಕೆ ಬಿದ್ದು ನೋಡಿದರೆ, ಟಿವಿ ವೀಕ್ಷಿಸಿದ ಸಂತೋಷ ಸಿಗುವುದಿಲ್ಲ ಹಾಗೂ ಕಣ್ಣಿಗೂ ಹಾನಿಯಾಗುತ್ತದೆ.

ಇದೇ ರೀತಿ ಮನೆಗಳಲ್ಲಿ ಉಪಯೋಗಿಸುವ ಫ್ರಿಡ್ಜ್ ಸಹ. ಮನೆಯಲ್ಲಿರುವಂತಹ ಫ್ರಿಡ್ಜ್ ಸಾಕು ಎನಿಸಿದರೂ ಮತ್ತೊಬ್ಬರ ಮನೆಗೋ, ದೊಡ್ಡ ಅಂಗಡಿಗೋ ಹೋದಾಗ ಇಲ್ಲವೇ ಯಾವುದೋ ಆಕರ್ಷಕ ಜಾಹೀರಾತು ನೋಡಿದಾಗ ನಮ್ಮ ಮನೆಗೂ ಇಂತಹ ದೊಡ್ಡ ಫ್ರಿಡ್ಜ್‌ನ್ನೇ ತರಬೇಕೆನಿಸುತ್ತದೆ. ಹಣ ಇಲ್ಲದಿದ್ದರೂ ಏನೋ ಮಾಡಿಕೊಂಡು ತರುತ್ತೇವೆ. ಅದು ನಮ್ಮ ಅಗತ್ಯಕ್ಕೆ ಮೀರಿದ್ದು. ಫ್ರಿಡ್ಜ್ ತಂದ ಮೇಲೆ ಖಾಲಿ ಬಿಡುವಂತಿಲ್ಲ. ಅದು ತುಂಬುವಂತೆ ಏನನ್ನಾದರೂ ಇಡಬೇಕು. ಆಗ ಅಗತ್ಯಕ್ಕಿಂತ ಹೆಚ್ಚು ವಸ್ತು ತಂದು ಅದರಲ್ಲಿ ತುಂಬಿಸುತ್ತೇವೆ. ಆದರೆ ಅವುಗಳ ಉಪಯೋಗ ನಮಗೆ ಅಷ್ಟಾಗಿ ಇರುವುದಿಲ್ಲ. ಹೀಗಾಗಿ ಕೆಲವು ವಸ್ತುಗಳನ್ನು ತಂದದ್ದನ್ನು ಉಪಯೋಗಿಸದೇ, ಕೆಲ ಸಮಯದ ನಂತರ ಅವು ಹಾಳಾಯಿತು, ಹಳೆಯದಾಯಿತು ಎಂದು ಅದನ್ನು ಬಿಸಾಡುವುದುಂಟು. ಅಲ್ಲದೆ ಹಲವು ದಿನಗಳವರೆಗೆ ಇಟ್ಟ ಪದಾರ್ಥಗಳನ್ನು ತಿನ್ನುವುದೂ ಸಹಾ ಆರೋಗ್ಯದ ದೃಷ್ಟಿಯಿಂದ ಸೂಕ್ತವಾದುದಲ್ಲ. ಇವೆಲ್ಲಾ ಗೊತ್ತಿದ್ದೂ ನಾವು ಖರೀದಿಸುವುದು ಒಂದು ರೀತಿಯ ಆತ್ಮವಂಚನೆ ಅಲ್ಲವೆ? ಇತ್ತೀಚೆಗೆ ಫ್ರಿಡ್ಜ್‌ನಲ್ಲಿಟ್ಟಿರುವ ಪದಾರ್ಥಗಳನ್ನು ತಿನ್ನದಿರುವುದೇ ಒಳ್ಳೆಯದು ಎಂಬ ಬಗ್ಗೆ ವರದಿಗಳು ಬರುತ್ತಿರುವುದನ್ನು ಗಮನಿಸಬಹುದು. ನಾವು ಕೊಂಡು ತಂದ ಹಣ್ಣು ಹಾಗೂ ತರಕಾರಿಗಳು ಫ್ರೆಶ್ ಆಗಿರುತ್ತದೆ ಎಂದು ಅದರಲ್ಲಿಡುತ್ತೇವೆ. ನಾಲ್ಕಾರು ದಿನಗಳ ನಂತರ ನೋಡಿದಾಗ ಮೇಲ್ನೋಟಕ್ಕೆ ಹೆಚ್ಚು ಫ್ರೆಶ್ ಇದ್ದಂತೆ ಕಂಡುಬಂದರೂ, ನಿಜವಾಗಿಯೂ ಅದು ತನ್ನ ಸಾರವನ್ನು ಕಳೆದುಕೊಂಡಿರುತ್ತದೆ. ಅದನ್ನು ತಿಂದು ನಮ್ಮ ಆರೋಗ್ಯವನ್ನು ನಾವೇ ಹಾಳುಮಾಡಿಕೊಳ್ಳುತ್ತೇವೆ.

ಹಾಗೆಯೇ ಕೆಲವರು ತಮ್ಮ ಮನೆಗೆ ಅಗತ್ಯವಿರುವುದಕ್ಕಿಂತ ಹೆಚ್ಚಿನ ಪೀಠೋಪಕರಣಗಳನ್ನು ಖರೀದಿಸಿ ತರುತ್ತಾರೆ. ಇದೂ ಅಷ್ಟೇ ಎಲ್ಲೋ, ಯಾರ ಮನೆಯಲ್ಲೋ ನೋಡಿದ ಆಕರ್ಷಣೆ. ಕೊನೆಗೆ ಮನೆಯಲ್ಲಿ ಸಾವಕಾಶವಾಗಿ ಓಡಾಡಲೂ ಸಾಧ್ಯವಾಗದಂತೆ ಪೀಠೋಪಕರಣಗಳು ತುಂಬುತ್ತವೆ.

ನನಗೆ ಪರಿಚಯವಿರುವ ಒಂದು ಕುಟುಂಬವಿದೆ. ಅವರು ಸ್ಥಿತಿವಂತರು. ಆದರೆ ಮನೆಯಲ್ಲಿ ಒಂದೂ ಪೀಠೋಪಕರಣ ಇಲ್ಲ. ಚಾಪೆ ಹಾಸಿರುತ್ತಾರೆ. ಬಂದವರು ಅದರ ಮೇಲೇ ಕುಳಿತುಕೊಂಡು ಮಾತನಾಡಬೇಕು. ಯಾರಿಗಾಗಿಯೋ ಏಕೆ ಪೀಠೋಪಕರಣ ತರಬೇಕು. ನಮಗೆ ಬೇಕಾದಂತೆ ನಾವು ಜೀವಿಸಬೇಕಲ್ಲವೇ. ಯಾರೋ, ಯಾವಾಗಲೋ ಬರುತ್ತಾರೆ ಎಂದು ನಮಗೆ ಅಗತ್ಯವಿಲ್ಲದ ಪೀಠೋಪಕರಣ ಏಕೆ ತರಬೇಕು. ನಮ್ಮ ಸಂಸ್ಕೃತಿ ಮೊದಲಿನಿಂದಲೂ ಸರಳತೆಯೇ ಆಗಿದೆ. ಅಲ್ಲದೆ ಅದು ಆರೋಗ್ಯಕರ ಕೂಡ. ಹಾಗಾಗಿ ನಾವು ಹೀಗೇ ಇರುತ್ತೇವೆ ಎನ್ನುತ್ತಾರೆ ಅವರು. ಅದು ತಿಳಿದ ಅವರ ಮನೆಗೆ ಬರುವವರು ಅಲ್ಲಿನ ವ್ಯವಸ್ಥೆಗೆ ತಕ್ಕಂತೆ ಸಹಜವಾಗಿ ನಡೆದುಕೊಳ್ಳುತ್ತಾರೆ.

ಇತ್ತೀಚೆಗೆ ಭೇಟಿಯಾದ ಮತ್ತೊಬ್ಬ ಗೆಳೆಯ ಹೇಳಿದ ಮಾತೂ ಇದೇ ಧಾಟಿಯದು. ನಮಗೆ ಅಗತ್ಯವಿಲ್ಲದಿದ್ದರೂ ನಾವು ನಮ್ಮ ಶೌಚಾಲಯದಲ್ಲಿ ಕಮೋಡ್ ಅಳವಡಿಸಿದೆವು. ಮನೆಯಲ್ಲಿ ಎಲ್ಲೆಡೆ ಕೂರಲು ಪೀಠೋಪಕರಣಗಳಿವೆ. ಊಟಕ್ಕೆ ಡೈನಿಂಗ್ ಟೇಬಲ್ ಇದೆ. ನಾವು ನೆಲದ ಮೇಲೆ ಕೂರುವುದನ್ನೇ ಮರೆತುಬಿಟ್ಟಿದ್ದೇವೆ. ಇದು ಎಂತಹ ಸಂಕಟ ತರುತ್ತಿದೆ ಎಂದರೆ ನಾವು ಯಾವುದಾದರೂ ನೆಂಟರ ಮನೆಗೆ ಹೋಗುವಾಗ ಅಲ್ಲಿ ಶೌಚಾಲಯದಲ್ಲಿ ಕಮೋಡ್ ಇದೆಯೇ ಎಂದು ಮೊದಲೇ ಕೇಳಿಕೊಂಡು ಹೋಗಬೇಕು. ಇಲ್ಲ ಎಂದರೆ ಅವರ ಮನೆಗೆ ಹೋಗದೇ ಇರಲು ಪ್ರಯತ್ನಿಸುತ್ತೇವೆ. ನೆಲದ ಮೇಲೆ ಕೂರಲಾಗದ ಪರಿಸ್ಥಿತಿಯಿಂದಾಗಿ ಇಂದು ಮನೆಯಲ್ಲಿ ಯಾವುದಾದರೂ ದೇವರ ಪೂಜಾ ಕಾರ್ಯ ನಡೆದರೆ ನೆಲದ ಮೇಲೆ ಕೂರಲಾಗದೆ, ಯಾವುದಾದರೂ ಪೀಠ ಉಪಯೋಗಿಸುವಂತೆ ಆಗಿದೆ. ಅದು ಮನಸ್ಸಿಗೆ ಸಮಾಧಾನ ತಂದುಕೊಡುವುದಿಲ್ಲ. ಆದರೆ ಅನಿವಾರ್ಯತೆ. ನಾವೇ ಸೃಷ್ಟಿಸಿಕೊಂಡ ತಪ್ಪುಗಳಿವು. ಅದನ್ನು ಇಂದು ನಾವೇ ಅನುಭವಿಸಬೇಕಾಗಿದೆ ಎಂದು ನೊಂದು ಹೇಳಿಕೊಂಡರು.

ಇದು ಇಂದು ಒಬ್ಬರ ಸಮಸ್ಯೆಯಾಗಿ ಕಂಡು ಬರುವುದಿಲ್ಲ, ಇದು ಸಾಮಾನ್ಯ ಸಮಸ್ಯೆಯಾಗಿದೆ. ನೆಲದ ಮೇಲೆ ಅರ್ಧ ಗಂಟೆಯೂ ನಾವು ಕೂರಲಾರೆವು. ಇದು ವಯಸ್ಸಾದವರ ಸಮಸ್ಯೆ ಅಲ್ಲ. ಈಗಿನ ಯುವ ಜನತೆಯೂ ಇದೇ ಗಂಯ್ಯಾಳಿತನವನ್ನು ತೋರಿಸುತ್ತಿದ್ದಾರೆ. ನಾವು ಎಂತಹ ಸ್ಥಿತಿಗೆ ತಲುಪಿದ್ದೇವೆ ಎಂದರೆ ನಮ್ಮ ಯುವಕರೂ ಒಂದು ಅರ್ಧ ಗಂಟೆಯೂ ಎರಡು ಕಾಲುಗಳ ಮೇಲೆ ದೃಢವಾಗಿ ನಿಲ್ಲಲಾಗುತ್ತಿಲ್ಲ.

ಇಲ್ಲೆಲ್ಲಾ ನಮಗೆ ನಮ್ಮತನಕ್ಕಿಂತ ಬೇರೆಯವರಿಗಾಗಿ ಮಾಡಿಕೊಂಡ ವ್ಯವಸ್ಥೆಯಿಂದ ಆಗುತ್ತಿರುವ ತೊಂದರೆ ಎಂದು ಕಂಡುಬರುತ್ತದೆ. ಇದರಿಂದಾಗಿ ಇಂದು ಮದುವೆ ಮನೆಯಿರಲಿ, ದೇವಸ್ಥಾನಗಳಲ್ಲೂ ಟೇಬಲ್ ಹುಡುಕಿ ಊಟಕ್ಕೆ ಕುಳಿತುಕೊಳ್ಳುವಂತೆ ಆಗಿದೆ. ಇದು ತಪ್ಪಬೇಕು. ಹೀಗೆ ಪೇಚಾಡುವುದಕ್ಕಿಂತ ನಾವು ಮನಸ್ಸು ಮಾಡಿ ತಪ್ಪುಗಳನ್ನು ಸರಿಪಡಿಸಿಕೊಳ್ಳಬೇಕು.

ನಾವು ಮನಸ್ಸು ಮಾಡಿದರೆ ಯಾವುದೂ ಅಸಾಧ್ಯವಲ್ಲ. ಅದಕ್ಕೆ ನಾವು ಪರರ ಅನುಕರಣೆ ಹಾಗೂ ನಮ್ಮ ಅಗತ್ಯದ ಪರಿಗಣನೆ ಮಾಡಬೇಕಾಗುತ್ತದೆ. ಈಗಲೂ ಮನಸ್ಸಿದ್ದರೆ ಮಾರ್ಗ ಎಂಬಂತೆ ನಾವು ಜೀವನ ಮಾಡಬಹುದು. ನಾವು ನೋಡುವ ನೋಟ ಹಾಗೂ ನಮ್ಮ ವಿವೇಚನೆ ಎಂತಹ ಬದಲಾವಣೆಯನ್ನೂ ತರಬಹುದು. ಇದಕ್ಕೆ ಒಂದು ಕಥೆಯಿದೆ; ಒಂದು ನಗರದಲ್ಲಿ ಒಬ್ಬರು ಪ್ರಖ್ಯಾತ ವ್ಯಕ್ತಿ ಇದ್ದರು. ಅವರು ದೇಶವಿದೇಶಗಳಲ್ಲಿ ತಿರುಗಿದರೂ ಅವರಿಗೆ ತಮ್ಮ ಊರಿನ ಬಗ್ಗೆ ವ್ಯಾಮೋಹ. ಸಾಕಷ್ಟು ಸಂಪಾದನೆ ಮಾಡಿದ್ದರು. ಅದರಿಂದ ತಮ್ಮೂರಿನಲ್ಲಿ ಅನೇಕ ಶಾಲೆಗಳನ್ನು ನಿರ್ಮಿಸಿ, ಅನಾಥ ಮಕ್ಕಳಿಗೆ ಉಚಿತ ಶಿಕ್ಷಣದ ವ್ಯವಸ್ಥೆ ಮಾಡಿದ್ದರು. ತಮಗಾಗಿ ಏನನ್ನೂ ಇಟ್ಟುಕೊಳ್ಳದೇ ಬಂದದ್ದನ್ನೆಲ್ಲಾ ಹಂಚಿ ತೃಪ್ತ ಜೀವನ ನಡೆಸುತ್ತಿದ್ದರು. ಇದರಿಂದಾಗಿ ಊರಿನ ಜನರೆಲ್ಲಾ ಅವರನ್ನು ದೇವರ ಸಮಾನ ಎಂದು ತಿಳಿದು ಸನ್ಮಾನ ಮಾಡಲು ಇಚ್ಛಿಸಿದರು. ಆದರೆ ಆ ವ್ಯಕ್ತಿ ಯಾರಿಂದಲೂ ಸನ್ಮಾನ ಇತ್ಯಾದಿ ಸ್ವೀಕರಿಸುತ್ತಿರಲಿಲ್ಲ. ಅವರ ಮನಸ್ಸು 'ಕೆರೆಯ ನೀರನು ಕೆರೆಗೆ ಚೆಲ್ಲು' ಎನ್ನುವಂತೆ ಬಂದಿದ್ದನ್ನು ಹಂಚುತ್ತಿದ್ದೇನೆ ಅಷ್ಟೇ. ನಾನೇನೂ ವಿಶೇಷವಾದುದನ್ನು ಮಾಡುತ್ತಿಲ್ಲ ಎನ್ನುತ್ತಿದ್ದರು.

ಅದೇ ಊರಿನ ಸೆರೆಮನೆಯಲ್ಲಿ ಹೊಡೆದಾಟವಾಗಿ ಒಬ್ಬ ಕೈದಿ ಕೊಲ್ಲಲ್ಪಟ್ಟಿದ್ದ. ಅವನನ್ನು ಕೊಂದವನು ಮತ್ತೊಬ್ಬ ಕುಖ್ಯಾತ ಕೈದಿಯೇ ಆಗಿದ್ದ. ಅವನು ಬಾಲ್ಯದಿಂದಲೇ ದುಷ್ಟತನವನ್ನು ತನ್ನದಾಗಿಸಿಕೊಂಡಿದ್ದವನು. ಹಾಗೂ ಅದೇ ಊರಿನವನು. ಇದು ಊರವರಿಗೆ ಗೊತ್ತಿತ್ತು. ಪದೇ ಪದೆ ಕೆಟ್ಟದ್ದು ಮಾಡಿ ಜೈಲಿಗೆ ಹೋಗಿ ಬರುವುದು ಅವನಿಗೆ ಮಾಮೂಲು ಎಂಬಂತಾಗಿತ್ತು. ಈ ಸಲ ನಡೆದ ಕೊಲೆ ಹೆಚ್ಚು ಪ್ರಚಾರ ಪಡೆದು ಕೊನೆಗೆ, ಒಬ್ಬ ಪತ್ರಕರ್ತರು ಮೇಲಿನವರ ಅನುಮತಿ ಪಡೆದು ಅವನನ್ನು ಸಂದರ್ಶನ ಮಾಡಿದರು. ಆ ಕೊಲೆಗಾರ ತನ್ನ ಬಗ್ಗೆ ಬಿಚ್ಚು ಮನಸ್ಸಿನಿಂದ ಹೇಳಿಕೊಂಡ. ಆ ಕೈದಿ ಮೊದಲು ಹೇಳಿದ ವ್ಯಕ್ತಿಯ ತಮ್ಮನಾಗಿದ್ದ. ಅವರು ಅಷ್ಟು ಒಳ್ಳೆಯವರು, ಕೊಡುಗೈ ದಾನಿ. ನೀವೇಕೆ ಹೀಗೆ? ಎಂಬ ಪ್ರಶ್ನೆಗೆ ಅವನು ಉತ್ತರಿಸಿದ್ದು, ನನ್ನ ಈ ಸ್ಥಿತಿಗೆ ನನ್ನ ತಂದೆಯೇ ಕಾರಣ. ನಾವು ಬಡತನದಲ್ಲಿ ಬೆಳೆದವರು. ನನ್ನ ತಂದೆಗೆ ಎಲ್ಲಾ ರೀತಿಯ ಕೆಟ್ಟ ಹವ್ಯಾಸಗಳು ಇದ್ದವು. ಪ್ರತಿದಿನ ಕುಡಿದು ಬಂದು ನಮ್ಮ ತಾಯಿಗೆ ಹೊಡೆಯುತ್ತಿದ್ದರು. ಕುಡಿತಕ್ಕಾಗಿ ಮನೆಯಲ್ಲಿದ್ದ ಎಲ್ಲವನ್ನೂ ಮಾರಿದ್ದರು. ಅದನ್ನು ನೋಡುತ್ತಾ ನಾನು ಬೆಳೆದೆ. ಅದರಿಂದ ನಾನು ಅವರಂತೆಯೇ ಆದೆ. ನನ್ನ ಎಲ್ಲಾ ತಪ್ಪುಗಳಿಗೂ ನನ್ನ ತಂದೆಯೇ ಕಾರಣ ಎಂದು ಹೇಳಿದ.

ನಂತರ ಆ ಪತ್ರಕರ್ತ ಆ ಸಾಧಕರ ಮನೆಗೆ ಹೋಗಿ ಅವರ ಸಂದರ್ಶನವನ್ನೂ ಮಾಡಿದರು. ಆತ ಹೇಳಿದ್ದು 'ನನ್ನ ಎಲ್ಲಾ ಸಾಧನೆಗೆ ನನ್ನ ತಂದೆಯೇ ಕಾರಣ ಎಂದು. ಅವರು ದುರ್ದೈವದಿಂದ ಕೆಟ್ಟ ಚಟಗಳನ್ನು ಅಂಟಿಸಿಕೊಂಡಿದ್ದರು. ನಾವು ಸಣ್ಣ ಬಾಲಕರಾಗಿದ್ದರಿಂದ ಅವರನ್ನು ತಿದ್ದುವ ಸ್ಥಿತಿಯಲ್ಲಿ ಇರಲಿಲ್ಲ. ಅವರ ಜೀವನ ಹಾಳಾಗಿದ್ದು ನಮ್ಮ ಮುಂದೆಯೇ ಇತ್ತು. ಹಾಗಾಗಿ ನಾನು ಅವರಂತೆ ಆಗಬಾರದು ಎಂದು ಹಠ ತೊಟ್ಟ ಫಲವೇ ಒಂದಷ್ಟು ಸಾಧನೆ ಮಾಡಲು ಸಾಧ್ಯವಾಯಿತು ಎಂದರು.

ಇಬ್ಬರೂ ಒಂದೇ ಮನೆಯಲ್ಲಿ ಒಂದೇ ವಾತಾವರಣದಲ್ಲಿ ಬೆಳೆದವರು. ಆದರೆ ಅವರ ಯೋಚನಾ ಲಹರಿ ವಿಭಿನ್ನವಾಗಿತ್ತು. ಇದು ಆ ಪತ್ರಕರ್ತೆಗೆ ಆಶ್ಚರ್ಯ ತರಿಸಿತು. ಜಗತ್ತಿನಲ್ಲಿ ಒಳ್ಳೆಯದು ಕೆಟ್ಟದ್ದು ಎರಡೂ ಇವೆ. ಆದರೆ ಅದರಲ್ಲಿ ಆಯ್ಕೆ ಮಾಡಿಕೊಳ್ಳುವುದು ನಮ್ಮ ಕೈಯಲ್ಲೇ ಇರುವಂತಹುದು. ನಾವು ಮಾಡುತ್ತಿರುವುದು ಸರಿಯಲ್ಲ ಎಂದು ಗೊತ್ತಾದ ಮೇಲೆ ಅದನ್ನು ಬದಲಿಸಿಕೊಳ್ಳಬೇಕು. ನಾವು ನಮ್ಮ ಅಗತ್ಯಕ್ಕೆ ತಕ್ಕ ಹಾಗೆ ಜೀವನ ಮಾಡುವುದನ್ನು ಕಲಿಯಬೇಕು. ನಮ್ಮಲ್ಲಿ ಹಣ ಸ್ವಲ್ಪ ಹೆಚ್ಚಿದೆ ಎಂದರೆ ಅದನ್ನು ಒಳ್ಳೆಯ ಕೆಲಸಗಳಿಗೆ ನೀಡಬಹುದು. ಯಾರೋ ಏನೋ ತಂದರು ಎಂದು ನಮಗೆ ಅಗತ್ಯವಿಲ್ಲದಿದ್ದರೂ ಅದನ್ನು ತರುವಂತಹ ಮನೋಭಾವದಿಂದ ಹೊರಬರಬೇಕು.

ಮಸೂದೆಗಳಿಗೆ ಒಪ್ಪಿಗೆ ನೀಡುವ ಗಡುವು ಆದೇಶ ಕುರಿತು ಸುಪ್ರೀಂಕೋರ್ಟ್‌ಗೆ ರಾಷ್ಟ್ರಪತಿ ಮುರ್ಮು 14 ಪ್ರಶ್ನೆ!

ನವದೆಹಲಿ, ಮೇ 15– ರಾಜ್ಯ ಹಾಗೂ ಕೇಂದ್ರ ಸರ್ಕಾರಗಳ ಮಸೂದೆಗಳ ಬಗ್ಗೆ ರಾಷ್ಟ್ರಪತಿ ಹಾಗೂ ರಾಜ್ಯಪಾಲರು ತೆಗೆದುಕೊಳ್ಳುವ ನಿರ್ಧಾರದ ಕುರಿತು ಗಡುವು ನಿಗದಿಪಡಿಸಿರುವ ಸುಪ್ರೀಂ ಕೋರ್ಟ್ ತೀರ್ಪಿನ ಬಗ್ಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ತೀಕ್ಷ್ಣ ಪ್ರತಿಕ್ರಿಯೆ ನೀಡಿದ್ದಾರೆ.



ರಾಷ್ಟ್ರಪತಿ ಮತ್ತು ರಾಜ್ಯಪಾಲರುಗಳಿಗೆ ಗಡುವು ನಿಗದಿಪಡಿಸಿ ತೀರ್ಪು ನೀಡಿರುವ ಸುಪ್ರೀಂಕೋರ್ಟ್‌ಗೆ ರಾಷ್ಟ್ರಪತಿ ದ್ರೌಪದಿ ಮುರ್ಮು 14 ಪ್ರಶ್ನೆಗಳನ್ನು ಕೇಳಿದ್ದು, ಸಂವಿಧಾನದಲ್ಲೇ ಅಂತಹ ಯಾವುದೇ ಗಡುವು/ಷರತ್ತು ಇಲ್ಲದಿರುವಾಗ ಸುಪ್ರೀಂ ಕೋರ್ಟ್ ಅಂತಹ ತೀರ್ಪು ನೀಡಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದ್ದಾರೆ.

ಏಪ್ರಿಲ್‌ನಲ್ಲಿ ಜಸ್ಟೀಸ್ ಜೆ.ಬಿ. ಪರ್ದಿವಾಲಾ ಮತ್ತು ಜಸ್ಟೀಸ್ ಆರ್.ಮಹಾದೇವನ್ ಅವರನ್ನೊಳಗೊಂಡ ಸುಪ್ರೀಂ ಕೋರ್ಟ್ ಪೀಠವು, ಒಂದು ವೇಳೆ ರಾಜ್ಯಪಾಲರು ರಾಜ್ಯಗಳ ಮಸೂದೆ ಅಂಗೀಕಾರಕ್ಕೆ ವಿಳಂಬ ಮಾಡುವ ಕುರಿತು ನ್ಯಾಯಾಂಗ ಮಧ್ಯಪ್ರವೇಶಿಸಲು ಅನುಮತಿ ನೀಡುವ ಜೊತೆಗೆ, ರಾಜ್ಯಪಾಲರು ಶಿಫಾರಸು ಮಾಡುವ ಮಸೂದೆಗಳ ಬಗ್ಗೆ ರಾಷ್ಟ್ರಪತಿ ಮೂರು ತಿಂಗಳೊಳಗೆ ನಿರ್ಧಾರ ತೆಗೆದುಕೊಳ್ಳಬೇಕು ಎಂದು ತೀರ್ಪು ನೀಡಿತ್ತು.

ಇದರ ಬೆನ್ನಲ್ಲೇ ಸುಪ್ರೀಂ ತೀರ್ಪಿನ ವಿರುದ್ಧ ರಾಷ್ಟ್ರಪತಿ ಮುರ್ಮು ಅವರು ಹಲವು ಪ್ರಶ್ನೆಗಳನ್ನು ಮುಂದಿಟ್ಟಿದ್ದಾರೆ. ಸುಪ್ರೀಂ ಕೋರ್ಟ್‌ನ ನಡವಳಿಕೆಯು ವ್ಯವಸ್ಥೆಯ ಮೇಲೆ ಸಾಂವಿಧಾನಿಕ ಮೌಲ್ಯಗಳಿಗೆ ಸಂಪೂರ್ಣ ವಿರುದ್ಧವಾಗಿದೆ. ಇದು ಸಾಂವಿಧಾನಿಕ ಮಿತಿಯನ್ನು ಉಲ್ಲಂಘಿಸುತ್ತದೆ ಎಂದು ಕಿಡಿಕಾರಿದ್ದಾರೆ.



ರಾಜ್ಯದ ಮಸೂದೆಗಳ ಬಗ್ಗೆ ನಿರ್ಧಾರ ತೆಗೆದುಕೊಳ್ಳಲು ರಾಜ್ಯಪಾಲರು ಮತ್ತು ರಾಷ್ಟ್ರಪತಿಗಳಿಗೆ ಗಡುವು ವಿಧಿಸುವುದು ಹೇಗೆ ಸಾಧ್ಯ? ಎಂದು ಪ್ರಶ್ನಿಸಿದ್ದಾರೆ.

ರಾಷ್ಟ್ರಪತಿ ಮುರ್ಮು ಅವರು ಸಂವಿಧಾನದ ಕಲಂ 200 ಮತ್ತು 201 ಅನ್ನು ಉಲ್ಲೇಖಿಸಿ, ಇದು ರಾಜ್ಯಪಾಲರಿಗೆ ಮತ್ತು ರಾಷ್ಟ್ರಪತಿಗೆ ಅನ್ವಯ ಎಂಬುದಾಗಿ ಉಲ್ಲೇಖಿಸಿದ್ದಾರೆ. ಆ ಪ್ರಕಾರ, ವಿಧಾನಸಭೆ ಅಂಗೀಕರಿಸಿದ ಮಸೂದೆಗೆ ಒಪ್ಪಿಗೆ ನೀಡುವ ಅಥವಾ ತಿರಸ್ಕರಿಸುವ ಬಗ್ಗೆ ಅನುಸರಿಸಬೇಕಾದ ಯಾವುದೇ ಸಮಯದ ಚೌಕಟ್ಟನ್ನು ಈ 2 ಕಲಂಗಳಲ್ಲಿ ಉಲ್ಲೇಖಿಸಿಲ್ಲ ಎಂದು ಮುರ್ಮು ಸುಪ್ರೀಂ ಗಮನ ಸೆಳೆದಿದ್ದಾರೆ.

ಏನಿದು ಪ್ರಕರಣ: ರಾಜ್ಯ ವಿಧಾನಸಭೆ ಅಂಗೀಕರಿಸಿದ್ದ 10 ಮಸೂದೆಗಳಿಗೆ ಗವರ್ನರ್ ಅಂಕಿತ ಹಾಕದೇ ಇರುವುದನ್ನು ಪ್ರಶ್ನಿಸಿ ತಮಿಳುನಾಡು ಸರ್ಕಾರ 2023ರ ನವೆಂಬರ್‌ನಲ್ಲಿ ಗವರ್ನರ್ ವಿರುದ್ಧ ಸುಪ್ರೀಂಕೋರ್ಟ್ ಮೆಟ್ಟಿಲೇರಿತ್ತು. ಈ ಅರ್ಜಿಯ ವಾದ–ಪ್ರತಿವಾದ ಆಲಿಸಿದ್ದ ಸುಪ್ರೀಂಕೋರ್ಟ್ ಈ ತೀರ್ಪನ್ನು ನೀಡಿತ್ತು. ಇದಕ್ಕೆ ಉಪರಾಷ್ಟ್ರಪತಿ ಧನ್ಕರ್ ಆಕ್ಷೇಪ ವ್ಯಕ್ತಪಡಿಸಿ ಹೇಳಿಕೆ ನೀಡಿದ್ದರು. ರಾಜ್ಯಪಾಲರ ಅಂಕಿತಕ್ಕೆ ಕಾಯ್ದಿರಿಸಿರುವ ಮಸೂದೆಗಳ ಬಗ್ಗೆ ರಾಷ್ಟ್ರಪತಿ 3 ತಿಂಗಳೊಳಗೆ ನಿರ್ಧಾರ ತೆಗೆದುಕೊಳ್ಳಬೇಕು ಎಂದು ಸುಪ್ರೀಂಕೋರ್ಟ್ ತೀರ್ಪು ನೀಡಿತ್ತು.

ಮುರ್ಮು ಅವರ ಪ್ರಶ್ನೆಗಳು

- ■ ವಿಧಿ 200ರ ಅಡಿಯಲ್ಲಿ ರಾಜ್ಯಪಾಲರಿಗೆ ಮಸೂದೆಯನ್ನು ಮಂಡಿಸಿದಾಗ ಅವರ ಮುಂದೆ ಇರುವ ಸಾಂವಿಧಾನಿಕ ಆಯ್ಕೆಗಳು ಯಾವುವು?
- ■ ರಾಜ್ಯಪಾಲರು ಮಸೂದೆಯನ್ನು ತಮ್ಮ ಮುಂದೆ ಮಂಡಿಸಿದಾಗ ಲಭ್ಯವಿರುವ ಎಲ್ಲಾ ಆಯ್ಕೆಗಳನ್ನು ಬಳಸಿಕೊಂಡು ಸಚಿವ ಸಂಪುಟ ನೀಡುವ ನೆರವು ಮತ್ತು ಸಲಹೆಗೆ ಬದ್ಧರಾಗಿದ್ದಾರೆಯೇ?
- ■ ವಿಧಿ 200ರ ಅಡಿಯಲ್ಲಿ ರಾಜ್ಯಪಾಲರ ಸಾಂವಿಧಾನಿಕ ವಿವೇಚನೆಯು ನ್ಯಾಯಸಮ್ಮತವೇ?
- ■ ವಿಧಿ 200ರ ಅಡಿಯಲ್ಲಿ ರಾಜ್ಯಪಾಲರ ಕ್ರಮಗಳಿಗೆ ಸಂಬಂಧಿಸಿದಂತೆ ನ್ಯಾಯಾಂಗ ಪರಿಶೀಲನೆಗೆ ವಿಧಿ 361 ಸಂಪೂರ್ಣ ನಿರ್ಬಂಧವೇ?
- ■ ಸಾಂವಿಧಾನಿಕವಾಗಿ ನಿಗದಿಪಡಿಸಿದ ಸಮಯ ಮಿತಿ ಮತ್ತು ರಾಜ್ಯಪಾಲರು ಅಧಿಕಾರಗಳನ್ನು ಚಲಾಯಿಸುವ ವಿಧಾನದ ಅನುಪಸ್ಥಿತಿಯಲ್ಲಿ, ರಾಜ್ಯಪಾಲರು ವಿಧಿ 200ರ ಅಡಿಯಲ್ಲಿ ಎಲ್ಲಾ ಅಧಿಕಾರಗಳನ್ನು ಚಲಾಯಿಸುವ ಉದ್ದೇಶಕ್ಕಾಗಿ ನ್ಯಾಯಾಂಗ ಆದೇಶಗಳ ಮೂಲಕ ಸಮಯಸೂಚಿಯನ್ನು ವಿಧಿಸಬಹುದೇ ಮತ್ತು ವ್ಯಾಯಾಮದ ವಿಧಾನವನ್ನು ಸೂಚಿಸಬಹುದೇ?
- ■ ವಿಧಿ 201ರ ಅಡಿಯಲ್ಲಿ ರಾಷ್ಟ್ರಪತಿಗಳು ಸಾಂವಿಧಾನಿಕ ವಿವೇಚನೆಯನ್ನು ಚಲಾಯಿಸುವುದು ನ್ಯಾಯಸಮ್ಮತವೇ?
- ■ ಸಂವಿಧಾನಾತ್ಮಕವಾಗಿ ನಿಗದಿಪಡಿಸಿದ ಸಮಯಾವಧಿ ಮತ್ತು ಅಧ್ಯಕ್ಷರು ಅಧಿಕಾರಗಳನ್ನು ಚಲಾಯಿಸುವ ವಿಧಾನದ ಅನುಪಸ್ಥಿತಿಯಲ್ಲಿ, ವಿಧಿ 201ರ ಅಡಿಯಲ್ಲಿ ಅಧ್ಯಕ್ಷರು ವಿವೇಚನೆಯನ್ನು ಚಲಾಯಿಸಲು ನ್ಯಾಯಾಂಗ ಆದೇಶಗಳ ಮೂಲಕ ಸಮಯಾವಧಿಯನ್ನು ವಿಧಿಸಬಹುದೇ ಮತ್ತು ವ್ಯಾಯಾಮದ ವಿಧಾನವನ್ನು ನಿಗದಿಪಡಿಸಬಹುದೇ?
- ■ ರಾಷ್ಟ್ರಪತಿಗಳ ಅಧಿಕಾರಗಳನ್ನು ನಿಯಂತ್ರಿಸುವ ಸಾಂವಿಧಾನಿಕ ಯೋಜನೆಯ ಬೆಳಕಿನಲ್ಲಿ, ರಾಜ್ಯಪಾಲರು ಮಸೂದೆಯನ್ನು ರಾಷ್ಟ್ರಪತಿಗಳ ಒಪ್ಪಿಗೆಗಾಗಿ ಕಾಯ್ದಿರಿಸಿದಾಗ ರಾಷ್ಟ್ರಪತಿಗಳು ವಿಧಿ 143ರ ಅಡಿಯಲ್ಲಿ ಉಲ್ಲೇಖದ ಮೂಲಕ ಸುಪ್ರೀಂಕೋರ್ಟ್‌ನ ಸಲಹೆಯನ್ನು ಪಡೆಯಬೇಕೇ ಅಥವಾ ಬೇರೆ ರೀತಿಯಲ್ಲಿ ಸುಪ್ರೀಂಕೋರ್ಟ್‌ನ ಅಭಿಪ್ರಾಯವನ್ನು ತೆಗೆದುಕೊಳ್ಳಬೇಕೇ?
- ■ ಕಾನೂನು ಜಾರಿಗೆ ಬರುವ ಮೊದಲು, 200 ಮತ್ತು 201ನೇ ವಿಧಿಗಳ ಅಡಿಯಲ್ಲಿ ರಾಜ್ಯಪಾಲರು ಮತ್ತು ರಾಷ್ಟ್ರಪತಿಗಳು ತೆಗೆದುಕೊಳ್ಳುವ ನಿರ್ಧಾರಗಳು ನ್ಯಾಯಸಮ್ಮತವೇ? ಮಸೂದೆ ಕಾನೂನಾಗುವ ಮೊದಲು, ಅದರ ವಿಷಯಗಳ ಬಗ್ಗೆ ನ್ಯಾಯಾಲಯಗಳು ಯಾವುದೇ ರೀತಿಯಲ್ಲಿ ನ್ಯಾಯಾಂಗ ತೀರ್ಪು ನೀಡಲು ಅನುಮತಿ ಇದೆಯೇ?
- ■ ರಾಷ್ಟ್ರಪತಿ/ರಾಜ್ಯಪಾಲರ ಸಾಂವಿಧಾನಿಕ ಅಧಿಕಾರಗಳು ಮತ್ತು ಆದೇಶಗಳ ಚಲಾವಣೆಯನ್ನು ವಿಧಿ 142ರ ಅಡಿಯಲ್ಲಿ ಯಾವುದೇ ರೀತಿಯಲ್ಲಿ ಬದಲಿಸಬಹುದೇ?
- ■ ರಾಜ್ಯ ಶಾಸಕಾಂಗವು ಮಾಡಿದ ಕಾನೂನು ರಾಜ್ಯಪಾಲರ ಒಪ್ಪಿಗೆಯಿಲ್ಲದೆ ಜಾರಿಯಲ್ಲಿರುವ ಕಾನೂನೇ?
- ■ ವಿಧಿ 145(3)ರ ಪ್ರಕಾರ, ಸಂವಿಧಾನದ ವ್ಯಾಖ್ಯಾನವನ್ನು ಗಣನೀಯವಾಗಿ ಪ್ರಶ್ನಿಸುವ ಸ್ವಭಾವದ್ದೇ ಎಂದು ಮೊದಲು ನಿರ್ಧರಿಸುವುದು ಮತ್ತು ಅದನ್ನು ಕನಿಷ್ಠ ಐದು ನ್ಯಾಯಾಧೀಶರ ಪೀಠಕ್ಕೆ ಉಲ್ಲೇಖಿಸುವುದು ಸುಪ್ರೀಂಕೋರ್ಟ್‌ನ ಯಾವುದೇ ಪೀಠಕ್ಕೆ ಕಡ್ಡಾಯವಲ್ಲವೇ?
- ■ ವಿಧಿ 142ರ ಅಡಿಯಲ್ಲಿ ಸುಪ್ರೀಂಕೋರ್ಟ್‌ನ ಅಧಿಕಾರಗಳು ಕಾರ್ಯವಿಧಾನ ಕಾನೂನು ಅಥವಾ ವಿಧಿ 142ರ ವಿಷಯಗಳಿಗೆ ಸೀಮಿತವಾಗಿವೆಯೇ? ಸಂವಿಧಾನ ಅಥವಾ ಜಾರಿಯಲ್ಲಿರುವ ಕಾನೂನಿನ ಅಸ್ತಿತ್ವದಲ್ಲಿರುವ ಸಬ್ಸ್ಟಾಂಟಿವ್ ಅಥವಾ ಕಾರ್ಯವಿಧಾನದ ನಿಬಂಧನೆಗಳಿಗೆ ವಿರುದ್ಧವಾಗಿ ಅಥವಾ ಅಸಮಂಜಸವಾಗಿ ನಿರ್ದೇಶನಗಳನ್ನು ನೀಡುವ/ಆದೇಶಗಳನ್ನು ನೀಡುವವರೆಗೆ ವಿಸ್ತರಿಸುತ್ತದೆಯೇ?
- ■ 131ನೇ ವಿಧಿಯ ಅಡಿಯಲ್ಲಿ ಮೊಕದ್ದಮೆ ಹೂಡುವುದನ್ನು ಹೊರತುಪಡಿಸಿ, ಕೇಂದ್ರ, ರಾಜ್ಯ ಸರ್ಕಾರಗಳ ನಡುವಿನ ವಿವಾದಗಳನ್ನು ಪರಿಹರಿಸಲು ಸಂವಿಧಾನವು ಸುಪ್ರೀಂಕೋರ್ಟ್‌ನ ಯಾವುದೇ ಇತರ ನ್ಯಾಯವ್ಯಾಪ್ತಿಯನ್ನು ನಿಷೇಧಿಸುತ್ತದೆಯೇ?

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No.114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ತಿರಂಗ ಯಾತ್ರೆಯಲ್ಲಿ ಪಾಲ್ಗೊಳ್ಳುವಂತೆ ಸರ್ವ ಧರ್ಮದ ಗುರುಗಳಲ್ಲಿ ಸಂಸದ ಯದುವೀರ್ ಮನವಿ







ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಗುರುವಾರ ಸುತ್ತೂರು ಶ್ರೀಗಳು, ಆದಿಚುಂಚನಗಿರಿ ಮೈಸೂರು ಶಾಖಾ ಮಠದ ಶ್ರೀ ಸೋಮೇಶ್ವರನಾಥ ಸ್ವಾಮೀಜಿ, ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ, ಬಿಷಪ್ ಡಾ.ಬರ್ನಾರ್ಡ್ ಮೋರಾಸ್ ಹಾಗೂ ಸರ್ ಖಾಜಿ ಹಜರತ್ ಮೌಲಾನಾ ಮೊಹಮ್ಮದ್ ಉಸ್ಮಾನ್ ಷರೀಫ್ ಅವರನ್ನು ಭೇಟಿ ಮಾಡಿ, ತಿರಂಗ ಯಾತ್ರೆಯಲ್ಲಿ ಭಾಗಿಯಾಗುವಂತೆ ಮನವಿ ಮಾಡಿದರು. ಈ ವೇಳೆ ಶಾಸಕ ಟಿ.ಎಸ್.ಶ್ರೀವತ್ಸ, ನಗರ ಬಿಜೆಪಿ ಅಧ್ಯಕ್ಷ ಎಲ್.ನಾಗೇಂದ್ರ, ಡಾ.ಅನಿಲ್ ಥಾಮಸ್ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು, ಮೇ 15(ಬಿಎಲ್‌ಯು)– ಆಪರೇಷನ್ ಸಿಂಧೂರ್ ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದ ಭಾರತದ ಯೋಧರಿಗೆ ವಂದನೆ– ಅಭಿನಂದನೆ ಸಲ್ಲಿಸುವ ಸಲುವಾಗಿ ನಾಳೆ (ಮೇ 16) ಹಮ್ಮಿಕೊಂಡಿರುವ ತಿರಂಗ ಯಾತ್ರೆಯಲ್ಲಿ ಪಾಲ್ಗೊಳ್ಳುವಂತೆ ಸಂಸದ ಯದುವೀರ್ ಒಡೆಯರ್ ಅವರು ಮಠಾಧೀಶರು, ಬಿಷಪ್ ಹಾಗೂ ಮುಸ್ಲಿಂ ಧರ್ಮಗುರುಗಳಲ್ಲಿ ಮನವಿ ಮಾಡಿದರು.

ಸೈನಿಕರ ಆತ್ಮಸ್ಥೈರ್ಯ ಹೆಚ್ಚಿಸಿ, ಅವರಿಗೆ ಬೆಂಬಲ ಸೂಚಿಸಲು ನಾವೆಲ್ಲರೂ ಅವರ ಜೊತೆ ಇದ್ದೇವೆ ಎಂಬ ಸಂದೇಶ ಸಾರಲು ತಿರಂಗ ಯಾತ್ರೆ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಆಪರೇಷನ್ ಸಿಂಧೂರ ಕಾರ್ಯಾಚರಣೆಯಲ್ಲಿ ನಮ್ಮ ಯೋಧರನ್ನು ಕಳೆದುಕೊಂಡಿದ್ದೇವೆ. ಇದು ನಿಜಕ್ಕೂ ದುಃಖದ ಸಂಗತಿ. ಆದರೆ ಅವರ ಕುಟುಂಬದ ಜೊತೆ ನಾವಿದ್ದೇವೆ. ಒಟ್ಟಾರೆ ಇಡೀ ದೇಶದ ಯೋಧರ ಬೆಂಬಲಕ್ಕೆ ನಾವಿದ್ದೇವೆ ಎಂದು ತಿರಂಗ ಯಾತ್ರೆ ಮೂಲಕ ತೋರಿಸಲಿದ್ದೇವೆ ಎಂದರು.

ಶಾಸಕ ಟಿ.ಎಸ್. ಶ್ರೀವತ್ಸ, ನಗರ ಬಿಜೆಪಿ ಅಧ್ಯಕ್ಷ ಎಲ್.ನಾಗೇಂದ್ರ, ಅಲ್ಪಸಂಖ್ಯಾತ ಮೋರ್ಚಾ ಅಧ್ಯಕ್ಷ ಡಾ.ಅನಿಲ್ ಥಾಮಸ್ ಜೊತೆ ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಅವಧೂತ ದತ್ತ ಪೀಠದ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ, ಆದಿಚುಂಚನಗಿರಿ ಮಠದ ಶ್ರೀ ಸೋಮೇಶ್ವರನಾಥ ಸ್ವಾಮೀಜಿ, ಬಿಷಪ್ ಡಾ.ಬರ್ನಾರ್ಡ್ ಮೋರಾಸ್, ಸರ್ ಖಾಜಿ ಹಜರತ್ ಮೌಲಾನಾ ಮೊಹಮ್ಮದ್ ಉಸ್ಮಾನ್ ಷರೀಫ್ ಅವರನ್ನು ಭೇಟಿ ಮಾಡಿ, ತಿರಂಗ ಯಾತ್ರೆಯಲ್ಲಿ ಭಾಗಿಯಾಗುವಂತೆ ಅವರು ಮನವಿ ಮಾಡಿದರು.

ಹಾಸನ ಮಿತ್ರ

ಕನ್ನಡ ಅನುಷ್ಠಾನದಲ್ಲಿ ಬೇರೆ ಜಿಲ್ಲೆಗಳಿಗಿಂತ ಹಾಸನ ಮುಂದು

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ.ಪುರುಷೋತ್ತಮ ಬಿಳಿಮಲೆ



ಹಾಸನ ಡಿಸಿ ಕಚೇರಿ ಸಭಾಂಗಣದಲ್ಲಿ ಕನ್ನಡ ಅಭಿವೃದ್ಧಿ ಅನುಷ್ಠಾನ ಕುರಿತು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ.ಪುರುಷೋತ್ತಮ ಬಿಳಿಮಲೆ ಅಧಿಕಾರಿಗಳ ಸಭೆ ನಡೆಸಿದರು. ಡಿಸಿ ಸತ್ಯಭಾಮ, ಜಿಪಂ ಸಿಇಓ ಪೂರ್ಣಿಮಾ ಇದ್ದಾರೆ.

ಹಾಸನ, ಮೇ 15– ಹಾಸನ ಕನ್ನಡಿಗರ ಜೀವ ಕೇಂದ್ರ, ಹೊಯ್ಸಳರು ಆಳ್ವಿಕೆ ಮಾಡಿದ ನಾಡಾಗಿದೆ, ಐತಿಹಾಸಿಕ ಹಿನ್ನೆಲೆಯುಳ್ಳ ಬೇಲೂರು, ಹಳೇಬೀಡು, ಶ್ರವಣಬೆಳಗೊಳದಂತಹ ಸ್ಥಳಗಳು ಜಿಲ್ಲೆಯಲ್ಲಿವೆ. ಹಾಸನ ಜಿಲ್ಲೆ ಕನ್ನಡ ಅನುಷ್ಠಾನದಲ್ಲಿ ಬೇರೆ ಜಿಲ್ಲೆಗಳಿಗಿಂತ ಮುಂದೆ ಇದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ.ಪುರುಷೋತ್ತಮ ಬಿಳಿಮಲೆ ತಿಳಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಕನ್ನಡ ಅಭಿವೃದ್ಧಿ ಅನುಷ್ಠಾನ ಕುರಿತು ಅಧಿಕಾರಿಗಳ ಸಭೆ ನಡೆಸಿ ನಂತರ ಸುದ್ದಿಗೋಷ್ಠಿ ನಡೆಸಿದ ಅವರು, ಕನ್ನಡದ ಹೃದಯಭಾಗದಲ್ಲಿ ಹಾಸನವಿರುವುದರಿಂದ ಕನ್ನಡದ ಸಾಕಷ್ಟು ಅಭಿವೃದ್ಧಿ ಕೆಲಸಗಳು ಇಲ್ಲಿ ಆಗುತ್ತಿವೆ. ಹಲವು ವರ್ಗಗಳಿಂದ ಕನ್ನಡ ಅನುಷ್ಠಾನ ಪರಿಶೀಲನೆಗೋಸ್ಕರ ಎಲ್ಲಾ ಜಿಲ್ಲಾ ಕೇಂದ್ರಗಳಿಗೆ ಭೇಟಿ ನೀಡುತ್ತಿದ್ದೇವೆ ಎಂದು ತಿಳಿಸಿದರು.

ಈಗಾಗಲೇ ರಾಜ್ಯದ 9 ಜಿಲ್ಲಾ ಕೇಂದ್ರಗಳಿಗೆ ಭೇಟಿ ನೀಡಿ ಅಲ್ಲಿನ ಅಧಿಕಾರಿಗಳೊಂದಿಗೆ ಚರ್ಚಿಸಿ ಕನ್ನಡ ಅನುಷ್ಠಾನ ಹೇಗೆ ಆಗಿದೆ ಎಂಬುದನ್ನು ಪರಿಶೀಲಿಸಿದ್ದೇನೆ. ಜಿಲ್ಲೆಯಲ್ಲಿ ಅಧಿಕಾರಿಗಳು ಕೊಟ್ಟ ವರದಿಯ ಮೇರೆಗೆ ಕನ್ನಡ ಅನುಷ್ಠಾನ ಎಲ್ಲೆಡೆ ಯಶಸ್ವಿಯಾಗಿದೆ. ಒಂದು ವೇಳೆ ಎಲ್ಲಿಯಾದರೂ ಅನುಷ್ಠಾನವಾಗಿಲ್ಲವೆಂದರೆ ಅದನ್ನು ಗಮನಿಸಿ ಅನುಷ್ಠಾನ ಮಾಡಲು ಕ್ರಮವಹಿಸುವುದಾಗಿ ಅಧಿಕಾರಿಗಳು ಹೇಳಿದ್ದಾರೆ ಎಂದರು.

ರಾಜ್ಯದಲ್ಲಿ ಮಾತೃಭಾಷೆ ಕನ್ನಡದಲ್ಲಿ ಎಸ್‌ಎಸ್‌ಎಲ್‌ಸಿಯಲ್ಲಿ ಸುಮಾರು 1,32,000 ವಿದ್ಯಾರ್ಥಿಗಳು, ಪಿಯುಸಿಯಲ್ಲಿ ಸುಮಾರು 60 ರಿಂದ 62 ಸಾವಿರ ವಿದ್ಯಾರ್ಥಿಗಳು ಅನುತ್ತೀರ್ಣರಾಗಿರುವುದು ಬೇಸರದ ಸಂಗತಿ. ಇಷ್ಟು ವಿದ್ಯಾರ್ಥಿಗಳು ಅನುತ್ತೀರ್ಣರಾಗಲು ಕಾರಣಗಳೇನೆಂಬುದನ್ನು ಶಿಕ್ಷಣ ಇಲಾಖೆಯ ಅಧಿಕಾರಿಗಳು ವರದಿ ನೀಡಲು ಸೂಚಿಸಿದ್ದೇನೆ ಎಂದರು.

ಹಾಸನ ಪ್ರಸ್ತುತ ಮಹಾನಗರ ಪಾಲಿಕೆ ಆಗಿದೆ. ಈ ನಿಟ್ಟಿನಲ್ಲಿ ಜಿಲ್ಲೆಯ ಸ್ಥಳೀಯ ಹೆಸರುಗಳು ಅಳಿದು ಹೋಗಬಾರದು. ಕನ್ನಡದ ಹೆಸರು ಇರುವಂತೆ ಎಚ್ಚರ ವಹಿಸಬೇಕು ಎಂದರು. ಕನ್ನಡಪರ ಸಂಘಟನೆಗಳು ಜಿಲ್ಲೆಯಲ್ಲಿ ಕನ್ನಡ ಭವನ ಮಾಡಬೇಕು ಎಂಬ ಬೇಡಿಕೆಯನ್ನು ಇಟ್ಟಿದ್ದಾರೆ. ಹಾಗಾಗಿ ಮುಂದಿನ ದಿನಗಳಲ್ಲಿ ಹಾಸನದಲ್ಲಿ ಕನ್ನಡ ಭವನ ಆಗುವಂತೆ ಪ್ರಯತ್ನ ಮಾಡುತ್ತೇವೆ. ಸಚಿವರು ಹಾಗೂ ಅಧಿಕಾರಿಗಳ ಮುಂದೆ ಈ ಬೇಡಿಕೆಯನ್ನು ಇಡುತ್ತೇವೆ ಎಂದರು. ಗೋಷ್ಠಿಯಲ್ಲಿ ಪ್ರಾಧಿಕಾರದ ಸದಸ್ಯ ಟಿ.ಗುರುರಾಜ್, ಪ್ರಾಧಿಕಾರದ ಕಾರ್ಯದರ್ಶಿ ಸಂತೋಷ್ ಹಾನಗಲ್, ಜಿಲ್ಲಾಧಿಕಾರಿ ಸಿ.ಸತ್ಯಭಾಮ, ಜಿಪಂ ಸಿಇಓ ಬಿ.ಆರ್.ಪೂರ್ಣಿಮಾ, ಫಣೀಕುಮಾರ್, ಎಡಿಸಿ ಕೆ.ಟಿ.ಶಾಂತಲ ಇದ್ದರು.

ಆಪರೇಷನ್ ಸಿಂಧೂರದಲ್ಲಿ ಮಡಿದ ವೀರ ಯೋಧರಿಗೆ ಕದಂಬ ಸೈನ್ಯದಿಂದ ಶ್ರದ್ಧಾಂಜಲಿ



ಹಾಸನ, ಮೇ 15– ಆಪರೇಷನ್ ಸಿಂಧೂರದಲ್ಲಿ ದೇಶಕ್ಕಾಗಿ ಪ್ರಾಣ ಕೊಟ್ಟ ವೀರ ಯೋಧರಿಗೆ ಜಿಲ್ಲಾಧಿಕಾರಿ ಕಚೇರಿ ಬಳಿ ಬುಧವಾರ ಬೆಳಗ್ಗೆ ಪುಷ್ಪಾರ್ಚನೆ ಮೂಲಕ ಭಾವಪೂರ್ಣ ಶ್ರದ್ಧಾಂಜಲಿಯನ್ನು ಕದಂಬ ಸೈನ್ಯ ಕನ್ನಡ ಸಂಘಟನೆ ರಾಜ್ಯಾಧ್ಯಕ್ಷ ಬೇಕ್ರಿ ರಮೇಶ್ ನೆರವೇರಿಸಿದ್ದು, ಯಾವುದೇ ಕಾರಣಕ್ಕೂ ಆಪರೇಷನ್ ಸಿಂಧೂರವನ್ನು ನಿಲ್ಲಿಸದೇ ಮುಂದುವರೆಸುವಂತೆ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು.

ನಂತರ ಮಾತನಾಡಿದ ಅವರು, ಪಹಲ್ಗಾಮ್ ದಾಳಿಗೆ ಪ್ರತೀಕಾರವಾಗಿ, ಭಾರತೀಯ ಸೇನೆಯು 'ಆಪರೇಷನ್ ಸಿಂದೂರ್' ಪ್ರಾರಂಭಿಸಿ ಪಾಕಿಸ್ತಾನದೊಳಗೆ ಆಳವಾಗಿ ದಾಳಿ ನಡೆಸಿ, ಲಷ್ಕರ್–ಎ–ತೈಬಾ ಮತ್ತು ಜೈಶ್–ಎ–ಮೊಹಮ್ಮದ್ ಗುಂಪುಗಳಿಗೆ ಸೇರಿದ ಒಂಬತ್ತು ಭಯೋತ್ಪಾದಕ ಶಿಬಿರಗಳನ್ನು ಗುರಿಯಾಗಿಸಿಕೊಂಡು ನಾಶಪಡಿಸಿತು. ನೂರಾರು ಭಯೋತ್ಪಾದಕರನ್ನು ನಿರ್ಮೂಲನೆ ಮಾಡಿ, ಭಯೋತ್ಪಾದನೆಯನ್ನು ಸಹಿಸಲಾಗುವುದಿಲ್ಲ ಎಂಬ ದಿಟ್ಟ ಸಂದೇಶವನ್ನು ಜಗತ್ತಿಗೆ ರವಾನಿಸುವ ಮೂಲಕ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರವು ಭಯೋತ್ಪಾದಕರಿಗೆ ಪ್ರತೀಕಾರ ಮೂಲಕ ಮುಗ್ಧ ಹಿಂದೂಗಳು ಚೆಲ್ಲುವ ಪ್ರತಿ ರಕ್ತದ ಹನಿಗೂ ನ್ಯಾಯ ಒದಗಿಸಿದೆ ಎಂದರು.

ಕದನ ವಿರಾಮ ಮಾಡಿದ್ದರೂ ಭಾರತದ ಗಡಿ ಭಾಗದ ಜಮ್ಮು ಕಾಶ್ಮೀರ, ರಾಜಸ್ಥಾನ ಮತ್ತು ಗುಜರಾತ್ ಮೇಲೆ ಪಾಕ್ ಬಾಂಬ್ ದಾಳಿ ಮಾಡಿ, ಕದನ ವಿರಾಮ ಉಲ್ಲಂಘನೆ ಮಾಡಿದ್ದು, ಯಾವುದೇ ಕಾರಣಕ್ಕೂ ಆಪರೇಷನ್ ಸಿಂಧೂರವನ್ನು ನಿಲ್ಲಿಸುವುದಿಲ್ಲ ಎಂದು ಎಚ್ಚರಿಕೆ ನೀಡಬೇಕೆಂದು ಹೇಳಿದರು. ನಮಗಾಗಿ ನಮ್ಮ ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿದ ವೀರ ಯೋಧರಿಗೆ ಪ್ರತಿ ಮನೆ ಮನೆಯಲ್ಲಿ ಶ್ರದ್ಧಾಂಜಲಿ ಸಲ್ಲಿಸುವ ಮೂಲಕ ಅವರ ಆತ್ಮಕ್ಕೆ ಗೌರವ ಪೂರಕವಾಗಿ ಕೃತಜ್ಞತೆ ಸಲ್ಲಿಸುವುದು ಭಾರತ ದೇಶದ ಎಲ್ಲಾ ಪ್ರಜೆಗಳ ಕರ್ತವ್ಯ ಎಂದರು.

ಕದಂಬ ಸೈನ್ಯ ಕನ್ನಡ ಸಂಘಟನೆ ಜಿಲ್ಲಾ ಉಪಾಧ್ಯಕ್ಷ ಯಾಕುಬ್ ಖಾನ್ ಗೊರೂರು, ಸಕಲೇಶಪುರ ತಾಲೂಕು ಅಧ್ಯಕ್ಷ ವಿಶ್ವಾಸ್ ಬಿ.ಗೌಡ, ಹಿರಿಯ ಸಾಹಿತಿ ಅನಂತರಾಜ್, ಹೋರಾಟಗಾರ ಪ್ರಕಾಶ್, ರಾಜ್ಯ ಸಮಿತಿ ಸದಸ್ಯರಾದ ರಾಮು ಚಿಕ್ಕೆಗೌಡನದೊಡ್ಡಿ, ಮಂಡ್ಯ ಜಿಲ್ಲೆ ಸಂಚಾಲಕ ಸಲ್ಮಾನ್ ಇತರರು ಉಪಸ್ಥಿತರಿದ್ದರು.

ಕರ್ನಲ್ ಸೋಫಿಯಾ ವಿರುದ್ಧ ಅವಹೇಳನಕಾರಿ ಹೇಳಿಕೆ: ಸಚಿವ ವಿಜಯ್ ಶಾರನ್ನು ತರಾಟೆಗೆ ತೆಗೆದುಕೊಂಡ ಸುಪ್ರೀಂಕೋರ್ಟ್



ನವದೆಹಲಿ, ಮೇ 15– ಕರ್ನಲ್ ಸೋಫಿಯಾ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ ವಿಜಯ್ ಶಾ ಅವರನ್ನು ಸುಪ್ರೀಂಕೋರ್ಟ್ ತರಾಟೆಗೆ ತೆಗೆದುಕೊಂಡಿದೆ.

ಹೇಳಿಕೆ ಸಂಬಂಧ ವಿಚಾರಣೆ ನಡೆಸಿದ್ದ ಜಬ್ಬಲ್ಪುರ ಹೈಕೋರ್ಟ್ ಸಚಿವ ವಿಜಯ್ ಶಾ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಆದೇಶಿಸಿತ್ತು. ಈ ಆದೇಶದ ಬೆನ್ನಲ್ಲೇ ವಿಜಯ್ ಶಾ, ಸುಪ್ರೀಂಕೋರ್ಟ್ ಮೊರೆ ಹೋಗಿದ್ದರು. ಈ ಕುರಿತು ವಿಚಾರಣೆ ನಡೆಸಿದ ಕೋರ್ಟ್ ಕಳವಳ ವ್ಯಕ್ತಪಡಿಸಿದ್ದು, ಈ ರೀತಿ ಹೇಳಿಕೆಗಳನ್ನು ನೀಡುವಾಗ ಎಚ್ಚರವಿರಲಿ ಎಂದಿದೆ.

ವಿಜಯ್ ಶಾ ನೀಡಿದ ಹೇಳಿಕೆಗಳನ್ನು ಟೀಕಿಸಿದ ಕೋರ್ಟ್, ದೇಶವು ಉದ್ವಿಗ್ನ ಪರಿಸ್ಥಿತಿ ಎದುರಿಸುತ್ತಿರುವಾಗ ಸಚಿವರು ಜವಾಬ್ದಾರಿಯುತರಾಗಿರಬೇಕು ಎನ್ನುವುದು ನಮ್ಮೆಲ್ಲರ ನಿರೀಕ್ಷೆ ಎಂದು ಒತ್ತಿ ಹೇಳಿದೆ.

ವಿಜಯ್ ಶಾ ಹೇಳಿದ್ದೇನು?: ಮಧ್ಯಪ್ರದೇಶದ ಇಂದೋರ್ ಜಿಲ್ಲೆಯ ಮಾಹುವಿನ ರಾಯ್ಕುಂಡದಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿಜಯ್ ಶಾ, ಪಾಕಿಸ್ತಾನ ವಿರುದ್ಧ ನಡೆದ ಆಪರೇಷನ್ ಸಿಂಧೂರ್ ಕಾರ್ಯಾಚರಣೆಯ ಯಶಸ್ಸನ್ನು ಹೇಳಿ ನರೇಂದ್ರ ಮೋದಿ ಸರ್ಕಾರವನ್ನು ಶ್ಲಾಘಿಸಿದ್ದರು.

ಭಾಷಣದಲ್ಲಿ, ಭಯೋತ್ಪಾದಕರು ನಮ್ಮ ಸಹೋದರಿಯರು ಮತ್ತು ಹೆಣ್ಣು ಮಕ್ಕಳ ಸಿಂಧೂರವನ್ನು ಅಳಿಸಿದ್ದರು. ಆ ಉಗ್ರರಿಗೆ ಪಾಠ ಕಲಿಸಲು ಅವರ ಸಹೋದರಿಯನ್ನು ನಾವು ಕಳುಹಿಸಿದ್ದೇವೆ ಎಂದು ಹೇಳಿದ್ದರು.

ಭಾಷಣದಲ್ಲಿ ವಿಜಯ್ ಶಾ, ಮುಸ್ಲಿಂ ಸಮುದಾಯಕ್ಕೆ ಸೇರಿದ ಉಗ್ರರನ್ನು ಸದೆ ಬಡಿಯಲು ಮುಸ್ಲಿಂ ಸಮುದಾಯಕ್ಕೆ ಸೇರಿದ ಸೋಫಿಯಾ ಖುರೇಷಿ ಅವರ ಹೆಸರನ್ನು ಸ್ಪಷ್ಟವಾಗಿ ಹೇಳದೇ ಇದ್ದರೂ ಅವರನ್ನು ಉಲ್ಲೇಖಿಸಿಯೇ ಭಾಷಣ ಮಾಡಿದ್ದು ವ್ಯಾಪಕ ಟೀಕೆಗೆ ಗುರಿಯಾಗಿತ್ತು. ಬಳಿಕ ಜಬ್ಬಲ್ಪುರ ಹೈಕೋರ್ಟ್ ಇದನ್ನು ಅಶ್ಲೀಲ ಭಾಷೆ ಎಂದು ಪರಿಗಣಿಸಿತ್ತು. ಈ ವಿಷಯವನ್ನು ಸ್ವಯಂಪ್ರೇರಿತವಾಗಿ ಪರಿಗಣಿಸಿ, ವಿಜಯ್ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಪೊಲೀಸ್ ಮುಖ್ಯಸ್ಥರಿಗೆ ಸೂಚಿಸಿತ್ತು.

ಬಲೂಚ್ ಆರ್ಮಿಯಿಂದ 14 ಪಾಕ್ ಸೈನಿಕರ ಹತ್ಯೆ

ಬಲೂಚಿಸ್ತಾನ್, ಮೇ 15–ಪಾಕಿಸ್ತಾನ ಸೇನೆಯ 14 ಸೈನಿಕರನ್ನು ಕೊಂದಿರುವುದಾಗಿ ಬಲೂಚ್ ಲಿಬರೇಶನ್ ಆರ್ಮಿ (BLA) ಹೇಳಿಕೊಂಡಿದೆ.

ಮೇ 9ರಂದು ಸಂಭವಿಸಿದ ಪ್ರಬಲ ಸ್ಫೋಟದಲ್ಲಿ ಗುಂಡು ನಿರೋಧಕ ವಾಹನ ನಾಶವಾಯಿತು. ದಾಳಿಯಲ್ಲಿ ಎಲ್ಲಾ 14 ಸೈನಿಕರು ಸಾವನ್ನಪ್ಪಿದರು. ಪಂಜ್‌ಗುರ್ ಜಿಲ್ಲೆಯ ಮಜ್‌ಬೂರಾಬಾದ್‌ನ ಬೋನಿಸ್ತಾನ್‌ನಲ್ಲಿ ಈ ದಾಳಿ ನಡೆದಿತ್ತು. ಪಾಕಿಸ್ತಾನಿ ಸೇನಾ ಬೆಂಗಾವಲು ಪಡೆಯ ಮೇಲಿನ ದಾಳಿಯ ವೀಡಿಯೊವನ್ನು ಬಿಎಲ್‌ಎ ಬುಧವಾರ ಬಿಡುಗಡೆ ಮಾಡಿದ್ದು, ಅವರ ಭಾಗವಹಿಸುವಿಕೆಯನ್ನು ದೃಢಪಡಿಸಿದೆ. ಗಮನಾರ್ಹವಾಗಿ, ಪಾಕಿಸ್ತಾನ ಸಾವು–ನೋವುಗಳನ್ನು ಮರೆಮಾಡಿತ್ತು.


ಪತ್ರಿಕಾ ಪ್ರಕಟಣೆಯಲ್ಲಿ, ಬಲೂಚ್ ಲಿಬರೇಶನ್ ಆರ್ಮಿಯ ವಕ್ತಾರ ಜೀಯಂಡ್ ಬಲೂಚ್, ಬಿಎಲ್‌ಎ ಸ್ವಾತಂತ್ರ್ಯ ಹೋರಾಟಗಾರರು ಕ್ವೆಟ್ಟಾ ಮತ್ತು ಮಸ್ತುಂಗ್‌ನಲ್ಲಿ ಪಾಕಿಸ್ತಾನಿ ಸೇನೆ ಮತ್ತು ಅದರ ವಿಜಯೋತ್ಸವವನ್ನು ಗುರಿಯಾಗಿಸಿಕೊಂಡಿದ್ದಾರೆ. ಇಂದು, ಸ್ವಾತಂತ್ರ್ಯ ಹೋರಾಟಗಾರರು ಕ್ವೆಟ್ಟಾದಲ್ಲಿ ಆಕ್ರಮಿತ ಪಾಕಿಸ್ತಾನಿ ಸೇನೆಯ ಆಶ್ರಯದಲ್ಲಿ ಆಯೋಜಿಸಲಾದ ವಿಕ್ಟರಿ ಸೆಲೆಬ್ರೇಷನ್ಸ್ ಎಂದು ಕರೆಯಲ್ಪಡುವ ರ್‍ಯಾಲಿಯನ್ನು ಗುರಿಯಾಗಿಸಿಕೊಂಡು ಮುನೀರ್ ಮೆಂಗಲ್ ರಸ್ತೆಯಲ್ಲಿ ಗ್ರೆನೇಡ್ ದಾಳಿ ನಡೆಸಿದರು. ಈ ರ್‍ಯಾಲಿಯ ನೇತೃತ್ವವನ್ನು ಎಂಪಿಎ ಅಲಿ ಮದದ್ ಜಟ್ಟಕ್ ವಹಿಸಿದ್ದರು. ರ್‍ಯಾಲಿಗೆ ಮುಂಚಿತವಾಗಿ ಸ್ವಾತಂತ್ರ್ಯ ಹೋರಾಟಗಾರರು ಸಶಸ್ತ್ರ ಡೆತ್ ಸ್ಕ್ವಾಡ್ ಏಜೆಂಟ್‌ಗಳನ್ನು ಗುರಿಯಾಗಿಸಿಕೊಂಡಿತ್ತು. ದಾಳಿಯ ಪರಿಣಾಮವಾಗಿ 1 ಡೆತ್ ಸ್ಕ್ವಾಡ್ ಏಜೆಂಟ್ ಹತ್ಯೆಯಾಗಿದ್ದು 12 ಜನರು ಗಾಯಗೊಂಡಿದ್ದಾರೆ. ಬಿಎಲ್‌ಎ ಬಲೂಚಿಸ್ತಾನ್ ಸರ್ಕಾರ ಮತ್ತು ಆಕ್ರಮಿತ ರಾಜ್ಯದ ಆಶ್ರಯದಲ್ಲಿ ಅದರ ಆಚರಣೆಯನ್ನು ಗುರಿಯಾಗಿಸಿಕೊಂಡಿತು. ಬಲೂಚ್ ವಿಮೋಚನಾ ಚಳುವಳಿ ಸಾರ್ವಜನಿಕ ಬೆಂಬಲದೊಂದಿಗೆ ಬಲವಾದ ಸ್ವರೂಪವನ್ನು ಪಡೆದುಕೊಂಡಿದೆ ಎಂದು ಪ್ರಕಟಣೆಯಲ್ಲಿ ಸೇರಿಸಲಾಗಿದೆ.

ಶ್ರೀ ರಾಮಾನುಜ ಸಹಕಾರ ಸಂಘದಿಂದ ಬ್ರಾಹ್ಮಣ ಮಹಾಸಭಾ ಉಪಾಧ್ಯಕ್ಷ ಎಚ್.ವಿ.ರಾಜೀವ್‌ಗೆ ಅಭಿನಂದನೆ




ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭೆ ರಾಜ್ಯ ಉಪಾಧ್ಯಕ್ಷರಾಗಿ ನೇಮಕಗೊಂಡ ಮೈಸೂರು ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಎಚ್.ವಿ.ರಾಜೀವ್ ಅವರನ್ನು ಶ್ರೀ ರಾಮಾನುಜ ಸಹಕಾರ ಸಂಘದ ನಿರ್ದೇಶಕರು ಅಭಿನಂದಿಸಿದರು. ಈ ವೇಳೆ ಸಂಘದ ಅಧ್ಯಕ್ಷ ಎಚ್.ಕೆ.ರಾಜಗೋಪಾಲನ್, ಯತಿರಾಜ ಮಠದ ವೀರರಾಘವಾಚಾರ್, ಮುಡಾ ಮಾಜಿ ಅಧ್ಯಕ್ಷ ಯಶಸ್ವಿನಿ ಸೋಮಶೇಖರ್, ನಿರ್ದೇಶಕರಾದ ಕೆ.ಆರ್.ಯೋಗಾನರಸಿಂಹ (ಮುರುಳಿ), ಪುಟ್ಟಸ್ವಾಮಿ, ಯತಿರಾಜ್, ಶ್ರೀನಿವಾಸ್‌ಪ್ರಸಾದ್, ಟಿ.ಎಸ್.ಅರುಣ್, ಚಕ್ರಪಾಣಿ, ಅನಂತ್ ಕೃಷ್ಣ, ರಾಮಸ್ವಾಮಿ, ಶಾಂತರಾಮ್, ಆಂಡಾಳ್, ಅನುರಾಧ, ಲಕ್ಷ್ಮಿ, ಅನಂತು ವಾದ್ಯಾರ್ ಉಪಸ್ಥಿತರಿದ್ದರು.

ಶಾಸಕ ಟಿ.ಎಸ್.ಶ್ರೀವತ್ಸಗೆ ಅಭಿನಂದನೆ...



ಕೃಷ್ಣರಾಜ ಕ್ಷೇತ್ರದ ಬಿಜೆಪಿ ಕಚೇರಿಯ ಉದ್ಘಾಟನಾ ಸಮಾರಂಭದಲ್ಲಿ ಜನಸ್ನೇಹಿ ಶಾಸಕರಾಗಿ 2 ವರ್ಷ ಪೂರೈಸಿದ ಟಿ.ಎಸ್.ಶ್ರೀವತ್ಸ ಅವರನ್ನು ಕ್ಷೇತ್ರದ ಅಧ್ಯಕ್ಷ ಗೋಪಾಲ್‌ರಾಜೇ ಅರಸ್ ಅಭಿನಂದಿಸಿದರು. ಈ ವೇಳೆ ಮಾಧ್ಯಮ ಸಹ ವಕ್ತಾರ ಕೆ.ದೇವರಾಜ್, ಹಿಂದುಳಿದ ವರ್ಗಗಳ ಮೈಸೂರು ನಗರ ಉಪಾಧ್ಯಕ್ಷರಾದ ಜಗದೀಶ್, ಟಿ.ಕೆ.ಲೇಔಟ್ ಮಧು, ಬಸವರಾಜು, ಬಿಜೆಪಿ ಕಾರ್ಯಕರ್ತರು ಶುಭ ಕೋರಿದರು.

ಡಿಸಿಎಂ ಡಿ.ಕೆ.ಶಿವಕುಮಾರ್ ಜನ್ಮದಿನ; ಆಫ್ರಿಕನ್ ಸಿಂಹ ದತ್ತು ಪಡೆದ ರಾಜ್ಯ ಯುವ ಕಾಂಗ್ರೆಸ್



ಬೆಂಗಳೂರು, ಮೇ 15–ಕೆಪಿಸಿಸಿ ಅಧ್ಯಕ್ಷರೂ ಆದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಜನ್ಮದಿನದ ಪ್ರಯುಕ್ತ ರಾಜ್ಯ ಯುವ ಕಾಂಗ್ರೆಸ್ ವತಿಯಿಂದ ಮೈಸೂರು ಜಯಚಾಮರಾಜೇಂದ್ರ ಮೃಗಾಲಯದಲ್ಲಿ ಆಫ್ರಿಕನ್ ಸಿಂಹವನ್ನು ದತ್ತು ಪಡೆಯಲಾಗಿದೆ. ಮಂಜುನಾಥ್ ಗೌಡ ನೇತೃತ್ವದ ಪ್ರದೇಶ ಯುವ ಕಾಂಗ್ರೆಸ್ 1 ವರ್ಷದ ಅವಧಿಗೆ ದತ್ತು ಪಡೆದಿದ್ದು, ಪ್ರತಿ ವರ್ಷ ದತ್ತು ನವೀಕರಣಕ್ಕೆ ನಿರ್ಧರಿಸಿದೆ. ವರ್ಷಕ್ಕೆ ದತ್ತು ಮೊತ್ತ 2 ಲಕ್ಷ ರೂ.

ಶವಸಂಸ್ಕಾರಕ್ಕೆ 500 ರೂ. ಶುಲ್ಕ ವಿಧಿಸಿರುವುದು ರದ್ದು ಮಾಡಬೇಕು

ಮೈಸೂರು, ಮೇ 15(ಬಿಎಲ್‌ಯು)– ಶವಸಂಸ್ಕಾರಕ್ಕೆ 500 ರೂ. ಶುಲ್ಕ ವಿಧಿಸಿರುವುದನ್ನು ರದ್ದು ಮಾಡದಿದ್ದರೆ ಸ್ಮಶಾನಗಳ ಮುಂದೆ ಪ್ರತಿಭಟನೆ ಮಾಡಲಾಗುವುದು ಎಂದು ನಗರ ಬಿಜೆಪಿ ವಕ್ತಾರ ಎಂ.ಎ.ಮೋಹನ್ ಎಚ್ಚರಿಸಿದ್ದಾರೆ.

ಜನರು ಪಾವತಿ ಮಾಡುವ ಆಸ್ತಿ ತೆರಿಗೆಯಲ್ಲಿ ಕಲಂ ನಂಬರ್ 43 ರಲ್ಲಿ ಸ್ಮಶಾನ ಶುಲ್ಕವಾಗಿ 150 ರೂಪಾಯಿಯನ್ನು ಈಗಾಗಲೇ ಪಾವತಿ ಮಾಡಲಾಗುತ್ತಿದೆ. ಮೈಸೂರು ನಗರದಲ್ಲಿ ಒಂದೂವರೆ ಲಕ್ಷ ಮನೆಗಳಿದ್ದು, ತಲಾ 150 ರೂಪಾಯಿಯಂತೆ ನಗರ ಪಾಲಿಕೆಗೆ 2.25 ಕೋಟಿ ರೂಪಾಯಿ ಈಗಾಗಲೇ ವಸೂಲಿಯಾಗುತ್ತಿದೆ ಎಂದು ತಿಳಿಸಿದ್ದಾರೆ.

ಇಲ್ಲವೇ ಸ್ಮಶಾನಗಳ ಮುಂದೆ ಪ್ರತಿಭಟನೆ

ಇದರ ಜೊತೆಗೆ ಈಗ ಮತ್ತೆ 500 ರೂಪಾಯಿಗಳನ್ನು ಹೆಚ್ಚುವರಿಯಾಗಿ ವಸೂಲಿ ಮಾಡುತ್ತಿರುವುದು ಜನವಿರೋಧಿಯಾಗಿದೆ. ಇಷ್ಟು ಪ್ರಮಾಣದ ಹಣ ವಸೂಲಿ ಮಾಡಿದರೂ ಸ್ಮಶಾನಗಳೇನು ಅಭಿವೃದ್ಧಿ ಮಾಡಿಲ್ಲ. ಶವ ಹೂಳಲು ಒಳಗೆ ಹೋಗದ ಪರಿಸ್ಥಿತಿ ಇದೆ ಎಂದು ದೂರಿದ್ದಾರೆ. ಮೈಸೂರು ನಗರದಲ್ಲಿ ಬಹಳಷ್ಟು ಸಮಸ್ಯೆಗಳಿದ್ದು, ಮೊದಲು ಅದನ್ನು ನಿವಾರಣೆ ಮಾಡಲಿ. ಅದು ಬಿಟ್ಟು ಇಂತಹ ಜನವಿರೋಧಿ ಕ್ರಮ ಕೈಗೊಳ್ಳುವುದು ಎಷ್ಟರ ಮಟ್ಟಿಗೆ ಸರಿ ಎಂದು ಮೋಹನ್ ಪ್ರಶ್ನಿಸಿದ್ದಾರೆ.

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಮೈಸೂರು, ಮೇ 15– ಬ್ರಾಹ್ಮಣ ಸಂಘ ಹೆಬ್ಬಾಳು ವಿಜಯನಗರ ಸಂಘದ ಸದಸ್ಯರ ಮಕ್ಕಳಿಗೆ ಪ್ರಸಕ್ತ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಶೇ. 85 ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು 6.6.2025 ಕೊನೆ ದಿನ. ಹೆಚ್ಚಿನ ಮಾಹಿತಿಗೆ ಮೊ. 9243529365, 9035011459 ಸಂಪರ್ಕಿಸಬಹುದು.

ಅಂಬೇಡ್ಕರ್ ಅವರಿಂದ ಪ್ರತಿರೋಧ ಗುಣ ಕಲಿಯಬೇಕು

ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ದಿನಾಚರಣೆಯಲ್ಲಿ ಬಹುಭಾಷಾ ನಟ ಪ್ರಕಾಶ್‌ರಾಜ್ ಕರೆ



ಮೈಸೂರು ವಿವಿ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ, ಸಂಶೋಧನಾ ವಿದ್ಯಾರ್ಥಿ ವೇದಿಕೆ ಸಹಯೋಗದಲ್ಲಿ ಬಿಎಂಶ್ರೀ ಸಭಾಂಗಣದಲ್ಲಿ ಆಯೋಜಿಸಿದ್ದ ಡಾ.ಅಂಬೇಡ್ಕರ್ 134ನೇ ಜನ್ಮದಿನಾಚರಣೆ ಕಾರ್ಯಕ್ರಮವನ್ನು ಬಹುಭಾಷಾ ನಟ ಪ್ರಕಾಶ್‌ರಾಜ್ ಉದ್ಘಾಟಿಸಿದರು.

ಮೈಸೂರು, ಮೇ15(ಜಿಎ)–ದೇಶದ ಬಹಳ ಜನರು ಅಂಬೇಡ್ಕರ್ ದಲಿತರು, ದಮನಿತರು, ಅಸ್ಪೃಶ್ಯರ ನಾಯಕ ಎಂದು ಬಿಂಬಿಸಿದ್ದಾರೆ. ಈ ದೇಶದ ಬಹುಜನರಿಗೆ ಇದು ಅರ್ಥವೇ ಆಗುತ್ತಿಲ್ಲ. ದೇಶದ ಪರಿಸ್ಥಿತಿ ಬಹಳ ಹದಗೆಟ್ಟಿದ್ದರೂ ಚಿಂತಿಸದೆ ಅಂಬೇಡ್ಕರ್ ಬಗ್ಗೆ ಮಾತನಾಡುತ್ತಿದ್ದಾರೆ ಎಂದು ಬಹುಭಾಷಾ ನಟ ಪ್ರಕಾಶ್‌ರಾಜ್ ವಿಷಾದ ವ್ಯಕ್ತಪಡಿಸಿದರು.

ಮೈಸೂರು ವಿವಿ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ, ಸಂಶೋಧನಾ ವಿದ್ಯಾರ್ಥಿ ವೇದಿಕೆ ಸಹಯೋಗದಲ್ಲಿ ಬಿಎಂಶ್ರೀ ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ್ದ ಡಾ.ಬಿ.ಆರ್.ಅಂಬೇಡ್ಕರ್ 134ನೇ ಜನ್ಮದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಅಂಬೇಡ್ಕರ್ ಅವರಿಂದ ನಾವು ಕಲಿಯಬೇಕಾದ್ದು ಪ್ರತಿರೋಧದ ಗುಣ. ಒಬ್ಬ ಯುವಕ ಅಂಬೇಡ್ಕರರಂತೆ ವೇಷ ಧರಿಸಿ ಮೆರವಣಿಗೆಯಲ್ಲಿ ಸಾಗಿ ಬಂದ. ಈ ಬಗ್ಗೆ ಆತನನ್ನು ನಾನು ಪ್ರಶ್ನಿಸಿದಾಗ ಅಂಬೇಡ್ಕರ್ ಅವರಂತೆಯೇ ಕಾಣಲೆಂದು ಉತ್ತರಿಸಿದ. ಆದರೆ, ಅಂಬೇಡ್ಕರ್ ಕೋಟ್ ಧರಿಸಿದ್ದು ಒಂದು ಪ್ರತಿರೋಧವಾಗಿದೆ ಎಂದರು.

ತುರ್ತಿನ ಕಾಲದಲ್ಲಿ ನಮ್ಮ ಒಂದೇ ಒಂದು ನಂಬಿಕೆ ಆಶಾಕಿರಣ ಸಂವಿಧಾನ. ಸರ್ವೋಚ್ಚ ನ್ಯಾಯಾಲಯ ಸಹ ಅಂಬೇಡ್ಕರ್ ಕೊಟ್ಟ ಸಂವಿಧಾನದ ಮೇಲೆ ತೀರ್ಪು ಕೊಡುತ್ತಿದೆ. ಅದು ನಮಗೇ ಮುಖ್ಯವಾಗಬೇಕು. ಹಿಂದೆ ಕಾಂಗ್ರೆಸ್ ಪಕ್ಷದ ಚಿಹ್ನೆ ಹಸು. ಹಸು ನೋಡಿ ಕತ್ತೆಗೆ ಮತ ನೀಡುವಂತೆ ಅಂಬೇಡ್ಕರ್ ಅವರು ಟೀಕಿಸಿದ್ದರು. ಇವತ್ತು ಮೋದಿ ನೋಡಿ ಮತ ಹಾಕುವಂತೆ ಕೇಳುತ್ತಿದ್ದಾರೆ. ನಮ್ಮ ಮತದ ಬಗ್ಗೆ ನಮ್ಮ ಹಕ್ಕುಗಳ ಬಗ್ಗೆ ತಿಳಿಹೇಳಬೇಕಿದೆ ಎಂದು ತಿಳಿಸಿದರು.

ಅಂಬೇಡ್ಕರ್ ಅವರು ತಮ್ಮ ಕೊನೆಯ ದಿನಗಳಲ್ಲಿ ಈವರೆಗೆ ದಲಿತರ ವಿಮೋಚನಾ ರಥವನ್ನು ಎಳೆದುಕೊಂಡು ಬಂದಿದ್ದೇನೆ. ಮುಂದಕ್ಕೆ ಎಳೆಯದಿದ್ದರೂ ಪರವಾಗಿಲ್ಲ. ಹಿಂದಕ್ಕೆ ಎಳೆಯದಂತೆ ನೋಡಿಕೊಳ್ಳಿ ಎಂದು ಹೇಳಿದ್ದಾರೆ. ಈಗ ಅಂಬೇಡ್ಕರ್ ಅವರ ಕನಸುಗಳನ್ನು ನನಸು ಮಾಡುವ ಸಂಕಲ್ಪದೊಂದಿಗೆ ಪುನರ್ಜನ್ಮ ನೀಡಬೇಕಿದೆ ಎಂದರು.

ಹೋರಾಟಗಾರ್ತಿ ಮೀನಾಕ್ಷಿ ಬಾಳಿ ಮಾತನಾಡಿ, ಮಹಿಳೆಯರಿಗೆ ಸಂವಿಧಾನ ಬದ್ಧ ಹಕ್ಕುಗಳಿದ್ದರೂ ಎಷ್ಟರ ಮಟ್ಟಿಗೆ ಹಕ್ಕುಗಳನ್ನು ಪಡೆದುಕೊಳ್ಳುತ್ತಿದ್ದಾರೆ? ಮಹಿಳಾ ಪರವಾದ ಕೂಗು, ಹೋರಾಟ ಆಗಾಗ ಮುನ್ನೆಲೆಗೆ ಬರುತ್ತಿರುತ್ತದೆ. ಆದರೆ ಇಂದಿನ ಜಾಗತೀಕರಣ, ಉದಾರೀಕರಣದ ಸಂದರ್ಭದಲ್ಲಿ ಮಹಿಳೆಯರು ತಮ್ಮ ವಿರೋಧಿ ಮೌಲ್ಯಗಳನ್ನೇ ಸುಖಿಸುತ್ತಿದ್ದಾರೆ ಎಂದು ಹೇಳಿದರು.

ಮಹಿಳೆಯರಿಗೆ ಶೇ.60ರಷ್ಟು ಮೀಸಲಾತಿ ನೀಡಲಾಗುತ್ತಿದೆ. ಇದ್ದ ಕಾನೂನು ಬಳಸಿಕೊಂಡಿದ್ದೇವೆಯೇ ಇಲ್ಲ. ಯುವತಿಯರು, ಹುಡುಗಿಯರು ಅದ್ದೂರಿ ಮದುವೆಯನ್ನು ವಿರೋಧಿಸುತ್ತಾರೆಯೇ? ಪ್ರತಿಯೊಬ್ಬರೂ ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳಬೇಕು. ಜೀವನದಲ್ಲಿ ಮದುವೆ ಆಗುವುದು ಒಂದೇ ಸಾರಿ ಎನ್ನುತ್ತಾರೆ. ಅಲ್ಲಿಗೆ ಯಾವ ಆದರ್ಶವೂ ಇಲ್ಲದಂತಾಯಿತು ಎಂದರು.

ಪ್ರಸಾರಾಂಗದ ನಿರ್ದೇಶಕ ಪ್ರೊ.ಎಂ. ನಂಜಯ್ಯ ಹೊಂಗನೂರು ಮಾತನಾಡಿ, ಸಾಮಾಜಿಕ ನ್ಯಾಯದ ಪ್ರತಿಪಾದಕ ಅಂಬೇಡ್ಕರ್ ಅವರು ನೀಡಿದ ಸಂವಿಧಾನ ಹಾಗೂ ಅವರು ನೀಡಿರುವ ವೈಚಾರಿಕ ಚಿಂತನೆಗಳು ಇಂದು ನಮ್ಮ 145 ಕೋಟಿ ಭಾರತೀಯರನ್ನು ಮುನ್ನಡೆಸುತ್ತಿದೆ. ಒಟ್ಟಾರೆ ಅಂಬೇಡ್ಕರರ ಸಂವಿಧಾನ ಬಹುತ್ವ ಭಾರತದ ಅಡಿಪಾಯವಾಗಿದೆ. ಇಂದು ಅವರು ಜಗದ ಬೆಳಕು,ಮನೆ ಮನೆಯ ಹಣತೆಯಾಗಿ ಬೆಳೆಯುತ್ತಿದ್ದಾರೆ ಎಂದರು.

ಪ್ರಾಧ್ಯಾಪಕ ಪ್ರೊ.ಎ.ನಾರಾಯಣ ಪ್ರಜಾಪ್ರಭುತ್ವದ ಸದೃಢತೆಯಲ್ಲಿ ಯುವ ಸಮುದಾಯದ ಪಾತ್ರ ಕುರಿತು ಮಾತನಾಡಿದರು. ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಅಂಬೇಡ್ಕರ್ ಪ್ರತಿಮೆಯಿಂದ ಅಂಬೇಡ್ಕರ್ ಭಾವಚಿತ್ರ ಮೆರವಣಿಗೆ ನಡೆಯಿತು. ಕಲಾತಂಡಗಳ ಮೆರವಣಿಗೆ ಆಕರ್ಷಿಸಿತು. ಸಭಾ ಕಾರ್ಯಕ್ರಮದ ಬಳಿಕ ದೇವನೂರ ಮಹಾದೇವ ಅವರ ಎದೆಗೆ ಬಿದ್ದ ಅಕ್ಷರ ರಂಗರೂಪ ಪ್ರದರ್ಶನಗೊಂಡಿತು. ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ನಿರ್ದೇಶಕಿ ಪ್ರೊ.ಎನ್.ಕೆ. ಲೋಲಾಕ್ಷಿ, ಪ್ರಾಧ್ಯಾಪಕಿ ವಿಜಯಕುಮಾರಿ ಎಸ್. ಕರಿಕಲ್, ಜೈನಶಾಸ್ತ್ರ ವಿಭಾಗದ ಅಧ್ಯಕ್ಷ ಪ್ರೊ.ಎಸ್.ಡಿ.ಶಶಿಕಲಾ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರು ಮಿತ್ರ

ಶುಕ್ರವಾರ 16 ಮೇ 2025



ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನ್ ದಾಸ್ ಏಕಸದಸ್ಯ ವಿಚಾರಣಾ ಆಯೋಗದ ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆಯ ಕಾರ್ಯ ಕುರಿತು ಪ್ರಗತಿ ಪರಿಶೀಲನೆ ನಡೆಸಲಾಯಿತು.

ಒಳ ಮೀಸಲಾತಿ ಜಾತಿ ಸಮೀಕ್ಷೆ ಬಗ್ಗೆ ಪ್ರಗತಿ ಪರಿಶೀಲನೆ

ಮಂಡ್ಯ ನಗರ ಸಮೀಕ್ಷೆಯ ಪ್ರತಿಶತ ಕಡಿಮೆ: ಪ್ರಭಾರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ

ಮಂಡ್ಯ ಜಿಲ್ಲೆಯ ಕೆಲ ಎನ್ಯುಮರೇಟರ್ಸ್‌ಗಳು ಇನ್ನೂ ಸಹ ಒಂದು ಮನೆಯ ಸಮೀಕ್ಷೆಯನ್ನು ನಡೆಸದಿರುವುದು ಗಮನಕ್ಕೆ ಬಂದಿದೆ. ಅಂತಹವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು, ಮೇಲ್ವಿಚಾರಕರು ನೋಡಲ್ ಅಧಿಕಾರಿಗಳು ಸಮೀಕ್ಷೆದಾರರು ಸರಿಯಾದ ಸಮಯಕ್ಕೆ ಸಮೀಕ್ಷೆ ನಡೆಸುತ್ತಿರುವ ಬಗ್ಗೆ ಪರಿಶೀಲಿಸಿ ಹಾಗೂ ನೀವುಗಳ ಸಹ ಸ್ಥಳ ಪರಿಶೀಲನೆ ನಡೆಸಿ ಇನ್ನೂ ಹೆಚ್ಚಿನ ಕಾರ್ಯಕ್ಷಮತೆ ವಹಿಸಿ.
–ರಾಮಚಂದ್ರನ್.ಆರ್, ಪ್ರಭಾರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ

ಮಂಡ್ಯ, ಮೇ 15(ಮೋಹನ್‌ರಾಜ್)– ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನ್ ದಾಸ್ ಏಕ ಸದಸ್ಯ ವಿಚಾರಣಾ ಆಯೋಗದ ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆಯ ಕಾರ್ಯ ಕುರಿತು ಪ್ರಗತಿ ಪರಿಶೀಲನೆ ನಡೆಸಲಾಯಿತು.

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಹಾಗೂ ಪ್ರಭಾರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಾಮಚಂದ್ರನ್.ಆರ್ ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ ಸಮೀಕ್ಷೆಯು ನ್ಯಾಯ ಸಮ್ಮತವಾಗಿ ನಡಸಬೇಕು. ಗಣತಿದಾರರು ಸಾರ್ವಜನಿಕರೊಂದಿಗೆ ತಾಳ್ಮೆಯಿಂದ ವರ್ತಿಸಬೇಕು ಎಂದರು.

ಸೌಲಭ್ಯಗಳನ್ನು ಒದಗಿಸಲು ಸಮೀಕ್ಷೆಗಳನ್ನು ನಡೆಸುವುದು ಅತ್ಯಂತ ಅಗತ್ಯ, ಸಮೀಕ್ಷೆ ಸೂಕ್ಷ್ಮ ವಿಚಾರವಾಗಿದ್ದು, ಎನ್ಯುಮರೇಟರ್ಸ್‌ಗಳು ಕಾರ್ಯ ದಕ್ಷತೆಯಿಂದ ನಿಖರವಾದ ಸಮೀಕ್ಷೆ ನಡೆಸಬೇಕು. ಜಿಲ್ಲೆಯಲ್ಲಿ ಇರುವ ಎಲ್ಲಾ ಎನ್ಯುಮರೇಟರ್ಸ್‌ಗಳಿಗೆ ತರಬೇತಿ ನೀಡಲಾಗಿದೆಯೇ ಎಂದು ಪರಿಶೀಲಿಸಿ, ತರಬೇತಿ ದಿನದಂದು ರಜೆಯ ಮೇಲೆ ತೆರಳಿದ್ದ ಎನ್ಯುಮರೇಟರ್ಸ್‌ಗಳಿಗೆ ಮರು ತರಬೇತಿ ನೀಡಲಾಗಿದೆಯೇ ಎಂದು ಪರಿಶೀಲಿಸಿ, ತರಬೇತಿ ಪಡೆದಿರುವುದನ್ನು ನೋಡಲ್ ಅಧಿಕಾರಿಗಳು ಖಾತ್ರಿ ಪಡಿಸಿಕೊಳ್ಳಿ ಎಂದರು.

ಬೇಸಿಗೆ ಸಮಯವಾಗಿರುವುದರಿಂದ ಸಮೀಕ್ಷೆಗೆ ಶಿಕ್ಷಕರನ್ನು ಸಮರ್ಪಕವಾಗಿ ಬಳಸಿಕೊಳ್ಳಿ, ಜಿಲ್ಲೆಯ ಎಲ್ಲಾ ತಾಲೂಕುಗಳಿಗೆ ಹೋಲಿಸಿದರೆ ಮಂಡ್ಯ ನಗರದ ಸಮೀಕ್ಷೆಯ ಪ್ರತಿಶತ ಕಡಿಮೆ ಇದೆ. ನಿಗದಿ ಪಡಿಸಿದ ಗುರಿಯನ್ನು ಸಾಧಿಸದ ತಾಲೂಕು ಅಥವಾ ಸ್ಥಳಗಳಿಗೆ ಹೆಚ್ಚುವರಿ ಎನ್ಯುಮರೇಟರ್ಸ್ ಬೇಕಿದ್ದರೆ ಮನವಿ ಸಲ್ಲಿಸಿ ಪಡೆದುಕೊಂಡು, ಪ್ರಗತಿ ಸಾಧಿಸಿ ಎಂದು ತಿಳಿಸಿದರು.

ನಗರದ ಸಮೀಕ್ಷೆಯನ್ನು ಪರಿಣಾಮಕಾರಿಯಾಗಿ ಸಾಧಿಸುವಲ್ಲಿ ನಗರಸಭೆ ಪೌರಾಯುಕ್ತರ ಪಾತ್ರ ಹೆಚ್ಚಿರುತ್ತದೆ. ಮಂಡ್ಯ ನಗರದ 11357 ಪರಿಶಿಷ್ಟ ಮನೆ ಪೈಕಿ 7389 ಮನೆಗಳಲ್ಲಿ ಶೇ 65.1 ರಷ್ಟು ಸಮೀಕ್ಷೆ ನಡೆಸಲಾಗಿದೆ, ನಗರಸಭೆ ಪೌರಾಯುಕ್ತರು, ಮಂಡ್ಯ ತಹಶೀಲ್ದಾರ್ ಹಾಗೂ ಮಂಡ್ಯ ಉಪವಿಭಾಗಾಧಿಕಾರಿಗಳು ವಿಶೇಷ ಮುತುವರ್ಜಿ ವಹಿಸಿ ಇನ್ನೆರಡು ದಿನಗಳಲ್ಲಿ ಸಂಪೂರ್ಣ ಸಮೀಕ್ಷೆಯನ್ನು ನಡೆಸಿಕೊಡಬೇಕು ಎಂದು ಹೇಳಿದರು.

ಜಿಲ್ಲಾಧಿಕಾರಿ ಡಾ ಕುಮಾರ ಅವರು ಮಾತನಾಡಿ ನ್ಯಾಯಮೂರ್ತಿ ಹೆಚ್.ಎನ್. ನಾಗಮೋಹನ್ ದಾಸ್ ಏಕಸದಸ್ಯ ವಿಚಾರಣಾ ಆಯೋಗದ ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆಯಲ್ಲಿ ಮಂಡ್ಯ 4ನೇ ಸ್ಥಾನದಲ್ಲಿದೆ, 2011ರ ಜನಗಣತಿಯ ಪ್ರಕಾರ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿಯ 61423 ಮನೆಗಳಿದ್ದು ಈ ಪೈಕಿ 53198 ಮನೆಗಳಲ್ಲಿ ಈಗಾಗಲೇ ಸಮೀಕ್ಷೆ ನಡೆಸಲಾಗಿದೆ, ಶೇ 86ರಷ್ಟು ಗುರಿ ಸಾಧಿಸಿದ್ದೇವೆ ಇದ್ದಲ್ಲದೇ ಇತರೆ ಕುಟುಂಬಗಳ ಮನೆಗಳಲ್ಲಿ ಸಮೀಕ್ಷೆ ನಡೆಸಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ 1823 ಮತಗಟ್ಟೆಗಳಿದ್ದು 2036 ಗಣತಿದಾರರಿದ್ದಾರೆ, ಗಣತಿದಾರರ ಮೇಲ್ವಿಚಾರಣೆಗೆ 179 ಮೇಲ್ವಿಚಾರಕರನ್ನು ನೇಮಿಸಲಾಗಿದೆ, ಪ್ರತ್ಯೇಕವಾಗಿ ವಾಟ್ಸಾಪ್ ಗ್ರೂಪ್ ರಚಿಸಿದ್ದು ಎನ್ಯುಮರೇಟರ್ಸ್, ಮೇಲ್ವಿಚಾರಕರು ಹಾಗೂ ನೋಡೆಲ್ ಅಧಿಕಾರಿಗಳು ಸಮೀಕ್ಷೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿರುವ ಛಾಯಾ ಚಿತ್ರಗಳನ್ನು ಗ್ರೂಪ್‌ಗಳಲ್ಲಿ ಹಾಕುವಂತೆ ಸೂಚಿಸಲಾಗಿದೆ, ಪ್ರತಿ ದಿನದ ಸಮೀಕ್ಷೆಯ ವರದಿಯನ್ನು ಅವಲೋಕಿಸಿ ಅಧಿಕಾರಿಗಳೊಂದಿಗೆ ಸಂವಾದ ನಡೆಸಲಾಗುತ್ತಿದೆ ಎಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಸಿ ಶಿವಾನಂದಮೂರ್ತಿ, ಮಂಡ್ಯ ಉಪ ವಿಭಾಗಾಧಿಕಾರಿ ಶಿವಮೂರ್ತಿ, ನಗರಸಭೆ ಪೌರಾಯುಕ್ತ ಪಂಪಶ್ರೀ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ.ಲಕ್ಷ್ಮಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ಕೃಷ್ಣಕುಮಾರ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ರಾಜಮೂರ್ತಿ ಸೇರಿದಂತೆ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

ಮಂಡ್ಯದಲ್ಲಿ ಐತಿಹಾಸಿಕ ದಾಖಲೆ, ಬಿತ್ತಿ ಪತ್ರ, ನಾಣ್ಯಗಳ ಪ್ರದರ್ಶನ



ಮಂಡ್ಯ ಮೇ 15– ಇಂದು ಸರ್ಕಾರಿ ಮಹಿಳಾ ಕಾಲೇಜು ಮಂಡ್ಯದಲ್ಲಿ ಇತಿಹಾಸ ಸ್ನಾತಕ ಮತ್ತು ಸ್ನಾತಕೋತ್ತರ ವಿಭಾಗದ ವತಿಯಿಂದ ಒಂದು ದಿನದ ಐತಿಹಾಸಿಕ ದಾಖಲೆಗಳು ಬಿತ್ತಿ ಪತ್ರ ಪ್ರದರ್ಶನ ಹಾಗೂ ನಾಣ್ಯಗಳ ಪ್ರದರ್ಶನವನ್ನು ಏರ್ಪಡಿಸಲಾಗಿತ್ತು.

ಈ ಕಾರ್ಯಕ್ರಮದ ಉದ್ಘಾಟನೆಯನ್ನು ಕಾಲೇಜಿನ ಪ್ರಾಂಶುಪಾಲರಾದ ಡಾ. ಗುರುರಾಜ ಪ್ರಭು ಕೆ ಮತ್ತು ಮಂಡ್ಯ ಜಿಲ್ಲೆಯ ಪ್ರಸಿದ್ಧ ನಾಣ್ಯ ಸಂಗ್ರಹಕಾರರಾದ ಮಧುಕರ್ ಹಳೆಯ ಕಾಲದ ಚಿನ್ನದ ನಾಣ್ಯಗಳನ್ನು ಪ್ರದರ್ಶನ ಮಾಡುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟನೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಸ್ನಾತಕ ವಿಭಾಗದ ಮುಖ್ಯಸ್ಥರಾದ ಪ್ರೊಫೆಸರ್ ಕೃಷ್ಣೇಗೌಡ ಮಾತನಾಡಿದರು. ಕಾಲೇಜಿನ ಪ್ರಾಂಶುಪಾಲರಾದ ಡಾ. ಗುರುರಾಜ ಪ್ರಭು ಕೆ ಅವರು ಅಧ್ಯಕ್ಷತೆ ವಹಿಸಿ ಇತಿಹಾಸವನ್ನು ಪುನರ್ ನಿರ್ಮಿಸುವಲ್ಲಿ ಮತ್ತು ಇತಿಹಾಸವನ್ನು ಮುಂದಿನ ಜನಾಂಗಕ್ಕೆ ಕೊಂಡೊಯ್ಯುವಲ್ಲಿ ವಿದ್ಯಾರ್ಥಿ ಯುವಕರ ಪಾತ್ರವನ್ನು ವಿವರಿಸಿದರು.

ಈ ಸಂದರ್ಭದಲ್ಲಿ ಚೋಳರ ಕಾಲದ ನಾಣ್ಯಗಳಿಂದ ಹಿಡಿದು ಹಿಂದಿನವರೆಗೆ ನಾಣ್ಯಗಳು ಬೆಳೆದು ಬಂದ ಬಗೆ ವಿವಿಧ ಮಾದರಿಯ ನೋಟುಗಳು ವಿದೇಶಿ ನೋಟುಗಳು ಚಿನ್ನ ಮತ್ತು ಬೆಳ್ಳಿಯ ನಾಣ್ಯಗಳು ಮೊದಲಾದವುಗಳನ್ನು ಪ್ರದರ್ಶಿಸಲಾಯಿತು ಈ ಸಂದರ್ಭದಲ್ಲಿ ವಿದ್ಯಾರ್ಥಿಗಳು ಅತ್ಯಂತ ಕುತೂಹಲದಿಂದ ಪ್ರದರ್ಶನದಲ್ಲಿ ಭಾಗವಹಿಸಿದ್ದರು. ಈ ಪ್ರದರ್ಶನದಲ್ಲಿ 1940 ರಿಂದ ಪ್ರಸ್ತುತದವರೆಗೂ ಹಳೆಯ ವಾರಪತ್ರಿಕೆಗಳು ದಿನಪತ್ರಿಕೆಗಳನ್ನು ಪ್ರದರ್ಶಿಸಲಾಯಿತು 1947ರ ಸ್ವಾತಂತ್ರ ದಿನಾಚರಣೆಯ ದಿನದ ಪತ್ರಿಕೆ, ಗಣರಾಜ್ಯ ದಿನದ ಪತ್ರಿಕೆ, ಕರ್ನಾಟಕ ಏಕೀಕರಣದ ಪತ್ರಿಕೆ, ಮೊದಲಾದ ಮಹತ್ವದ ದಿನದ ಪತ್ರಿಕೆಯ ಮುಖಪುಟಗಳನ್ನು ವಿದ್ಯಾರ್ಥಿಗಳು ಕುತೂಹಲದಿಂದ ನೋಡಿದರು. ಈ ಸಂದರ್ಭದಲ್ಲಿ ಪ್ರಜಾಮತ, ಸಂಜೆಯ ಕರ್ನಾಟಕ, ನಂದ ಗೋಕುಲ, ನವಜೀವನ, ಯುಗವಾಣಿ, ಸಂಯುಕ್ತ ಕರ್ನಾಟಕ, ತಾಯಿನುಡಿ, ಮೊದಲಾದ ಹಳೆಯ ಪತ್ರಿಕೆಗಳನ್ನು ಪ್ರದರ್ಶನ ಮಾಡಲಾಯಿತು.

ಕಾವೇರಿ ನೀರಿಗಾಗಿ ಆಗ್ರಹಿಸಿ ನಾಳೆ ಖಾಲಿ ಕೊಡ ಪ್ರದರ್ಶನ

ಮಂಡ್ಯ(ಮೋಹನ್‌ರಾಜ್): ಕುಡಿಯುವ ನೀರಿಗಾಗಿ ಆಗ್ರಹಿಸಿ ಮೇ 17 ರಂದು ಕೆಹೆಚ್‌ಬಿ ಮಹ ರಾಜನಗರ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಖಾಲಿ ಕೊಡ ಪ್ರದರ್ಶಿಸಿ ಪ್ರತಿಭಟನೆ ಹಮ್ಮಿಕೊಂಡಿರುವುದಾಗಿ ಸಂಘದ ಅಧ್ಯಕ್ಷ ಬಿ.ಎಸ್.ಹರೀಶ್ ತಿಳಿಸಿದರು.

ಅಂದು ಬೆಳಗ್ಗೆ 11 ಗಂಟೆಗೆ ನಗರದ ಸರ್.ಎಂ.ವಿ.ಶ್ವೇಶ್ವರಯ್ಯ ಪ್ರತಿಮೆ ಬಳಿ ಜಮಾವಣೆಗೊಂಡು, ಬಳಿಕ ಅಲ್ಲಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗುವುದು ಎಂದು ಸುದ್ದಿಗೋಷ್ಠಿಯಲ್ಲಿ ವಿವರಿಸಿದರು.

ಬಡಾವಣೆ ನಿರ್ಮಾಣವಾಗಿ 20 ವರ್ಷಗಳು ಆಗಿವೆ. ನಗರಸಭೆಗೆ ಹಸ್ತಾಂತರವಾಗಿ 5 ವರ್ಷ ಕಳೆದಿದೆ. ಆದರೂ ಇಲ್ಲಿನ ನಿವಾಸಿಗಳಿಗೆ ಕಾವೇರಿ ಕುಡಿಯುವ ನೀರು ಪೂರೈಸುವ ಕೆಲಸವಾಗಿಲ್ಲ. ಕುಡಿಯುವ ನೀರು ಮರೀಚಿಕೆಯಾಗಿದೆ ಎಂದು ಹರಿಹಾಯ್ದರು.

ಕೆಆರ್‌ಎಸ್ ಜಲಾಶಯದಿಂದ ಬೆಂಗಳೂರಿಗೆ ನಿತ್ಯ ನೀರು ಪೂರೈಸಲಾಗುತ್ತಿದೆ. 5ನೇ ಹಂತ ಪೂರ್ಣಗೊಳಿಸಿ 6ನೇ ಹಂತದ ಬಗ್ಗೆ ಚರ್ಚೆ ನಡೆಯುತ್ತಿದೆ. ಆದರೆ, ಕೆಹೆಚ್‌ಬಿ ಬಡಾವಣೆಗೆ ನೀರು ಪೂರೈಸಲು ಯಾವ ಜನಪ್ರತಿನಿಧಿಯೂ ಆಸಕ್ತಿ ತೋರುತ್ತಿಲ್ಲ. ಇದರಿಂದ ಬಡಾವಣೆ ಜನತೆ ಕೊಳವೆ ಬಾವಿ ನೀರನ್ನೇ ಆಶ್ರಯಿಸಬೇಕಿದೆ ಈ ನೀರು ಸಂಪೂರ್ಣ ಕಲುಷಿತಗೊಂಡಿದ್ದು, ಜನರ ಆರೋಗ್ಯದ ಮೇಲೆ ಸಾಕಷ್ಟು ದುಷ್ಪರಿಣಾಮಗಳು ಬೀರುತ್ತಿವೆ.

ಮಂಡ್ಯ ನಗರದ ಕೆಎಚ್‌ಬಿ ಮಹಾರಾಜ ನಗರ ಬಡಾವಣೆಯಲ್ಲಿ ಕುಡಿಯುವ ಕಾವೇರಿ ನೀರು ಸೇರಿದಂತೆ ಯಾವುದೇ ಮೂಲಸೌಲಭ್ಯವಿಲ್ಲದೆ ವಂಚಿತರಾಗಿದ್ದೇವೆ. ಬಡಾವಣೆಯಲ್ಲಿ ಸುಮಾರು 500 ಕುಟುಂಬಗಳು ವಾಸ ಮಾಡುತ್ತಿದ್ದು, ಬಡಾವಣೆಗೆ ಕುಡಿಯುವ ಕಾವೇರಿ ನೀರು, ಸಮರ್ಪಕ ಒಳಚರಂಡಿ, ಬೀದಿ ದೀಪಗಳು, ರಸ್ತೆಗಳಿಲ್ಲ ಈ ಎಲ್ಲಾ ಅನಾನುಕೂಲದಿಂದ ಬಡಾವಣೆ ಜನತೆ ಹೈರಾಣಾಗಿದ್ದಾರೆ ಎಂದರು.



ಸುದ್ದಿಗೋಷ್ಠಿಯಲ್ಲಿ ಕೆಹೆಚ್‌ಬಿ ಮಹರಾಜನಗರ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಬಿ.ಎಸ್.ಹರೀಶ್ ಮಾತನಾಡಿದರು.

ಕಾರ್ಯದರ್ಶಿ ಅಶೋಕ್ ಮಾತನಾಡಿ, ಬಡಾವಣೆ ನಿರ್ಮಾಣವಾಗಿ ಸುಮಾರು 20 ಕಳೆದಿವೆ. ಬಡಾವಣೆಯಲ್ಲಿ ಬೃಹತ್ ಗಾತ್ರದ ಟ್ಯಾಂಕ್ ನಿರ್ಮಾಣಗೊಂಡು, ಈ ಟ್ಯಾಂಕ್‌ಗೆ 2016 ರಲ್ಲಿ ಕಾವೇರಿ ನೀರು ಬಂದಿದೆ. ಆದರೆ ಈವರೆಗೂ ಬಡಾವಣೆಯಲ್ಲಿರುವ ಮನೆಗಳಿಗೆ ಕಾವೇರಿ ನೀರು ಸರಬರಾಜು ಮಾಡುವ ಪೈಪ್ ಲೈನ್ ಗಳನ್ನು ದುರಸ್ತಿ ಮಾಡದೆ ಕಾವೇರಿ ನೀರು ಮನೆಗಳಿಗೆ ಪೂರೈಕೆಯಾಗಿಲ್ಲ ಎಂದರು.

ಮಂಡ್ಯದಲ್ಲಿ ಉಪ ಲೋಕಾಯುಕ್ತರ ಕಾರ್ಯಕ್ರಮ

ಮಂಡ್ಯ ಮೇ 15– ಗೌರವಾನ್ವಿತ ನ್ಯಾಯಮೂರ್ತಿ ಹಾಗೂ ಉಪಲೋಕಾಯುಕ್ತರಾದ ಬಿ.ವೀರಪ್ಪ ಅವರು ಮಂಡ್ಯ ಜಿಲ್ಲೆಯ ಪ್ರವಾಸ ಕಾರ್ಯಕ್ರಮವನ್ನು ಪರಿಷ್ಕರಿಸಿದ್ದು, ಅವರು ಮೇ 26 ರಿಂದ 29 ರವರೆಗೆ ಮಂಡ್ಯ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಸಿ. ಶಿವಾನಂದಮೂರ್ತಿ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಧಿಕಾರಿಗಳ ಸಭೆ ನಡೆಸಿ ಮಾತನಾಡಿದರು. ಉಪಲೋಕಾಯುಕ್ತರು ಸಾರ್ವಜನಿಕರಿಂದ ಅಂಬೇಡ್ಕರ್ ಭವನದಲ್ಲಿ ಮೇ 28 ರಂದು ದೂರು ಸ್ವೀಕರಿಸಲಿದ್ದಾರೆ. ಈ ಕುರಿತು ವ್ಯಾಪಕ ಪ್ರಚಾರವಾಗಬೇಕು ಎಂದರು.

ಎಲ್ಲಾ ಗ್ರಾಮ ಪಂಚಾಯಿತಿಯ ಪಿ.ಡಿ.ಓ.ಗಳು ಉಪಲೋಕಾಯುಕ್ತರು ಆಗಮಿಸುವ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಲು ಬ್ಯಾನರ್‌ಗಳನ್ನು ಅಳವಡಿಸಬೇಕು. ಅಂಬೇಡ್ಕರ್ ಭವನದಲ್ಲಿ ಸಾರ್ವಜನಿಕರ ದೂರು ಸ್ವೀಕಾರ ಕಾರ್ಯಕ್ರಮ ಹಾಗೂ ಮಂಡ್ಯ ಜಿಲ್ಲೆಗೆ ಸಂಬಂಧಿಸಿದಂತೆ ತನಿಖೆಗೆ ಬಾಕಿ ಇರುವ ಪ್ರಕರಣಗಳ ವಿಚಾರಣೆ ನಡೆಸಲಿದ್ದಾರೆ ಹಾಗೂ ಸಾರ್ವಜನಿಕರಿಂದ ದೂರು ಸಹ ಸ್ವೀಕರಿಸಿ ವಿಚಾರಣೆ ನಡೆಸಲಿದ್ದಾರೆ.

ಪಶ್ಚಿಮ ವಾಹಿನಿಯಲ್ಲಿ ವೀರ ಮದಕರಿ ಪುಣ್ಯ ಸ್ಮರಣೆ ಆಚರಣೆ



ಪಶ್ಚಿಮ ವಾಹಿನಿಯಲ್ಲಿ ವೀರ ಮದಕರಿ ನಾಯಕನ ಪುಣ್ಯ ಸ್ಮರಣೆ ಆಚರಿಸಲಾಯಿತು.

ಶ್ರೀರಂಗಪಟ್ಟಣ(ವಿನಯ್): ಪಟ್ಟಣದ ಹೊರವಲಯದಲ್ಲಿರುವ ಪಶ್ಚಿಮವಾಹಿನಿಯಲ್ಲಿ ವೀರ ಮದಕರಿ ನಾಯಕನ ಪುಣ್ಯ ಸ್ಮರಣೆ ನಡೆಯಿತು.

ಹಿಂದೂ ರಾಷ್ಟ್ರ ಸಂಕಲ್ಪ ಸಮಿತಿ ತುಮಕೂರು ಭಜರಂಗ ಸೇನೆ, ಜೀವಧಾರೆ ಟ್ರಸ್ಟ್ ಹಾಗೂ ಮದಕರಿ ನಾಯಕರ ಬಳಗ ಚಿತ್ರದುರ್ಗ ಹಾಗೂ ಹಿಂದು ಜಾಗರಣ ವೇದಿಕೆ ಸಂಯುಕ್ತಾಶ್ರಯದಲ್ಲಿ ಮದಕರಿ ನಾಯಕನ ಪುಣ್ಯ ಸ್ಮರಣೆ ಕಾರ್ಯಕ್ರಮ ಜರುಗಿತು.

ಪಟ್ಟಣದ ಶ್ರೀರಂಗನಾಥ ದೇವಾಲಯದ ಮುಂಭಾಗದಲ್ಲಿ ಹಿಂದೂಪರ ಸಂಘಟನೆಗಳ ಕಾರ್ಯಕರ್ತರು ಜಮಾಯಿಸಿ, ಮದಕರಿ ನಾಯಕನ ಭಾವಚಿತ್ರವಿದ್ದ ಮೆರವಣಿಗೆ ರಥಕ್ಕೆ ಅಭಿನವ ಆಲಶ್ರೀ ಸ್ವಾಮಿಗಳು ಚಾಲನೆ ನೀಡಿದರು.

ಪಶ್ಚಿಮ ವಾಹಿನಿಯವರೆಗೂ ಪಾದಯಾತ್ರೆ ಮೂಲಕ ರಥದ ಮೆರವಣಿಗೆ ನಡೆಸಿದ ಕಾರ್ಯಕರ್ತರು, ಟಿಪ್ಪು ಸುಲ್ತಾನ್‌ನಿಂದ ಮೋಸ ಹೋದ ವೀರ ಮದಕರಿ ನಾಯಕನ ಸ್ಮಾರಕವನ್ನು ಮೃತಪಟ್ಟ ಜಾಗ ಪಶ್ಚಿಮವಾಹಿನಿಯಲ್ಲೇ ನಿರ್ಮಿಸಬೇಕು. ಇದರ ಜೊತೆ ರಾಜಮದಕರಿಯ ನಾಯಕರ ರಾಷ್ಟ್ರೀಯ ಮಟ್ಟದ ಅಧ್ಯಾಯನ ಕೇಂದ್ರವನ್ನು ಪ್ರಾರಂಭಿಸುವಂತೆ ಘೋಷಣೆಗಳ ಕೂಗಿ ಒತ್ತಾಯಿಸಿದರು.

ನಂತರ ಕಾವೇರಿ ನದಿ ಬಳಿ ಮದಕರಿ ನಾಕನ ಭಾವಚಿತ್ರವಿರಿಸಿ, ಪೂಜೆ ನೇರವೇರಿಸಿದರು. ಈ ವೇಳೆ ಪುರಸಭೆ ಪ್ರಭಾರ ಅಧ್ಯಕ್ಷ ಎಂ.ಎಲ್ ದಿನೇಶ್, ಹಿಂದೂ ಜಾಗರಣ ವೇದಿಕೆ ಸಂಚಾಲಕ ಚಂದನ್, ಮದಕರಿನಾಯಕ ಸಮಾಜದ ಮುಖಂಡ ರಂಗನಾಥ ಸ್ವಾಮಿ ನಾಯಕ, ಬಜರಂಗ ಸೇನೆ ರಾಜ್ಯ ಅಧ್ಯಕ್ಷ ಮಂಜುನಾಥ್, ಜೀವಧಾರೆ ಟ್ರಸ್ಟನ ನಟರಾಜು, ರಾಷ್ಟ್ರ ಸಮಿತಿಯ ಮಂಜು ಭಾರ್ಗವ, ಪುರಸಭೆ ಸದಸ್ಯರಾದ ಶ್ರೀನಿವಾಸ್, ಕೃಷ್ಣಪ್ಪ ಸೇರಿದಂತೆ ಮದಕರಿ ನಾಯಕನ ಅಭಿಮಾನಿ ಬಳಗದ ನೂರಾರು ಮಂದಿ ಭಾಗವಹಿಸಿದ್ದರು.

ಒಂದನೇ ಪುಟದಿಂದ

ನಾವು ಅವರ ಎದೆ ಸೀಳಿದೆವು!!

ಕೊಂಡಾಡಲು ಬಂದಿದ್ದೇನೆ. ಗಡಿಯಾಚೆಗಿನ ಪಾಕಿಸ್ತಾನದ ಪೋಸ್ಟ್‌ಗಳು ಮತ್ತು ಬಂಕರ್‌ಗಳನ್ನು ನೀವು ನಾಶಪಡಿಸಿದ ರೀತಿಯನ್ನು ಶತ್ರುಗಳು ಎಂದಿಗೂ ಮರೆಯುವುದಿಲ್ಲ. ಉಗ್ರರ ದಾಳಿ ಬಳಿಕ ಜನರು ಸಾಮಾನ್ಯವಾಗಿ ಉದ್ರೇಕದಲ್ಲಿದ್ದರು. ಆದರೆ, ನಿಮ್ಮ ಉತ್ಸಾಹ, ಹಿಡಿತವನ್ನು ಕಾಯ್ದುಕೊಂಡಿತ್ತು. ಬುದ್ಧಿವಂತಿಕೆಯಿಂದ ಶತ್ರುಗಳ ಅಡಗುತಾಣಗಳನ್ನು ನಾಶ ಮಾಡಿದರು. ಇಂದು ನಾನು ಇಲ್ಲಿಗೆ ರಕ್ಷಣಾ ಸಚಿವನಾಗಿಯೂ, ಸಂದೇಶ ವಾಹಕನಾಗಿಯೂ ಬಂದಿದ್ದೇನೆ. ಇಡೀ ದೇಶದ ಶುಭ ಹಾರೈಕೆಗಳು, ಪ್ರಾರ್ಥನೆಗಳು ಮತ್ತು ಕೃತಜ್ಞತೆಯನ್ನು ಹೊತ್ತುಕೊಂಡು ನಾನು ನಿಮ್ಮ ನಡುವೆ ಬಂದಿದ್ದೇನೆ. ಒಂದು ರೀತಿಯಲ್ಲಿ, ನಾನು ನಿಮ್ಮ ನಡುವೆ ಒಬ್ಬ ಪೋಸ್ಟ್‌ಮ್ಯಾನ್ ಆಗಿ ಬಂದು ದೇಶವಾಸಿಗಳಿಂದ ಸಂದೇಶವನ್ನು ತಂದಿದ್ದೇನೆ. ನಮ್ಮ ಪಡೆಗಳ ಬಗ್ಗೆ ನಮಗೆ ಹೆಮ್ಮೆ ಇದೆ ಎಂಬುದು ದೇಶದ ಸಂದೇಶ.

ಒಂದು ಬದ್ಧತೆ: ಆಪರೇಷನ್ ಸಿಂಧೂರ್ ಕೇವಲ ಒಂದು ಕಾರ್ಯಾಚರಣೆಯ ಹೆಸರಲ್ಲ, ಬದಲಾಗಿ ಅದು ಒಂದು ಬದ್ಧತೆಯಾಗಿದೆ. ಭಾರತವು ಕೇವಲ ರಕ್ಷಣೆಯನ್ನು ಮಾತ್ರ ಮಾಡುವುದಿಲ್ಲ ಎಂದು ತೋರಿಸಿದ ಬದ್ಧತೆ. ಸಮಯ ಬಂದಾಗ, ನಾವು ಕಠಿಣ ನಿರ್ಧಾರಗಳನ್ನು ತೆಗೆದುಕೊಳ್ಳುತ್ತೇವೆ. ಈ ಕಾರ್ಯಾಚರಣೆಯು ಪ್ರತಿಯೊಬ್ಬ ಸೈನಿಕನ ಕಣ್ಣಲ್ಲಿ ಕಂಡ ಕನಸಾಗಿತ್ತು, ನಾವು ಪ್ರತಿಯೊಂದು ಉಗ್ರರ ಅಡಗುತಾಣವನ್ನು ತಲುಪುತ್ತೇವೆ, ಅದು ಕಣಿವೆಗಳಲ್ಲಿ ಅಡಗಿರಲಿ ಅಥವಾ ಬಂಕರ್‌ಗಳಲ್ಲಿರಲಿ ಮತ್ತು ಶತ್ರುಗಳ ಎದೆಯನ್ನು ಹರಿದು ಹಾಕಿ, ಆ ಭಯೋತ್ಪಾದಕ ಅಡಗುತಾಣಗಳನ್ನು ನಾಶಪಡಿಸಿದ ನಂತರವೇ ನಾವು ಹಿಂತಿರುಗುತ್ತೇವೆ.

ಭಯೋತ್ಪಾದನೆಯ ವಿರುದ್ಧ ಭಾರತವು ಆಪರೇಷನ್ ಸಿಂಧೂರ್ ಅನ್ನು ಪ್ರಾರಂಭಿಸಿತು. ಇದು ಇತಿಹಾಸದಲ್ಲಿ ಇದೂವರೆಗಿನ ಅತಿದೊಡ್ಡ ಕಾರ್ಯಾಚರಣೆಯಾಗಿದೆ. ಭಾರತವು ಕಳೆದ 35ರಿಂದ 40 ವರ್ಷಗಳಿಂದ ಗಡಿಯಾಚೆಗಿನ ಭಯೋತ್ಪಾದನೆಯನ್ನು ಎದುರಿಸುತ್ತಿದೆ. ಭಯೋತ್ಪಾದನೆಯ ವಿರುದ್ಧ ನಾವು ಯಾವುದೇ ಹಂತಕ್ಕಾದರೂ ಹೋಗಬಹುದು ಎಂಬುದನ್ನು ಇಂದು ಇಡೀ ಜಗತ್ತಿಗೆ ತೋರಿಸಿಕೊಡಲಾಗಿದೆ.

ಸಿಂಧೂ ಜಲ ಒಪ್ಪಂದ ಪರಿಶೀಲನೆ ಇಲ್ಲ

ಭಯೋತ್ಪಾದನೆಗೆ ವಿಶ್ವಾಸಾರ್ಹವಾಗಿ ಪರಿಹಾರ ಕಂಡುಕೊಳ್ಳುವವರೆಗೂ ಈ ಸ್ಥಗಿತ ಮುಂದುವರಿಯುತ್ತದೆ. ಪಾಕಿಸ್ತಾನದ ಭಯೋತ್ಪಾದಕ ನೆಲೆಗಳ ವಿರುದ್ಧ ಭಾರತ ಗಂಭೀರವಾಗಿದೆ ಪಾಕಿಸ್ತಾನವು ಹಸ್ತಾಂತರಿಸಬೇಕಾದ ಭಯೋತ್ಪಾದಕರ ಪಟ್ಟಿ ನಮ್ಮಲ್ಲಿದೆ ಅವರು ತಕ್ಷಣವೇ ಉಗ್ರರನ್ನು ಬೆಂಬಲಿಸುವುದನ್ನು ನಿಲ್ಲಿಸಬೇಕು ಎಂದು ಜೈಶಂಕರ್ ಹೇಳಿದರು. ಪಾಕಿಸ್ತಾನದೊಂದಿಗಿನ ಯಾವುದೇ ಸಂವಾದ ಕೇವಲ ಭಯೋತ್ಪಾದನೆ ಕುರಿತಾಗಿರುತ್ತದೆ. ಇದು ಪ್ರಧಾನಮಂತ್ರಿ ಅವರ ನಿಲುವು ಮತ್ತು ರಾಷ್ಟ್ರೀಯ ಮಟ್ಟದ ಒಗ್ಗಟ್ಟಿನ ಮಾತಾಗಿದೆ ಎಂಬುದನ್ನು ಪುನರುಚ್ಚರಿಸಿದರು. ಜಮ್ಮು–ಕಾಶ್ಮೀರ ಕುರಿತು ಚರ್ಚೆಗೆ ಸಂಬಂಧಿಸಿದಂತೆ ಜೈಶಂಕರ್ ಅವರು ಪಾಕಿಸ್ತಾನ ಆಕ್ರಮಿತ ಕಾಶ್ಮೀರವನ್ನು ಖಾಲಿ ಮಾಡುವುದು ಮಾತ್ರ ಚರ್ಚೆಯ ವಿಷಯ. ಇತರ ಯಾವ ವಿಚಾರಗಳೂ ಚರ್ಚೆಗೆ ಬರುವುದೇ ಇಲ್ಲ ಎಂದರು. ಏ.22ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನ ಬೈಸರನ್ ವ್ಯಾಲಿಯಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ 25 ಭಾರತೀಯರು ಮತ್ತು ಒಬ್ಬ ನೇಪಾಳಿ ನಾಗರಿಕ ಮೃತಪಟ್ಟ ನಂತರ, ಭಾರತ ಸಿಂಧೂ ಜಲ ಒಪ್ಪಂದವನ್ನು ಸ್ಥಗಿತಗೊಳಿಸಿತು. ಇದಕ್ಕೆ ಪ್ರತಿಯಾಗಿ ಪಾಕಿಸ್ತಾನ ಮಾತುಕತೆಗೆ ಒಲವು ತೋರಿದರೂ ಭಾರತ ತನ್ನ ನಿಲುವನ್ನು ಬದಲಾಯಿಸಿಲ್ಲ.

ಕಾಶ್ಮೀರದ ಕುರಿತು ಚರ್ಚಿಸಲು ಉಳಿದಿರುವ ಏಕೈಕ ವಿಷಯವೆಂದರೆ ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ ಅಕ್ರಮವಾಗಿ ಆಕ್ರಮಿಸಿಕೊಂಡಿರುವ ಭಾರತೀಯ ಪ್ರದೇಶವನ್ನು ತೆರವುಗೊಳಿಸುವುದು ನಾವು ಆ ಚರ್ಚೆಗೆ ಮುಕ್ತರಾಗಿದ್ದೇವೆ. ಭಯೋತ್ಪಾದನೆಯ ಬಗ್ಗೆ ಏನು ಮಾಡಬೇಕೆಂದು ನಾವು ಅವರೊಂದಿಗೆ ಚರ್ಚಿಸಲು ಸಿದ್ಧರಿದ್ದೇವೆ. ಅವರಿಗೆ ಸಲಹೆಗಳನ್ನು ನೀಡಲು ಕೂಡ ಸಿದ್ಧರಿದ್ದೇವೆ. ಪಾಕಿಸ್ತಾನದಲ್ಲಿರುವ ಭಯೋತ್ಪಾದಕ ಮೂಲಸೌಕರ್ಯಗಳನ್ನು ನಾಶಪಡಿಸುವ ಮೂಲಕ ಭಾರತ ತನ್ನ ಗುರಿಗಳನ್ನು ಸಾಧಿಸಿದೆ ಎಂದು ಜೈಶಂಕರ್ ಹೇಳಿದ್ದಾರೆ.

ಸಂಭಾವನೆ 2,000 ರೂ. ಹೆಚ್ಚಳ

ಅತಿಥಿ ಶಿಕ್ಷಕರಿಗೆ 10,500 ಗೌರವ ಸಂಭಾವನೆಯನ್ನು ನಿಗದಿಪಡಿಸಿತ್ತು. ಇದೀಗ, ಈ ಮೊತ್ತಕ್ಕೆ ಹೆಚ್ಚುವರಿಯಾಗಿ ರೂ. 2,000 ಸೇರಿಸಲಾಗಿದ್ದು, ಪರಿಷ್ಕೃತ ಗೌರವ ಸಂಭಾವನೆಯು ಪ್ರಾಥಮಿಕ ಶಾಲಾ ಅತಿಥಿ ಶಿಕ್ಷಕರಿಗೆ ರೂ. 12,000 ಹಾಗೂ ಪ್ರೌಢಶಾಲಾ ಅತಿಥಿ ಶಿಕ್ಷಕರಿಗೆ ರೂ. 12,500 ಆಗಲಿದೆ. ಅಂತೆಯೇ, ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಅತಿಥಿ ಉಪನ್ಯಾಸಕರಿಗೂ ರೂ. 2,000ಗಳಷ್ಟು ಗೌರವಧನ ಹೆಚ್ಚಳವಾಗಲಿದೆ. ಈ ಹಿಂದೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಅತಿಥಿ ಉಪನ್ಯಾಸಕರಿಗೆ 12,000 ನಿಗದಿಯಾಗಿತ್ತು. ಇಂದಿನ ಆದೇಶದಿಂದ ಪರಿಷ್ಕೃತ ಗೌರವ ಸಂಭಾವನೆಯು ಅತಿಥಿ ಉಪನ್ಯಾಸಕರಿಗೆ ರೂ. 14,000 ಆಗಲಿದೆ.

ಮುಡಾದ 94 ಹೊರಗುತ್ತಿಗೆ ನೌಕರರಿಗೆ ಕೊಕ್

ಕೆಲಸ ವಹಿಸದೇ ವಾಪಸ್ ಕಳುಹಿಸಿದ್ದಾರೆ. 2025ರ ಫೆಬ್ರವರಿ 15ರಂದು ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತರು ಮುಡಾ ಕಮಿಷ್ನರ್‌ಗೆ ಪತ್ರ ಬರೆದಿದ್ದು, ಮುಡಾದಲ್ಲಿ ಮಂಜೂರಾಗಿರುವ 66 ಹುದ್ದೆಗಳ ಎದುರಾಗಿ 150 ಹುದ್ದೆಗಳ ಸೇವೆಯನ್ನು ಹೊರಗುತ್ತಿಗೆ ಆಧಾರದ ಮೇಲೆ ಪಡೆಯಲಾಗಿದ್ದು, ಹೆಚ್ಚುವರಿಯಾಗಿ 94 ಹೊರಗುತ್ತಿಗೆ ಆಧಾರದಲ್ಲಿ ನೇಮಿಸಿಕೊಳ್ಳಲಾಗಿದೆ ಎಂಬ ಮಾಹಿತಿ ಬಂದಿದೆ ಎಂದು ತಿಳಿಸಿದ್ದಾರೆ.

ಹೊರಗುತ್ತಿಗೆ ನೌಕರರನ್ನು ನೇಮಿಸಿಕೊಳ್ಳುವ ಬಗ್ಗೆ ಪ್ರಾಧಿಕಾರದ ಸಭೆ ಅನುಮತಿ ಪಡೆದು ಸರ್ಕಾರದ ಅನುಮೋದನೆ ಪಡೆಯಲಾಗಿದೆಯೇ, ಇಲ್ಲದಿದ್ದಲ್ಲಿ ಸೂಕ್ತ ವಿವರಣೆ ಸಲ್ಲಿಸಬೇಕು. ಪ್ರಸ್ತಾವಿತ 94 ಹುದ್ದೆಗಳಿಗೆ ತಗಲುವ ಆರ್ಥಿಕ ವೆಚ್ಚಗಳ ಬಗ್ಗೆ ಮಾಹಿತಿ ನೀಡುವಂತೆಯೂ ಆಯುಕ್ತರು ಸೂಚಿಸಿದ್ದರು.

ನಂತರ 2025ರ ಫೆಬ್ರವರಿ 17ರಂದು ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳ ಆಯುಕ್ತರಿಗೆ ಸುತ್ತೋಲೆ ಹೊರಡಿಸಿದ್ದ ಆಯುಕ್ತರು, ಹೊರಗುತ್ತಿಗೆ ಸಿಬ್ಬಂದಿ ನೇಮಿಸಿಕೊಳ್ಳಲು ಷರತ್ತುಗಳನ್ನು ವಿಧಿಸಿದ್ದರು. ಅದರ ಪ್ರಕಾರ, ಖಾಲಿ ಹುದ್ದೆಗಳಿಗೆ ಹೊರಗುತ್ತಿಗೆ ಮೇಲೆ ನೇಮಿಸಿಕೊಳ್ಳುವ ಉದ್ದೇಶವಿದ್ದಲ್ಲಿ, ವಿವರಗಳೊಂದಿಗೆ ಪ್ರಸ್ತಾವನೆ ಸಲ್ಲಿಸಿ ಆರ್ಥಿಕ ಇಲಾಖೆ ಅನುಮತಿ ಪಡೆಯಬೇಕು. ಮಂಜೂರಾದ ಹುದ್ದೆಗಳಿಲ್ಲದೆ ಹೊರಗುತ್ತಿಗೆ ಮೇಲೆ ನೇಮಿಸಿಕೊಂಡ ಎಲ್ಲಾ ನೇಮಕಾತಿಗಳನ್ನು ರದ್ದುಗೊಳಿಸಬೇಕು ಎಂದು ಆಯುಕ್ತರು ಖಡಾ ಖಂಡಿತವಾಗಿ ಸೂಚನೆ ನೀಡಿದ್ದರು.

ಜೊತೆಗೆ ಈ ಹಿಂದೆ 2018ರ ಡಿಸೆಂಬರ್ 29ರಂದು ಆರ್ಥಿಕ ಇಲಾಖೆ ಉಪಕಾರ್ಯದರ್ಶಿ ಪವನ್ ಕುಮಾರ್ ಮಾಲಪೇಟಿ ಅವರು ಆದೇಶ ಹೊರಡಿಸಿದ್ದು, ಇಲಾಖಾ ಮುಖ್ಯಸ್ಥರಿಗೆ ಹೊರಗುತ್ತಿಗೆ ಮೇಲೆ ಮಾನವ ಸಂಪನ್ಮೂಲವನ್ನು ಪಡೆದುಕೊಳ್ಳಲು ಪ್ರತ್ಯಾಯೋಜಿಸಿರುವ ಪೂರ್ಣ ಅಧಿಕಾರವನ್ನು ಹಿಂಪಡೆಯಲಾಗಿದೆ ಎಂದು ತಿಳಿಸಿದ್ದರು. ಇನ್ನು ಮುಂದೆ ಎಲ್ಲಾ ಇಲಾಖೆಗಳು ಗ್ರೂಪ್ 'ಡಿ', ಬೆರಳಚ್ಚುಗಾರರು, ಡಿಇಓ, ವಾಹನ ಚಾಲಕರ ಖಾಲಿ ಹುದ್ದೆಗಳಿಗೆ ಎದುರಾಗಿ ಹೊರಗುತ್ತಿಗೆ ಮೇಲೆ ನೇಮಿಸಿಕೊಳ್ಳಲು ಮಂಜೂರಾದ ಹುದ್ದೆಗಳು ಹಾಗೂ ಖಾಲಿ ಹುದ್ದೆಗಳ ವಿವರಗಳನ್ನು ಆರ್ಥಿಕ ಇಲಾಖೆಗೆ ಸಲ್ಲಿಸಿ ಕಡ್ಡಾಯವಾಗಿ ಅನುಮತಿ ಪಡೆಯಬೇಕೆಂದು ಆದೇಶಿಸಲಾಗಿತ್ತು.

ಈ ಹಿನ್ನೆಲೆಯಲ್ಲಿ ಮುಡಾದ 94 ಮಂದಿ ಹೊರಗುತ್ತಿಗೆ ನೌಕರರನ್ನು ಹೊರಗೆ ಕಳುಹಿಸಿರುವ ಎಂಡಿಎ, ಮುಂದಿನ ಪ್ರಕ್ರಿಯೆಗೆ ಸಿದ್ಧತೆ ಮಾಡಿಕೊಳ್ಳುತ್ತಿದೆ. ಮುಡಾ ಹಗರಣದ ತನಿಖೆಗೆ ದಾಖಲೆ ಪತ್ರ ಒದಗಿಸಲು ಬಳಸಿಕೊಂಡು ಈಗ 94 ಮಂದಿಯನ್ನು ಪ್ರಾಧಿಕಾರದ ಅಧಿಕಾರಿಗಳು ಮನೆಗೆ ಕಳುಹಿಸಿದ್ದಾರೆ.

ದ್ರೋಹ ಬಗೆದಿದೆ

ಎಂಬ ಅಂಶದ ಬಗ್ಗೆ ಎರಡೂ ದೇಶಗಳ ನಡುವೆ ಇದೀಗ ರೂಪುಗೊಂಡಿರುವ ತಿಳುವಳಿಕೆ ಹೀಗೆ ಮಾಡಿದರೆ ವಿಷಯ ಹೊರಬರುತ್ತದೆ ಮತ್ತು ಬಹಳ ದೂರ ಹೋಗುತ್ತದೆ. ನಮ್ಮ ಪ್ರಧಾನಿ ಕೂಡ ಭಯೋತ್ಪಾದನೆ ಮತ್ತು ಮಾತುಕತೆ ಒಟ್ಟಿಗೆ ಹೋಗುವುದಿಲ್ಲ. ಮಾತುಕತೆ ನಡೆದರೆ ಅದು ಭಯೋತ್ಪಾದನೆ ಮತ್ತು ಪಿಓಕೆ ಬಗ್ಗೆ ಎಂದು ಸ್ಪಷ್ಟಪಡಿಸಿದ್ದಾರೆ.

ನಮ್ಮ ಸೇನಾ ಪಡೆಗಳು ಮತ್ತು ಸೈನಿಕರನ್ನು ದೇಶಾದ್ಯಂತ ಗೌರವದಿಂದ ನೋಡಲಾಗುತ್ತದೆ. ಸಶಸ್ತ್ರ ಪಡೆಗಳಿಗೆ ಗೌರವ ನೀಡುವುದರ ಜೊತೆಗೆ, ಅವರಿಗೆ ಅಗತ್ಯವಿರುವ ಆಧುನಿಕ ಶಸ್ತ್ರಾಸ್ತ್ರಗಳು ಮತ್ತು ಸಲಕರಣೆಗಳನ್ನು ಒದಗಿಸುವ ರಾಷ್ಟ್ರವೇ ಬಲಿಷ್ಠ ರಾಷ್ಟ್ರ ಇಂದು ಸರ್ಕಾರ ನಮ್ಮ ಪಡೆಗಳಿಗಾಗಿ ಇದನ್ನೆಲ್ಲಾ ಮಾಡುತ್ತಿದೆ ಎಂಬುದು ನನಗೆ ಹೆಮ್ಮೆ ತಂದಿದೆ. ನಮ್ಮ ಸೇನಾ ಪಡೆಗಳು ಯಾವುದೇ ಪರಿಸ್ಥಿತಿ ಎದುರಾದರೂ ಎದುರಿಸಲು ಸನ್ನದ್ಧ ವಾಗಿವೆ. ಇದಕ್ಕಾಗಿ ನಾವು ನಮ್ಮ ಸೇನೆಗಳಿಗೆ ವಿಶ್ವ ದರ್ಜೆಯ ಮತ್ತು ಉತ್ತಮ ಗುಣಮಟ್ಟದ ಉಪಕರಣಗಳನ್ನು ಒದಗಿಸುತ್ತಿದ್ದೇವೆ ಇಂದು, ಆಧುನಿಕ ರೈಫಲ್‌ಗಳು, ಕ್ಷಿಪಣಿ ರಕ್ಷಣಾ ಗುರಾಣಿಗಳು ಮತ್ತು ಡ್ರೋನ್‌ಗಳಂತಹ ಅನೇಕ ಹೊಸ ಪೀಳಿಗೆಯ ಉಪಕರಣಗಳು ಭಾರತದಲ್ಲಿ ವೇಗವಾಗಿ ತಯಾರಿಸಲ್ಪಡುತ್ತಿವೆ. ಇದಲ್ಲದೆ, ಗಡಿ ಪ್ರದೇಶಗಳಲ್ಲಿ ನಾವು ಮಾಡಿದ ಕೆಲಸವನ್ನು ನೀವೆಲ್ಲರೂ ನೋಡುತ್ತಿರಬೇಕು. LAC ಮತ್ತು LoC ಯಲ್ಲಿ ಇಂದು ಇರುವ ಸಂಪರ್ಕವು ಹಿಂದೆಂದೂ ಇರಲಿಲ್ಲ ಎಂದು ತಿಳಿಸಿದರು.

ಮೂವರು ಜೈಶ್ ಉಗ್ರರ ಹತ್ಯೆ

ದಕ್ಷಿಣ ಕಾಶ್ಮೀರ ಜಿಲ್ಲೆಯ ಶುಕ್ರೂ ಕೆಲ್ಲರ್ ಪ್ರದೇಶದಲ್ಲಿ ಭಯೋತ್ಪಾದಕರು ಇರುವ ಬಗ್ಗೆ ನಿರ್ದಿಷ್ಟ ಮಾಹಿತಿಯ ಆಧಾರದ ಮೇಲೆ ಭದ್ರತಾ ಪಡೆಗಳು ಅಲ್ಲಿ ಸುತ್ತುವರಿದು ಶೋಧ ಕಾರ್ಯಾಚರಣೆ ಪ್ರಾರಂಭಿಸಿದ್ದವು. ಭಯೋತ್ಪಾದಕರು ಪ್ರತಿದಾಳಿ ನಡೆಸಿದ್ದರು. ಇದು ಪರಸ್ಪರ ನಡುವೆ ಗುಂಡಿನ ಚಕಮಕಿಗೆ ಕಾರಣವಾಗಿತ್ತು.

ಶರಣಾಗುವಂತೆ ಬೇಡಿಕೊಂಡಿದ್ದ ತಾಯಿ: ಪುಲ್ವಾಮಾದಲ್ಲಿ ನಡೆದ ಎನ್‌ಕೌಂಟರ್‌ನಲ್ಲಿ ಮೂವರು ಉಗ್ರರು ಸಾವನ್ನಪ್ಪಿದ್ದಾರೆ. ಈ ಪೈಕಿ ಓರ್ವ ಉಗ್ರ ಸಾಯುವ ಮುನ್ನ ತನ್ನ ಕುಟುಂಬಸ್ಥರಿಗೆ ವಿಡಿಯೋ ಕಾಲ್ ಮಾಡಿದ್ದು, ಆತನ ತಾಯಿ ಶರಣಾಗುವಂತೆ ಬೇಡಿಕೊಂಡಿದ್ದಾರೆ.

ಈ ಎನ್‌ಕೌಂಟರ್ ಮುನ್ನ ಜೈಶ್ ಎ ಮೊಹಮ್ಮದ್ ಉಗ್ರ ಅಮೀರ್ ನಜೀರ್ ತನ್ನ ಕುಟುಂಬಸ್ಥರಿಗೆ ವಿಡಿಯೋ ಕಾಲ್ ಮಾಡಿದ್ದು, ಈ ವೇಳೆ ಆತನ ತಾಯಿ ನೀನು ಶರಣಾಗು, ನಿನ್ನ ಜೀವ ಉಳಿಸಿಕೋ ಎಂದು ಬೇಡಿಕೊಂಡಿದ್ದಾರೆ.

ವೈರಲ್ ಆಗಿರುವ ವಿಡಿಯೋದಲ್ಲಿ, ಉಗ್ರ ಅಮೀರ್ ನಜೀರ್ ಎಕೆ–47 ಗನ್ ಹಿಡಿದುಕೊಂಡು ಮನೆಯೊಂದರಲ್ಲಿ ಅಡಗಿ ಕುಳಿತಿದ್ದ. ಈ ವೇಳೆ ಮನೆಗೆ ವಿಡಿಯೋ ಕಾಲ್ ಮಾಡಿದ್ದಾನೆ. ತಾಯಿ ಹಾಗೂ ಸಹೋದರಿ ಜೊತೆ ಮಾತನಾಡಿದ್ದು, ಸಹೋದರನ ಬಗ್ಗೆ ವಿಚಾರಿಸಿದ್ದಾನೆ. ಈ ವೇಳೆ ತಾಯಿ ನೀನು ಶರಣಾಗಿ, ನಿನ್ನ ಜೀವ ಉಳಿಸಿಕೋ ಎಂದು ಬೇಡಿಕೊಂಡಿದ್ದಾರೆ. ಜೊತೆಗೆ ಆತನ ಕುಟುಂಬಸ್ಥರು ಕೂಡ ಮನವಿ ಮಾಡಿಕೊಂಡಿದ್ದಾರೆ. ಆದರೆ ಅಮೀರ್, ಸೇನೆ ಮುಂದೆ ಬರಲಿ ನಾನು ನೋಡಿಕೊಳ್ಳುತ್ತೇನೆ ಎಂದು ಹೇಳಿದ್ದಾನೆ.

ಉಲ್ಟಾ ಹೊಡೆದ ಡೊನಾಲ್ಡ್ ಟ್ರಂಪ್

ಕತಾರ್‌ನಲ್ಲಿ ಸೇನಾ ಸಿಬ್ಬಂದಿಯನ್ನು ಉದ್ದೇಶಿಸಿ ಮಾತನಾಡಿದ ಡೊನಾಲ್ಡ್ ಟ್ರಂಪ್, ಭಾರತ–ಪಾಕಿಸ್ತಾನ ಕದನ ವಿರಾಮಕ್ಕೆ ನಾನು ಕಾರಣ ಎಂದು ಹೇಳಲು ಬಯಸುವುದಿಲ್ಲ. ಆದರೆ, ಪಾಕಿಸ್ತಾನ ಮತ್ತು ಭಾರತದ ನಡುವಿನ ಸಮಸ್ಯೆಯನ್ನು ಪರಿಹರಿಸಲು ನಾನು ಸಹಾಯ ಮಾಡಿದ್ದೇನೆ. ಪರಿಸ್ಥಿತಿ ತುಂಬಾ ಹದಗೆಟ್ಟಿತ್ತು. ಕ್ಷಿಪಣಿಗಳನ್ನು ಬಳಸುವ ಹಂತಕ್ಕೆ ಹೋಗುತ್ತಿದ್ದರು. ನಾವು ಅದನ್ನು ಸರಿಪಡಿಸಿದ್ದೇವೆ. ಈಗ ಎಲ್ಲವೂ ಶಾಂತವಾಗಿದೆ ಎಂದು ನಾನು ಭಾವಿಸುತ್ತೇನೆ ಎಂದಿದ್ದಾರೆ. ಭಾರತ ಮತ್ತು ಪಾಕಿಸ್ತಾನದೊಂದಿಗೆ ವ್ಯಾಪಾರದ ಬಗ್ಗೆ ಮಾತನಾಡಿದ್ದಾಗಿ ಟ್ರಂಪ್ ಇದೇ ವೇಳೆ ಹೇಳಿದ್ದಾರೆ. ನಾವು ಅವರೊಂದಿಗೆ ವ್ಯಾಪಾರದ ಬಗ್ಗೆ ಮಾತನಾಡಿದ್ದೇವೆ. ಯುದ್ಧದ ಬದಲು ವ್ಯಾಪಾರ ಮಾಡೋಣ ಎಂದು ಹೇಳಿದೆವು. ಪಾಕಿಸ್ತಾನ ಅದಕ್ಕೆ ಸಂತೋಷದಿಂದ ಒಪ್ಪಿಕೊಂಡಿತು. ಭಾರತವು ಕೂಡ ಒಪ್ಪಿಕೊಂಡಿದೆ. ಅವರು ಸುಮಾರು ಸಾವಿರ ವರ್ಷಗಳಿಂದ ಹೋರಾಡುತ್ತಿದ್ದಾರೆ. ನಾನು ಅದನ್ನು ಸರಿಪಡಿಸಬಲ್ಲೆ ಎಂದು ಹೇಳಿದೆ. ನಾನು ಏನನ್ನಾದರೂ ಸರಿಪಡಿಸಬಲ್ಲೆ. ಎಲ್ಲರನ್ನು ಒಟ್ಟಿಗೆ ಸೇರಿಸೋಣ ಎಂದು ಟ್ರಂಪ್ ಹೇಳಿದ್ದಾರೆ.

ಟ್ರಂಪ್ ಹೇಳಿಕೆಯನ್ನು ತಳ್ಳಿ ಹಾಕಿದ್ದ ಭಾರತ: ಆದರೆ ಡೊನಾಲ್ಡ್ ಟ್ರಂಪ್ ಹೇಳಿಕೆಯನ್ನು ಭಾರತ ಬಲವಾಗಿ ತಳ್ಳಿ ಹಾಕಿತ್ತು. ಅಮೆರಿಕದ ಮಧ್ಯಸ್ಥಿಕೆ ಅಥವಾ ವ್ಯಾಪಾರದ ಒತ್ತಡದಿಂದ ಕದನ ವಿರಾಮವಾಗಿಲ್ಲ ಎಂದು ಭಾರತದ ವಿದೇಶಾಂಗ ಸಚಿವಾಲಯವು ಆರು ಅಂಶಗಳ ವಿವರವಾದ ಹೇಳಿಕೆಯನ್ನು ಬಿಡುಗಡೆ ಮಾಡಿತ್ತು. ಭಾರತ ಮತ್ತು ಪಾಕಿಸ್ತಾನದ ಮಿಲಿಟರಿ ಕಾರ್ಯಾಚರಣೆಗಳ ಮಹಾ ನಿರ್ದೇಶಕರ ನಡುವೆ ನೇರವಾಗಿ ಮಾತುಕತೆ ನಡೆದು ಕದನ ವಿರಾಮ ಘೋಷಣೆಯಾಗಿತ್ತು.

'ಎಣ್ಣೆ' ಪ್ರಿಯರಿಗೆ ಶಾಕ್; ಬಿಯರ್ ಬೆಲೆ ಏರಿಕೆ

ಬೆಂಗಳೂರು, ಮೇ 15– ಕಳೆದ ಎರಡು ವರ್ಷಗಳಿಂದ ಆಗಾಗ ಮದ್ಯದ ಬೆಲೆ ಏರಿಕೆ ಮಾಡುತ್ತಾ, ಮದ್ಯಪ್ರಿಯರಿಗೆ ಶಾಕ್ ನೀಡುತ್ತಾ ಬಂದಿರುವ ರಾಜ್ಯ ಸರ್ಕಾರ ಇದೀಗ ಮತ್ತೇ ಬಿಯರ್ ಬೆಲೆ ಏರಿಕೆ ಮಾಡಿದೆ. ಸದ್ಯ ಕಳೆದ ಎರಡು ವರ್ಷದಲ್ಲಿ ನಾಲ್ಕನೇ ಬಾರಿ ಬಿಯರ್ ದರ ಏರಿಕೆ ಮಾಡಲಾಗಿದೆ. ಐಎಂಎಲ್ ಮೊದಲ ಮೂರು ಸ್ಲ್ಯಾಬ್‌ಗಳಿಗೆ (180 ಮಿ.ಲೀ) 15 ರೂಪಾಯಿ ಹಾಗೂ ನಾಲ್ಕನೇ ಸ್ಲ್ಯಾಬ್‌ಗೆ 5 ರೂಪಾಯಿ ಏರಿಕೆ ಮಾಡಲಾಗಿದೆ.



2025ರ ಆರಂಭದಲ್ಲಿಯೇ ದೇಸೀಯ ಮದ್ಯ (ಐಎಂಎಲ್) ಮತ್ತು ಬಿಯರ್ ಮೇಲಿನ ಹೆಚ್ಚುವರಿ ಅಬಕಾರಿ ಸುಂಕವನ್ನು (ಎಇಡಿ) ಹೆಚ್ಚಿಸಿತ್ತು. ಇದೀಗ ರಾಜ್ಯ ಸರ್ಕಾರವು ಮತ್ತೆ ಎಇಡಿ ಏರಿಕೆ ಮಾಡಿದೆ. ಪರಿಷ್ಕೃತ ದರವು ಮೇ 15 ರಿಂದಲೇ (ಇಂದಿನಿಂದ) ಜಾರಿಯಾಗಿದೆ.

ರಾಜ್ಯ ಸರ್ಕಾರವು ಶೇ.5ರಷ್ಟು ಹೆಚ್ಚುವರಿ ಅಬಕಾರಿ ಸುಂಕವನ್ನು ವಿಧಿಸಿದ ಬಳಿಕ ಈ ಬೆಲೆ ಏರಿಕೆ ಜಾರಿಯಾಗಿದೆ. ಬಿಯರ್ ಮೇಲಿನ AED ಅನ್ನು 195% ರಿಂದ 200%ಕ್ಕೆ ಹೆಚ್ಚಿಸಲಾಗಿದೆ ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ. ಸರ್ಕಾರವು AED ಅನ್ನು ಶೇ.10 ರಷ್ಟು ಹೆಚ್ಚಿಸಲು ಯೋಜಿಸಿತ್ತು, ಆದರೆ ಫೆಡರೇಶನ್ ಆಫ್ ವೈನ್ ಮರ್ಚೆಂಟ್ಸ್ ಅಸೋಸಿಯೇಷನ್ ಕರ್ನಾಟಕ ಮದ್ಯದ ಬೆಲೆಗಳಲ್ಲಿ ಪದೇ ಪದೆ ತೀವ್ರ ಏರಿಕೆ ಮಾಡುತ್ತಿರುವುದನ್ನು ವಿರೋಧಿಸಿದ್ದರಿಂದ ಅದನ್ನು ಶೇ.10 ಬದಲಿಗೆ ಶೇ.5ರಷ್ಟು ಏರಿಕೆ ಮಾಡಲು ನಿರ್ಧರಿಸಿದೆ.

ಈಗ ಎಇಡಿ ಏರಿಕೆಯೊಂದಿಗೆ ಪ್ರೀಮಿಯಂ ಅಥವಾ ಇತರೆ ಬಿಯರ್ ಬ್ರ್ಯಾಂಡ್‌ಗಳ ಬೆಲೆಯು ಉತ್ಪಾದನಾ ವೆಚ್ಚವನ್ನು ಅವಲಂಬಿಸಿ ಪ್ರತಿ ಬಾಟಲಿಗೆ ಸರಾಸರಿ 10 ರಿಂದ 15 ರೂಪಾಯಿ ಏರಿಕೆ ಆಗಬಹುದೆಂದು ನಿರೀಕ್ಷಿಸಲಾಗಿದೆ. ಪ್ರೀಮಿಯಂ ಬ್ರ್ಯಾಂಡ್‌ಗಳ ಬಿಯರ್ ದರವು ಬಾಟಲಿಗೆ 10 ರೂಪಾಯಿ ಏರಿಕೆಯಾಗುವ ಸಾಧ್ಯತೆ ಇದೆ.

ಮಧ್ಯಮ ಶ್ರೇಣಿಯ ಮತ್ತು ಅಗ್ಗದ ಸ್ಥಳೀಯ ಬ್ರ್ಯಾಂಡ್‌ಗಳ ಬಿಯರ್ ದರ 5 ರೂಪಾಯಿವರೆಗೆ ಏರಿಕೆಯಾಗುವ ಸಾಧ್ಯತೆಯಿದೆ. ಬೆಲೆ ಏರಿಕೆಯು ಬ್ರ್ಯಾಂಡ್‌ನಿಂದ ಬ್ರ್ಯಾಂಡ್‌ಗೆ ವ್ಯತ್ಯಾಸವಾಗಲಿದೆ. ಆಲ್ಕೋಹಾಲ್ ಪ್ರಮಾಣ ಹೆಚ್ಚಿರುವ ಬ್ರ್ಯಾಂಡ್‌ಗಳ ಬಿಯರ್ ಬೆಲೆಯು ಗಣನೀಯವಾಗಿ ಏರಿಕೆಯಾಗಲಿದೆ ಎಂದು ಅಬಕಾರಿ ಇಲಾಖೆಯ ಮೂಲಗಳು ತಿಳಿಸಿವೆ.

ಪಾಕ್ ಬೆಂಬಲಿಸಿದ್ದ ಟರ್ಕಿಗೆ ಭಾರತದಿಂದ ದೊಡ್ಡ ಹೊಡೆತ: ಸೆಲೆಬಿ ಏರ್‌ಪೋರ್ಟ್ ಸರ್ವೀಸಸ್‌ಗೆ ಭದ್ರತಾ ಅನುಮತಿ ರದ್ದು

ನವದೆಹಲಿ, ಮೇ 15– ಟರ್ಕಿ ಕಂಪನಿ ಸೆಲೆಬಿ ಏರ್‌ಪೋರ್ಟ್ ಸರ್ವೀಸಸ್‌ಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ದೊಡ್ಡ ನಿರ್ಧಾರ ತೆಗೆದುಕೊಂಡಿದೆ. ಸರ್ಕಾರ ಸೆಲೆಬಿ ಕಂಪನಿಯ ಭದ್ರತಾ ಅನುಮತಿಯನ್ನು ರದ್ದುಗೊಳಿಸಿದೆ. ಈ ಕಂಪನಿಯು ಮುಂಬೈ ವಿಮಾನ ನಿಲ್ದಾಣದಲ್ಲಿ ನೆಲದ ನಿರ್ವಹಣೆಯನ್ನು ಮಾಡುತ್ತದೆ. ಇದರರ್ಥ ಕಂಪನಿಯು ವಿಮಾನ ನಿಲ್ದಾಣದಲ್ಲಿ ಪ್ರಯಾಣಿಕರಿಗೆ ಸಹಾಯ ಮಾಡುವುದು, ಸಾಮಾನುಗಳನ್ನು ನೋಡಿಕೊಳ್ಳುವುದು ಮತ್ತು ವಿಮಾನಗಳನ್ನು ನಿರ್ವಹಿಸಲು ಸಹಾಯ ಮಾಡುವಂತಹ ಕೆಲಸಗಳನ್ನು ನಿರ್ವಹಿಸುತ್ತದೆ.

ಮುಂಬೈ ವಿಮಾನ ನಿಲ್ದಾಣದ ನೆಲದ ಕಾರ್ಯಾಚರಣೆಗಳಲ್ಲಿ ಸುಮಾರು ಶೇಕಡ 70ರಷ್ಟನ್ನು ಸೆಲೆಬಿ ಕಂಪನಿ ನಿರ್ವಹಿಸುತ್ತದೆ. ಇದರಲ್ಲಿ ಪ್ರಯಾಣಿಕರ ಸೇವೆ, ಹೊರೆ ನಿಯಂತ್ರಣ, ವಿಮಾನ ಕಾರ್ಯಾಚರಣೆಗಳು, ಸರಕು ಮತ್ತು ಅಂಚೆ ಸೇವೆ, ಗೋದಾಮು ಮತ್ತು ಸೇತುವೆ ಕಾರ್ಯಾಚರಣೆಗಳು ಸೇರಿವೆ. ಸೆಲೆಬಿ ಏರ್‌ಪೋರ್ಟ್ ಸರ್ವೀಸಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್‌ಗೆ ಗ್ರೌಂಡ್ ಹ್ಯಾಂಡ್ಲಿಂಗ್ ಏಜೆನ್ಸಿಯಾಗಿ ಡಿಜಿ, ಬಿಸಿಎಎಸ್ ಅವರು 2022ರ ನವೆಂಬರ್ 21ರಂದು ಭದ್ರತಾ ಅನುಮತಿಯನ್ನು ನೀಡಿದ್ದಾರೆ ಎಂದು ಸರ್ಕಾರಿ ಆದೇಶದಲ್ಲಿ ತಿಳಿಸಲಾಗಿದೆ. ಆದರೆ ಈಗ ಡಿಜಿ, ಬಿಸಿಎಎಸ್ ಅವರಿಗೆ ಇರುವ ಅಧಿಕಾರವನ್ನು ಬಳಸಿಕೊಂಡು, ಸೆಲೆಬಿ ಏರ್‌ಪೋರ್ಟ್ ಸರ್ವೀಸಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್‌ನ ಭದ್ರತಾ ಅನುಮತಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಲಾಗಿದೆ. ದೇಶದ ಭದ್ರತೆಯನ್ನು ಗಮನದಲ್ಲಿಟ್ಟುಕೊಂಡು ಈ ನಿರ್ಧಾರ ತೆಗೆದುಕೊಳ್ಳಲಾಗಿದೆ.

ವಾಸ್ತವವಾಗಿ, ಟರ್ಕಿಶ್ ಅಧ್ಯಕ್ಷ ಎರ್ಡೋಗನ್ ಕಾಶ್ಮೀರ ವಿಷಯದಲ್ಲಿ ಪಾಕಿಸ್ತಾನವನ್ನು ಬಹಿರಂಗವಾಗಿ ಬೆಂಬಲಿಸಿದ್ದರು. ಇದು ಭಾರತ ಮತ್ತು ಟರ್ಕಿ ನಡುವಿನ ಸಂಬಂಧವನ್ನು ಹದಗೆಡಿಸಿದೆ. ಇದಕ್ಕೆ ಪ್ರತಿಕ್ರಿಯೆಯಾಗಿ ಭಾರತವು ತನ್ನ ವಿದೇಶಾಂಗ ನೀತಿಯನ್ನು ಸಹ ಬದಲಾಯಿಸಿದೆ. ಭಾರತವು ಟರ್ಕಿಯನ್ನು ವಿರೋಧಿಸುವ ದೇಶಗಳೊಂದಿಗೆ ನಿಕಟವಾಗಿ ಕೆಲಸ ಮಾಡುತ್ತಿದೆ ಮತ್ತು ಈ ಪ್ರದೇಶದ ಪ್ರಮುಖ ಶಕ್ತಿಗಳೊಂದಿಗೆ ಸ್ನೇಹವನ್ನು ಬೆಳೆಸುತ್ತಿದೆ.

ಭಾರತ–ಪಾಕ್ ಕದನ ವಿರಾಮದಲ್ಲಿ ಅಮೆರಿಕಾದ ಯಾವ ಪಾತ್ರವೂ ಇಲ್ಲ

● ರಾಜ್ಯಸಭಾ ಸದಸ್ಯರೂ ಆದ ರಾಜ್ಯ ಬಿಜೆಪಿ ಉಸ್ತುವಾರಿ ಡಾ.ರಾಧಾಮೋಹನ್‌ದಾಸ್ ಅಗರವಾಲ್ ಸ್ಪಷ್ಟನೆ ● ಪಾಕ್‌ನ ಡಿಜಿಎಂಓ ನಮ್ಮ ದೇಶದ ಡಿಜಿಎಂಓಗೆ ಪದೇ ಪದೆ ಕರೆ ಮಾಡಿ, ಪರಿ ಪರಿಯಾಗಿ ಬೇಡಿದ್ದಕ್ಕಾಗಿ ಕದನ ವಿರಾಮ ಏರ್ಪಟ್ಟಿತು ● ಅಮೆರಿಕಾ ಅಧ್ಯಕ್ಷ ಟ್ರಂಪ್‌ಗೆ ಎಲ್ಲದಕ್ಕೂ ಮೂಗು ತೂರಿಸುವ ಚಟವಿದೆ

ಬೆಂಗಳೂರು, ಮೇ 15(ಕೆಎಂಶಿ)– ಭಾರತ–ಪಾಕಿಸ್ತಾನ ನಡುವಿನ ಕದನ ವಿರಾಮದಲ್ಲಿ ಅಮೆರಿಕಾದ ಯಾವ ಪಾತ್ರವೂ ಇಲ್ಲ ಎಂದು ಬಿಜೆಪಿಯ ಹಿರಿಯ ನಾಯಕ ರಾಜ್ಯಸಭಾ ಸದಸ್ಯ ಹಾಗೂ ರಾಜ್ಯ ಉಸ್ತುವಾರಿ ಹೊಣೆ ಹೊತ್ತ ಡಾ.ರಾಧಾಮೋಹನ್ ದಾಸ್ ಅಗರವಾಲ್ ಇಂದಿಲ್ಲಿ ಸ್ಪಷ್ಟಪಡಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ಗೆ ಎಲ್ಲಾ ವಿಷಯಗಳಲ್ಲೂ ಮೂಗು ತೂರಿಸುವ ಚಟ ಎಂದು ವ್ಯಂಗ್ಯವಾಡಿದರು. ಯುದ್ಧ ನಡೆಯುವ ಸಂದರ್ಭದಲ್ಲಿ ಪಾಕಿಸ್ತಾನದ ಡಿಜಿಎಂಓ, ನಮ್ಮ ಡಿಜಿಎಂಓಗೆ ಎರಡು ಬಾರಿ ಫೋನ್ ಮಾಡಿದ್ದರು. ಯುದ್ಧ ನಿಲ್ಲಿಸುವಂತೆ ಅವರು ಪರಿಪರಿಯಾಗಿ ಬೇಡಿಕೊಂಡ ನಂತರ ಯುದ್ಧಕ್ಕೆ ವಿರಾಮ ನೀಡಲಾಯಿತು.

ಭಯೋತ್ಪಾದಕ ಕೇಂದ್ರಗಳ ಮೇಲೆ ದಾಳಿ ಮತ್ತು ಉಗ್ರರ ಹತ್ಯೆಯೇ ನಮ್ಮ ಕಾರ್ಯತಂತ್ರವಾಗಿತ್ತು. ಅವರು ಮೇ 9 ರಂದೇ ಕೋರಿಕೆ ಸಲ್ಲಿಸಿದ್ದರೆ, ಅದೇ ದಿನ ಯುದ್ಧ ನಿಲ್ಲುತ್ತಿತ್ತು ಎಂದು ಹೇಳಿದರು.

ಅಮೆರಿಕಾ ಅಧ್ಯಕ್ಷರ ನಡವಳಿಕೆ ಬಗ್ಗೆ ಕಿಡಿಕಾರಿದ ಅಗರವಾಲ್, ಉಭಯ ರಾಷ್ಟ್ರಗಳ ಡಿಜಿಎಂಓಗಳೇ ಮಾತುಕತೆ ನಡೆಸಿ, ಯುದ್ಧಕ್ಕೆ ತೆರೆ ಎಳೆದರು. ಇದರಲ್ಲಿ ಯಾವ ರಾಷ್ಟ್ರದ ಪಾತ್ರವೂ ಇಲ್ಲ.

ಟ್ರಂಪ್ ಅವರು ವಿಶ್ವದ ಯಾವುದೇ ಭಾಗದಲ್ಲಿ ಏನೇ ನಡೆದರೂ ಎಲ್ಲದಕ್ಕೂ ಮೂಗು ತೂರಿಸಿ, ಮಾತನಾಡುವ ಚಟ ತೀರಿಸಿಕೊಳ್ಳುತ್ತಾರೆ. ಅವರ ದೇಶದ ವಿಷಯ ನಮಗೆ ಬೇಕಿಲ್ಲ ಎಂದರು.


ಡಾ.ರಾಧಾಮೋಹನ್‌ದಾಸ್

ಆಪರೇಷನ್ ಸಿಂಧೂರದ ಮೂಲಕ ಭಾರತದ ವಾಯು ರಕ್ಷಣಾ ವ್ಯವಸ್ಥೆಯು ಅತ್ಯಂತ ಸಶಕ್ತವಾಗಿರುವುದಾಗಿ ಜಗತ್ತಿಗೇ ನಾವು ತೋರಿಸಿದ್ದೇವೆ ಎಂದು ಅಗರವಾಲ್ ವಿಶ್ಲೇಷಿಸಿದರು.

ಭಾರತ ಸೇನೆಗೆ ಧನ್ಯವಾದಕ್ಕೆ ತಿರಂಗಾ ಯಾತ್ರೆ: ಭಾರತದ ಮಾನ, ಸಮ್ಮಾನದ ರಕ್ಷಣೆ ಮತ್ತು ಭಾರತೀಯರ ಹತ್ಯೆಗೆ ಪ್ರತೀಕಾರವಾಗಿ ಭಾರತೀಯ ಸೇನೆಯು ಆಪರೇಷನ್ ಸಿಂಧೂರ ಕೈಗೊಂಡಿದೆ. ಇದನ್ನು ಪ್ರಶಂಸಿಸಿ ಮತ್ತು ಭಾರತದ ಸೇನೆಗೆ ಧನ್ಯವಾದ ಸಮರ್ಪಣೆಗಾಗಿ ದೇಶಾದ್ಯಂತ ತಿರಂಗಾ ಯಾತ್ರೆ ನಡೆಸಲಾಗುತ್ತಿದೆ ಎಂದು ಪ್ರಕಟಿಸಿದರು.

ಪ್ರಧಾನಿ ನರೇಂದ್ರ ಮೋದಿಜೀ ಅವರ ನೇತೃತ್ವದಲ್ಲಿ ಭಾರತದ ಸೇನೆಯು ಪಹಲ್ಗಾಮ್ ಭಯೋತ್ಪಾದನಾ ಕೃತ್ಯಕ್ಕೆ ಕಾರಣಕರ್ತರಾದ ಎರಡು ಸಂಘಟನೆಗಳ ಕಾರ್ಯಾಲಯ, ತರಬೇತಿ ಕೇಂದ್ರಗಳನ್ನು ಹಾಗೂ ಉಗ್ರರನ್ನು ಹತ್ಯೆ ಮಾಡಿದೆ. ಸಂಪೂರ್ಣ ಸಂಯಮದಿಂದ ಹಾಗೂ ಯುದ್ಧದ ಎಲ್ಲ ನಿಯಮಗಳನ್ನು ಪಾಲಿಸುತ್ತಾ ಈ ಅಭಿನಂದನೀಯ ಕಾರ್ಯ ಮಾಡಿದ್ದು, ಇದು ಹೆಮ್ಮೆಯ ವಿಚಾರ ಎಂದು ತಿಳಿಸಿದರು.

ಇದೊಂದು ಕದನವಿರಾಮ ಮಾತ್ರ, ಯುದ್ಧವನ್ನು ಸ್ಥಗಿತಗೊಳಿಸಿದ್ದೇವೆ ಎಂದು ಪ್ರಧಾನಿ ಹೇಳಿದ್ದಾರೆ. ಭಯೋತ್ಪಾದನಾ ಕೃತ್ಯ ಮುಂದುವರೆದಲ್ಲಿ ಯುದ್ಧ ಮುಂದುವರೆಯುತ್ತದೆ ಎಂದೂ ಹೇಳಿದ್ದಾರೆ.

ರಕ್ತ ಮತ್ತು ನೀರು ಒಂದೇ ನದಿಯಲ್ಲಿ ಒಟ್ಟಿಗೆ ಹರಿಯಲು ಸಾಧ್ಯವಿಲ್ಲ ಎಂದು ಪ್ರಧಾನಿಯವರು ಹೇಳಿದ್ದಾರೆ. ಪಾಕಿಸ್ತಾನ ತನ್ನ ನಡವಳಿಕೆ ಮೂಲಕ ಬದಲಾವಣೆಯ ಕುರಿತು ಪ್ರಸ್ತುತಪಡಿಸಿದಾಗ ನೀರಿನ ಕುರಿತು ನಾವು ಪರಿಶೀಲಿಸಬಹುದು ಎಂದು ಡಾ.ರಾಧಾಮೋಹನ್‌ದಾಸ್ ಅಗರ್‌ವಾಲ್ ನುಡಿದರು.

ವೈಮಾನಿಕ ದಾಳಿ ಮಾಡಲು ಪಾಕಿಸ್ತಾನವು ಬಳಸುತ್ತಿದ್ದ ವಾಯುನೆಲೆಗಳನ್ನೂ ಧ್ವಂಸ ಮಾಡಿದ್ದೇವೆ. ಈ ಸಂಪೂರ್ಣ ಯುದ್ಧದಲ್ಲಿ ಭಾರತದ ಒಬ್ಬರೇ ಒಬ್ಬ ಸೈನಿಕರೂ ಸತ್ತಿಲ್ಲ. ನಮ್ಮ ಸೇನಾ ಉಪಕರಣಕ್ಕೆ ಹಾನಿ ಆಗಿಲ್ಲ ಎಂದು ಸಂತಸ ವ್ಯಕ್ತಪಡಿಸಿದರು.

ಕೇವಲ ಭಯೋತ್ಪಾದಕರ ಹತ್ಯೆ ಮಾಡಲಾಗಿದೆ. ಪಾಕಿಸ್ತಾನದ ಒಬ್ಬನೇ ಒಬ್ಬ ನಾಗರಿಕನೂ ಸತ್ತಿಲ್ಲ. ಪಾಕಿಸ್ತಾನವು ತನ್ನ 11 ವಾಯುನೆಲೆಗಳಿಂದ ಹಾರಿಸಿದ್ದ ಶೇ.100ರಷ್ಟು ಡ್ರೋಣ್ ಮತ್ತು ಕ್ಷಿಪಣಿಗಳನ್ನು ಭಾರತಕ್ಕೆ ಬರದಂತೆ ವಿಫಲಗೊಳಿಸಲಾಗಿದೆ ಎಂದು ವಿವರಿಸಿದರು. ನಿರಪರಾಧಿ ವ್ಯಕ್ತಿ ಒಬ್ಬರೂ ಸತ್ತಿಲ್ಲ, ಮೋದಿಜೀ ಅವರು ಜಗತ್ತಿಗೇ ಯುದ್ಧದ ಹೊಸ ಕ್ರಮವನ್ನು ಪರಿಚಯಿಸಿದ್ದಾರೆ ಎಂದು ಮೆಚ್ಚುಗೆ ಸೂಚಿಸಿದರು.

ನಾವು ನಮ್ಮ ಕಾರ್ಯವೈಖರಿ ಮೂಲಕ ಸಾಫಲ್ಯತೆ ಪಡೆದಿದ್ದೇವೆ. ಭಯೋತ್ಪಾದನಾ ಕೇಂದ್ರಗಳ ಮೇಲೆ ದಾಳಿ ಮತ್ತು ಉಗ್ರರ ಹತ್ಯೆ ನಮ್ಮ ಕಾರ್ಯತಂತ್ರವಾಗಿತ್ತು. ಮೇ 9ರಂದು ಕೋರಿಕೆ ಸಲ್ಲಿಸಿದ್ದರೆ ಅದೇ ದಿನ ಯುದ್ಧ ನಿಲ್ಲುತ್ತಿತ್ತು ಎಂದು ಪ್ರಶ್ನೆಗೆ ಉತ್ತರಿಸಿದರು.

ಡಿಜಿಟಲ್ ಮೀಟರ್ ಅಳವಡಿಕೆಗೆ ಶುಲ್ಕ ನಿಗದಿಗೆ ವಿರೋಧ

ಸೆಸ್ಕ್‌ಗೆ ಮುತ್ತಿಗೆ ಹಾಕಲು ರೈತರ ಯತ್ನ


ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕಾರ್ಯಕರ್ತರು ರೈತರ ಬೆಂಬಲಕ್ಕೆ ನಿಲ್ಲುವಂತೆ ಆಗ್ರಹಿಸಿ ಸೆಸ್ಕ್ ವ್ಯವಸ್ಥಾಪಕ ನಿರ್ದೇಶಕರಿಗೆ ಮನವಿ ಸಲ್ಲಿಸಿದರು.

ಮೈಸೂರು, ಮೇ15(ಜಿಎ)–ರಾಜ್ಯ ಸರ್ಕಾರ ಪಂಪ್‌ಸೆಟ್‌ಗಳಿಗೆ ಡಿಜಿಟಲ್ ಮೀಟರ್ ಅಳವಡಿಸಲು ಶುಲ್ಕ ನಿಗದಿಪಡಿಸಿರುವುದನ್ನು ಹಿಂಪಡೆಯಬೇಕು. ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸಬಾರದು ಎಂಬ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ವಿಜಯನಗರದಲ್ಲಿರುವ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ವಿಭಾಗೀಯ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿದರು.

ಈ ವೇಳೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕಾರ್ಯಕರ್ತರು ರೈತರ ಬೆಂಬಲಕ್ಕೆ ನಿಲ್ಲುವಂತೆ ಆಗ್ರಹಿಸಿ ವ್ಯವಸ್ಥಾಪಕ ನಿರ್ದೇಶಕರಿಗೆ ಮನವಿ ಸಲ್ಲಿಸಿದರು.

ನಂತರ ಮಾಧ್ಯಮಗಳೊಂದಿಗೆ ರೈತ ಮುಖಂಡರು ಮಾತನಾಡಿ, ರಾಜ್ಯ ಸರ್ಕಾರ ಪಂಪ್‌ಸೆಟ್‌ಗಳಿಗೆ ಡಿಜಿಟಲ್ ಮೀಟರ್ ಅಳವಡಿಸಲು 10,000 ರೂ. ಡಿಪಾಸಿಟ್ ಶುಲ್ಕ ನಿಗದಿಪಡಿಸಿರುವುದನ್ನು ಹಿಂಪಡೆಯಬೇಕು, ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸಬಾರದು. ವಿದ್ಯುತ್ ಸಂಪರ್ಕಕ್ಕೆ ಆಧಾರ್ ಜೋಡಣೆ ರದ್ದುಗೊಳಿಸಿ ರೈತರಿಗೆ ಸಮರ್ಪಕ ವಿದ್ಯುತ್ ಅನ್ನು ಬೆಳಗ್ಗೆ 6 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ನೀಡಲು ವಿದ್ಯುತ್ ಲೈನ್‌ಗಳನ್ನು ಸುಸ್ಥಿತಿಯಲ್ಲಿಡುವಂತೆ ಆಗ್ರಹಿಸಿದ್ದಾರೆ. ನಮ್ಮ ಬೇಡಿಕೆಗಳನ್ನು ಈಡೇರಿಸಲು ಅಧಿಕಾರಿಗಳು ಒಂದು ತಿಂಗಳ ಗಡುವು ಪಡೆದಿದ್ದು ಅಷ್ಟರೊಳಗೆ ನಮ್ಮ ಬೇಡಿಕೆಗಳನ್ನು ಈಡೇರಿಸದಿದ್ದರೆ ಸಾವಿರಕ್ಕೂ ಹೆಚ್ಚು ರೈತರು ಕಚೇರಿಗೆ ಮುತ್ತಿಗೆ ಹಾಕಲಾಗುವುದು ಎಂದು ಎಚ್ಚರಿಸಿದರು. ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಜಿ.ಲೋಕೇಶ್, ಅಂಜನ್ ಕುಮಾರ್, ಹಸಿರು ಸೇನೆ ಕಾರ್ಯಾಧ್ಯಕ್ಷ ಮೋಹನ್ ರಾಜ್ ಸೇರಿದಂತೆ ಮತ್ತಿತರರಿದ್ದರು.

ಕಾರ್ಮಿಕರ ದಿನ; ವಿಶ್ವ ತಾಯಂದಿರ ದಿನಾಚರಣೆ


ಮೈಸೂರಿನ ಕುವೆಂಪುನಗರದ ಆದಿಚುಂಚನಗಿರಿ ಒಕ್ಕಲಿಗ ಮಹಿಳಾ ಸಮಾಜದ ವತಿಯಿಂದ ಕಾರ್ಮಿಕರ ದಿನ ಮತ್ತು ವಿಶ್ವ ತಾಯಂದಿರ ದಿನ ಆಚರಿಸಲಾಯಿತು. ಇದೇ ವೇಳೆ ಶಾಲೆಯ ಹಲವು ಮಹಿಳೆಯರನ್ನು ಸನ್ಮಾನಿಸಲಾಯಿತು.

ಮೈಸೂರು, ಮೇ 15– ಮೈಸೂರಿನ ಕುವೆಂಪುನಗರದ ಆದಿಚುಂಚನಗಿರಿ ಒಕ್ಕಲಿಗ ಮಹಿಳಾ ಸಮಾಜದ ವತಿಯಿಂದ ಕಾರ್ಮಿಕರ ದಿನಾಚರಣೆ ಮತ್ತು ವಿಶ್ವ ತಾಯಂದಿರ ದಿನ ಹಮ್ಮಿಕೊಳ್ಳಲಾಗಿತ್ತು.

ಈ ವೇಳೆ ಸಂಘದ ಅಧ್ಯಕ್ಷೆ ಸವಿತಾ ಗೌಡ ಮಾತನಾಡಿ, ತಾಯಿಯ ಮಮತೆಯ ಆಳ–ಅಗಲವನ್ನು, ಭಗವಂತನ ಯಾವ ಸೃಷ್ಟಿಯಿಂದಲೂ ಅಳೆಯಲು ಸಾಧ್ಯವಿಲ್ಲ ಎಂದು ಬಣ್ಣಿಸಿದರು. ಹಾಗೆಯೇ ಕಾರ್ಮಿಕರ ದಿನಾಚರಣೆಯ ಹುಟ್ಟು–ನೋವು–ನಲಿವಿನ ಬಗ್ಗೆ ಲತಾ ರಮೇಶ ವಿವರಿಸಿದರು. ಇದೇ ವೇಳೆ ಆದಿಚುಂಚನಗಿರಿ ಶಾಲೆಯಲ್ಲಿ ಸೇವೆ ಸಲ್ಲಿಸುತ್ತಿರುವ ಚಂದ್ರಮ್ಮ, ಲಕ್ಷ್ಮಮ್ಮ, ಶೋಭಾ, ಸಿದ್ದಮ್ಮ, ಲಕ್ಷ್ಮೀ, ರಾಗಿಣಿ, ಸುಧಾ, ನೇತ್ರಾವತಿ ಅವರನ್ನು ಸಂಘದ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಲಾಯಿತು.

ಸಭೆಯಲ್ಲಿ ಆದಿಚುಂಚನಗಿರಿ ಶಾಲೆಯ ಆಡಳಿತಾಧಿಕಾರಿ ಶ್ರೀಮತಿ ಯಶೋಧ ಭಾಗವಹಿಸಿದ್ದರು. ಪದಾಧಿಕಾರಿಗಳಾದ ರಾಜೇಶ್ವರಿ, ಸುನಂದ, ನಂದಿನಿ, ಹೇಮ, ಜಯಂತಿ, ಜಯಮ್ಮ, ಜಯಲಕ್ಷ್ಮಿ, ಹಂಸವೇಣಿ ಇನ್ನಿತರರು ಉಪಸ್ಥಿತರಿದ್ದರು.

‘ಕುಲದಲ್ಲಿ ಕೀಳ್ಯಾವುದೋ’ ಮೇ 23ರಂದು ಬಿಡುಗಡೆ


‘ಕುಲದಲ್ಲಿ ಕೀಳ್ಯಾವುದೋ’ ಕನ್ನಡ ಚಲನಚಿತ್ರದ ನಾಯಕ ನಟ ಮಡೇನೂರು ಮನು ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಮೈಸೂರು, ಮೇ 15(ಎಂಟಿವೈ)– ಪ್ರೇಕ್ಷಕರನ್ನು ನಕ್ಕು ನಗಿಸುವ ಹಾಸ್ಯಮಯ ದೃಶ್ಯಗಳಿರುವ ‘ಕುಲದಲ್ಲಿ ಕೀಳ್ಯಾವುದೋ’ ಕನ್ನಡ ಚಲನಚಿತ್ರ ಮೇ 23ರಂದು ರಾಜ್ಯಾದ್ಯಂತ ಬಿಡುಗಡೆಯಾಗಲಿದೆ ಎಂದು ನಟ ಮಡೇನೂರು ಮನು ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಕೆಲಸದ ಒತ್ತಡ, ಸಂವಹನದ ಕೊರತೆ ಸೇರಿದಂತೆ ಹಲವು ಕಾರಣದಿಂದ ಜನರು ನಗುವುದನ್ನೇ ಮರೆತಿದ್ದಾರೆ. ನಗುವುದರಿಂದ ಆರೋಗ್ಯ ಕಾಪಾಡಿಕೊಳ್ಳಲೂಬಹುದಾಗಿದೆ. ಈ ಹಿನ್ನೆಲೆಯಲ್ಲಿ ಪ್ರೇಕ್ಷಕರನ್ನು ನಕ್ಕು ನಗಿಸುವ ಹಾಸ್ಯ ದೃಶ್ಯ, ಹಾಸ್ಯ ಸಂಭಾಷಣೆಯುಳ್ಳ ‘ಕುಲದಲ್ಲಿ ಕೀಳ್ಯಾವುದೋ’ ಕನ್ನಡ ಚಲನಚಿತ್ರವನ್ನು ನಿರ್ಮಿಸಿ, ಕನ್ನಡಿಗರಿಗೆ ಕೊಡುಗೆಯಾಗಿ ನೀಡಲಾಗುತ್ತಿದೆ. ಈಗಾಗಲೇ ಚಿತ್ರ ನಿರ್ಮಾಣ ಕಾರ್ಯ ಪೂರ್ಣಗೊಂಡಿದ್ದು, ಮೇ 23ರಂದು ರಾಜ್ಯದಾದ್ಯಂತ ಬಿಡುಗಡೆ ಮಾಡಲಾಗುತ್ತಿದೆ ಎಂದರು.

ಈ ಚಲನಚಿತ್ರವನ್ನು, ಯೋಗರಾಜ್ ಸಿನೆಮಾಸ್ ಅರ್ಪಿಸುತ್ತಿದ್ದು, ಪರ್ಲ್ ಸಿನಿ ಕ್ರಿಯೇಷನ್ಸ್ ಬ್ಯಾನರ್‌ನಡಿ ಎ.ಕೆ.ಸಂತೋಷ್ ಕುಮಾರ್ ಹಾಗೂ ವಿದ್ಯ ನಿರ್ಮಾಣ ಮಾಡಿದ್ದಾರೆ. ಯೋಗರಾಜ್ ಭಟ್ ಹಾಗೂ ಇಸ್ಲಾಂಮುದ್ದೀನ್ ಕಥೆ ಬರೆದಿದ್ದು, ಕೆ.ರಾಮನಾರಾಯಣ್ ನಿರ್ದೇಶಿಸಿದ್ದಾರೆ. ಜಯಂತ್ ಕಾಯ್ಕಿಣಿ, ಕೆ.ರಾಮನಾರಾಯಣ್, ಯೋಗರಾಜ್‌ಭಟ್ ಅವರ ಸಾಹಿತ್ಯವಿದೆ. ಮನು.ಬಿ.ಕೆ ಛಾಯಾಗ್ರಹಣ, ಮನೋಮೂರ್ತಿ ಸಂಗೀತ, ಸಂಭಾಷಣೆ ವಿಜಯಾನಂದ, ನೃತ್ಯ ನಾಗೇಶ್ ಮತ್ತು ಮುರುಳಿ ಅವರದ್ದಾಗಿದೆ ಎಂದು ತಿಳಿಸಿದರು.

ನಾಯಕ ನಟನಾಗಿ ಕಾಮಿಡಿ ಕಿಲಾಡಿ ಶೋ ಕಲಾವಿದ ಮಡೇನೂರು ಮನು, ಮೌನ ಗುಡ್ಡೆಮನೆ, ಯೋಗರಾಜ್ ಭಟ್, ಸೋನಾಕ್ ಮೊಂತೆರೋ, ತಬಲನಾಣಿ, ಶರತ್ ಲೋಹಿತಾಶ್ವ, ಡ್ರಾಗನ್ ಮಂಜು, ಜೇಡರಹಳ್ಳಿ ಕೃಷ್ಣಪ್ಪ, ಕರಿಸುಬ್ಬು, ಹರೀಶ್ ರಾಜು, ಸೀನ, ನಾಗೇಂದ್ರ ಅರಸ್ ತಾರಾಗಣದಲ್ಲಿದ್ದಾರೆ. 5 ಹಾಡುಗಳಿರುವ ಈ ಸಿನಿಮಾವನ್ನು ರಾಮನಗರ, ಚನ್ನಪಟ್ಟಣ, ಸಕಲೇಶಪುರ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ಚಿತ್ರೀಕರಿಸಲಾಗಿದೆ. ಕನ್ನಡ ಚಲನಚಿತ್ರ ರಂಗಕ್ಕೆ ಉತ್ತಮ ಕಥಾಹಂದರವುಳ್ಳ ಹಾಸ್ಯಮಯ ಚಿತ್ರವಾಗಿ ಹೊರಹೊಮ್ಮಿದೆ ಎಂದರು. ಗೋಷ್ಠಿಯಲ್ಲಿ ನಟರಾದ ಅಕ್ಷಯ್, ಸುಧೀರ್‌ಕುಮಾರ್ ಇದ್ದರು.

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಮೈಸೂರು, ಮೇ 15– ಪುಣ್ಯ ಕೋಟಿ ಸೇವಾ ಟ್ರಸ್ಟ್ ವತಿಯಿಂದ ವಿಜಯನಗರ 1ನೇ ಮತ್ತು 2ನೇ ಹಂತದ ನಿವಾಸಿ ಮಕ್ಕಳಿಗೆ ಪ್ರಸಕ್ತ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿಯಲ್ಲಿ ಶೇ. 90 ಕ್ಕಿಂತ ಅಧಿಕ ಅಂಕ ಗಳಿಸಿದ ವಿದ್ಯಾರ್ಥಿಗಳಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಪೋಷಕರು ನಿಗದಿತ ಅರ್ಜಿಯಲ್ಲಿ ಸ್ವವಿವರ ಜೊತೆ ಕಂಪ್ಯೂಟರ್ ಅಂಕಪಟ್ಟಿಯನ್ನು ಕಚೇರಿಗೆ ತಲುಪಿಸಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ. 6361298986, 9242941216 ಸಂಪರ್ಕಿಸಬಹುದು.

ಕನಕ ಸಂಸ್ಕೃತಿ ಸಂಚಲನ–ಕನಕ ನಡೆ–ನುಡಿ ಉತ್ಸವ ಕಾರ್ಯಕ್ರಮ


ಕನಕ ಸಂಸ್ಕೃತಿ ಸಂಚಲನ–ಕನಕ ನಡೆ–ನುಡಿ ಉತ್ಸವ ಕಾರ್ಯಕ್ರಮ ಉದ್ಘಾಟನೆ.

ಮೈಸೂರು, ಮೇ 15– ಪರಂಪರೆ, ವರ್ತಮಾನ ನಂಬಿದ ಸಿದ್ಧಾಂತ ಗ್ರಹಿಕೆಗಳು ಕನಕ ಸಾಹಿತ್ಯದಲ್ಲಿ ಪ್ರಧಾನವಾಗಿ ಕಾಣಬಹುದು. ಈ ತತ್ವಗಳನ್ನು ಯುವ ಸಮುದಾಯಕ್ಕೆ ಮುಟ್ಟಿಸಿ ಕನಕನ ಸಾಹಿತ್ಯವನ್ನು ಮುಖಾಮುಖಿಯಾಗಿಸಲು ಕನಕರನ್ನು ಕನಕತ್ವದಿಂದ ಕಾಣುತ್ತಾ ಸಮತೆ ಮತ್ತು ಮಾನವೀಯತೆಗೆ ಉತ್ತೇಜನ ನೀಡಬೇಕೆಂದು ಕನಕದಾಸ ಅಧ್ಯಯನ ಕೇಂದ್ರದ ಕಾ.ತಾ.ಚಿಕ್ಕಣ್ಣ ಕರೆ ನೀಡಿದರು.

ಮೈಸೂರಿನ ಎಂಎಂಕೆ ಮತ್ತು ಎಸ್‌ಡಿಎಂ ಮಹಿಳಾ ಮಹಾವಿದ್ಯಾಲಯ ಕನ್ನಡ ವಿಭಾಗದ ಸಹಯೋಗದೊಂದಿಗೆ ಆಯೋಜಿಸಿದ್ದ ಕನಕ ಸಂಸ್ಕೃತಿ ಸಂಚಲನ–ಕನಕ ನಡೆ–ನುಡಿ ಉತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕನಕದಾಸ ಸಾಹಿತ್ಯವನ್ನು ವಿದ್ಯಾರ್ಥಿ ಯುವ ಸಮೂಹಕ್ಕೆ ತಿಳಿಸಿ ಸಾಂಸ್ಕೃತಿಕ ಸಂಪನ್ನರಾಗಿಸಿ ನಾಡು ಮತ್ತು ದೇಶವನ್ನು ಸರ್ವಜನಾಂಗದ ಶಾಂತಿಯ ತೋಟವಾಗಿಸುವಲ್ಲಿ ಯುವಜನರನ್ನು ಸನ್ನದ್ಧಗೊಳಿಸಬೇಕಿದ್ದು, ಕನಕದಾಸರ ಓದು–ಗ್ರಹಿಕೆಯ ಈ ಕಾರ್ಯಕ್ರಮವನ್ನು ಈ ವರ್ಷದ ಮೊದಲ ಕಾರ್ಯಕ್ರಮವಾಗಿ ಮೈಸೂರಿನಿಂದಲೇ ಎಸ್‌ಡಿಎಂ ಕಾಲೇಜು ಮೂಲಕ ಪ್ರಾರಂಭಿಸಿ ನಾಡಿನ ಉದ್ದಗಲಕ್ಕೂ ಕೊಂಡೊಯ್ಯಲಾಗುವುದು ಎಂದರು.

ವಿದ್ವಾಂಸರಾದ ಡಾ.ಪಿ.ಬೆಟ್ಟೇಗೌಡ ಸಾಹಿತ್ಯ ಸಮನ್ವಯ ನೆರವೇರಿಸಿ, ಕನಕ ಮುಖ್ಯ ಏಕೆಂದರೆ ಎಂಬ ಪ್ರಶ್ನೆಯೊಂದಿಗೆ ಕನಕ ಸಾಹಿತ್ಯವನ್ನು ಅರ್ಥಮಾಡಿಕೊಂಡಾಗ ಕನಕ ಸಾಹಿತ್ಯ ನಂದಾದೀಪದಂತೆ–ದರ್ಪಣದಂತೆ ಕನ್ನಡ ಸಾಹಿತ್ಯದ ಮೇರು ಕೃತಿಗಳಾಗಿ ಕಾಣುತ್ತವೆ. ಈ ದಿಸೆಯಲ್ಲಿ ಕನಕದಾಸರ ಸಾಹಿತ್ಯ ಓದುವ ಮನಸ್ಸುಗಳಿಗೆ ಸಾಮಾಜಿಕ ಪ್ರಜ್ಞೆಯನ್ನು ಮೂಡಿಸುತ್ತವೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಂಗವಾಗಿ ಪ್ರತಿಭಾ ಸ್ಪರ್ಧೆಯಲ್ಲಿ ಓದು, ಸಂವಾದ, ಗಾಯನ, ರಸಪ್ರಶ್ನೆಗಳನ್ನು ಆಯೋಜಿಸಲಾಗಿತ್ತು. ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸಿದ್ಧಾರ್ಥನಗರ, ಕುವೆಂಪುನಗರ ಎಸ್‌ಡಿಎಂ ಮಹಿಳಾ ಕಾಲೇಜು, ನಟರಾಜ ಮಹಿಳಾ ಕಾಲೇಜು ಶಾರದಾ ವಿಲಾಸ ಕಾಲೇಜು ಮೈಸೂರು, ಸರ್ಕಾರಿ ಮಹಿಳಾ ಕಾಲೇಜು ಹುಣಸೂರು ಕಾಲೇಜುಗಳಿಂದ 200 ಮಂದಿ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಪ್ರಾಂಶುಪಾಲೆ ಪ್ರೊ ಭಾರತಿ ಮಾತನಾಡಿದರು. ಕಾರ್ಯಕ್ರಮ ಸಂಚಾಲಕಿ ಡಾ.ತ್ರಿವೇಣಿ, ವಿಭಾಗದ ಮುಖ್ಯಸ್ಥ ಡಾ.ವಿನೋದ, ಡಾ.ಪ್ರಸಾದ್ ಮೂರ್ತಿ, ಡಾ.ಕೆ.ಎನ್.ಗಿರೀಶ್ ಉಪಸ್ಥಿತರಿದ್ದರು.

ಚಿತ್ರಕಲಾ ತರಬೇತಿಗೆ ಅರ್ಜಿ ಆಹ್ವಾನ

ಮೈಸೂರು: ಮೈಸೂರಿನ ವೈಜಯಂತಿ ಚಿತ್ರಕಲಾ ಮಹಾವಿದ್ಯಾಲಯವು ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆಯಾದ ಅಭ್ಯರ್ಥಿಗಳು ಮತ್ತು ಪಿಯುಸಿಯಲ್ಲಿ ಉತ್ತೀರ್ಣ ಅಥವಾ ಅನುತ್ತೀರ್ಣರಾದ ಅಭ್ಯರ್ಥಿಗಳಿಂದ 2 ವರ್ಷದ ದೃಶ್ಯಕಲಾ ಹಾಗೂ ಬಿವಿಎ ಪದವಿ ಚಿತ್ರಕಲಾ ತರಗತಿಗಳ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ಎಸ್‌ಸಿ, ಎಸ್‌ಟಿ ವಿದ್ಯಾರ್ಥಿಗಳಿಗೆ ಉಚಿತ ಪ್ರವೇಶವಿದೆ. ವಿದ್ಯಾರ್ಥಿ ವೇತನದ ವ್ಯವಸ್ಥೆ ಇದೆ. ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ಬಸ್ ಹಾಗೂ ಟ್ರೈನ್ ಪಾಸ್ ವ್ಯವಸ್ಥೆ ಇದೆ. ಮಾಹಿತಿಗೆ ಮೊ. 9945613828 ಸಂಪರ್ಕಿಸಬಹುದು.

ಬೃಹತ್ ರಕ್ತದಾನ ಶಿಬಿರ

ಮೈಸೂರು: ಜಿಲ್ಲಾಡಳಿತ, ಆರೋಗ್ಯ ಇಲಾಖೆ, ಮೈಸೂರು ನಗರಪಾಲಿಕೆ, ಜೀವಧಾರ ರಕ್ತನಿಧಿ ಕೇಂದ್ರಗಳ ಸಂಯುಕ್ತ ಆಶ್ರಯದಲ್ಲಿ ಮೇ 17ರಂದು ಬೆಳಗ್ಗೆ 8ರಿಂದ ಸಂಜೆ 4 ರವರೆಗೆ ಕಲ್ಯಾಣಗಿರಿನಗರದ ಅಜೀಜ್ ಸೇಠ್ ಜೋಡಿ ರಸ್ತೆಯಲ್ಲಿರುವ ಕೇಂದ್ರ ಬೀಡಿ ಕಾರ್ಮಿಕರ ಆಸ್ಪತ್ರೆಯಲ್ಲಿ ಬೃಹತ್ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿದೆ.

ನಾಳೆ ಮೈಸೂರಿನ ಬಿವಿಬಿಯಲ್ಲಿ ತಿಂಗಳ ಸಂಗೀತ ಕಾರ್ಯಕ್ರಮ


ಪದ್ಮನಾಭ | ಗಣೇಶ್ | ಶ್ರೀ ಲಕ್ಷ್ಮಿ | ವರುಣ್ | ಗೀತಶ್ರೀ | ಕುಮಾರಸ್ವಾಮಿ | ಶ್ರೀನಿಧಿ

ಮೈಸೂರು, ಮೇ 15–ತಿಂಗಳ ಸಂಗೀತ ಕಾರ್ಯಕ್ರಮದ ಅಂಗವಾಗಿ ಭಾರತೀಯ ವಿದ್ಯಾ ಭವನ, ಮೈಸೂರು ಕೇಂದ್ರವು ಬೆಂಗಳೂರಿನ ಇನ್ಫೋಸಿಸ್ ಪ್ರತಿಷ್ಠಾನದ ಸಹಯೋಗದಲ್ಲಿ ಮೇ 17ರಂದು ಸಂಜೆ 6 ಗಂಟೆಗೆ ವಿಜಯನಗರ ಮೊದಲನೇ ಹಂತದಲ್ಲಿರುವ ಭಾರತೀಯ ವಿದ್ಯಾಭವನದಲ್ಲಿ ವಿದ್ವಾನ್ ವೈಣಿಕ ರತ್ನ ಆರ್.ಕೆ.ಪದ್ಮನಾಭ, ವಿದ್ವಾನ್ ಗಣೇಶ್ ಶರ್ಮ, ವಿದುಷಿ ಗೀತಶ್ರೀ, ವಿದ್ವಾನ್ ವರುಣ್ ಮತ್ತು ವಿದುಷಿ ಶ್ರೀ ಲಕ್ಷ್ಮಿ ಅವರಿಂದ ಪಂಚವೀಣಾ ಕಾರ್ಯಕ್ರಮ ಆಯೋಜಿಸಲಾಗಿದೆ. ಪಕ್ಕವಾದ್ಯದಲ್ಲಿ ವಿದ್ವಾನ್ ಎಸ್. ಕುಮಾರಸ್ವಾಮಿ –ಮೃದಂಗ ಮತ್ತು ವಿದ್ವಾನ್ ಶ್ರೀನಿಧಿ–ಘಟಂ ಸಹಕಾರ ನೀಡಲಿದ್ದಾರೆ.

ಕಿರು ಪರಿಚಯ : ಕರ್ನಾಟಕ ಶಾಸ್ತ್ರೀಯ ಸಂಗೀತ ಕ್ಷೇತ್ರದಲ್ಲಿ, ವಿಶೇಷವಾಗಿ ವೀಣಾವಾದನದಲ್ಲಿ ವಿದ್ವಾನ್ ಆರ್.ಕೆ.ಪದ್ಮನಾಭ ಒಬ್ಬ ಅತ್ಯುನ್ನತ ನಕ್ಷತ್ರ. ಮೇ 12, 1959ರಂದು ಜನಿಸಿದ ಪದ್ಮನಾಭ, 66 ವಸಂತಗಳನ್ನು ಪೂರೈಸಿ, ಕಳೆದ ಐದು ದಶಕಗಳಿಂದ ಸಂಗೀತವನ್ನೇ ಉಸಿರಾಡುತ್ತಾ ಬಂದಿದ್ದಾರೆ.

ಮೈಸೂರು ಆಸ್ಥಾನ ವಿದ್ವಾನ್, ವೈಣಿಕ ಪ್ರವೀಣ ಮತ್ತು ಗಾನಕಲಾಭೂಷಣ ವಿದ್ವಾನ್ ಆರ್.ಎಸ್. ಕೇಶವಮೂರ್ತಿ ಅವರ ಪುತ್ರರಾದ ಆರ್.ಕೆ. ಪದ್ಮನಾಭ ಅವರು ಚಿಕ್ಕ ವಯಸ್ಸಿನಿಂದಲೇ ತಮ್ಮ ತಂದೆಯಿಂದ ಸಾಂಪ್ರದಾಯಿಕ ಮತ್ತು ಶಿಸ್ತಿನ ವಾತಾವರಣದಲ್ಲಿ ಆರಂಭಿಕ ತರಬೇತಿಯನ್ನು ಪಡೆದರು. ಪ್ರಾಥಮಿಕ ತರಬೇತಿಯಿಂದಾಗಿ, ಅವರು ಗಾಯನ ಮತ್ತು ವೀಣಾ ಸಂಗೀತ ಎರಡರಲ್ಲೂ ಪ್ರವೀಣರಾಗಿದ್ದಾರೆ.

ವಿದ್ವಾನ್ ಆರ್.ಕೆ.ಪದ್ಮನಾಭ ಅವರು ಮೈಸೂರಿನ ಗಾನಭಾರತಿ ಸಭಾ, ತ್ಯಾಗರಾಜ ಸಭಾ, ಲಲಿತಕಲಾ ಅಕಾಡೆಮಿ, ನಾದಬ್ರಹ್ಮ ಸಂಗೀತ ಸಭಾ, ಶೃಂಗೇರಿಯ ದಕ್ಷಿಣಾಮ್ನಾಯ ಶ್ರೀ ಶಾರದಾಪೀಠಂ, ಉಡುಪಿ ಶ್ರೀ ಕೃಷ್ಣ ದೇಗುಲದ ರಾಜಾಂಗಣ, ಚೆನ್ನೈ ತ್ಯಾಗ ಬ್ರಹ್ಮ ಸಭಾ, ಶ್ರೀ ಕೃಷ್ಣ ಗಾನಸಭಾ, ಮಂತ್ರಾಲಯದ ಗುರುರಾಯರ ಸನ್ನಿಧಿ, ತಿರುಮಲ ತಿರುಪತಿ ದೇವಸ್ಥಾನಮ್‌ನ ಬ್ರಹ್ಮೋತ್ಸವ ಸಂಗೀತೋತ್ಸವ ಕಾರ್ಯಕ್ರಮ, ತಿರುವನಂತಪುರಮ್‌ನ ರಸಿಕ ರಂಜನೀ ಸಭಾ, ನಾಸಿಕ್ ಕನ್ನಡ ಸಂಘ, ನವದೆಹಲಿ ಕನ್ನಡ ಸಂಘ, ಮುಂಬೈನ ಭಕ್ತ ರಸಿಕ ರಂಜನೀ ಸಭಾ, ಎನ್‌ಸಿಪಿಎ, ಅಟಲ್ ಥಿಯೇಟರ್, ಕನ್ನಡ ಸಭಾ, ಮೈಸೂರು ಮ್ಯೂಸಿಕ್ ಅಸೋಸಿಯೇಷನ್ ಸೇರಿದಂತೆ ಹಲವಾರು ಪ್ರತಿಷ್ಠಿತ ಕಾರ್ಯಕ್ರಮದಲ್ಲಿ ಸಂಗೀತ ಕಛೇರಿ ನಡೆಸಿಕೊಟ್ಟಿದ್ದಾರೆ.

ದೇಶ - ವಿದೇಶ

ಗಾಜಾ ಮೇಲೆ ಇಸ್ರೇಲ್ ದಾಳಿ: 22 ಮಕ್ಕಳು ಸೇರಿ 70 ಮಂದಿ ಸಾವು



ಟೆಲ್ ಅವೀವ್: ಹಮಾಸ್ ಉಗ್ರಗಾಮಿ ಸಂಘಟನೆಯನ್ನು ಶತಾಯಗತಾಯ ಸರ್ವನಾಶ ಮಾಡಿಯೇ ತೀರುತ್ತೇವೆ ಎಂದು ಇಸ್ರೇಲ್ ಸೇನೆ ಮುಂದುವರೆಸಿರುವ ದಾಳಿಯಲ್ಲಿ 22 ಮಕ್ಕಳ ಸೇರಿ ಕನಿಷ್ಠ 70 ಮಂದಿ ಸಾವನ್ನಪ್ಪಿದ್ದಾರೆ. ನಿನ್ನೆಯಷ್ಟೇ ಇಸ್ರೇಲ್ ಸೇನೆ ಹಮಾಸ್ ಉಗ್ರ ಸಂಘಟನೆ ಮುಖ್ಯಸ್ಥ ಮಹಮದ್ ಸಿನ್ವಾರ್‌ನನ್ನು ಹೊಡೆದುರುಳಿಸಿತ್ತು. ಇದೀಗ ತನ್ನ ಕಾರ್ಯಾಚರಣೆ ಮುಂದುವರೆಸಿರುವ ಇಸ್ರೇಲ್ ಸೇನೆ ಇದೀಗ ದಕ್ಷಿಣ ಗಾಜಾ ಮೇಲೂ ದಾಳಿ ನಡೆಸಿದೆ. ಇಸ್ರೇಲ್ ಸೇನೆ ಬುಧವಾರ ಉತ್ತರ ಮತ್ತು ದಕ್ಷಿಣ ಗಾಜಾದ ಮೇಲೆ ವಾಯುದಾಳಿ ನಡೆಸಿ, ಸುಮಾರು 2 ಡಜನ್ ಮಕ್ಕಳು ಸೇರಿದಂತೆ ಕನಿಷ್ಠ 70 ಜನರನ್ನು ಕೊಂದಿದ್ದಾರೆ ಎಂದು ಆಸ್ಪತ್ರೆಗಳು ಮತ್ತು ಆರೋಗ್ಯ ಅಧಿಕಾರಿಗಳು ತಿಳಿಸಿದ್ದಾರೆ. ಹಮಾಸ್ ಉಗ್ರಗಾಮಿ ಸಂಘಟನೆಯನ್ನು ಬುಡಸಹಿತ ನಾಶ ಮಾಡುವವರೆಗೂ ಇಸ್ರೇಲ್ ಸೇನೆ ತನ್ನ ದಾಳಿ ನಿಲ್ಲಿಸುವುದಿಲ್ಲ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಹೇಳಿದ ಒಂದು ದಿನದ ಬೆನ್ನಲ್ಲೇ ಈ ದಾಳಿ ನಡೆದಿದೆ.

ರಾಸಾಯನಿಕ ನೀರಿನ ಟ್ಯಾಂಕರ್ ಸ್ಫೋಟ, 20 ಮಂದಿಗೆ ಗಾಯ

ಚೆನ್ನೈ: ತಮಿಳುನಾಡಿನಲ್ಲಿ ರಾಸಾಯನಿಕ ಘಟಕದಲ್ಲಿನ



ರಾಸಾಯನಿಕ ನೀರಿನ ಟ್ಯಾಂಕರ್ ಸ್ಫೋಟಗೊಂಡ ಪರಿಣಾಮ 20 ಮಂದಿ ಗಾಯಗೊಂಡಿದ್ದಾರೆ. ತಮಿಳುನಾಡಿನ ಕಡಲೂರಿನ ಸಿಪ್ಕಾಟ್‌ನಲ್ಲಿ ಗುರುವಾರ ಈ ಘಟನೆ ನಡೆದಿದ್ದು, ಕಾರ್ಖಾನೆಯಲ್ಲಿ ರಾಸಾಯನಿಕ ನೀರಿನ ಟ್ಯಾಂಕರ್ ಇದ್ದಕ್ಕಿದ್ದಂತೆ ಸ್ಫೋಟಗೊಂಡಿದೆ. ಘಟನೆಯಲ್ಲಿ ಕನಿಷ್ಠ 20 ಮಂದಿ ಗಾಯಗೊಂಡಿದ್ದು, ಗಾಯಾಳುಗಳನ್ನು ಕಡಲೂರು ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ರಾಸಾಯನಿಕ ನೀರಿನ ಟ್ಯಾಂಕರ್ ಸ್ಫೋಟಗೊಂಡ ಪರಿಣಾಮ ಹತ್ತಿರದ ಮನೆಗಳಿಗೆ ರಾಸಾಯನಿಕ ನೀರು ನುಗ್ಗಿದೆ. ಬಳಿಕ ಇಲ್ಲಿನ ನಿವಾಸಿಗಳು ವಾಂತಿ ಮಾಡಿಕೊಂಡಿದ್ದು, ಮೂರ್ಛೆ ಹೋದರು. ಕಡಲೂರು ಸಿಪ್ಕಾಟ್ ಕೈಗಾರಿಕಾ ಎಸ್ಟೇಟ್‌ನ ಕುಡಿಕಾಡು ಗ್ರಾಮದ ಬಳಿ ಖಾಸಗಿ ಬಣ್ಣ ಬಳಿಯುವ ಕಾರ್ಖಾನೆ ಕಾರ್ಯನಿರ್ವಹಿಸುತ್ತಿದೆ. ರಾಸಾಯನಿಕ ಕಂಪನಿಯಲ್ಲಿ ರಾಸಾಯನಿಕಗಳನ್ನು ಇಳಿಸುವ ಕೆಲಸ ನಡೆಯುತ್ತಿತ್ತು. ಈ ವೇಳೆ ಸಿಪ್ಕಾಟ್ ಬಣ್ಣ ಬಳಿಯುವ ಕಾರ್ಖಾನೆಯಲ್ಲಿ ಅತಿಯಾದ ಶಾಖದಿಂದಾಗಿ 6 ಲಕ್ಷ ಲೀಟರ್ ರಾಸಾಯನಿಕ ನೀರನ್ನು ಹೊಂದಿದ್ದ ಟ್ಯಾಂಕರ್ ಇದ್ದಕ್ಕಿದ್ದಂತೆ ಸ್ಫೋಟಗೊಂಡಿತು.

ಕೆನಡಾ ವಿದೇಶಾಂಗ ಸಚಿವೆಯಾಗಿ ಭಾರತ ಮೂಲದ ಅನಿತಾ ಆನಂದ್



ಟೊರೊಂಟೊ: ಕೆನಡಾದ ವಿದೇಶಾಂಗ ಸಚಿವೆಯಾಗಿ ಭಾರತ ಮೂಲದ ಅನಿತಾ ಆನಂದ್ ಅವರು ಮಾರ್ಕ್ ಕಾರ್ನೆ ನೇತೃತ್ವದ ಸರಕಾರದಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ಕೆನಡಾದ ಮೊದಲ ಹಿಂದೂ ಸಚಿವೆ ಎಂಬ ಹೆಗ್ಗಳಿಕೆಯನ್ನು ತಮ್ಮದಾಗಿಸಿಕೊಂಡರು. ಈಗಾಗಲೇ ಕೆನಡಾ ಹಾಗೂ ಭಾರತದ ಸಂಬಂಧ ಬಹುತೇಕ ಹಾಳಾಗಿದೆ. ಈಗ ಹೊಸದಾಗಿ ವಿದೇಶಾಂಗ ಸಚಿವೆಯಾಗಿ ಅಧಿಕಾರ ಸ್ವೀಕರಿಸಿರುವ ಅನಿತಾ ಅವರಿಗೆ ಭಾರತದೊಂದಿಗೆ ಹೊಸ ಸ್ನೇಹ ಸಂಬಂಧ ಬೆಳೆಸಲು ಸಹಾಯವಾಗಬಹುದೇ ಎಂಬ ಕುತೂಹಲ ಮೂಡಿದೆ. 2019ರಲ್ಲಿ ರಾಜಕೀಯ ಪ್ರವೇಶಿಸಿದ ಅನಿತಾ ಅವರು, ರಾಷ್ಟ್ರೀಯ ರಕ್ಷಣಾ ಸಚಿವೆ ಹಾಗೂ ಸಾರಿಗೆ ಸಚಿವರಾಗಿ ಸೇವೆ ಸಲ್ಲಿಸಿದ್ದಾರೆ. ಸದ್ಯ ಅನಿತಾ ಅವರು ವಿದೇಶಾಂಗ ಸಚಿವರಾಗಿರುವ ಹಿನ್ನೆಲೆಯಲ್ಲಿ ಖಲಿಸ್ತಾನಿಗಳ ಕುತಂತ್ರದಿಂದಾಗಿ ಹದಗೆಟ್ಟಿರುವ ಭಾರತ–ಕೆನಡಾ ನಡುವಿನ ಬಾಂಧವ್ಯ ಸರಿದಾರಿಗೆ ಬರುವ ನಿರೀಕ್ಷೆಯಿದೆ. ಕೆನಡಾದಲ್ಲಿ ನೆಲೆಸಿರುವ ಭಾರತೀಯ ಮೂಲದ ಪೋಷಕರಿಗೆ (ತಾಯಿ ತಮಿಳುನಾಡು, ತಂದೆ ಪಂಜಾಬ್) 1967ರಲ್ಲಿ ಕೆಂಟ್‌ವಿಲ್ಲೆ ಎಂಬಲ್ಲಿ ಅನಿತಾ ಜನಿಸಿದರು.

ಮದುವೆ ಪಾರ್ಟಿಯಲ್ಲಿ ನರ್ತಕಿ ಜೊತೆ ಬಿಜೆಪಿ ಶಾಸಕನ ಅಶ್ಲೀಲ ವರ್ತನೆ

ಲಖನೌ: ಉತ್ತರಪ್ರದೇಶದ ಬಲ್ಲಿಯಾದಲ್ಲಿ ಹಿರಿಯ



ಬಿಜೆಪಿ ಶಾಸಕ ಮತ್ತು ರಾಸ್ರಾ ಸಕ್ಕರೆ ಕಾರ್ಖಾನೆ ಅಧ್ಯಕ್ಷ ಬಬ್ಬನ್ ಸಿಂಗ್ ರಘುವಂಶಿ ಅಶ್ಲೀಲ ವಿಡಿಯೋವೊಂದು ಸಾಮಾಜಿಕ ಮಾಧ್ಯಮದಲ್ಲಿ ವ್ಯಾಪಕ ವೈರಲ್ ಆಗುತ್ತಿದೆ. ಈ ವಿಡಿಯೋದಲ್ಲಿ ಬಬ್ಬನ್ ಸಿಂಗ್ ವಿವಾಹ ಸಮಾರಂಭದಲ್ಲಿ ಮಹಿಳಾ ನರ್ತಕಿಯೊಂದಿಗೆ ಅಶ್ಲೀಲವಾಗಿ ವರ್ತಿಸಿದ್ದು, ಇದೀಗ ವ್ಯಾಪಕ ಆಕ್ರೋಶಕ್ಕೆ ಕಾರಣವಾಗಿದೆ.

ಬಿಜೆಪಿ ನಾಯಕ ಬಬ್ಬನ್ ಸಿಂಗ್ ರಘುವಂಶಿ ಮಹಿಳಾ ಡ್ಯಾನ್ಸರ್ ಜೊತೆ ಅಶ್ಲೀಲವಾಗಿ ವರ್ತಿಸಿ, ಆಕೆಯ ಖಾಸಗಿ ಅಂಗಗಳನ್ನು ಮುಟ್ಟಿ ವಿಕೃತ ಆನಂದ ಪಡೆಯುತ್ತಿರುವುದು ವಿಡಿಯೋದಲ್ಲಿ ದಾಖಲಾಗಿದೆ. ಈ ವಿಡಿಯೋ ಬಿಡುಗಡೆಯಾದ ನಂತರ ಬಲ್ಲಿಯಾ ರಾಜಕೀಯದಲ್ಲಿ ಅಲ್ಲೋಲ ಕಲ್ಲೋಲ ಉಂಟಾಗಿದ್ದು, ಶಾಸಕ ರಘುವಂಶಿ ತಮ್ಮ ಮೇಲಿನ ಆರೋಪವನ್ನು ಅಲ್ಲಗಳೆದಿದ್ದಾರೆ. ಬಬ್ಬನ್ ಸಿಂಗ್ ಇದನ್ನು ಬನ್ಸ್‌ದಿಹ್ ಶಾಸಕ ಕೇತ್ಕಿ ಸಿಂಗ್ ಅವರ ಬೆಂಬಲಿಗರ ಪಿತೂರಿ ಎಂದು ಕರೆದಿದ್ದಾರೆ ಮತ್ತು ಪೊಲೀಸರಿಗೆ ದೂರು ನೀಡುವ ಬಗ್ಗೆ ಮಾತನಾಡಿದ್ದಾರೆ.

ಭಾರತ ನಾಶ ಮಾಡಿದ್ದ ಲಷ್ಕರ್ ಉಗ್ರ ತರಬೇತಿ ಕೇಂದ್ರ ಮರು ನಿರ್ಮಾಣ

ಇಸ್ಲಾಮಾಬಾದ್: ಪಹಲ್ಗಾಮ್ ಉಗ್ರ ದಾಳಿಗೆ ಪ್ರತಿಯಾಗಿ



ಭಾರತೀಯ ಸೇನೆಯ ಆಪರೇಷನ್ ಸಿಂಧೂರ್ ಕಾರ್ಯಾಚರಣೆ ವೇಳೆ ನಾಶವಾಗಿದ್ದ ಉಗ್ರ ತರಬೇತಿ ಕೇಂದ್ರಗಳನ್ನು ಮರು ನಿರ್ಮಾಣ ಮಾಡುವುದಾಗಿ ಪಾಕಿಸ್ತಾನ ಪ್ರತಿಜ್ಞೆ ಮಾಡಿದೆ.

ಪಾಕಿಸ್ತಾನದ ಫೆಡರಲ್ ಸಚಿವ ರಾಣಾ ತನ್ವೀರ್ ಹುಸೈನ್ ಬುಧವಾರ ಅಂದರೆ ಮುರಿಡ್ಕೆ ಸ್ಥಳಕ್ಕೆ ಭೇಟಿ ನೀಡಿದ್ದರು. ಈ ವೇಳೆ ಸಂತ್ರಸ್ತರನ್ನು ಭೇಟಿ ಮಾಡಿದ್ದ ಅವರು, ಪಾಕ್ ಸರ್ಕಾರ ಸ್ವಂತ ಖರ್ಚಿನಲ್ಲಿ ಈ ಪ್ರದೇಶವನ್ನು ಪುನರ್‌ನಿರ್ಮಿಸಲು ಪ್ರತಿಜ್ಞೆ ಮಾಡಿರುವುದಾಗಿ ತಿಳಿಸಿದ್ದಾರೆ. ಆ ಮೂಲಕ ಉಗ್ರ ಸಂಘಟನೆಗಳಿಗೆ ಸರ್ಕಾರ ನೆರವು ನೀಡಲಿದೆ ಎಂದು ಬಹಿರಂಗವಾಗಿಯೇ ಘೋಷಣೆ ಮಾಡಿದ್ದಾರೆ.

ಇದೇ ವಿಚಾರವಾಗಿ ಆಪರೇಷನ್ ಸಿಂಧೂರ ಕಾರ್ಯಾಚರಣೆಯಲ್ಲಿ ಧ್ವಂಸಗೊಂಡ ಮಸೀದಿ, ಕಟ್ಟಡಗಳ ಪುನರ್ ನಿರ್ಮಾಣಕ್ಕೆ ಪಾಕ್ ಪ್ರಧಾನಮಂತ್ರಿ ಶೆಹಬಾಝ್ ಶರೀಫ್ ಮತ್ತು ಸೇನಾ ವರಿಷ್ಠ ಅಸೀಮ್ ಮುನೀರ್ ವೈಯಕ್ತಿಕವಾಗಿಯೂ ಆರ್ಥಿಕ ನೆರವು ನೀಡಲಿದ್ದಾರೆ ಎಂದು ಪಾಕಿಸ್ತಾನದ ಮಾಧ್ಯಮಗಳು ವರದಿ ಮಾಡಿವೆ.

ಕರ್ತವ್ಯ ಲೋಪ ಆರೋಪ ಸಾಬೀತು

ಲಾಂಗ್ ತೋರಿಸಿದ ಎಸ್ಐ, ಎಎಸ್ಐ ಅಮಾನತು

ಮಡಿಕೇರಿ, ಮೇ 15– ಲಾಂಗ್ ತೋರಿಸಿ ಬೆದರಿಸಿ ಬೈಕ್ ಕೀಗಳನ್ನು ಕಿತ್ತುಕೊಂಡು ಹೋಗಿದ್ದ ಪ್ರಕರಣ ಸಂಬಂಧ ಸುಂಟಿಕೊಪ್ಪ ಠಾಣೆಯ ಸಬ್‌ಇನ್ಸ್‌ಪೆಕ್ಟರ್ ಜಗದೀಶ್ ಮತ್ತು ಸಹಾಯಕ ಸಬ್ ಇನ್ಸ್‌ಪೆಕ್ಟರ್ ತೀರ್ಥಕುಮಾರ್ ಅವರನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಅಮಾನತು ಗೊಳಿಸಿದ್ದಾರೆ.

ಇತ್ತೀಚಿಗೆ ಸುಂಟಿಕೊಪ್ಪ ಸಮೀಪದ ಗರಗಂದೂರು ಗ್ರಾಮದಲ್ಲಿ ರಾತ್ರಿ ತೆರೆ ಮಹೋತ್ಸವ ಕಾರ್ಯಕ್ರಮ ನಡೆದಿತ್ತು. ಈ ಕಾರ್ಯಕ್ರಮಕ್ಕೆ 8 ಮಂದಿ ಸ್ನೇಹಿತರು ತೆರಳಿ ಮಧ್ಯರಾತ್ರಿ 2 ಗಂಟೆಗೆ ಸಮಯದಲ್ಲಿ ಕಾಜೂರು ಗ್ರಾಮಕ್ಕೆ ಹೋಗುವ ದಾರಿಯಲ್ಲಿರುವ ಬಸ್ ಶೆಲ್ಟರ್‌ನಲ್ಲಿ ಆಟೋರಿಕ್ಷಕ್ಕಾಗಿ ಕಾದು ಕುಳಿತ್ತಿದ್ದರು. ಈ ವೇಳೆ ವ್ಯಾನ್ ಹಾಗೂ ನೀಲಿ ಬಣ್ಣದ ಕಾರಿನಲ್ಲಿ ಮಫ್ತಿಯಲ್ಲಿ ಬಂದ ಎಸ್ಐ ಮತ್ತು ಎಎಸ್ಐ ಯುವಕರ ಕುತ್ತಿಗೆಗೆ ಲಾಂಗ್ ಹಿಡಿದು ಇಸ್ಪೀಟ್ ಎಲ್ಲಿ ಆಡಿದ್ದೀರಿ ಎಂದು ಪ್ರಶ್ನಿಸಿ ನಂತರ 3 ಬೈಕುಗಳ ಕೀ ಹಾಗೂ 3 ಮೊಬೈಲ್‌ಗಳನ್ನು ಕಿತ್ತುಕೊಂಡು ಮರುದಿನ ಠಾಣೆಗೆ ಬರುವಂತೆ ತಿಳಿಸಿ ಸ್ಥಳದಿಂದ ತೆರಳಿದ್ದಾರೆ. ಠಾಣೆಗೆ ತೆರಳಿದ ಸಂದರ್ಭ ಎಎಸ್ಐ ಯುವಕರಿಂದ 3 ಸಾವಿರ ರೂ. ಹಣ ಪಡೆದು ಮೊಬೈಲ್ ಹಾಗೂ ಬೈಕ್‌ಗಳ ಕೀಗಳನ್ನು ಹಿಂದುರಿಗಿಸಿ ಖಾಲಿ ಪತ್ರದಲ್ಲಿ ಸಹಿ ಮಾಡಿ ಕಳುಹಿಸಿದ್ದರು.

ಖಾಲಿ ಪತ್ರಕ್ಕೆ ಸಹಿ ಹಾಕಿಸಿಕೊಂಡ ಹಿನ್ನೆಲೆಯಲ್ಲಿ ಐವರು ಯುವಕರು ನೇರವಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಬಳಿಗೆ ತೆರಳಿ ನಡೆದ ಘಟನೆಯ ಬಗ್ಗೆ ವಿವರಿಸಿ ದೂರು ನೀಡಿದ್ದರು.

ಸೋಮವಾರಪೇಟೆ ವೃತ್ತ ನಿರೀಕ್ಷಕರ ನೇತೃತ್ವದಲ್ಲಿ ತನಿಖೆ ಕೈಗೊಂಡು ವರದಿ ನೀಡುವಂತೆ ಎಸ್.ಪಿ.ರಾಮರಾಜನ್ ಸೂಚಿಸಿದ್ದರು. ವರದಿ ಅನ್ವಯ ಕರ್ತವ್ಯ ಲೋಪ ಎಸಗಿದ ಸುಂಟಿಕೊಪ್ಪ ಠಾಣಾಧಿಕಾರಿ ಜಗದೀಶ್ ಮತ್ತು ಎಎಸ್ಐ ತೀರ್ಥಕುಮಾರ್ ಅವರನ್ನು ಅಮಾನತು ಮಾಡಲಾಗಿದೆ. ಮತ್ತೋರ್ವ ಪೊಲೀಸ್ ಸಿಬ್ಬಂದಿಯನ್ನು ಬೇರೆ ಠಾಣೆಗೆ ವರ್ಗಾವಣೆ ಮಾಡಿ ಪೊಲೀಸ್ ವರಿಷ್ಠಾಧಿಕಾರಿಗಳು ಆದೇಶ ಮಾಡಿದ್ದಾರೆ.

ಕುಂಡ್ಯೋಳಂಡ ಕೌಟುಂಬಿಕ ಹಾಕಿ ಉತ್ಸವದ ಸವಿನೆನಪಿಗಾಗಿ

ನಾಪೋಕ್ಲುವಿನಲ್ಲಿ ನೂತನ ಹಾಕಿ ಮೈದಾನಕ್ಕೆ ಶಂಕುಸ್ಥಾಪನೆ

ನಾಪೋಕ್ಲು, ಮೇ 15– ಕುಂಡ್ಯೋಳಂಡ ಕುಟುಂಬಸ್ಥರು ಯಶಸ್ವಿಯಾಗಿ 24ನೇ ಕೌಟುಂಬಿಕ ಹಾಕಿ ಉತ್ಸವವನ್ನು 2024 ರಲ್ಲಿ ಆಯೋಜಿಸಿದ್ದು, ಅದರ ಸವಿನೆನಪಿಗಾಗಿ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ನೂತನ ಹಾಕಿ ಮೈದಾನವನ್ನು ನಿರ್ಮಿಸಲಾಗುತ್ತಿದೆ ಎಂದು ಹಾಕಿ ಹಬ್ಬದ ಅಧ್ಯಕ್ಷ ಕುಂಡ್ಯೋಳಂಡ ರಮೇಶ್ ಮುದ್ದಯ್ಯ ತಿಳಿಸಿದ್ದಾರೆ.



ನಾಪೋಕ್ಲುವಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನೂತನ ಆಟದ ಮೈದಾನ ನಿರ್ಮಿಸಲು ಶಂಕುಸ್ಥಾಪನೆ ನೆರವೇರಿಸಲಾಯಿತು.

ನಾಪೋಕ್ಲುವಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನೂತನ ಆಟದ ಮೈದಾನ ನಿರ್ಮಿಸಲು ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಕಾಲೇಜು ಅಭಿವೃದ್ಧಿ ಸಮಿತಿ, ಕಾಲೇಜು ಪ್ರಾಂಶುಪಾಲರು, ಸಿಬ್ಬಂದಿವರ್ಗ ಹಾಗೂ ವಿದ್ಯಾರ್ಥಿಗಳ ಕೋರಿಕೆ ಮೇರೆಗೆ ಕುಂಡ್ಯೋಳಂಡ ಕುಟುಂಬಸ್ಥರು ಈ ಕಾರ್ಯಕ್ಕೆ ಮುಂದಾಗಿದ್ದೇವೆ ಎಂದರು.

2024 ರಲ್ಲಿ ನಾಪೋಕ್ಲುವಿನಲ್ಲಿ ನಡೆಸಲಾದ ಕೊಡವ ಕೌಟುಂಬಿಕ ಹಾಕಿ ಹಬ್ಬದ ಸ್ಮರಣಾರ್ಥವಾಗಿ ಕಾಲೇಜಿನಲ್ಲಿ ಸುಮಾರು 110 ಮೀಟರ್ ಉದ್ದ, 65 ಮೀಟರ್ ಅಗಲದ ನೂತನ ಆಟದ ಮೈದಾನ ನಿರ್ಮಿಸಲು ಶಂಕುಸ್ಥಾಪನೆಯನ್ನು ನೆರವೇರಿಸಲಾಗಿದೆ ಎಂದರು.

ಈ ಸಂದರ್ಭ ಕಾರ್ಯಕ್ರಮದಲ್ಲಿ ಕುಂಡ್ಯೋಳಂಡ ಕುಟುಂಬದ ಹಾಕಿ ಹಬ್ಬದ ಖಜಾಂಚಿ ವಿಶು ಪೂವಯ್ಯ, ಕಾರ್ಯದರ್ಶಿ ಬಿಪಿನ್ ಬೆಳ್ಳಿಯಪ್ಪ, ಕುಟುಂಬಸ್ಥರಾದ ಪ್ರಫುಲ್ ಪೊನ್ನಪ್ಪ, ಕವಿತ ಮುತ್ತಣ್ಣ ಹಾಗೂ ಕಾಲೇಜು ಪ್ರಾಂಶುಪಾಲರಾದ ಮನೋಜ್‌ಕುಮಾರ್ ಹಾಗೂ ಬೋಧಕ, ಬೋಧಕೇತರ ಸಿಬ್ಬಂದಿವರ್ಗದವರು ಹಾಜರಿದ್ದರು.

ಕಾಡಾನೆಗಳನ್ನು ಹಿಮ್ಮೆಟ್ಟಿಸುವ ಕಾರ್ಯಾಚರಣೆ

ತೋಟದಿಂದ ತೋಟಗಳಿಗೆ ಓಡಾಡುತ್ತಿರುವ ಆನೆಗಳು

ಕತ್ತಲೆಯಾದ ಕಾರಣ ಕಾರ್ಯಾಚರಣೆ ಸ್ಥಗಿತ

ಸಿದ್ದಾಪುರ, ಮೇ 15– ಅಮ್ಮತ್ತಿ ಸಮೀಪದ ಕಣ್ಣಂಗಾಲ ಗ್ರಾಮ ವ್ಯಾಪ್ತಿಯ ಕಾಫಿ ತೋಟಗಳಲ್ಲಿ ಬೀಡು ಬಿಟ್ಟು ದಾಂಧಲೆ ನಡೆಸುತ್ತಿದ್ದ ಕಾಡಾನೆಗಳನ್ನು ಕಾಡಿಗಟ್ಟುವ ಕಾರ್ಯಾಚರಣೆ ನಡೆಸಲಾಗಿದ್ದರು, ಕಾಡಾನೆಗಳು ತೋಟದಿಂದ ತೋಟಕ್ಕೆ ವಲಸೆ ಹೋಗಲಾರಂಭಿಸಿವೆ.

ವೀರಾಜಪೇಟೆ ವಲಯ ಅರಣ್ಯ ವ್ಯಾಪ್ತಿಯ ಕಣ್ಣಂಗಾಲ ಗ್ರಾಮದಲ್ಲಿ ಕಾಡಾನೆಗಳ ಹಿಂಡು ಬೀಡು ಬಿಟ್ಟು ದಾಂಧಲೆ ನಡೆಸಿ ಕೃಷಿ ಫಸಲುಗಳನ್ನು ನಾಶಗೊಳಿಸುತ್ತಿವೆ ಎಂದು ಗ್ರಾಮಸ್ಥರು ಅರಣ್ಯ ಇಲಾಖೆ ಅಧಿಕಾರಿಗಳಿಗೆ ದೂರು ನೀಡಿದ್ದರು. ಈ ಹಿನ್ನೆಲೆಯಲ್ಲಿ ವೀರಾಜಪೇಟೆ ವಲಯ ಅರಣ್ಯ ಅಧಿಕಾರಿ ಕೆ.ವಿ.ಶಿವರಾಮ್ ನೇತೃತ್ವದಲ್ಲಿ ಕಾರ್ಯಾಚರಣೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಕಾಡಾನೆಗಳು ಒಂದು ತೋಟದಿಂದ ಮತ್ತೊಂದು ತೋಟಕ್ಕೆ ಓಡಾಡುತ್ತಾ ಕಾರ್ಯಾಚರಣೆ ತಂಡವನ್ನು ಸುತ್ತಾಡಿಸಿವೆ. ಕಾಫಿ ತೋಟಗಳಲ್ಲಿ ಬೀಡು ಬಿಟ್ಟ ಕಾಡಾನೆಗಳು ಅರಣ್ಯಕ್ಕೆ ತೆರಳಲು ಹಿಂದೇಟು ಹಾಕಿದ ಕಾರಣ ಸಂಜೆಯಾಗುತ್ತಲೇ ಕಾರ್ಯಾಚರಣೆ ಸ್ಥಗಿತಗೊಳಿಸಲಾಯಿತು. ಮರಿ ಆನೆಗಳು ಸೇರಿದಂತೆ 28ಕ್ಕೂ ಅಧಿಕ ಕಾಡಾನೆಗಳು ಕಾಫಿ ತೋಟಗಳಲ್ಲಿ ಕಂಡು ಬಂದಿದೆ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

ಈ ಸಂದರ್ಭ ಉಪ ವಲಯ ಅರಣ್ಯ ಅಧಿಕಾರಿ ಸಂಜೀತ್ ಸೋಮಯ್ಯ ಹಾಗೂ ಆನೆ ಕಾರ್ಯಪಡೆ ಸಿಬ್ಬಂದಿಗಳು, ಅರಣ್ಯ ಇಲಾಖೆ ಸಿಬಂದಿಗಳು ಭಾಗವಹಿಸಿದ್ದರು.

ನಿಷೇಧಿತ ಮಾದಕ ವಸ್ತು ಎಂಡಿಎಂಎ ಮಾರಾಟಕ್ಕೆ ಯತ್ನಿಸುತ್ತಿದ್ದವನ ಬಂಧನ

ಮಡಿಕೇರಿ, ಮೇ 15– ನಿಷೇಧಿತ ಮಾದಕ ವಸ್ತು ಎಂಡಿಎಂಎ ಮಾರಾಟ ಮಾಡಲು ಯತ್ನಿಸುತ್ತಿದ್ದ ಆರೋಪಿಯನ್ನು ಮಡಿಕೇರಿ ನಗರ ಠಾಣಾ ಪೊಲೀಸರು ಬಂಧಿಸಿದ್ದಾರೆ.



ನಗರದ ಅಬ್ದುಲ್ ಕಲಾಂ ಬಡಾವಣೆ ನಿವಾಸಿ ಮೊಹಮದ್ ಶರ್ಜಿಲ್(41) ಎಂಬಾತನೇ ಬಂಧಿತನಾಗಿದ್ದು, ಈತನ ಬಳಿಯಿದ್ದ 3.66 ಗ್ರಾಂ ಎಂಡಿಎಂಎ ಹಾಗೂ ಕೃತ್ಯಕ್ಕೆ ಬಳಸಿದ 1 ದ್ವಿಚಕ್ರ ವಾಹನವನ್ನು ವಶಕ್ಕೆ ಪಡೆಯಲಾಗಿದೆ.

ನಗರದ ಎ.ವಿ ಶಾಲೆ ಬಳಿಯಿಂದ ಅಬ್ಬಿಫಾಲ್ಸ್ ಕಡೆಗೆ ತೆರಳುವ ರಸ್ತೆ ಜಂಕ್ಷನ್ ಬಳಿ ಮಾದಕ ವಸ್ತು ಮಾರಾಟ ಮಾಡುತ್ತಿರುವ ಬಗ್ಗೆ ಮಾಹಿತಿ ಲಭಿಸಿತ್ತು. ಈ ಹಿನ್ನೆಲೆಯಲ್ಲಿ ದಾಳಿ ನಡೆಸಿದ ನಗರ ಠಾಣಾ ಪೊಲೀಸರು ಆರೋಪಿಯನ್ನು ಮಾಲು ಸಹಿತ ಬಂಧಿಸಿದ್ದಾರೆ. ಮಡಿಕೇರಿ ಡಿವೈಎಸ್‌ಪಿ ಸೂರಜ್ ಪಿ.ಎ, ನಗರ ಠಾಣಾ ವೃತ್ತ ನಿರೀಕ್ಷಕ ಪಿ.ಕೆ.ರಾಜು, ಠಾಣಾಧಿಕಾರಿ ಅನ್ನಪೂರ್ಣ ಎಸ್.ಶಂಕರಗುಳ್ಳಿ ಮತ್ತು ಸಿಬ್ಬಂದಿಗಳು ಕಾರ್ಯಾಚರಣೆ ನಡೆಸಿದ್ದಾರೆ.

ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದು ಉರುಳಿ ಬಿದ್ದ ಕಾರು

ಚಾಲಕನಿಗೆ ಗಾಯ, ಉಳಿದವರು ಪಾರು


ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಬದಿಯಲ್ಲಿದ್ದ ವಿದ್ಯುತ್ ಕಂಬಕ್ಕೆ ಅಪ್ಪಳಿಸಿ ಕಾರು ಪಲ್ಟಿಯಾಗಿರುವುದು.

ಮಡಿಕೇರಿ, ಮೇ 15– ಚಾಲಕನ ನಿಯಂತ್ರಣ ಕಳೆದುಕೊಂಡ ಕಾರೊಂದು ರಸ್ತೆ ಬದಿಯಲ್ಲಿದ್ದ ವಿದ್ಯುತ್ ಕಂಬಕ್ಕೆ ಅಪ್ಪಳಿಸಿ ರಸ್ತೆ ಮಧ್ಯೆ ಮಗುಚಿ ಬಿದ್ದ ಘಟನೆ ನಾಪೋಕ್ಲು ಮೂರ್ನಾಡು ಮುಖ್ಯ ರಸ್ತೆಯ ಹೊದ್ದೂರು ಗ್ರಾಮದ ತಿರುವು ರಸ್ತೆಯಲ್ಲಿ ನಡೆದಿದೆ.

ಕೇರಳದ ಕಣ್ಣೂರಿನಿಂದ ವಿರಾಜಪೇಟೆ ಮೂರ್ನಾಡು ಮಾರ್ಗವಾಗಿ ನಾಪೋಕ್ಲು ಬಳಿಯ ಎಮ್ಮೆಮಾಡು ದರ್ಗಾಕ್ಕೆ ಕಾರಿನಲ್ಲಿ ಆರು ಮಂದಿ ಪ್ರಯಾಣಿಕರು ಆಗಮಿಸುತ್ತಿದ್ದರು. ಮೂರ್ನಾಡು ನಾಪೋಕ್ಲು ಮುಖ್ಯ ರಸ್ತೆಯ ಹೊದ್ದೂರು ಗ್ರಾಮದ ಭಗವತಿ ಕಾಲೋನಿ ಸಮೀಪದ ರಸ್ತೆ ತಿರುವಿನಲ್ಲಿ ಚಾಲಕನ ನಿಯಂತ್ರಣ ಕಳೆದುಕೊಂಡ ಕಾರು ಮೊದಲಿಗೆ ರಸ್ತೆ ಬದಿಯ ವಿದ್ಯುತ್ ಕಂಬಕ್ಕೆ ಅಪ್ಪಳಿಸಿದೆ. ಬಳಿಕ ಕಾರು ರಸ್ತೆಯಲ್ಲಿ ಪಲ್ಟಿಯಾಗಿದೆ.

ಅಪಘಾತದಿಂದ ಚಾಲಕನಿಗೆ ಸಣ್ಣಪುಟ್ಟ ಗಾಯಗಳಾಗಿದ್ದು ಉಳಿದ ಪ್ರಯಾಣಿಕರು ಅದೃಷ್ಟವಶಾತ್ ಪ್ರಾಣಪಾಯದಿಂದ ಪಾರಾಗಿದ್ದಾರೆ. ಅಪಘಾತದಿಂದ ಕಾರು ಸಂಪೂರ್ಣ ಜಖಂಗೊಂಡಿದ್ದು ವಿದ್ಯುತ್ ಕಂಬಕ್ಕೂ ಹಾನಿ ಉಂಟಾಗಿದೆ. ಶಬ್ದ ಕೇಳಿ ಸ್ಥಳಕ್ಕಾಗಮಿಸಿದ ಭಗವತಿ ಕಾಲೋನಿ ನಿವಾಸಿಗಳು ರಸ್ತೆಯಲ್ಲಿ ಪಲ್ಟಿಯಾದ ಕಾರಿನೊಳಗೆ ಸಿಲುಕಿಕೊಂಡಿದ್ದ ಪ್ರಯಾಣಿಕರನ್ನು ರಕ್ಷಣೆ ಮಾಡಿದ್ದಾರೆ. ನಂತರ ರಸ್ತೆಯಿಂದ ಕಾರನ್ನು ತೆರವುಗೊಳಿಸಿ ಇತರ ವಾಹನಗಳ ಸುಗಮ ಸಂಚಾರಕ್ಕೆ ವ್ಯವಸ್ಥೆ ಕಲ್ಪಿಸಿದ್ದಾರೆ.

ವಿರಾಜಪೇಟೆಯಲ್ಲಿ ಕಾಂಕ್ರೀಟ್ ರಸ್ತೆ ಉದ್ಘಾಟನೆ


ಕಲ್ಲುಬಾಣೆಯ ಬದ್ರಿಯಾ ಜುಮಾ ಮಸೀದಿ ಕಾಂಕ್ರೀಟ್ ರಸ್ತೆಯನ್ನು ಶಾಸಕ ಪೊನ್ನಣ್ಣ ಉದ್ಘಾಟಿಸಿದರು.

ವಿರಾಜಪೇಟೆ: ತಾಲೂಕಿನ ಆರ್ಜಿ ಗ್ರಾಮದ ಕಲ್ಲುಬಾಣೆಯ ಬದ್ರಿಯಾ ಜುಮಾ ಮಸೀದಿ ಮುಂಭಾಗ ಶಾಸಕರ ವಿಶೇಷ ಮುತುವರ್ಜಿಯಿಂದ 25 ಲಕ್ಷ ರೂ. ವೆಚ್ಚದಲ್ಲಿ ನೂತನವಾಗಿ ನಿರ್ಮಿಸಲಾದ ಕಾಂಕ್ರೀಟ್ ರಸ್ತೆಯನ್ನು ಮುಖ್ಯಮಂತ್ರಿಗಳ ಕಾನೂನು ಸಲಹೆಗಾರರಾದ ಅಜ್ಜಿಕುಟ್ಟಿರ ಎಸ್.ಪೊನ್ನಣ್ಣ ಉದ್ಘಾಟಿಸಿದರು.

25 ಲಕ್ಷ ರೂ. ಅನುದಾನದಲ್ಲಿ ಕಲ್ಲುಬಾಣೆ ಮುಖ್ಯ ರಸ್ತೆ ಮತ್ತು ವಾನಂಡ ಮನೆ ರಸ್ತೆಯಿಂದ ಇ.ಎಂ.ಎಸ್ ಅಲಿ ಅವರ ಮನೆಯ ಕಡೆಗೆ ಹೋಗುವ ರಸ್ತೆಯನ್ನು ಸಾರ್ವಜನಿಕರ ಬಳಕೆಗೆ ಅನುವು ಮಾಡಿಕೊಟ್ಟು ಬಳಿಕ ನಡೆದ ಸಭಾ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಶಾಸಕ ಪೊನ್ನಣ್ಣ ಹಲವು ವರ್ಷಗಳಿಂದ ಈ ರಸ್ತೆಯು ಅಭಿವೃದ್ಧಿ ಕಾಣದೆ ಇರುವುದನ್ನು ಗಮನಿಸಿ ಕಾಮಗಾರಿಗೆ ಅನುದಾನವನ್ನು ಒದಗಿಸಿರುವುದಾಗಿ ತಿಳಿಸಿದರು.

ನಾನು ಆಯ್ಕೆಯಾಗಿ ಬಂದಾಗಿನಿಂದ ಕ್ಷೇತ್ರದಾದ್ಯಂತ ರಸ್ತೆಗಳ ಅಭಿವೃದ್ಧಿಗೆ ಪ್ರಮುಖ ಆದ್ಯತೆಯನ್ನು ನೀಡುತ್ತಿದ್ದು, ಪಕ್ಷದ ಮುಖಂಡರುಗಳು, ಕಾರ್ಯಕರ್ತರು ಹಾಗೂ ವಿಶೇಷವಾಗಿ ಸಾರ್ವಜನಿಕರು ಇಂತಹ ಅಭಿವೃದ್ಧಿ ಕಾಮಗಾರಿಗಳಿಗೆ ತನ್ನೊಂದಿಗೆ ಕೈಜೋಡಿಸಬೇಕೆಂದು ಕರೆ ನೀಡಿದರು. ವಿರಾಜಪೇಟೆ ತಾಲೂಕು ಬಗರ್ ಹುಕುಂ ಅಕ್ರಮ ಸಕ್ರಮ ಸಮಿತಿ ಅಧ್ಯಕ್ಷ ಸಲಾಂ ಮಾತನಾಡಿದರು.

ಇದೇ ಸಂದರ್ಭ ಶಾಸಕರಿಗೆ ಸನ್ಮಾನಿಸುವುದರ ಮೂಲಕ ಸ್ಥಳೀಯರು ಕೃತಜ್ಞತೆ ಅರ್ಪಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷ ಹನೀಫ್, ವಿರಾಜಪೇಟೆ ತಾಲೂಕು ಕೆಡಿಪಿ ಸದಸ್ಯ ರಫೀಕ್, ಪುರಸಭಾ ಸದಸ್ಯ ಮಹಮ್ಮದ್ ರಫಿ, ನಗರ ಕಾಂಗ್ರೆಸ್ ಅಧ್ಯಕ್ಷ ಮಾದಂಡ ತಿಮ್ಮಯ್ಯ, ಆರ್ಜಿ ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಜಾಫರ್, ಕಾಂಗ್ರೆಸ್ ಮುಖಂಡ ಹಾಗೂ ಹಿರಿಯರಾದ ಚೇಕು ಹಾಗೂ ಕುಂಞನ್, ವಲಯ ಅಧ್ಯಕ್ಷರು, ಪಕ್ಷದ ಪ್ರಮುಖರು ಹಾಗೂ ಸ್ಥಳೀಯರು ಉಪಸ್ಥಿತರಿದ್ದರು.

ಜಿಲ್ಲಾ ಮಟ್ಟದ ತ್ರೈಮಾಸಿಕ ಕೆಡಿಪಿ ಸಭೆ ಮುಂದೂಡಿಕೆ

ಮಡಿಕೇರಿ: 2025–26ನೇ ಸಾಲಿನ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (20 ಅಂಶಗಳ ಕಾರ್ಯಕ್ರಮ ಸೇರಿದಂತೆ) ಸಂಬಂಧ ಮೇ 17 ರಂದು ನಡೆಯಬೇಕಿದ್ದ ಜಿಲ್ಲಾ ಮಟ್ಟದ ತ್ರೈಮಾಸಿಕ ಕೆಡಿಪಿ ಸಭೆಯನ್ನು ಕಾರಣಾಂತರಗಳಿಂದ ಮುಂದೂಡಲಾಗಿದೆ ಎಂದು ಜಿಪಂ ಸಿಇಒ ಆನಂದ್ ಪ್ರಕಾಶ್ ಮೀನಾ ತಿಳಿಸಿದ್ದಾರೆ.

ಗುತ್ತಿಗೆದಾರ ಸಂಪತ್ ಕೊಲೆ ಪ್ರಕರಣ

ಆರೋಪಿಗಳ ಸೆರೆಗೆ 2 ತಂಡ ರಚನೆ

ಮಡಿಕೇರಿ, ಮೇ15– ಕುಶಾಲನಗರದಿಂದ ನಾಪತ್ತೆಯಾಗಿ ಸಕಲೇಶಪುರ ತಾಲೂಕು ಯಸಳೂರು ಹೋಬಳಿ ಮಾಗೇರಿಯ ಸಮೀಪ ಕಲ್ಲಹಳ್ಳಿ ಗ್ರಾಮದ ನಿರ್ಜನ ಪ್ರದೇಶದಲ್ಲಿ ಪತ್ತೆಯಾಗಿದ್ದ ಸೋಮವಾರಪೇಟೆ ತಾಲೂಕು ಕಕ್ಕೆಹೊಳೆ ಜಂಕ್ಷನ್ ನಿವಾಸಿ ಗುತ್ತಿಗೆದಾರ ಸಂಪತ್ (ಶಂಭು) ಕೊಲೆ ಪ್ರಕರಣದ ತನಿಖೆಯನ್ನು ಚುರುಕುಗೊಳಿಸಲಾಗಿದೆ.



ಇದೊಂದು ವ್ಯವಸ್ಥಿತ ಕೊಲೆ ಎಂಬ ಶಂಕೆ ವ್ಯಕ್ತವಾಗಿರುವ ಹಿನ್ನೆಲೆಯಲ್ಲಿ ಆರೋಪಿಗಳ ಬಂಧನಕ್ಕೆ ಕೊಡಗು ಜಿಲ್ಲಾ ಪೊಲೀಸರ 2 ತನಿಖಾ ತಂಡಗಳನ್ನು ರಚಿಸಲಾಗಿದೆ. ಕೃತ್ಯದಲ್ಲಿ ಪಾಲ್ಗೊಂಡ ಕೆಲವು ಆರೋಪಿಗಳ ಬಗ್ಗೆ ಇಲಾಖೆಗೆ ಸುಳಿವು ಲಭಿಸಿದೆ ಎನ್ನಲಾಗುತ್ತಿದೆ. ಕೃತ್ಯ ಎಸಗಿದ ಬಳಿಕ ಆರೋಪಿಗಳು ಹಾಸನ ಮೂಲಕ ಚಿಕ್ಕಮಗಳೂರು ಕಡೆಗೆ ತೆರಳಿರುವ ಶಂಕೆ ವ್ಯಕ್ತವಾಗಿರುವ ಹಿನ್ನೆಲೆಯಲ್ಲಿ ಆರೋಪಿಗಳ ಬಂಧನಕ್ಕೆ ಒಂದು ತನಿಖಾ ತಂಡ ಚಿಕ್ಕಮಗಳೂರು ಕಡೆಗೆ ತೆರಳಿದೆ ಎಂಬ ಮಾಹಿತಿ ಲಭಿಸಿದೆ.

ನಿನ್ನೆ ದಿನ ರಾತ್ರಿ ತರಲಾಗಿದ್ದ ಸಂಪತ್ ಅವರ ಮೃತದೇಹದ ಮರಣೋತ್ತರ ಪರೀಕ್ಷೆ ಮಡಿಕೇರಿ ಜಿಲ್ಲಾಸ್ಪತ್ರೆಯಲ್ಲಿ ಇಂದು ನಡೆಸಲಾಯಿತು. ಜಿಲ್ಲಾಸ್ಪತ್ರೆ ವೈದ್ಯರು ಮತ್ತು ವಿಧಿ ವಿಜ್ಞಾನ ತಜ್ಞರು ಮರಣೋತ್ತರ ಪರೀಕ್ಷೆ ನಡೆಸಿದ ಬಳಿಕ ಮೃತದೇಹವನ್ನು ವಾರಸುದಾರರಿಗೆ ಹಸ್ತಾಂತರಿಸಿದರು.

ವಿದ್ಯುತ್ ಪರಿಕರಗಳನ್ನು ಯೂನಿಪ್ ಯೋಜನೆಯಡಿ ಉಚಿತ ವಿತರಣೆಗೆ ಆಗ್ರಹ

ರಾಜ್ಯ ರೈತ ಸಂಘ, ಹಸಿರು ಸೇನೆ ಬಣದಿಂದ ಪ್ರತಿಭಟನೆ

ಇಂಧನ ಸಚಿವರ ಅಣಕು ಶವಯಾತ್ರೆಗೆ ಪೊಲೀಸರ ವಿರೋಧ; ಪ್ರತಿಕೃತಿ ಮೆರವಣಿಗೆ ಮಾಡಿ, ರೈತರ ಆಕ್ರೋಶ

ಚಾಮರಾಜನಗರ, ಮೇ 15– ವಿದ್ಯುತ್ ಪರಿಕರಗಳನ್ನು ಯೂನಿಪ್ ಯೋಜನೆಯಡಿ ಉಚಿತವಾಗಿ ವಿತರಣೆ ಮಾಡಬೇಕು, ಕೃಷಿ ಪಂಪ್ ಸೆಟ್‌ಗಳಿಗೆ ಸ್ಮಾರ್ಟ್‌ಮೀಟರ್ ಅಳವಡಿಕೆ, ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣ ಮಾಡಲು ಹೊರಟಿರುವ ರಾಜ್ಯ ಸರ್ಕಾರದ ಜನ ವಿರೋಧಿ ನೀತಿ ವಿರೋಧಿಸಿ ನಗರದಲ್ಲಿ ರಾಜ್ಯ ರೈತಸಂಘ, ಹಸಿರುಸೇನೆ ರಾಜ್ಯಾಧ್ಯಕ್ಷ ಡಾ.ವಾಸುದೇವ ಮೇಟಿ ಅವರ ಆದೇಶದ ಮೇರೆಗೆ ಪ್ರತಿಭಟನೆ ನಡೆಸಲಾಯಿತು.

ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯ ಉಪಾಧ್ಯಕ್ಷ ಡಾ.ಗುರುಪ್ರಸಾದ್ ಕಟ್ನವಾಡಿ ಅವರ ನೇತೃತ್ವದಲ್ಲಿ ಇಂಧನ ಸಚಿವರ ಅಣಕು ಶವಯಾತ್ರೆ ನಡೆಸುವ ಸಂಬಂಧ ಚಾಮರಾಜೇಶ್ವರ ದೇವಾಲಯದ ಆವರಣದಿಂದ ಭುವನೇಶ್ವರಿ ವೃತ್ತದಲ್ಲಿ ಜಮಾವಣೆಗೊಂಡರು.

ಅಷ್ಟರಲ್ಲಿ ಪೊಲೀಸರು ಇಂಧನ ಸಚಿವರ ಅಣಕು ಶವಯಾತ್ರೆಗೆ ಅವಕಾಶ ಕೊಡುವುದಿಲ್ಲ ಎಂದು ಪ್ರತಿಕೃತಿಯನ್ನು ಕಿತ್ತುಕೊಳ್ಳಲು ಮುಂದಾದರು. ಇದೇ ವೇಳೆ ರೈತ ಸಂಘಟನೆ ಪದಾಧಿಕಾರಿಗಳು ಪೊಲೀಸರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.


ವಿದ್ಯುತ್ ಕ್ಷೇತ್ರ ಖಾಸಗೀಕರಣ ವಿರೋಧಿಸಿ ನಗರದಲ್ಲಿ ರಾಜ್ಯ ರೈತಸಂಘ, ಹಸಿರುಸೇನೆ ಪ್ರತಿಭಟನೆ ನಡೆಸಿತು.

ನಾವು ಪ್ರತಿಕೃತಿ ದಹಿಸುವುದಿಲ್ಲ. ಸಚಿವರ ಭಾವಚಿತ್ರವನ್ನು ಜನರು ನೋಡಲಿ ಎಂದು ಮೆರವಣಿಗೆಯಲ್ಲಿ ಕೊಂಡೊಯ್ಯುತ್ತಿದ್ದೇವೆ. ಇದಕ್ಕೆ ಅವಕಾಶ ಕೊಡಿ ಎಂದು ಪೊಲೀಸರನ್ನು ಕೇಳಿದಾಗ, ಅವರು ಸೆಸ್ಕ್ ಇಇ ಕಚೇರಿಗೆ ಪ್ರತಿಕೃತಿ ತರಲು ಅವಕಾಶಮಾಡಿಕೊಟ್ಟರು.

ಇಂಧನ ಸಚಿವರ ಪ್ರತಿಕೃತಿ ಸೆಸ್ಕ್ ಕಚೇರಿ ತಲುಪುತ್ತಿದ್ದಂತೆ ಪೊಲೀಸರು ಅದನ್ನು ವಶಪಡಿಸಿಕೊಂಡರು. ಸೆಸ್ಕ್ ಇಇ ಕಚೇರಿ ಆವರಣದಲ್ಲಿ ಸಮಾವೇಶಗೊಂಡ ರಾಜ್ಯ ರೈತ ಸಂಘದ ಪದಾಧಿಕಾರಿಗಳು ಕೇಂದ್ರ ಹಾಗೂ ರಾಜ್ಯಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.

ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಸ್ಮಾರ್ಟ್ ಮೀಟರ್ ಸೇರಿದಂತೆ ಡಿಜಿಟಲ್ ಮೀಟರ್ ಅಳವಡಿಕೆಗೆ ಇಂಧನ ಇಲಾಖೆ 10 ಸಾವಿರ ಶುಲ್ಕ ನಿಗಧಿ ಮಾಡಿದ್ದು, ಕೃಷಿಕ್ಷೇತ್ರ ಉಳಿಸುವ ದೃಷ್ಟಿಯಿಟ್ಟುಕೊಂಡು, ಇದನ್ನು ಕೈಬಿಡಬೇಕು, ಕೃಷಿ ಪಂಪ್‌ಸೆಟ್‌ಗಳಿಗೆ ಆಧಾರ್ ಜೋಡಣೆ ಮಾಡುವ ನಿರ್ಧಾರ ಕೈ ಬಿಡಬೇಕು, ಸರ್ಕಾರ ಅಕ್ರಮ ಸಕ್ರಮ ಯೋಜನೆಯಡಿ, ಹಿಂದೆ 24 ಸಾವಿರ ರೂ. ಶುಲ್ಕ ಕಟ್ಟಿಸಿಕೊಂಡು, ರೈತರಿಗೆ ವಿದ್ಯುತ್ ಪರಿಕರಗಳನ್ನು ಒದಗಿಸಲಾಗುತ್ತಿತ್ತು. ಈಗ ಕೊಳವೆಬಾಯಿ ತೋಡಿಸುವುದರಿಂದ ಮೊದಲ್ಗೊಂಡು, ವಿದ್ಯುತ್ ಸಂಪರ್ಕ ಪಡೆಯುವವರಗೆ 4ರಿಂದ 5ಲಕ್ಷ ರೂ.ವೆಚ್ಚ ಮಾಡಬೇಕು, ಹಿಂದಿನ ಯೂನಿಫ್ ಯೋಜನೆಯಡಿ, ಉಚಿತ ವಿದ್ಯುತ್ ಪರಿಕರ ಒದಗಿಸಬೇಕು ಎಂದು ಆಗ್ರಹಿಸಿದರು.

ತೋಟದ ಜಮೀನಿನಲ್ಲಿ ವಾಸಿಸುವ ರೈತ ಕುಟುಂಬಗಳಿಗೆ, ವಿದ್ಯಾರ್ಥಿಗಳು ಓದುವ ಉದ್ದೇಶದ ಹಿನ್ನೆಲೆ ನಿರಂತರ ವಿದ್ಯುತ್ ಒದಗಿಸಬೇಕು, ಎಲ್‌ಟಿ ಲೈನ್‌ಗಳಲ್ಲಿ ಬೆಳೆದಿರುವ ಗಿಡಗಂಟಿಗಳ ತೆರವಿಗೆ ಮುಂದಾಗಬೇಕು ಎಂದು ಆಗ್ರಹಿಸಿದರು.

ಜಿಲ್ಲಾಧ್ಯಕ್ಷ ಮಾಡ್ರಳ್ಳಿ ಮಹದೇವಪ್ಪ, ಕುಂದುಕೆರೆ ಸಂಪತ್, ತಾಲೂಕು ಅಧ್ಯಕ್ಷ ಮಹೇಶ್, ಹಿರಿಕಾಟಿ ನಾಗರಾಜು, ಚಿಕ್ಕಣ್ಣ, ಹೆಗ್ಗೊಠಾರ ಲಿಂಗಸ್ವಾಮಿ, ತೊಂಡವಾಡಿ ಮಹೇಶ್, ಹಕ್ಕಲಪುರ ಮಹೇಶ್, ಶಿವಮಾಧು, ಮಹದೇವಸ್ವಾಮಿ ಇತರರು ಭಾಗವಹಿಸಿದ್ದರು.

ವಿದ್ಯುತ್ ಕ್ಷೇತ್ರ ಖಾಸಗೀಕರಣ ವಿರೋಧಿಸಿ ಚೆಸ್ಕಾಂ ಅಧಿಕಾರಿಗೆ ರೈತರಿಂದ ಮನವಿ ಸಲ್ಲಿಕೆ


ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣ ವಿರೋಧಿಸಿ ರೈತರು ಮನವಿ ಸಲ್ಲಿಸಿದರು.

ಕೊಳ್ಳೇಗಾಲ: ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣ ಮಾಡಲು ಹೊರಟಿರುವ ರಾಜ್ಯ ಸರ್ಕಾರದ ಜನವಿರೋಧಿ ನೀತಿ ವಿರೋಧಿಸಿ ರಾಜ್ಯ ರೈತ ಸಂಘದ ವತಿಯಿಂದ ಗುರುವಾರ ಮನವಿ ಸಲ್ಲಿಸಲಾಯಿತು.

ಪಟ್ಟಣದ ಚೆಸ್ಕಾಂ ಕಚೇರಿಗೆ ಆಗಮಿಸಿದ ರೈತ ಮುಖಂಡರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಖಾಸಗೀಕರಣದ ನಿಲುವನ್ನು ಖಂಡಿಸಿದರು.

ರೈತರ ಕೃಷಿ ಪಂಪ್ ಸೆಟುಗಳಿಗೆ ಸ್ಮಾರ್ಟ್ ಮೀಟರ್ ಸೇರಿದಂತೆ ಡಿಜಿಟಲ್ ಮೀಟರ್ ಅಳವಡಿಕೆಯನ್ನು ಕೈ ಬಿಡಬೇಕು. ಕೃಷಿ ಪಂಪ್ ಸೆಟುಗಳಿಗೆ ಅಧಾರ್ ಜೋಡಣೆ ಮಾಡುವ ಸರ್ಕಾರದ ಕ್ರಮ ಕೈ ಬೀಡಬೇಕು. ಸರಕಾರ ಅಕ್ರಮ ಸಕ್ರಮ ಯೋಜನೆಯಡಿ ರೈತರಿಗೆ ವಿದ್ಯುತ್ ಪರಿಕರ ಒದಗಿಸಬೇಕು. ತೋಟದ ಜಮೀನಿನಲ್ಲಿ ವಾಸಿಸುವ ರೈತ ಕುಟುಂಬಗಳಿಗೆ ವಿದ್ಯಾರ್ಥಿಗಳು ಓದುವ ಉದ್ದೇಶದ ಹಿನ್ನೆಲೆ ನಿರಂತರ ವಿದ್ಯುತ್ ಒದಗಿಸಬೇಕು. ರೈತರಿಗೆ ಸರ್ಕಾರದ ಆದೇಶದಂತೆ ಸತತ 7 ಗಂಟೆ ವಿದ್ಯುತ್ ನೀಡಬೇಕು ಎಂಬ ಬೇಡಿಕೆ ಸೇರಿದಂತೆ ಇತರೆ ಬೇಡಿಕೆಗಳನ್ನು ಈಡೇರಿಸಬೇಕು. ಇಲ್ಲದಿದ್ದಲ್ಲಿ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಮನವಿ ಸ್ವೀಕರಿಸಿದ ಚೆಸ್ಕಾಂ ಇಲಾಖೆಯ ತಾಂತ್ರಿಕ ವಿಭಾಗದ ಸಹಾಯಕ ಇಂಜಿನಿಯರ್ ಗಾನವಿ ಮಾತನಾಡಿ, ನಿಮ್ಮ ಮನವಿಯನ್ನು ನಮ್ಮ ಮೇಲಾಧಿಕಾರಿಗಳಿಗೆ ನೀಡುವ ಮೂಲಕ ಬೇಡಿಕೆಯನ್ನು ಸರ್ಕಾರದ ಗಮನಕ್ಕೆ ತರುವುದಾಗಿ ಭರವಸೆ ನೀಡಿದರು. ಈ ಸಂಧರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ಅಧ್ಯಕ್ಷ ನಾಗರಾಜು, ಕಾರ್ಯದರ್ಶಿ ರಾಮಕೃಷ್ಣ, ಅಣಗಳ್ಳಿ ದಶರಥ, ಸೋಮಣ್ಣ, ತೇರಂಬಳ್ಳಿ ಮೂರ್ತಿ, ರಾಜಣ್ಣ, ಸರಗೂರು ವೀರಭದ್ರಸ್ವಾಮಿ, ಮಹದೇವ, ನಂಜುಂಡಸ್ವಾಮಿ, ವಾಸು, ಹಿತ್ತಲದೊಡ್ಡಿ ನಾಗರಾಜು, ವಸಂತ್ ಕುಮಾರ್, ವೀರಭದ್ರಪ್ಪ, ಸದಾಶಿವ, ಚಂದ್ರಶೇಖರ್, ಜಗದೀಶ್ ಸೋಮಣ್ಣ, ಷಣ್ಮುಖ ಸ್ವಾಮಿ ಇನ್ನಿತರಿದ್ದರು.

ಅಟ್ಟುಗುಳಿಪುರ ಟೋಲ್‌ನಲ್ಲಿ ಸ್ಥಳೀಯರಿಗೆ ಶುಲ್ಕ ರದ್ದುಪಡಿಸುವಂತೆ ಒತ್ತಾಯಿಸಿ ಡಿಸಿಗೆ ಮನವಿ


ಟೋಲ್ ಶುಲ್ಕ ರದ್ದುಪಡಿಸುವಂತೆ ಒತ್ತಾಯಿಸಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.

ಚಾಮರಾಜನಗರ: ತಾಲೂಕಿನ ಅಟ್ಟುಗುಳೀಪುರ ಟೋಲ್‌ನಲ್ಲಿ ಸ್ಥಳೀಯರಿಗೆ ವಿಧಿಸುವ ಶುಲ್ಕ ರದ್ದು ಪಡಿಸುವಂತೆ ಒತ್ತಾಯಿಸಿ ಗೂಡ್ಸ್ ಆಟೋ ಮಾಲೀಕರು, ಚಾಲಕರ ಸಂಘದ ಪದಾಧಿಕಾರಿಗಳು ಜಿಲ್ಲಾ ರೈತ ಹಿತರಕ್ಷಣಾ ಹೋರಾಟ ಸಮಿತಿ ಪ್ರಧಾನ ಕಾರ್ಯದರ್ಶಿ ಬಸವನಪುರ ರಾಜಶೇಖರ ಅವರ ನೇತೃತ್ವದಲ್ಲಿ ನಗರದ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾಧಿಕಾರಿ ಶಿಲ್ಪಾನಾಗ್ ಅವರಿಗೆ ಮನವಿ ಸಲ್ಲಿಸಿದರು.

ತಾಲೂಕಿನ ಅಟ್ಟುಗುಳೀಪುರ ಟೋಲ್‌ನಲ್ಲಿ ಅಟ್ಟುಗುಳೀಪುರ, ಸಿದ್ದಯ್ಯನಪುರ, ಬಸವಪುರ, ಪುಣಜನೂರು, ಮೂಡಹಳ್ಳಿ ಗ್ರಾಮಗಳ ಗೂಡ್ಸ್, ಟಾಟಾ ಏಸ್ ಚಾಲಕರು ದಿನನಿತ್ಯ ರೈತರು ಬೆಳೆದ ತರಕಾರಿ, ದವಸ, ಧಾನ್ಯಗಳನ್ನು ಮನೆಗೆ ಸಾಗಿಸುವುದು, ಮಾರಾಟ ಮಾಡಲು ಅನೇಕ ಬಾರಿ ಓಡಾಡುತ್ತವೆ. ಪ್ರತಿ ಬಾರಿ ಶುಲ್ಕ ಕಟ್ಟಬೇಕಾಗುತ್ತದೆ ಇದರಿಂದ ನಮಗೆ ತೊಂದರೆಯಾಗುತ್ತದೆ. ಸಾಲ ಮಾಡಿ ತೆಗೆದುಕೊಂಡಿರುವ ಆಟೋ ಇಎಂಐ ಕಟ್ಟಲು ಕಷ್ಟ ಆಗುತ್ತದೆ ಆಗಾಗಿ ಸ್ಥಳೀಯರಿಗೆ ವಿಧಿಸುವ ಶುಲ್ಕವನ್ನು ರದ್ದುಪಡಿಸುವಂತೆ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿರುವ ಮನವಿಯಲ್ಲಿ ಒತ್ತಾಯಿಸಿದ್ದಾರೆ. ಈ ಸಂದರ್ಭದಲ್ಲಿ ಕೆಸ್ತೂರು ಮರಪ್ಪ, ಸಿ.ಎಚ್.ರಂಗಸ್ವಾಮಿ, ಆಟೋ ಚಾಲಕ ವಿನೋದ್ ಕುಮಾರ್, ಜ್ಯೋತಿ ಲಿಂಗಯ್ಯ, ಲಿಂಗಪ್ಪ ರವಿ, ರಾಜು, ಸಿದ್ದು, ಮನೋಜ್, ರವಿ, ರಾಜೇಶ್, ಮಹೇಶ್, ಸಂಜಯ್, ರಮೀಜ್, ಚಂದ್ರ, ಸುಗನ್ ಇತರರು ಹಾಜರಿದ್ದರು.

ಶ್ರೀರಂಗಪಟ್ಟಣದಲ್ಲಿ ಮದಕರಿನಾಯಕ ಸ್ಮಾರಕ ನಿರ್ಮಿಸಲು ಎಂ.ರಾಮಚಂದ್ರ ಒತ್ತಾಯ

ನಗರದಲ್ಲಿ ನಾಡದೊರೆ ರಾಜವೀರ ಮದಕರಿನಾಯಕ ಪುಣ್ಯಸ್ಮರಣೆ

ಚಾಮರಾಜನಗರ, ಮೇ 15– ರಾಜ್ಯ ಸರ್ಕಾರ ಶ್ರೀರಂಗಪಟ್ಟಣದಲ್ಲಿ ದೇಶ, ನಾಡು ಕಂಡಂತಹ ಅಪ್ರತಿಮ ವೀರ, ನಾಡದೊರೆ ರಾಜವೀರ ಮದಕರಿನಾಯಕ ಅವರ ಸ್ಮಾರಕವನ್ನು ನಿರ್ಮಾಣ ಮಾಡಿ ಪ್ರತಿ ವರ್ಷ ಅವರ ಜಯಂತಿಯನ್ನು ಆಚರಣೆ ಮಾಡಬೇಕು ಎಂದು ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ. ರಾಮಚಂದ್ರ ಒತ್ತಾಯಿಸಿದರು.

ನಗರದ ನಂಜನಗೂಡು ರಸ್ತೆಯಲ್ಲಿರುವ ವಾಲ್ಮೀಕಿ ಆಟೋ ನಿಲ್ದಾಣದಲ್ಲಿ ನಾಯಕ ಸಮುದಾಯದ ವತಿಯಿಂದ ನಡೆದ ನಾಡದೊರೆ ರಾಜವೀರ ಮದಕರಿನಾಯಕ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಪುಷ್ಪಾರ್ಚನೆ ಮಾಡಿ ಮಾತನಾಡಿದರು.


ಚಾಮರಾಜನಗರದಲ್ಲಿ ರಾಜವೀರ ಮದಕರಿನಾಯಕ ಪುಣ್ಯಸ್ಮರಣೆ ಆಚರಿಸಲಾಯಿತು.

ಮದಕರಿನಾಯಕರು ಮದವೇರಿದ ಆನೆಯನ್ನು ಮದಿಸಿದರು. ಬ್ರಿಟಿಷರು, ಮೊಘಲರ ವಿರುದ್ಧ ನಾಡಿಗಾಗಿ ಹೋರಾಟ ಮಾಡಿದರು. ರಾಜ್ಯಭಾರ ಮಾಡಿ ರಾಜ್ಯದ ರಕ್ಷಣೆ ಮಾಡಿದರು. ಕೆರೆ, ಕಟ್ಟೆ, ಮಠ, ಮಂದಿರಗಳನ್ನು ನಿರ್ಮಿಸುವ ಮೂಲಕ ಸಮಾಜಮುಖಿ ಕಾರ್ಯಗಳನ್ನು ಮಾಡಿ ನಾಡಿಗೆ ಅಪಾರ ಕೊಡುಗೆ ನೀಡಿದ್ದಾರೆ. ಅವರ ಇತಿಹಾಸವನ್ನು ನಾವೆಲ್ಲರೂ ಓದುವ ಮೂಲಕ ಅವರ ಹಾದಿಯಲ್ಲಿ ಸಾಗೋಣ ಎಂದರು.

ಬಿಜೆಪಿ ಎಸ್‌ಟಿ ಮೋರ್ಚಾದ ರಾಜ್ಯ ಕಾರ್ಯದರ್ಶಿ ಜಯಸುಂದರ ಮಾತನಾಡಿದರು. ಕಾರ್ಯಕ್ರಮದಲ್ಲಿ ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಆರ್.ಸುಂದರ್, ಎಸ್‌ಟಿ ಮೋರ್ಚಾದ ಜಿಲ್ಲಾ ಉಪಾಧ್ಯಕ್ಷ ಬುಲೆಟ್ ಚಂದ್ರು, ಕರ್ನಾಟಕ ಕಾವಲುಪಡೆ ಜಿಲ್ಲಾಧ್ಯಕ್ಷ ಪರಶಿವಮೂರ್ತಿ, ನಗರಸಭಾ ಮಾಜಿ ಸದಸ್ಯ ಚೆಂಗುಮಣಿ, ಆರ್.ದೀಪಕ್ ಪಾಳೇಗಾರ, ನಾರಾಯಣ್, ಬದನಗುಪ್ಪೆ ನಾರಾಯಣ್, ಆಟೋ ಸುಬ್ಬಣ್ಣ, ಮಂಜು, ಶಂಕರ, ಲಕ್ಷ್ಮಣ, ಗುರು, ಕೆಂಚ, ರವಿ, ಮಹೇಶ್ ಕುಮಾರ್, ಸಿದ್ದರಾಜು, ಮಣಿ, ನಾಗೇಶ್, ವಿಶ್ವ, ರಘು, ಮಂಜು, ಮಣಿ ಇತರರು ಹಾಜರಿದ್ದರು.

ಇಂದು ಚಾಮರಾಜನಗರದ ಚಾಮರಾಜೇಶ್ವರ ದೇವಾಲಯ ಆವರಣದಲ್ಲಿ ಅಣಕು ಪ್ರದರ್ಶನ

ಚಾಮರಾಜನಗರ, ಮೇ 15– ಆಪರೇಷನ್ ಅಭ್ಯಾಸ್ ಅಣಕು ಪ್ರದರ್ಶನವನ್ನು (ಮಾಕ್ ಡ್ರಿಲ್) ಮೇ 16ರಂದು ಸರಿಯಾಗಿ ಸಂಜೆ 6 ಗಂಟೆಗೆ ನಗರದ ಚಾಮರಾಜೇಶ್ವರ ದೇವಸ್ಥಾನದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ತುರ್ತು ಸಂದರ್ಭದಲ್ಲಿ ಅವಘಡಗಳು ಸಂಭವಿಸಿದ ಸಮಯದಲ್ಲಿ ಜನರು ಗಾಬರಿ ಅಥವಾ ಆತಂಕಕ್ಕೆ ಒಳಗಾಗದಂತೆ ಆತ್ಮ ವಿಶ್ವಾಸ ತುಂಬಿ ಅರಿವು ಮೂಡಿಸುವ ಉದ್ದೇಶದಿಂದ ಅಣಕು ಪ್ರದರ್ಶನವನ್ನು ನಡೆಸಲಾಗುತ್ತದೆ. ಇದು ಅಣಕು ಕಾರ್ಯಾಚರಣೆ ಮಾತ್ರವಾಗಿದ್ದು ಸಾರ್ವಜನಿಕರು ಆತಂಕ ಪಡುವ ಅಗತ್ಯವಿಲ್ಲ. ಜಿಲ್ಲಾಡಳಿತದೊಂದಿಗೆ ಸಹಕಾರ ನೀಡಬೇಕು.

ನಗರದ ಚಾಮರಾಜೇಶ್ವರ ದೇವಾಲಯದಲ್ಲಿ ಅಣಕು ಕಾರ್ಯಚರಣೆ (ಮಾಕ್ ಡ್ರಿಲ್) ಪ್ರದರ್ಶನ ಕೈಗೊಂಡು ಜಾಗೃತಿ ಮೂಡಿಸಲಾಗುತ್ತದೆ. ಈ ಅಣಕು ಕಾರ್ಯಾಚರಣೆಗೆ ಪೊಲೀಸ್ ಇಲಾಖೆ, ಅಗ್ನಿಶಾಮಕ ದಳ, ಹೋಂ ಗಾರ್ಡ್, ವೈದ್ಯಕೀಯ ತಂಡ, ಸಾರಿಗೆ ತಂಡ, ಕಂಟ್ರೋಲ್ ರೂಂ, ಇನ್ನಿತರ ತಂಡಗಳನ್ನು ರಚಿಸಲಾಗಿದ್ದು ಸಂಬಂಧಪಟ್ಟ ಅಧಿಕಾರಿಗಳು ಕಾರ್ಯನಿರ್ವಹಿಸಲಿದ್ದಾರೆ.

ತುರ್ತು ಸಂದರ್ಭದಲ್ಲಿ ನಾಗರಿಕರನ್ನು ರಕ್ಷಿಸುವ ವೇಳೆ ಜನರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರ, ಗಾಯಗೊಂಡವರಿಗೆ ಆಸ್ಪತ್ರೆಗೆ ದಾಖಲು ಮಾಡುವ ಬಗ್ಗೆ, ಪ್ರಥಮ ಚಿಕಿತ್ಸೆ, ಅಗ್ನಿಶಾಮಕ, ಪೊಲೀಸರು, ಇನ್ನಿತರ ಅಧಿಕಾರಿಗಳ ಕರ್ತವ್ಯ ಇನ್ನಿತರ ಕಾರ್ಯ ಚಟುವಟಿಕೆಗಳನ್ನು ಅಣಕು ಪ್ರದರ್ಶನದ ಮೂಲಕ ನಡೆಸಿ ಅರಿವು ಉಂಟು ಮಾಡಲಾಗುತ್ತದೆ.

ಜನರ ರಕ್ಷಣೆಗೆ ಕೈಗೊಳ್ಳಲಾಗುವ ಸುರಕ್ಷತಾ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಮಾಕ್‌ಡ್ರಿಲ್ ಮುಖಾಂತರ ತಿಳುವಳಿಕೆ ನೀಡಲಾಗುತ್ತದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಮ್ಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಟಕೀಲಾ ತೆರೆಗೆ



ಹಿರಿಯ ನಿರ್ದೇಶಕ ಕೆ.ಪ್ರವೀಣ್‌ನಾಯಕ್ ಸಾರಥ್ಯದ ಚಿತ್ರ 'ಟಕೀಲಾ' ಇಂದಿನಿಂದ ರಾಜ್ಯಾದ್ಯಂತ ತೆರೆಕಂಡಿದೆ. ಮರಡಿಹಳ್ಳಿ ನಾಗಚಂದ್ರ ಅವರ ನಿರ್ಮಾಣದ ಈ ಚಿತ್ರದಲ್ಲಿ ಧರ್ಮ ಕೀರ್ತಿರಾಜ್, ನಿಖಿತಾಸ್ವಾಮಿ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ.

ಜೀವನದಲ್ಲಿ ಮನುಷ್ಯನಿಗೆ ಒಂದು ಅವಕಾಶ ಸಿಗುತ್ತೆ ಅದನ್ನು ಸರಿಯಾಗಿ ಉಪಯೋಗಿಸಿಕೊಳ್ಳದೆ ಇದ್ದರೆ ಮತ್ತೆ ಎರಡನೇ ಅವಕಾಶ ಸಿಗದೇ ಇರಬಹುದು, ಹಾಗಾಗಿ ಸಿಕ್ಕ ಅವಕಾಶವನ್ನು ಸರಿಯಾಗಿ ಉಪಯೋಗಿಸಿಕೊಳ್ಳಬೇಕು ಎನ್ನುವುದೇ ಟಕೀಲಾ ಚಿತ್ರದ ಕಾನ್ಸೆಪ್ಟ್, ತುಂಬಾ ತಡವಾಗಿ ನಿರ್ಧಾರ ತಗೊಂಡರೆ ಅದು ಕೂಡ ಉಪಯೋಗಕ್ಕೆ ಬರಲ್ಲ. ಚಟಗಳು ಅತಿಯಾದಾಗ ಏನು ಬೇಕಾದರೂ ಆಗಬಹುದು, ಡ್ರಗ್ಸ್ ಅನ್ನೋದು ಒಂದು ಸುಳಿ ಇದ್ದ ಹಾಗೆ, ಅದನ್ನು ಕುತೂಹಲದಿಂದ ಮುಟ್ಟಿ ನೋಡೋ ಪ್ರಯತ್ನ ಮಾಡಬಾರದು ಎಂಬ ಸಂದೇಶ ಚಿತ್ರದಲ್ಲಿದೆ. ಸೈಕಾಲಜಿ ಜತೆಗೆ ಸ್ಪಿರಿಚುಯಾಲಿಟಿ ಬೆರೆಸಿ ಮಾಡಿದ ಚಿತ್ರ ಇದಾಗಿದ್ದು, ಈ ಮೂಲಕ ಒಂದು ಅರಿವು ಮೂಡಿಸುವ ಪ್ರಯತ್ನ ಮಾಡಲಾಗಿದೆ. ನಿರ್ಮಾಪಕ ನಾಗಚಂದ್ರ ಮಾತನಾಡಿ, ಕರ್ನಾಟಕದಾದ್ಯಂತ 150ಕ್ಕೂ ಹೆಚ್ಚು ಸೆಂಟರ್‌ಗಳಲ್ಲಿ ಟಕೀಲಾ ತೆರೆಗೆ ಬರಲಿದೆ ಎಂದರು,

ನಾಯಕ ಧರ್ಮ ಕೀರ್ತಿರಾಜ್ ಮಾತನಾಡುತ್ತಾ, ನಾನು ಈ ಸಿನಿಮಾದಲ್ಲಿ ಅಭಿನಯಿಸಲು ಕಾರಣ ನಿರ್ಮಾಪಕ ನಾಗಚಂದ್ರ, ಚಿತ್ರದಲ್ಲಿ ನಾನು ಒಬ್ಬ ಬ್ಯುಸಿನೆಸ್ ಮ್ಯಾನ್ ಪಾತ್ರ ಮಾಡಿದ್ದು, ಆತ ಯಾವುದೋ ಒಂದು ಚಟಕ್ಕೆ ಬಿದ್ದಾಗ ಏನೆಲ್ಲ ಆಗಬಹುದು ಎಂದು ತೋರಿಸಲಾಗಿದೆ ಎಂದರು.

ನಾಯಕಿ ನಿಖಿತಾ ಸ್ವಾಮಿ ಮಾತನಾಡಿ, ನನಗೆ ಈ ಕಥೆ ಹೇಳಿದಾಗ ತುಂಬಾ ಚಾಲೆಂಜಿಂಗ್ ಪಾತ್ರ ಎನಿಸಿತು, ಇದರಲ್ಲಿ ಹಲವಾರು ಶೇಡ್ಸ್ ಬರುತ್ತೆ ಎಂದರು. ಟಕೀಲಾ ಚಿತ್ರದ 2 ಹಾಡುಗಳಿಗೆ ರೇಣುಕುಮಾರ್ ಸಂಗೀತ ಸಂಯೋಜಿಸಿದ್ದಾರೆ. ಪಿ.ಕೆ.ಹೆಚ್. ದಾಸ್ ಅವರ ಛಾಯಾಗ್ರಹಣ ಈ ಚಿತ್ರಕ್ಕಿದೆ.

ಸ್ನೇಹ, ಪ್ರೀತಿಯ ಸುತ್ತ ಸ್ನೇಹದ ಕಡಲಲ್ಲಿ...



ಸ್ನೇಹ ಪ್ರೀತಿಯ ಸುತ್ತ ನಡೆಯುವ ಕಥಾಹಂದರ ಒಳಗೊಂಡ ಸ್ನೇಹದ ಕಡಲಲ್ಲಿ ಎಂಬ ಕೌಟುಂಬಿಕ ಧಾರಾವಾಹಿ ಸ್ಟಾರ್ ಸುವರ್ಣ ವಾಹಿನಿಯಲ್ಲಿ ಪ್ರಸಾರವಾಗುತ್ತಿದೆ. ಈ ಕುರಿತು ಮಾಹಿತಿ ನೀಡಲು ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದ ತಂಡದವರು ಇದರ ವಿಶೇಷತೆಗಳ ಕುರಿತಂತೆ ಮಾತನಾಡಿದರು.

ನಿರ್ದೇಶಕ ಪ್ರೀತಂ ಶೆಟ್ಟಿ, ಮಾತನಾಡುತ್ತಾ, ಸ್ನೇಹದ ಕಡಲಲ್ಲಿ ಶ್ರೀನಾಥ್ ನಟನೆಯ ಜನಪ್ರಿಯ ಹಾಡು. ಅದೇ ಟೈಟಲ್ ಇಟ್ಟುಕೊಂಡು ಈ ಧಾರಾವಾಹಿ ನಿರ್ದೇಶಿಸುತ್ತಿದ್ದೇನೆ ಇದರಲ್ಲಿ ದಕ್ಷಿಣ ಭಾರತದ ಜನಪ್ರಿಯ ನಟ ಸುಮನ್ ತಲ್ವಾರ್ ನಾಯಕನ ತಂದೆಯಾಗಿ ಅಭಿನಯಿಸುತ್ತಿದ್ದಾರೆ. ಇದು ಸುಮನ್ ಅವರ ಅಭಿನಯದ ಮೊದಲ ಕನ್ನಡ ಧಾರಾವಾಹಿ ಕೂಡ. ಚಂದುಗೌಡ ಹಾಗೂ ಕಾವ್ಯ ಮಹದೇವ್ ನಾಯಕ, ನಾಯಕಿಯಾಗಿ ನಟಿಸುತ್ತಿದ್ದಾರೆ. ಸಿನಿಮಾ ಶೈಲಿಯಲ್ಲೇ ಸೀರಿಯಲ್ ಮಾಡಿದ್ದೇವೆ. ಉದಾಹರಣೆಗೆ ನಮ್ಮ ಧಾರಾವಾಹಿಯಲ್ಲಿ ಕೇವಲ ನಾಲ್ಕು ನಿಮಿಷಗಳಲ್ಲಿ ಮದುವೆ ಸನ್ನಿವೇಶ ನಡೆದುಹೋಗುತ್ತದೆ. ಸಾಮಾನ್ಯವಾಗಿ ಧಾರಾವಾಹಿಗಳ ಹಿನ್ನೆಲೆ ಸಂಗೀತದಲ್ಲಿ ಸಿನಿಮಾ ಹಾಡುಗಳನ್ನು ಬಳಸಿಕೊಳ್ಳುವುದು ವಾಡಿಕೆ. ಆದರೆ ನಾವು ಹೊಸ ಹಾಡನ್ನೇ ರೆಡಿ ಮಾಡಿದ್ದೇವೆ. ಹೀಗೆ ಹಲವಾರು ವಿಶೇಷಗಳಿರುವ ಈ ಧಾರಾವಾಹಿಯನ್ನು ಪಿಂಗಾರ ಪ್ರೊಡಕ್ಷನ್ಸ್ ಮೂಲಕ ದೊಡ್ಡ ಬಜೆಟ್‌ನ ನಿರ್ಮಾಣವಾಗಿದೆ ಎಂದರು.

ನಾನು ಚಿತ್ರರಂಗಕ್ಕೆ ಬಂದು 47 ವರ್ಷಗಳಾಯಿತು. ಕನ್ನಡ, ತಮಿಳು, ತೆಲುಗು ಸೇರಿದಂತೆ 11 ಭಾಷೆಯ ಚಿತ್ರಗಳಲ್ಲಿ ನಟಿಸಿದ್ದೇನೆ. ನಿರ್ದೇಶಕ ಪ್ರೀತಂ ಶೆಟ್ಟಿ ಅವರ ಚಿತ್ರದಲ್ಲೂ ನಟಿಸಿದ್ದೇನೆ. ಸ್ನೇಹದ ಕಡಲಲ್ಲಿ ನಾನು ನಟಿಸುತ್ತಿರುವ ಮೊದಲ ಕನ್ನಡ ಧಾರಾವಾಹಿ. ಪ್ರೀತಂ ಶೆಟ್ಟಿ ಹೇಳಿದ ಕಥೆ ಇಷ್ಟವಾಯಿತು. ಹಾಗಾಗಿ ನಾನು ಇದರಲ್ಲಿ ಅಭಿನಯಿಸಲು ಒಪ್ಪಿಕೊಂಡೆ ಎಂದು ನಟ ಸುಮನ್ ತಲ್ವಾರ್ ತಿಳಿಸಿದರು.

ನಾನು ಕಿರುತೆರೆಗೆ ಬಂದು ಸುಮಾರು ಹನ್ನೊಂದು ವರ್ಷಗಳಾಯಿತು. ಆನಂತರ ಕೆಲವು ಚಿತ್ರಗಳಲ್ಲೂ ನಟಿಸಿದ್ದೇನೆ. ಸ್ನೇಹದ ಕಡಲಲ್ಲಿ ಕಥೆ ತುಂಬಾ ಚೆನ್ನಾಗಿದೆ. ನಾವು 30 ನಿಮಿಷದ ಸಂಚಿಕೆ ನೋಡಿದರೂ, ಒಂದು ಸಿನಿಮಾ ನೋಡಿದ ಅನುಭವ ಆಗುತ್ತದೆ. ಶಿವರಾಜ್ ಅರಸ್ ನನ್ನ ಪಾತ್ರದ ಹೆಸರು. ಸುಮನ್ ಅವರು ಈ ಧಾರಾವಾಹಿಯಲ್ಲಿ ನನ್ನ ತಂದೆಯ ಪಾತ್ರ ಮಾಡುತ್ತಿರುವುದು ಸಂತಸವಾಗಿದೆ ಎನ್ನುತ್ತಾರೆ ನಟ ಚಂದು ಗೌಡ. ನಾಯಕಿ ಕಾವ್ಯ ಮಹದೇವ್ ತಮ್ಮ ಪಾತ್ರದ ಬಗ್ಗೆ ಹೇಳಿಕೊಂಡರು.

'ದಿ' ಬಹುತೇಕ ಕಾಡಿನ ಕಥೆ...



ಯುವ ಪ್ರತಿಭೆ ವಿನಯ್ ವಾಸುದೇವ್ ಕಥೆ, ಚಿತ್ರಕಥೆ ಬರೆದು ನಿರ್ಮಾಣ ನಿರ್ದೇಶನದ ಜತೆಗೆ ಚಿತ್ರದ ನಾಯಕನಾಗೂ ನಟಿಸಿರುವ ದಿ ಚಿತ್ರ ಈ ಶುಕ್ರವಾರ ತೆರೆಕಾಣಲಿದೆ. ಚಿತ್ರದ ಟ್ರೈಲರ್ ಇತ್ತೀಚೆಗೆ ಬಿಡುಗಡೆಯಾಯಿತು. ಹಿರಿಯ ನಟ ಮಂಡ್ಯ ರಮೇಶ್ ಅವರು ಚಿತ್ರದ ಟ್ರೈಲರನ್ನು ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ನಾಯಕ ವಿನಯ್ ವಾಸುದೇವ್ ಮಾತನಾಡುತ್ತಾ, ನಮ್ಮ ಚಿತ್ರಕ್ಕೆ ದಿ ಎಂಬ ಹೆಸರಿಡಲು ಮೂರು ಜನ ಮುಖ್ಯ ಕಾರಣ. ಒಂದು ನಟ ಕಿಚ್ಚ ಸುದೀಪ್. ಇನ್ನಿಬ್ಬರು ನನ್ನ ಗುರುಗಳು. ನಾನು ಸುದೀಪ್ ಅವರ ಅಭಿಮಾನಿ ಹಾಗೂ ಇನ್ನಿಬ್ಬರು ನಮ್ಮ ಗುರುಗಳ ಹೆಸರಿನಲ್ಲೂ ದಿ ಅಕ್ಷರವಿದೆ ಮತ್ತು ಚಿತ್ರದಲ್ಲಿ ನಾಯಕನ ಹೆಸರು ಕೂಡ ದೀಪು. ಅಲ್ಲದೆ ನಮ್ಮ ಚಿತ್ರದ ನಾಯಕಿಯ ಹೆಸರು ಸಹ ದಿಶಾ ರಮೇಶ್. ಈ ಎಲ್ಲಾ ಕಾರಣಗಳಿಂದ ಚಿತ್ರಕ್ಕೆ ದಿ ಎಂಬ ಶೀರ್ಷಿಕೆ ಇಡಲಾಗಿದೆ ಹಾಗಾಗಿ ಇದು ಇಂಗ್ಲೀಷ್ ಪದ ದಿ ಅಲ್ಲ. ಕನ್ನಡದ ದಿ.

ನಮ್ಮ ಚಿತ್ರದ ಶೇ.80ರಷ್ಟು ಭಾಗದ ಚಿತ್ರೀಕರಣವನ್ನು ಕಾಡಿನಲ್ಲೇ ನಡೆಸಿದ್ದೇವೆ, ದೇವರಾಯನ ದುರ್ಗ, ದೇವರಮನೆ ಮುಂತಾದ ದಟ್ಟ ಕಾಡಿರುವ ಲೊಕೇಶನ್‌ಗಳಲ್ಲೇ ಶೂಟ್ ಮಾಡಿದ್ದೇವೆ. ಚಿತ್ರೀಕರಣವಾದ ಸ್ಥಳಗಳ ಹೆಸರಿನಲ್ಲೂ ದ ಅಕ್ಷರವಿದೆ. ಹೀಗೆ ಹಲವು ವಿಶೇಷಗಳಿರುವ ಈ ಚಿತ್ರಕ್ಕೆ ನಾನೇ ಕಥೆ, ಚಿತ್ರಕಥೆ ಬರೆದು ನಿರ್ದೇಶಿಸಿ, ನಾಯಕನಾಗೂ ನಟಿಸಿದ್ದೇನೆ. ಚಿತ್ರ ತುಂಬಾ ಚೆನ್ನಾಗಿ ಮೂಡಿಬಂದಿದ್ದು, ಚಿತ್ರದ ಕೊನೆವರೆಗೂ ಕುತೂಹಲ ಕೆರಳಿಸುತ್ತ ಸಾಗುತ್ತದೆ, ಮೇ 16ರಂದು ಚಿತ್ರವನ್ನು ರಿಲೀಸ್ ಮಾಡುತ್ತಿದ್ದೇವೆ ಎಂದರು.

ನಿರ್ದೇಶಕ ವಿನಯ್ ಅವರು ಬಂದು ಈ ಕಥೆ ಹೇಳಿದಾಗ ಕಾನ್ಸೆಪ್ಟ್ ಬಹಳ ಇಷ್ಟವಾಯಿತು. ಅಲ್ಲದೆ ಟೀಸರ್ ನೋಡಿದ ಮೇಲಂತೂ ಅವರು ಹೇಳಿದ್ದಕ್ಕಿಂತ ಇನ್ನೂ ಚೆನ್ನಾಗಿ ಸಿನಿಮಾ ಮೂಡಿಬಂದಿತ್ತು. ಒಳ್ಳೆಯ ತಂಡದ ಜೊತೆಗೆ ಕೆಲಸ ಮಾಡಿದ ಖುಷಿಯಿದೆ. ನನ್ನ ಪಾತ್ರ ಕೂಡ ಇಂಟರೆಸ್ಟಿಂಗ್ ಆಗಿದೆ ಎಂದು ನಾಯಕಿ ದಿಶಾ ರಮೇಶ್ ತಿಳಿಸಿದರು.

ನಟಿ ಹರಿಣಿ ಶ್ರೀಕಾಂತ್, ನಟರಾದ ನಾಗೇಂದ್ರ ಅರಸ್, ಕಲಾರತಿ ಮಹಾದೇವ್, ಛಾಯಾಗ್ರಾಹಕ ಅಲೆನ್‌ಭರತ್, ಸಂಕಲನಕಾರ ಸಿದ್ಧಾರ್ಥ್ ಆರ್. ನಾಯಕ್ ಮತ್ತು ಸಂಗೀತ ನಿರ್ದೇಶಕ ಯು.ಎಂ. ಸ್ಟೀವನ್ ಸತೀಶ್ ಚಿತ್ರದ ಕುರಿತಂತೆ ಮಾತನಾಡಿದರು.



ಹಿರಿಯ ನಟ ಶ್ರೀನಾಥ್‌ರಿಂದ ಸೂಲಗಿತ್ತಿ ತಾಯವ್ವಳ ಟ್ರೈಲರ್ ಬಿಡುಗಡೆ



25 ವರ್ಷಗಳ ಹಿಂದೆ ಕಿಚ್ಚ ಸುದೀಪ್ 'ತಾಯವ್ವ' ಎಂಬ ಚಿತ್ರದಲ್ಲಿ ಅಭಿನಯಿಸಿದ್ದರು. ಆ ಚಿತ್ರದಲ್ಲಿ ಸುದೀಪ್ ಜತೆ ಹಿರಿಯ ನಟಿ ಉಮಾಶ್ರೀ ತಾಯವ್ವನಾಗಿ ಕಾಣಿಸಿಕೊಂಡಿದ್ದರು. ಈಗ ಅದೇ ಹೆಸರಿನ ಮತ್ತೊಂದು ಚಿತ್ರ ತೆರೆಗೆ ಬರಲು ಅಣಿಯಾಗಿದೆ. ಈ ಸಲ ತಾಯವ್ವನಾಗಿ ಗೀತಪ್ರಿಯ ಕಾಣಿಸಿಕೊಂಡಿದ್ದಾರೆ.

ಇತ್ತೀಚೆಗೆ ಈ ಚಿತ್ರದ ಟ್ರೇಲರ್‌ನ್ನು ಹಿರಿಯನಟ 'ಪ್ರಣಯರಾಜ' ಶ್ರೀನಾಥ್ ಬಿಡುಗಡೆ ಮಾಡಿದರು. ಪದ್ಮಶ್ರೀ ಪುರಸ್ಕೃತ ವೈದ್ಯೆ ಡಾ. ಕಾಮಿನಿರಾವ್, ಲಹರಿ ವೇಲು, ಲಕ್ಷ್ಮೀ ನಾರಾಯಣ, ಹಿರಿಯ ನಿರ್ಮಾಪಕ ಭಾ.ಮ. ಹರೀಶ್, ಪದ್ಮಾವತಿ ಸೇರಿದಂತೆ ಅನೇಕ ಗಣ್ಯರು ಹಾಜರಿದ್ದರು.

ನಟ ಶ್ರೀನಾಥ್ ಮಾತನಾಡಿ, ಹಿರಿಯ ನಿರ್ದೇಶಕರ ಹೆಸರಿಟ್ಟುಕೊಂಡಿರುವ ಗೀತಪ್ರಿಯ ಅವರು ಈ ಚಿತ್ರ ನಿರ್ಮಿಸಿದ್ದಾರೆ. ಸೂಲಗಿತ್ತಿಯ ಕಾರ್ಯ, ಹೆಣ್ಣಿನ ಮಹತ್ವ ಎರಡನ್ನೂ ಈ ಸಿನಿಮಾ ಹೇಳುತ್ತದೆ. ಇಂಥ ಸಿನಿಮಾಗಳು ಹೆಚ್ಚಾಗಿ ಬರಬೇಕು. ಚಿತ್ರದ ಹೆಸರಿನಲ್ಲೇ ಭಾವನಾತ್ಮಕ ಸೆಳೆತವಿದೆ. ಚಿತ್ರಕ್ಕೆ ಒಳ್ಳೆಯದಾಗಲಿ ಎಂದು ಹಾರೈಸಿದರು.



ತಾಯವ್ವ ಗೀತಪ್ರಿಯ

ಹಿರಿಯ ವೈದ್ಯೆ ಡಾ.ಕಾಮಿನಿರಾವ್ ಮಾತನಾಡಿ, ಒಂದು ಕಾಲದಲ್ಲಿ ಗ್ರಾಮೀಣ ಭಾಗದಲ್ಲಿ ಮಹಿಳೆಯರಿಗೆ ದೇವರ ರೂಪದಲ್ಲಿದ್ದವರು ಸೂಲಗಿತ್ತಿಯರು. ತಾವು ಮಾಡುವ ಸೇವೆಗೆ ಯಾವುದೇ ಲಾಭ ನಿರೀಕ್ಷಿಸದೆ ಅದೊಂದು ಸಮಾಜಸೇವೆ, ದೇವರ ಕೆಲಸ ಎಂದುಕೊಂಡು ಸೇವೆ ಮಾಡುತ್ತಿದ್ದರು. ಅದೆಷ್ಟೋ ಜೀವಗಳನ್ನು ಭೂಮಿಗೆ ತಂದ ಇಂಥ ಸೂಲಗಿತ್ತಿಯರನ್ನು ಇಂಥದ್ದೊಂದು ಸಿನಿಮಾದ ಮೂಲಕ ಸ್ಮರಿಸುತ್ತಿರುವುದು ನಿಜಕ್ಕೂ ಶ್ಲಾಘನೀಯ ಎಂದರು.


ಗೀತಪ್ರಿಯ ಅವರು 'ತಾಯವ್ವ' ಚಿತ್ರದ ಮೂಲಕ ಮೊದಲ ಬಾರಿಗೆ ಚಿತ್ರರಂಗಕ್ಕೆ ಪ್ರವೇಶಿಸುತ್ತಿದ್ದಾರೆ. ಈ ಕುರಿತಂತೆ ಮಾತನಾಡಿದ ಅವರು, ಇದೊಂದು ಅಪ್ಪಟ ಗ್ರಾಮೀಣ ಸೊಗಡಿನ ಸಿನಿಮಾ. ಸೂಲಗಿತ್ತಿ ನರಸಮ್ಮ ಅವರಂಥ ನೂರಾರು ಸೂಲಗಿತ್ತಿಯರು ಈ ಸಿನಿಮಾ ಮಾಡಲು ನಮಗೆ ಪ್ರೇರಣೆ. ಹೆಣ್ಣು ಮಕ್ಕಳನ್ನು ಉಳಿಸಿ, ಬೆಳೆಸಿ ಎಂಬ ಸಂದೇಶವನ್ನು ಇಟ್ಟುಕೊಂಡು ಈ ಸಿನಿಮಾ ಮಾಡಿದ್ದೇವೆ. ಇದರಲ್ಲಿ ನಾನು ತಾಯವ್ವ ಎಂಬ ಪಾತ್ರದಲ್ಲಿ ಕಾಣಿಸಿಕೊಂಡಿದ್ದೇನೆ. ಸಿನಿಮಾದಲ್ಲಿ ಒಂದು ಸಂದೇಶವಿದೆ. ಎಲ್ಲರಿಗೂ ತಲುಪುವಂಥ ವಿಷಯಗಳು ಸಿನಿಮಾದಲ್ಲಿದೆ ಈಗಾಗಲೇ ಸಿನಿಮಾದ ಬಹುತೇಕ ಕೆಲಸಗಳು ಪೂರ್ಣಗೊಂಡಿದ್ದು, ಆದಷ್ಟು ಬೇಗನೇ ಸಿನಿಮಾವನ್ನು ಪ್ರೇಕ್ಷಕರ ಮುಂದೆ ತರಲಿದ್ದೇವೆ. ಈ ಸಿನಿಮಾ ಪ್ರೇಕ್ಷಕರ ಮನ ಮುಟ್ಟಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಸಿನಿಪದಬಂಧ-576

ಉಮ್ಮತ್ತೂರು ಇಂದುಶೇಖರ್

ಮೊ.9880820462





ಹೆಸರು

ವಿಳಾಸ

ದೂರವಾಣಿ ಸಂಖ್ಯೆ

ಎಡದಿಂದ ಬಲಕ್ಕೆ

1. ಚಿತ್ರ ಲೋಕ ಹೀಗೂ ಹೇಳಿ 6
6. ಸುನಿಲ್ ನೇತೃತ್ವದಲ್ಲಿ ಶಹರಿನಲ್ಲಿ ಕಾಣಿಸಿಕೊಂಡವರು 9
7. ಶಿವರಾಜ್‌ಕುಮಾರ್ – ನೀನಾ ಅಭಿನಯದ ಚಿತ್ರ 2
8. ಪ್ರಭಾಕರ್ ಯುದ್ಧ ಕೇಸರಿ 5
13. ಚಿನ್ನದಂಥ ಮಗ ಚಿತ್ರದಲ್ಲಿ ಸುಧೀರ್ ಪಾತ್ರ ಇಲ್ಲಿ ತಿರುಗಿದೆ 5
15. ಬಾಮೈದನ ಜೊತೆ ಬಂದವನು 2
16. ಕಾಶಿನಾಥ್ ಹೆಂಡತಿಯ ಅಪ್ಪನನ್ನು ವಿವಾಹಕ್ಕಾಗಿ ಬೇಡಿದ್ದಾನೆ 9
18. ಶಂಕರ್‌ನಾಗ್ ದ್ವಿಪಾತ್ರದಲ್ಲಿ ನರ – ರಾಕ್ಷಸ ಇದ್ದಾರೆ 6

ಮೇಲಿನಿಂದ ಕೆಳಕ್ಕೆ

1. "ಎಲ್ಲಿಗೆ ಪಯಣ ಯಾವುದೋ ದಾರಿ.... ", ಗೀತೆಯ ಚಿತ್ರ 5
2. ರಾಷ್ಟ್ರಗೀತೆಯ ಮೊದಲ ಸಾಲು ಚಿತ್ರವೂ ಹೌದು ! 6
3. ಈಕೆಗೂ ಮದುವೆ ಆಗಿದೆ 2
4. ವಿಷ್ಣುವರ್ಧನ್ ಗೆಲುವಿನ ಕೇಸರಿ 4
5. ಪಾಂಡವ – ಕೌರವರ ಯುದ್ಧ ಭೂಮಿ 4
9. _ _ _ ತಿಲಕ 3
10. ಗಂಗಾಧರ್ – ಜಯಂತಿ ಅಭಿನಯಕ್ಕೆ ಬಿ. ಆರ್. ಪಂತುಲು ನಿರ್ದೇಶಕ 6
11. ರವಿಚಂದ್ರನ್ ಅಭಿನಯದ ಆತ್ಮಗೌರವ 4
12. ಹೀಗೆ ಕರೆದರೆ ನಟ ಯೋಗೀಶ್ ಯಾರೆಂದು ತಿಳಿಯುತ್ತದೆ 4
14. ಸುರ – ನರ 5
17. ಗಿರೀಶ್ ಕಾಸರವಳ್ಳಿಯ "ಗೃಹ" 2

ಸಿನಿ ಪದಬಂಧ 575ರ ಉತ್ತರ

ನ	ಮ್ಯೂ	ರ	ಹ	ಮ್ಮೀ	ರ					
ಮ್ಮ			ಗ			ಶ		ವಿ		ಹಾ
ಸಂ		ಚೆ	ಲು	ವೆ	ಯೇ	ನಿ	ನ್ನ	ನೋ	ಡ	ಲು
ಸಾ	ಧು		ಇ					ದಿ		ಜೇ
ರ		ಚಾ	ರು	ಹಾ	ಸ	ನ್		ನಿ		ನು
			ಳು		ವಾ		ವಂ			
ನ		ಪೆ		ಸಿ	ರಿ	ಚಂ	ದ	ನ		ಮ
ಮ್ಮ		ದ್ದ					ನೆ		X	ದು
ಭೂ	ಮಿ	ಗೆ	ಬಂ	ದ	ಭ	ಗ	ವಂ	ತ		ವೆ
ಮಿ		ದ್ದ		ಕ್ಷ			ದ			ಮ
					ಒ	ಬ್ಬ	ನೆ	ಒ	ಬ್ಬ	ನೆ

ವಿಜೇತರು: ಸಹನ.ಇ, #8, ಎ8ನೇ ಬ್ಲಾಕ್, ವಾಸು ಲೇಔಟ್, ಕೆ. ಬ್ಲಾಕ್, ಆರ್.ಕೆ.ನಗರ, ಮೈಸೂರು

ವಿಳಾಸ: 'ಸಿನಿಬಂಧ' ವಿಭಾಗ, 'ಮೈಸೂರು ಮಿತ್ರ' ದಿನಪತ್ರಿಕೆ, ಬನ್ನಿಮಂಟಪ, ಮೈಸೂರು-570 015

ಸಸ್ಪೆನ್ಸ್, ಥ್ರಿಲ್ಲರ್ ಜಾವ ಕಾಫಿ ಟ್ರೈಲರ್

ಮಹಿಳಾ ನಿರ್ದೇಶಕಿ ಸಾನ್ವಿಕಾ ಎಂಟ್ರಿ

ಸದ್ಯ ಮಹಿಳಾ ನಿರ್ದೇಶಕಿಯರ ಸಂಖ್ಯೆ ಕಮ್ಮಿಯಿದೆ. ಆ ಸಾಲಿಗೆ ಮತ್ತೊಬ್ಬ ಮಹಿಳಾ ನಿರ್ದೇಶಕಿ ಸಾನ್ವಿಕಾ ಸೇರ್ಪಡೆಯಾಗಿದ್ದಾರೆ. ಕೇರಳ ಮೂಲದ ಸಾನ್ವಿಕಾ ತಮ್ಮ ಮೊದಲ ಚಿತ್ರವನ್ನು ಕನ್ನಡ ಭಾಷೆಯಲ್ಲೇ ಮಾಡಬೇಕೆಂದು ಜಾವ ಕಾಫಿ ಚಿತ್ರಕ್ಕೆ ಆಕ್ಷನ್ ಕಟ್ ಹೇಳಿದ್ದಾರೆ. ಚಿತ್ರದ ನಿರ್ಮಾಪಕಿ, ನಾಯಕಿ ಅಲ್ಲದೆ ಸಾಹಸ ನಿರ್ದೇಶಕಿ ಸೇರಿದಂತೆ ಒಂಭತ್ತು ವಿಭಾಗಗಳಲ್ಲಿ ಸಾನ್ವಿಕ ಕೆಲಸ ಮಾಡಿದ್ದಾರೆ. ಅಜಯ್‌ವರ್ಧನ್ ಚಿತ್ರದ ನಾಯಕ. ಇತ್ತೀಚೆಗ ಈ ಚಿತ್ರದ ಟ್ರೇಲರ್ ಬಿಡುಗಡೆ ಸಮಾರಂಭ ನೆರವೇರಿತು.

ಜಾವಕಾಫಿ ಚಿತ್ರ ನನ್ನ ಕನಸು ಹಾಗೂ ನನ್ನ ಮನಸ್ಸು ಎಂದ ಸಾನ್ವಿಕ, ಸಿನಿಮಾ ನಿರ್ದೇಶನ ಮಾಡಬೇಕೆಂಬುದು ನನ್ನ 15 ವರ್ಷಗಳ ಕನಸು. ಈಗದು ನನಸಾಗಿದೆ. ನಾನು ಕೇರಳದವಳಾದರೂ ಮೊದಲ ಚಿತ್ರವನ್ನು ಕನ್ನಡದಲ್ಲಿಯೇ ಮಾಡಿದ್ದೇನೆ. ಕನ್ನಡ ಭಾಷೆಯಲ್ಲಿ ನಿರ್ದೇಶನ ಮಾಡಲು ನನಗೆ ಅಸೋಸಿಯೇಟ್ ಡೈರೆಕ್ಟರ್ ವಸಂತ್ ಸಹಾಯ ಮಾಡಿದರು. ಜಾವ ಕಾಫಿ ಒಂದು ಸಸ್ಪೆನ್ಸ್, ಥ್ರಿಲ್ಲರ್ ಜಾನರ್ ಚಿತ್ರ ಬೆಂಗಳೂರು, ಮಂಗಳೂರು ಅಲ್ಲದೆ ಕೇರಳ ಸೇರಿದಂತೆ ಹಲವಾರು ಲೊಕೇಶನ್‌ಗಳಲ್ಲಿ ಚಿತ್ರೀಕರಿಸಿದ್ದೇವೆ, ಚಿತ್ರದ ಮೊದಲ ಪ್ರತಿ ಸಿದ್ಧವಾಗಿದ್ದು, ಸದ್ಯದಲ್ಲೇ ಸೆನ್ಸಾರ್ ಮಂಡಳಿ ಚಿತ್ರವನ್ನು ವೀಕ್ಷಿಸಲಿದೆ. ಆನಂತರ ಬಿಡುಗಡೆಯ ದಿನಾಂಕ ಪ್ರಕಟಿಸುತ್ತೇವೆ. ಮೊದಲು ಕನ್ನಡದಲ್ಲಿ ಬಿಡುಗಡೆ ಮಾಡಿ, ಆನಂತರ ಪ್ಯಾನ್ ಇಂಡಿಯಾ ಚಿತ್ರವಾಗಿ ಎಲ್ಲಾ ಭಾಷೆಗಳಲ್ಲೂ ರಿಲೀಸ್ ಮಾಡುತ್ತೇವೆ ಎಂದರು.

ಈಗಾಗಲೇ ತುಳು ಚಿತ್ರದಲ್ಲಿ ನಟಿಸಿರುವ ನನಗೆ ಇದು ಮೂರನೇ ಚಿತ್ರ. ಸಾನ್ವಿಕ ಅವರು ಒಂದೊಳ್ಳೆ ಚಿತ್ರ ಮಾಡಿದ್ದಾರೆ. ನಾನು ಈ ಚಿತ್ರದಲ್ಲಿ ಒಬ್ಬ ಪತ್ರಕರ್ತನ ಪಾತ್ರ ಮಾಡಿದ್ದೇನೆ ಎಂದು ನಾಯಕ ಅಜಯ್ ವರ್ಧನ್ ತಿಳಿಸಿದರು.



ಉಳಿದಂತೆ ಜಾವಕಾಫಿ ಚಿತ್ರದಲ್ಲಿ ನಟಿಸಿರುವ ಮಂಜುನಾಥ್, ಪ್ರತಿಮ, ಭವಾನಿ ಶಂಕರ್, ವಿಜಯ್‌ಕುಮಾರ್, ರಾಮಚಂದ್ರ, ರಾಮಲಿಂಗಪ್ಪ ಹಾಗೂ ಹಿನ್ನೆಲೆ ಸಂಗೀತ ನೀಡಿರುವ ಹದಿನೆಂಟು ವರ್ಷದ ಯುವಕ ಧ್ರುವ ದೇವರಾಯನ್, ನೃತ್ಯ ನಿರ್ದೇಶಕ ಪಾಲಾಶ್ ಮಾಸ್ಟರ್ ಸೇರಿದಂತೆ ಚಿತ್ರತಂಡದ ಎಲ್ಲಾ ಸದಸ್ಯರು ಜಾವ ಕಾಫಿ ಸಿನಿಮಾ ಬಗ್ಗೆ ಮಾತನಾಡಿದರು. ಮೂರು ಹಾಡುಗಳಿರುವ ಈ ಚಿತ್ರಕ್ಕೆ ಶ್ರೀಧರ ಕರ್ಕೇರ ಸಂಗೀತ ಸಂಯೋಜನೆ ಮಾಡಿದ್ದಾರೆ.

63ನೇ ಹುಟ್ಟುಹಬ್ಬ ಹಿನ್ನೆಲೆ

ನಾಗರಹೊಳೆಯಲ್ಲಿ ಡಿಸಿಎಂ ಡಿಕೆಶಿ ಸಫಾರಿ

- ಕಾಡು ಪ್ರಾಣಿಗಳನ್ನು ಕಂಡು ಸಂತಸಪಟ್ಟ ಶಿವಕುಮಾರ್
- ಸೆರಾಯ್ ರೆಸಾರ್ಟ್‌ನಲ್ಲಿ ಕುಟುಂಬದ ಸದಸ್ಯರೊಂದಿಗೆ ವಾಸ್ತವ್ಯ



ಹೆಚ್.ಡಿ.ಕೋಟೆ, ಮೇ 15– ನಿತ್ಯ ಆರೋಪ, ಪ್ರತ್ಯಾರೋಪ ಸೇರಿದಂತೆ ರಾಜಕೀಯ ಜಂಜಾಟದಲ್ಲಿ ನಿರತರಾಗಿದ್ದ ಉಪ ಮುಖ್ಯಮಂತ್ರಿ ಡಿ.ಕೆ.ಶಿವ ಕುಮಾರ್ ನಾಗರಹೊಳೆ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯ ದಮ್ಮನಕಟ್ಟೆ ಸಫಾರಿ ಕೇಂದ್ರದಲ್ಲಿ ಸಫಾರಿಗೆ ತೆರಳಿ ಪ್ರಾಣಿ, ಪಕ್ಷಿಗಳು ಸೇರಿದಂತೆ ಪ್ರಕೃತಿ ಸೌಂದರ್ಯ ಕಂಡು ಸಂತಸಪಟ್ಟರು.

ತಮ್ಮ 63ನೇ ಹುಟ್ಟುಹಬ್ಬದ ಅಂಗವಾಗಿ ಬುಧವಾರ ಸಂಜೆ ಅವರದೇ ಕುಟುಂಬದ ಒಡೆತನಕ್ಕೆ ಸೇರಿದ ತಾಲೂಕಿನ ಕಾರಾಪುರದಲ್ಲಿರುವ ಸೆರಾಯ್ ರೆಸಾರ್ಟ್‌ನಲ್ಲಿ ಪತ್ನಿ ಉಷಾ ಶಿವಕುಮಾರ್, ಪುತ್ರಿ ಐಶ್ವರ್ಯ, ಪುತ್ರ ಆಕಾಶ್ ಸೇರಿದಂತೆ ಕುಟುಂಬ ಸದಸ್ಯರೊಂದಿಗೆ ವಾಸ್ತವ್ಯ ಹೂಡಿದ್ದ ಅವರು, ಗುರುವಾರ ನಾಗರಹೊಳೆ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯ ದಮ್ಮನಕಟ್ಟೆ ಸಫಾರಿ ಕೇಂದ್ರದಿಂದ ಸಫಾರಿ ವಾಹನದಲ್ಲಿ ಸಫಾರಿಗೆ ತೆರಳಿ ಜಿಂಕೆ, ಆನೆ, ಹುಲಿ, ನವಿಲು, ಸಾರಂಗ ಸೇರಿದಂತೆ ಇನ್ನಿತರ ಕಾಡು ಪ್ರಾಣಿಗಳನ್ನು ವೀಕ್ಷಿಸಿ, ಪ್ರಕೃತಿ ಸೌಂದರ್ಯ ಕಂಡು ಎಂಜಾಯ್ ಮಾಡಿದರು.

ಪ್ರತೀ ವರ್ಷ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರೊಂದಿಗೆ ಕೇಕ್ ಕತ್ತರಿಸುವ ಮೂಲಕ ತಮ್ಮ ಹುಟ್ಟುಹಬ್ಬ ಆಚರಿಸಿಕೊಳ್ಳುತ್ತಿದ್ದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಈ ಬಾರಿ ಸಾರ್ವಜನಿಕರ ಸಂಪರ್ಕಕ್ಕೆ ಸಿಗದೇ, ನಾಗರಹೊಳೆ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯಲ್ಲಿ ಕುಟುಂಬ ಸದಸ್ಯರೊಂದಿಗೆ ಸಫಾರಿ ನಡೆಸಿದ್ದು ವಿಶೇಷವಾಗಿತ್ತು. ಒಟ್ಟಾರೆ ಕಾಡುಪ್ರಾಣಿಗಳನ್ನು ಕಂಡು ಸಂತಪಟ್ಟ ಶಿವಕುಮಾರ್ ಗುರುವಾರವೂ ಸೆರಾಯ್ ರೆಸಾರ್ಟ್‌ನಲ್ಲಿ ವಾಸ್ತವ್ಯ ಹೂಡಿ ವಿಶ್ರಾಂತಿ ಪಡೆದರು.

ಕೆಸರು ಬಳಿದು ಅಂಬೇಡ್ಕರ್ ಭಾವಚಿತ್ರಕ್ಕೆ ಅಪಮಾನ

- ಕಿಡಿಗೇಡಿಗಳ ಬಂಧಿಸುವಂತೆ ಗ್ರಾಮಸ್ಥರಿಂದ ಪ್ರತಿಭಟನೆ
- ಮುಂಜಾಗ್ರತಾ ಕ್ರಮವಾಗಿ ಬಿಗಿ ಪೊಲೀಸ್ ಬಂದೋಬಸ್ತ್

ನಂಜನಗೂಡು/ಮಲ್ಕುಂಡಿ, ಮೇ 15– ಅಂಬೇಡ್ಕರ್ ಭಾವಚಿತ್ರಕ್ಕೆ ಕೆಸರು ಬಳಿದು ಅಪಮಾನ ಮಾಡಿರುವ ಘಟನೆ ಬುಧವಾರ ರಾತ್ರಿ ತಾಲೂಕಿನ ಹಲ್ಲರೆ ಗ್ರಾಮದಲ್ಲಿ ಜರುಗಿದೆ.

ಕೆಲ ತಿಂಗಳ ಹಿಂದೆ ಗ್ರಾಮದ ವೃತ್ತವೊಂದರಲ್ಲಿ ಅಂಬೇಡ್ಕರ್ ನಾಮಫಲಕ ನೆಡುವ ವಿಚಾರದಲ್ಲಿ ಗ್ರಾಮದ ಪ.ಜಾತಿ ಮತ್ತು ಪ.ಪಂಗಡದ ಜನರ ನಡುವೆ ತಕರಾರು ಉಂಟಾಗಿ ನಾಮಫಲಕ ಅಳವಡಿಸಿದ್ದ ಪ.ಜಾತಿಯವರ ಮೇಲೆ ಪ.ಪಂಗಡದ ಜನಾಂಗದವರು ಹಲ್ಲೆ ನಡೆಸಿ, ಮನೆಗಳ ಮೇಲೆ ಕಲ್ಲು ತೂರಾಟ ನಡೆಸಿದ್ದರು. ಈ ಪ್ರಕರಣ ಸಂಬಂಧ ಸುಮಾರು 30ಕ್ಕೂ ಹೆಚ್ಚು ಮಂದಿ ಮೇಲೆ ದೂರು ದಾಖಲಾಗಿತ್ತು. ಸ್ಥಳೀಯ ಶಾಸಕ ದರ್ಶನ್ ಹಾಗೂ ಹೆಚ್.ಡಿ.ಕೋಟೆ ಶಾಸಕ ಅನಿಲ್ ಶಾಂತಿ ಸಭೆ ನಡೆಸಿ ಅಂಬೇಡ್ಕರ್ ಭಾವಚಿತ್ರ ಇರುವ ನಾಮಫಲಕ ಅನಾವರಣಗೊಳಿಸಿ ಪರಿಸ್ಥಿತಿ ತಿಳಿಗೊಳಿಸಿದ್ದರು. ಆದರೆ ಇದೇ ಅಂಬೇಡ್ಕರ್ ಭಾವಚಿತ್ರವಿರುವ ನಾಮಫಲಕ್ಕೆ ಬುಧವಾರ ರಾತ್ರಿ ಕಿಡಿಗೇಡಿಗಳು ಕೆಸರು ಬಳಿದು ವಿಕೃತಿ ಮೆರೆದು ಅಪಮಾನಗೊಳಿಸಿದ್ದಾರೆ.

ವಿಷಯ ತಿಳಿದು ಸ್ಥಳಕ್ಕಾಮಿಸಿದ ತಹಸೀಲ್ದಾರ್ ಶಿವಕುಮಾರ್ ಕಾಸ್ನೂರು, ಡಿವೈಎಸ್ಪಿ ರಘು, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಸಿದ್ದಲಿಂಗ ಭೇಟಿ ನೀಡಿ ಪರಿಶೀಲಿಸಿ ಸಿಸಿಟಿವಿಗಳನ್ನು ವಶಕ್ಕೆ ಪಡೆದು ತನಿಖೆ ಮುಂದುವರಿಸಿದ್ದಾರೆ.



ಹಲ್ಲರೆಯಲ್ಲಿ ಅಂಬೇಡ್ಕರ್ ಭಾವಚಿತ್ರಕ್ಕೆ ಅಪಮಾನ ಮಾಡಿರುವುದನ್ನು ಖಂಡಿಸಿ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು.

ಪ್ರತಿಭಟನೆ: ಕೆಸರು ಬಳಿದು, ಭಾವಚಿತ್ರ ಹರಿದು ವಿಕೃತಿ ಮೆರೆದ ಕಿಡಿಗೇಡಿಗಳನ್ನು ಬಂಧಿಸಿ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು ಎಂದು ಒತ್ತಾಯಿಸಿ ನಾಮಫಲಕದ ಎದುರು ಗ್ರಾಮಸ್ಥರು ಪ್ರತಿಭಟನೆ ನಡೆಸಿದರು.

ಪ್ರತಿಭಟನಕಾರರನ್ನು ಉದ್ದೇಶಿಸಿ ಡಿವೈಎಸ್ಪಿ ರಘು ಮಾತನಾಡಿ ಗ್ರಾಮದಲ್ಲಿ ರಾಷ್ಟ್ರೀಯ ನಾಯಕರನ್ನು ಅಪಮಾನಗೊಳಿಸಿರುವ ದುರ್ಘಟನೆ ಖಂಡನೀಯ. ಗ್ರಾಮದಲ್ಲಿ ಅಳವಡಿಸಿರುವ ಸಿಸಿಟಿವಿ ಪರಿಶೀಲಿಸಿ ಕೃತ್ಯವೆಸಗಿರುವ ಆರೋಪಿಗಳನ್ನು ಶೀಘ್ರ ಪತ್ತೆ ಹಚ್ಚಿ ಕಠಿಣ ಶಿಕ್ಷೆಗೆ ಒಳಪಡಿಸಲಾಗುವುದು. ನೀವು ಪ್ರತಿಭಟನೆ ಮುಂದುವರಿಸಿದ್ದಲ್ಲಿ ಭದ್ರತೆಗಾಗಿ ಹೆಚ್ಚಿನ ಪೊಲೀಸರನ್ನು ನಿಯೋಜಿಸಿ ನಿಮಗೆ ರಕ್ಷಣೆ ಕೊಡುತ್ತಾ ನಾವು ಕಾಲ ಕಳೆಯಬೇಕಾಗುತ್ತದೆ. ಆರೋಪಿಗಳನ್ನು ಪತ್ತೆ ಹಚ್ಚಲು, ತನಿಖೆ ನಡೆಸಲು ಸಾಧ್ಯವಾಗುವುದಿಲ್ಲ. ಆದ್ದರಿಂದ ಆರೋಪಿಗಳನ್ನು ಪತ್ತೆ ಹಚ್ಚಲು ನೀವು ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಮಾಜಿ ಮೇಯರ್ ಪುರುಷೋತ್ತಮ್ ಮಾತನಾಡಿ, ತಾಲೂಕಿನಲ್ಲಿ ದಲಿತರ ಮೇಲೆ ಪದೇ ಪದೇ ದೌರ್ಜನ್ಯ ಹೆಚ್ಚಾಗುತ್ತಿರುವುದು ಖಂಡನೀಯ. ಗ್ರಾಮದಲ್ಲಿ ದಲಿತರು ಅಂಬೇಡ್ಕರ್ ವಿಚಾರವಾಗಿ ಕಲ್ಲು ಹೊಡೆಸಿಕೊಂಡು, ಹಲ್ಲೆಗೆ ಒಳಗಾಗಿ ಸಾಕಷ್ಟು ನೋವು ಅನುಭವಿಸಿದ್ದಾರೆ. ಇಂತಹ ಪ್ರಕರಣ ಮರುಕಳಿಸದಂತೆ ಕ್ರಮ ವಹಿಸಲು ಆರೋಪಿಗಳಿಗೆ ಕಠಿಣ ಶಿಕ್ಷೆ ವಿಧಿಸಬೇಕು. ಹಿರಿಯ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿ ಅಧಿಕಾರಿಗಳು ನ್ಯಾಯ ಒದಗಿಸುತ್ತೀರಿ ಎಂಬ ಭರವಸೆಯೊಂದಿಗೆ ಗ್ರಾಮಸ್ಥರನ್ನು ಮನವೊಲಿಸಿ ಪ್ರತಿಭಟನೆಯನ್ನು ತಾತ್ಕಾಲಿಕವಾಗಿ ಹಿಂಪಡೆಯಲಾಗಿದೆ. ಮುಂದಿನ ಒಂದು ವಾರದೊಳಗೆ ಆರೋಪಿಗಳನ್ನು ಪತ್ತೆ ಹಚ್ಚಿ ಶಿಕ್ಷೆಗೆ ಗುರಿ ಪಡಿಸದಿದ್ದಲ್ಲಿ ಪ್ರತಿಭಟನೆ ತೀವ್ರಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

> ತಾಲೂಕಿನ ಹಲ್ಲರೆಯಲ್ಲಿ ನೆನ್ನೆ ರಾತ್ರಿ ಅಂಬೇಡ್ಕರ್ ಭಾವಚಿತ್ರಕ್ಕೆ ಕೆಸರು ಬಳಿದು ಅಪಮಾನ ಮಾಡಿರುವುದು ನಾಗರಿಕ ಸಮಾಜ ತಲೆ ತಗ್ಗಿಸುವ ಸಂಗತಿ. ಅಂಬೇಡ್ಕರ್ ಅವರಿಗೆ ಮಾಡಿರುವ ಅವಮಾನ ನಮ್ಮ ಸಂವಿಧಾನ, ಸಮಾನತೆ ಮತ್ತು ಸಾಮಾಜಿಕ ನ್ಯಾಯದ ಮೌಲ್ಯಗಳ ಮೇಲಿನ ಹಲ್ಲೆಯಾಗಿದೆ. ಇಂತಹ ಮಹಾನಾಯಕನನ್ನು ಅವಮಾನಿಸಿರುವುದು ದೇಶದ್ರೋಹದ ಕೃತ್ಯ. ಇಂತಹ ಕೃತ್ಯಗಳನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ಘಟನೆ ಬಗ್ಗೆ ತಿಳಿದ ಕೂಡಲೇ ಪೊಲೀಸ್ ಅಧಿಕಾರಿಗಳಿಗೆ ದೂರವಾಣಿ ಕರೆ ಮಾಡಿ ಕಿಡಿಗೇಡಿಗಳ ಪತ್ತೆಹಚ್ಚಿ, ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮ ಜರುಗಿಸಿ ಕಠಿಣ ಶಿಕ್ಷೆಗೆ ಒಳಪಡಿಸಲು ಸೂಚಿಸಿದ್ದೇನೆ. – **ದರ್ಶನ್, ಶಾಸಕ.**

ಮುಂಜಾಗ್ರತಾ ಕ್ರಮವಾಗಿ 6 ಇನ್ಸ್‌ಪೆಕ್ಟರ್, 9 ಎಸ್‌ಐ, 45 ಪೊಲೀಸ್ ಸಿಬ್ಬಂದಿ, 10 ಗಾರ್ಡ್‌ಗಳನ್ನು ಬಂದೋಬಸ್ತ್‌ಗಾಗಿ ನಿಯೋಜಿಸಲಾಗಿದೆ. ಈ ವೇಳೆ ತಹಸೀಲ್ದಾರ್ ಶಿವಕುಮಾರ್ ಕಾಸ್ನೂರು, ಡಿವೈಎಸ್ಪಿ ರಘು, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಸಿದ್ದಲಿಂಗ, ಅಂಬೇಡ್ಕರ್ ಸೇನೆ ಜಿಲ್ಲಾಧ್ಯಕ್ಷ ನಾಗೇಂದ್ರ ಸೇರಿದಂತೆ ಗ್ರಾಮಸ್ಥರು ಮತ್ತು ಮುಖಂಡರು ಉಪಸ್ಥಿತರಿದ್ದರು.

ಮಹರ್ಷಿ ಭಗೀರಥರ ಸಾಧನೆ ಸಮಾಜಕ್ಕೆ ಮಾದರಿ

ತಿ.ನರಸೀಪುರ, ಮೇ 15– ಮಹರ್ಷಿ ಭಗೀರಥರ ಸಾಧನೆ ಸಮಾಜಕ್ಕೆ ಮಾದರಿಯಾಗಿದೆ ಎಂದು ಭಗೀರಥ ಉಪ್ಪಾರ ಜನ ಕಲ್ಯಾಣ ಟ್ರಸ್ಟ್ ಸಂಘದ ತಾಲೂಕು ಅಧ್ಯಕ್ಷ ಸಿದ್ದಪ್ಪಸ್ವಾಮಿ ತಿಳಿಸಿದರು.

ತಾಲೂಕಿನ ಕೊತ್ತೇಗಾಲ ಗ್ರಾಮದಲ್ಲಿ ಜೈ ಭಗೀರಥ ಉಪ್ಪಾರ ಸಂಘದಿಂದ ಗುರುವಾರ ನಡೆದ ಶ್ರೀ ಭಗೀರಥ ಜಯಂತಿಯಲ್ಲಿ ಭಗೀರಥರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ಸಲ್ಲಿಸಿ ಅವರು ಮಾತನಾಡಿದರು.

ಛಲ, ದೃಢ ಸಂಕಲ್ಪದ ಪ್ರತೀಕ ಭಗೀರಥರು. ಅವರು ತಮ್ಮ ಸಾಧನೆ ಮೂಲಕ ಗಂಗಾ ನದಿ ದಿಕ್ಕನ್ನು ಬದಲಿಸಿ ಜನರಿಗೆ ಸಾಧನೆಯ ದಾರಿ ತೋರಿಸಿಕೊಟ್ಟವರು. ಅಂತಹವರ ಜಯಂತಿ ಆಚರಿಸುತ್ತಿರುವುದು ಹಾಗೂ ಅಂತಹ ಸಮಾಜದಲ್ಲಿ ಜನ್ಮ ಪಡೆದಿರುವುದಕ್ಕೆ ನಾವೆಲ್ಲಾ ಹೆಮ್ಮೆ ಪಡಬೇಕಿದೆ ಎಂದರು.



ಭಗೀರಥರ ಭಾವಚಿತ್ರಕ್ಕೆ ಮುಖಂಡರು ಪುಷ್ಪಾರ್ಚನೆ ಮಾಡಿದರು.

ಸಮಾಜದವರೆಲ್ಲಾ ಒಗ್ಗೂಡಿ, ಒಗ್ಗಟ್ಟಿನಿಂದ ಮುಂದೆ ಬರಬೇಕು. ಸಮಾಜದ ಇತಿಹಾಸ ತಿಳಿಯಬೇಕು. ಪ್ರಯತ್ನ ಎಂದಿಗೂ ಕೈ ಬಿಡಬಾರದು. ಛಲ ಬಿಡದೆ, ದೃಢ ಸಂಕಲ್ಪದಿಂದ ಮುನ್ನಡೆದರೆ ಉತ್ತಮ ಫಲ ಸಿಗುತ್ತದೆ ಎಂದು ಭಗೀರಥರು ತಿಳಿಸಿಕೊಟ್ಟಿದ್ದು, ನಾವೆಲ್ಲಾ ಅವರ ದಾರಿಯಲ್ಲಿ ಸಾಗಬೇಕು. ಕಠಿಣ ಪರಿಶ್ರಮದಿಂದ ಸಕಲ ಜೀವಿಗಳಿಗೂ ತಮ್ಮ ಜೀವನವನ್ನೇ ಮುಡುಪಾಗಿಟ್ಟ ಭಗೀರಥರಂತೆ ಎಲ್ಲರೂ ಅನ್ಯರ, ಪರರ ಸೇವೆ ಮಾಡಬೇಕು. ಸಕಲ ಸಮಾಜದವರು ಒಗ್ಗೂಡಿ ಒಬ್ಬರಿಗೊಬ್ಬರು ನೆರವಾಗಬೇಕು. ಇಂತಹ ಮಹನೀಯರ ಆದರ್ಶಗಳನ್ನು ಎಲ್ಲರೂ ಪಾಲಿಸಬೇಕು ಎಂದು ತಿಳಿಸಿದರು.

ಭಗೀರಥರು ತಮ್ಮ ಸಾಧನೆ ಮೂಲಕ ಎಲ್ಲಾ ಮನಕುಲಕ್ಕೆ ಸಹಾಯ ಮಾಡಿದ್ದಾರೆ. ಭಗೀರಥರನ್ನು ಕಠಿಣ ಪರಿಶ್ರಮ, ದೃಢತೆಗೆ ಹೋಲಿಸಲಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಭಗೀರಥ ಉಪ್ಪಾರ ಸಂಘದ ಅಧ್ಯಕ್ಷ ಮಹದೇವಶೆಟ್ಟಿ, ಗೌರವಾಧ್ಯಕ್ಷ ನಂಜುಂಡಶೆಟ್ಟಿ, ಉಪಾಧ್ಯಕ್ಷ ಮಹದೇವಯ್ಯ, ಕಾರ್ಯದರ್ಶಿ ನವೀನ್, ರಾಚಪ್ಪಾಜಿ, ಖಜಾಂಚಿ ಪುಟ್ಟಸ್ವಾಮಿಶೆಟ್ಟಿ, ಸಂಘಟನಾ ಕಾರ್ಯದರ್ಶಿ ಮಹದೇವಶೆಟ್ಟಿ, ಯಜಮಾನರಾದ ಕಾಮಶೆಟ್ಟಿ, ಶಾಂತರಾಜು, ಮರಿಲಿಂಗಶೆಟ್ಟಿ, ಶಿವಣ್ಣಶೆಟ್ಟಿ, ಬಲ್ಲಶೆಟ್ಟಿ, ಮಹದೇವ, ರಾಜು, ಶಿವಣ್ಣ, ಕುಮಾರ, ಲಿಂಗರಾಜು, ಪುಟ್ಟಶೆಟ್ಟಿ, ಮಹೇಶ್, ಶಾಂತರಾಜು, ಪ್ರಕಾಶ್, ಶಿವನಂಜಶೆಟ್ಟಿ, ನಾಗಶೆಟ್ಟಿ, ಗುರುಮಲ್ಲಶೆಟ್ಟಿ, ರಮೇಶ್, ಯೋಗೇಶ್, ಸಣ್ಣಪ್ಪ, ಸಿದ್ದರಾಜು, ಮಹೇಶ್ ಸೇರಿದಂತೆ ಉಪ್ಪಾರ ಸಮಾಜದ ಮುಖಂಡರು ಇದ್ದರು.

ವಿದ್ಯಾರ್ಥಿಗಳು ಸ್ವತಂತ್ರವಾಗಿ ಭವಿಷ್ಯ ರೂಪಿಸಿಕೊಳ್ಳಿ

ಶಾಸಕ ಡಿ.ರವಿಶಂಕರ್

ಕೆ.ಆರ್.ನಗರ, ಮೇ 15– ವಿದ್ಯಾರ್ಥಿಗಳು ಬಯಸಿದನ್ನು ಸಾಧಿಸಬೇಕಾದರೆ ಕಠಿಣ ಪರಿಶ್ರಮದೊಂದಿಗೆ ಉತ್ತಮ ಮತ್ತು ಉನ್ನತ ಶಿಕ್ಷಣ ಪಡೆಯಬೇಕು ಎಂದು ಶಾಸಕ ಡಿ.ರವಿಶಂಕರ್ ತಿಳಿಸಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ 2024–25ನೇ ಸಾಲಿನ ಸಾಂಸ್ಕೃತಿಕ ಕ್ರೀಡೆ, ರಾಷ್ಟ್ರೀಯ ಸೇವಾ ಯೋಜನೆ, ಎನ್‌ಸಿಸಿ, ಸ್ಕೌಟ್ಸ್ ಮತ್ತು ಗೈಡ್ಸ್ ಹಾಗೂ ಯುವ ರೆಡ್‌ಕ್ರಾಸ್ ಚಟುವಟಿಕೆಗಳ ಸಮಾರೋಪ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳಿಗೆ ಕಾಲೇಜಿನ ದಿನಗಳು ಅತ್ಯಂತ ಪ್ರಮುಖ ಘಟ್ಟವಾಗಿದ್ದು, ಈ ಅವಧಿಯಲ್ಲಿ ನೀವು ತೆಗೆದುಕೊಳ್ಳುವ ನಿರ್ಧಾರ ಮತ್ತು ಕೈಗೊಳ್ಳುವ ನಿಷ್ಕಲ್ಮಷ ಚಟುವಟಿಕೆ ನಿಮ್ಮ ಜೀವನವನ್ನು ನಿರ್ಧರಿಸಲಿದ್ದು, ಎಲ್ಲರೂ ಸ್ವತಂತ್ರವಾಗಿ ಭವಿಷ್ಯ ರೂಪಿಸಿಕೊಳ್ಳಿ ಎಂದರು.

ಬಲಿಷ್ಠ ಭಾರತ ನಿರ್ಮಾಣಕ್ಕೆ ಯುವ ಜನತೆ ಕಟಿಬದ್ಧರಾಗಿ ಕೆಲಸ ಮಾಡಬೇಕಾಗಿದ್ದು, ನೀವೆಲ್ಲರೂ ಗುರುಗಳು, ಪೋಷಕರು ಮತ್ತು ಹಿರಿಯ ಮಾರ್ಗದರ್ಶನ ಪಡೆದು ಯಶಸ್ಸು ಗಳಿಸಿ ಎಂದರು.



ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಪ್ರಸಕ್ತ ಶೈಕ್ಷಣಿಕ ವರ್ಷದಿಂದ ಕೆ.ಆರ್.ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿವಿ ವತಿಯಿಂದ ತರಗತಿಗಳನ್ನು ಪ್ರಾರಂಭಿಸುತ್ತಿದ್ದು, ಆಸಕ್ತರು ಇದರ ಅನುಕೂಲ ಪಡೆಯಬೇಕೆಂದು ನುಡಿದ ಶಾಸಕರು ಮುಂದಿನ ದಿನಗಳಲ್ಲಿ ಕಾಲೇಜನ್ನು ಉನ್ನತ ಸ್ಥಾನಕೇರಿಸಲು ಕಾರ್ಯ ಯೋಜನೆ ಹಮ್ಮಿಕೊಂಡಿದ್ದೇನೆ ಎಂದು ಪ್ರಕಟಿಸಿದರು.

ಈ ಸಂದರ್ಭ ಕಾಲೇಜಿನ ಸಾಧಕ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಬಳಿಕ ವಿದ್ಯಾರ್ಥಿಗಳು ಪ್ರದರ್ಶಿಸಿದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಎಲ್ಲರ ಮನ ಸೂರೆಗೊಂಡವು. ತಿ.ನರಸೀಪುರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಧ್ಯಾಪಕರಾದ ಡಾ.ರೇಷ್ಮ ಚಂಗಪ್ಪ, ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯ ಕಾರ್ಯದರ್ಶಿ ಹೆಚ್.ಪಿ.ಪ್ರಶಾಂತ್, ಪ್ರಾಂಶುಪಾಲ ಡಾ.ಬಿ.ಎಸ್.ಜಯ, ಸಾಂಸ್ಕೃತಿಕ ಸಮಿತಿ ಸಂಚಾಲಕ ದೀಕ್ಷಿತ್ ಮಾತನಾಡಿದರು.

ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರಾದ ಹೆಚ್.ಎಸ್.ವೇಣು ಗೋಪಾಲ್, ನಟರಾಜು, ಬೆಟ್ಟನಾಯಕ, ತಿಮ್ಮಯ್ಯ, ಕೆ.ಎಲ್.ರಾಜೇಶ್, ಶಂಕರ್, ಉಪನ್ಯಾಸಕರಾದ ಕೆ.ಎನ್.ಮೋಹನ್, ಕಿರಣ್ ಕುಮಾರ್, ರಾಘವೇಂದ್ರ, ನಿಸಾರ್ ಖಾನ್, ಡಾ.ಎ.ಸುಮ, ಡಾ.ತಿಪ್ಪೇಸ್ವಾಮಿ, ಡಾ.ಎಲ್.ಮಹೇಶ್, ಅತಿಥಿ ಉಪನ್ಯಾಸಕರಾದ ಪ್ರದೀಪ್ ಕುಮಾರ್, ವಂದನ, ಶ್ವೇತಾ, ಸಾಗರ್, ಕುಮಾರ್ ಸೇರಿದಂತೆ ವಿದ್ಯಾರ್ಥಿಗಳು ಹಾಜರಿದ್ದರು.

ರೈತರ ಸಮಸ್ಯೆಗಳಿಗೆ ಸ್ಪಂದಿಸಲು ಕ್ರಮ: ತಹಸೀಲ್ದಾರ್ ಭರವಸೆ

ಸರಗೂರು, ಮೇ 15– ರೈತರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಿ ಪರಿಹಾರ ಒದಗಿಸಲು ಅಗತ್ಯ ಕ್ರಮ ವಹಿಸಲಾಗುವುದು ಎಂದು ತಹಸೀಲ್ದಾರ್ ಮೋಹನ ಕುಮಾರಿ ಭರವಸೆ ನೀಡಿದರು.

ಪಟ್ಟಣದ ಎಪಿಎಂಸಿ ಆವರಣದಲ್ಲಿ ನಡೆದ ರೈತರ ಕುಂದು ಕೊರತೆ ಸಭೆಯನ್ನು ಉದ್ಘಾಟಿಸಿ, ದೂರುಗಳನ್ನು ಸ್ವೀಕರಿಸಿ ಮಾತನಾಡಿದ ಅವರು, ತಾಲೂಕು ಕಚೇರಿಯಲ್ಲಿ ಸಾರ್ವಜನಿಕರು ಹಾಗೂ ರೈತರಿಗೆ ಆಗುತ್ತಿರುವ ತೊಂದರೆ ಸರಿಪಡಿಸಲು ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಸೂಚಿಸಿದರು. ಅಲ್ಲದೇ ಅರಣ್ಯ, ಚೆಸ್ಕಾಂ ಇಲಾಖೆ ಸೇರಿದಂತೆ ಎಪಿಎಂಸಿ ಆವರಣದಲ್ಲಿರುವ ರಾಗಿ ಖರೀದಿ ಕೇಂದ್ರದಲ್ಲಿ ಬಗೆಹರಿಸಬಹುದಾದ ಸಮಸ್ಯೆಗಳನ್ನು ಬಗೆಹರಿಸುವಂತೆಯೂ ಸೂಚಿಸಿದರು. ರೈತರು ಎದುರಿಸುತ್ತಿರುವ ಸಾಗುವಳಿ ಸಮಸ್ಯೆಯನ್ನು ಜಿಲ್ಲಾಡಳಿತದ ಗಮನಕ್ಕೆ ತರಲಾಗುವುದು ಎಂದು ಭರವಸೆ ನೀಡಿದರು.



ಕುಂದುಕೊರತೆ ಸಭೆಯನ್ನು ತಹಸೀಲ್ದಾರ್ ಮೋಹನಕುಮಾರಿ ಉದ್ಘಾಟಿಸಿದರು.

ಇದಕ್ಕೂ ಮುನ್ನಾ ಮಾತನಾಡಿದ ರೈತ ಸಂಘದ ಪ್ರಧಾನ ಕಾರ್ಯದರ್ಶಿ ನಂದೀಶ್, ಅಕ್ಕಪಕ್ಕದ ಜಮೀನಿನ ರೈತರ ನಡುವೆ ಹೊಂದಾಣಿಕೆ ಇದ್ದರೆ ಹೊಲಕ್ಕೆ ಹೋಗಿ ಬರಲು ಯಾವುದೇ ಸಮಸ್ಯೆ ಇಲ್ಲ. ಆದರೆ, ಹೆಚ್ಚಿನ ಕಡೆಗಳಲ್ಲಿ ಹೊಲಕ್ಕೆ ತೆರಳುವ ರಸ್ತೆ ವಿಚಾರವಾಗಿ ಗಲಾಟೆ, ಹೊಡೆದಾಟ ನಡೆದಿವೆ. ಮಾರಾಣಾಂತಿಕ ಹಲ್ಲೆಗಳಾಗಿ ಕೆಲವರು ಆಸ್ಪತ್ರೆ ಸೇರಿದ್ದಾರೆ. ಈ ಸಂಬಂಧ ಪೊಲೀಸ್ ಠಾಣೆಗಳಲ್ಲಿ ಪ್ರಕರಣ ದಾಖಲಾಗಿ, ವರ್ಷಾನುಗಟ್ಟಲೇ ಕೋರ್ಟ್‌ಗೆ ಅಲೆದಾಡಿದರೂ ರೈತರ ರಸ್ತೆ ಸಮಸ್ಯೆ ಬಗೆಹರಿದಿಲ್ಲ ಎಂದರು.

ಅನ್ನದಾತ ಅತಿವೃಷ್ಟಿಯಲ್ಲಿ ಒಂದು ರೀತಿ, ಅನಾವೃಷ್ಟಿಯಲ್ಲಿ ಇನ್ನೊಂದು ರೀತಿ ಸಂಕಷ್ಟಕ್ಕೆ ಸಿಲುಕಿದ್ದಾರೆ. ಸಮೃದ್ಧ ಬೆಳೆಯಾದ ಸಂದರ್ಭ ಕಾಡಾನೆ ಹಾವಳಿಯಿಂದ ರೈತ ಕಷ್ಟಪಟ್ಟು ಬೆಳೆದ ಬೆಳೆ ಕಾಡು ಪ್ರಾಣಿಗಳ ಪಾಲಾಗುತ್ತಿದೆ. ಈ ಸಂಬಂಧ ಅರಣ್ಯ ಇಲಾಖೆಗೆ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಹೀಗಾಗಿ ಕಾಡುಪ್ರಾಣಿಗಳ ಹಾವಳಿ ತಡೆಗೆ ಅರಣ್ಯ ಇಲಾಖೆ ಮುಂದಾಗಬೇಕು ಎಂದು ಆಗ್ರಹಿಸಿದರು.

ಕರ್ನಾಟಕ ಭೀಮ ಸೇನೆ ತಾಲೂಕು ಅಧ್ಯಕ್ಷ ಮಹೇಂದ್ರ, ರೈತ ಸಂಘದ ಅಧ್ಯಕ್ಷ ಚನ್ನನಾಯಕ, ಮಹದೇವನಾಯಕ, ವೈಡಿ.ರಾಜಣ್ಣ ಮಾತನಾಡಿದರು. ಇಓ ಪ್ರೇಮ್ ಕುಮಾರ್, ಸಿಪಿಐ ಪ್ರಸನ್ನ ಕುಮಾರ್, ಕೃಷ್ಣಮೂರ್ತಿ, ರೈತ ಸಂಘದ ಉಪಾಧ್ಯಕ್ಷ ಗಣೇಶ್, ನವೀನ್, ರವಿಚಂದ್ರ, ಮುಜೀಬ್ ಸೇರಿದಂತೆ ಇನ್ನಿತರರಿದ್ದರು.

ಬೆಟ್ಟದಪುರ ಸರ್ಕಾರಿ ಕಾಲೇಜಲ್ಲಿ ವಾರ್ಷಿಕೋತ್ಸವ

ಬೆಟ್ಟದಪುರ, ಮೇ 15– ಗ್ರಾಮದ ಪ್ರಥಮ ದರ್ಜೆ ಕಾಲೇಜಿನಲ್ಲಿ ಕಾಲೇಜು ವಾರ್ಷಿಕೋತ್ಸವ ಹಾಗೂ ಸಾಂಸ್ಕೃತಿಕ, ಕ್ರೀಡೆ, ಎನ್‌ಎಸ್‌ಎಸ್, ರೆಡ್‌ಕ್ರಾಸ್ ಹಾಗೂ ಸ್ಕೌಟ್ ಅಂಡ್ ಗೈಡ್ಸ್ ಕಾರ್ಯಕ್ರಮಗಳ ಸಮಾರೋಪ ಸಮಾರಂಭ ನಡೆಯಿತು.

ಕಾರ್ಯಕ್ರಮವನ್ನು ತಾಲೂಕು ಆಶ್ರಯ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್ ಉದ್ಘಾಟಿಸಿ ಮಾತನಾಡಿದರು.

ನಿವೃತ್ತ ಪ್ರಾಚಾರ್ಯ ಡಾ.ಸತೀಶ್ ಚಂದ್ರ ಮಾತನಾಡಿ, ವಿದ್ಯಾರ್ಥಿಗಳು ಕೇವಲ ಅಂಕ ಪಟ್ಟಿಗಾಗಿ ಓದದೆ ಸಾಧನೆಯ ದೃಷ್ಟಿಯಿಂದ ಹೆಚ್ಚಿನ ಜ್ಞಾನ ಪಡೆಯಬೇಕೆಂದು ತಿಳಿಸಿದರು.

ಪ್ರಾಂಶುಪಾಲ ಭರತ್ ರಾಜೇ ಅರಸ್ ಮಾತನಾಡಿ, ನಮ್ಮ ಕಾಲೇಜು ಜಿಲ್ಲೆಯಲ್ಲೇ ಅತ್ಯುತ್ತಮ ಕಾಲೇಜಾಗಿ ಹೊರಹೊಮ್ಮಿದ್ದು, ಕಾಲೇಜು 'ಬಿ++' ಹೊಂದಿದೆ. ಸಾಂಸ್ಕೃತಿಕ ಚಟುವಟಿಕೆ, ಕ್ರೀಡೆ, ಪಾಠ ಹಾಗೂ ರೆಡ್‌ಕ್ರಾಸ್ ಸಂಸ್ಥೆಯ ರಕ್ತದಾನ ಮುಂತಾದ ಚಟುವಟಿಕೆಗಳಲ್ಲಿ ಹೆಚ್ಚಿನ ರೀತಿಯಲ್ಲಿ ವಿದ್ಯಾರ್ಥಿಗಳು ಪಾಲ್ಗೊಂಡು ಕಾಲೇಜಿಗೆ ಹೆಮ್ಮೆ ತಂದಿದ್ದಾರೆ ಎಂದರು.



ಬೆಟ್ಟದಪುರ ಪ್ರಥಮ ದರ್ಜೆ ಕಾಲೇಜಿನಲ್ಲಿ ವಾರ್ಷಿಕೋತ್ಸವ ನಡೆಯಿತು

ಈ ವೇಳೆ ಸಂಚಾಲಕಿ ಪದ್ಮಾವತಿ, ಎನ್‌ಎಸ್‌ಎಸ್ ಸಮಿತಿ ಸಂಚಾಲಕರಾದ ಜಲೇಂದ್ರ, ಸ್ಕೌಟ್ ಅಂಡ್ ಗೈಡ್ಸ್ ಸಂಚಾಲಕ, ಶಕೀರ್, ರೆಡ್‌ಕ್ರಾಸ್ ಸಮಿತಿ ಸಂಚಾಲಕಿ ಕಾವ್ಯ ಹಾಗೂ ಕ್ರೀಡಾ ಚಟುವಟಿಕೆ ಸಂಚಾಲಕ ಪ್ರಶಾಂತ್ ತಮ್ಮ ಸಂಸ್ಥೆಗಳ ಸಾಧನೆ ಬಗ್ಗೆ ವರದಿ ಮಂಡಿಸಿದರು. ಇದೇ ವೇಳೆ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಕಾಲೇಜು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಕೃಷ್ಣೇಗೌಡ, ಸದಸ್ಯರಾದ ಕೃಷ್ಣ ನಾಯಕ್, ಪುಟ್ಟರಾಜು, ಕಿರಣ್, ಸೈಯದ್ ಅಲ್ತಾಫ್, ಹರೀಶ್, ಮಹೇಶ್, ಮಲ್ಲೇಶ್, ರಜಿನಿಕಾಂತ್, ನಾರಾಯಣ್, ಸತೀಶ್ ರಾಜ್, ಮಮತಾ ಸೇರಿದಂತೆ ಉಪನ್ಯಾಸಕರು, ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ವರ್ಗ ಇದ್ದರು.

ಶುದ್ಧ ಕುಡಿಯುವ ನೀರಿನ ಘಟಕಕ್ಕೆ ಭೂಮಿ ಪೂಜೆ

ಶ್ರೀಗುಂಜಾ ನರಸಿಂಹಸ್ವಾಮಿ ದೇವಾಲಯದ ಬಳಿ ತಂಗುದಾಣ ನಿರ್ಮಾಣಕ್ಕೆ ಕ್ರಮ: ಸುನೀಲ್ ಬೋಸ್

ತಿ.ನರಸೀಪುರ, ಮೇ 15– ಶ್ರೀಗುಂಜಾ ನರಸಿಂಹಸ್ವಾಮಿ ದೇವಸ್ಥಾನಕ್ಕೆ ಆಗಮಿಸುವ ಭಕ್ತರ ಸಂಖ್ಯೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಅವರು ಉಳಿದುಕೊಳ್ಳಲು ತಂಗುದಾಣ ನಿರ್ಮಿಸಲಾಗುವುದು ಎಂದು ಸಂಸದ ಸುನೀಲ್ ಬೋಸ್ ತಿಳಿಸಿದರು.

ಪಟ್ಟಣದ ಶ್ರೀಗುಂಜಾ ನರಸಿಂಹಸ್ವಾಮಿ ದೇವಾಲಯದ ಮುಂಭಾಗ 10 ಲಕ್ಷ ರೂ. ವೆಚ್ಚದ ಶುದ್ಧ ಕುಡಿಯುವ ನೀರಿನ ಘಟಕ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಶ್ರೀಗುಂಜಾ ನರಸಿಂಹಸ್ವಾಮಿ ದೇವಸ್ಥಾನ ಪ್ರಸಿದ್ಧ ಪುಣ್ಯ ಕ್ಷೇತ್ರವಾಗಿದ್ದು, ಇಲ್ಲಿ ಕುಡಿಯುವ ನೀರಿಗೆ ಸಮಸ್ಯೆ ಉಂಟಾಗಿದ್ದ ಹಿನ್ನೆಲೆಯಲ್ಲಿ ನಮ್ಮ ತಂದೆ ಮಹದೇವಪ್ಪರವರು ಭಕ್ತರಿಗೆ ಶುದ್ಧ ಕುಡಿಯುವ ನೀರು ನೀಡಬೇಕೆಂಬ ಸದುದ್ದೇಶದೊಂದಿಗೆ 5 ಲಕ್ಷ ರೂ. ಅನುದಾನ ಬಿಡುಗಡೆ ಮಾಡಿದ್ದು, ಉಳಿಕೆ 5 ಲಕ್ಷ ರೂ.ಗಳನ್ನು ದೇವಸ್ಥಾನದ ಆಡಳಿತ ಮಂಡಳಿ ನೀಡುವುದರಿಂದ ಕುಡಿಯುವ ನೀರಿನ ಕೇಂದ್ರ ಕಾಮಗಾರಿ ಪೂರ್ಣಗೊಳ್ಳಲಿದೆ ಎಂದರು.

ತ್ರಿವೇಣಿ ಸಂಗಮ ಕ್ಷೇತ್ರ ತಿರುಮಕೂಡಲು ನರಸೀಪುರಕ್ಕೆ ಭೇಟಿ ನೀಡುವ ಭಕ್ತರ ಸಂಖ್ಯೆ ಹೆಚ್ಚಳವಾಗಿರುವುದರಿಂದ ದೇವಸ್ಥಾನದ ಆಸು ಪಾಸಿನಲ್ಲಿ ಭಕ್ತರು ಉಳಿದುಕೊಳ್ಳಲು ತಂಗುದಾಣ ನಿರ್ಮಿಸಲು ಉದ್ದೇಶಿಸಲಾಗಿದೆ. ಈ ಸಂಬಂಧ ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಅವರಿಗೆ ಮನವಿ ಸಲ್ಲಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ನಮ್ಮ ತಂದೆ, ಸಚಿವ ಡಾ.ಹೆಚ್.ಸಿ.ಮಹದೇವಪ್ಪನವರು ಕ್ಷೇತ್ರವನ್ನು ನೂರಾರು ಕೋಟಿ ರೂ. ಅನುದಾನದಲ್ಲಿ ಸಮಗ್ರವಾಗಿ ಅಭಿವೃದ್ಧಿ ಪಡಿಸಿದ್ದು, ಇನ್ನೂ ಹೆಚ್ಚಿನ ಅಭಿವೃದ್ಧಿಗೆ ಹಣ ಬಿಡುಗಡೆ ಮಾಡಲಾಗುತ್ತದೆ. ತಂದೆಯವರನ್ನು ಕ್ಷೇತ್ರದ ಜನತೆ 3 ಬಾರಿ ಸಚಿವರನ್ನಾಗಿ ಮಾಡಿದ್ದಾರೆ. ಅಲ್ಲದೇ ನನ್ನನ್ನು ಸಂಸದರನ್ನಾಗಿ ಮಾಡಿದ್ದಾರೆ. ನಮ್ಮ ಕುಟುಂಬದ ಮೇಲೆ ಕ್ಷೇತ್ರದ ಜನತೆ ಋಣ ಹೆಚ್ಚಿದ್ದು, ಅಭಿವೃದ್ಧಿ ಮೂಲಕ ಋಣ ತೀರಿಸುವ ಪ್ರಯತ್ನ ಮಾಡಲಾಗುವುದು ಎಂದರು.

ಈ ವೇಳೆ ಪುರಸಭಾಧ್ಯಕ್ಷೆ ವಸಂತ ಶ್ರೀ ಕಂಠ, ಡಾ.ಮಹದೇವಪ್ಪ ಅಭಿಮಾನಿಗಳ ಜಿಲ್ಲಾಧ್ಯಕ್ಷ ಕೆ.ಎಂ.ಮಧು ಕುಮಾರ್, ಗುತ್ತಿಗೆದಾರ ಕೆಂಪಯ್ಯನಹುಂಡಿ ಮಾಧು, ಜಿಪಂ ಎಇಇ ಚರಿತಾ, ಶ್ರೀಗುಂಜಾನರಸಿಂಹಸ್ವಾಮಿ ದೇವಾಲಯದ ಪಾರುಪತ್ತೇದಾರ ದೀಪು, ದೊಡ್ಡಪುರ ನಂಜಯ್ಯ, ಮಹಿಳಾ ಘಟಕದ ಅಧ್ಯಕ್ಷೆ ಲತಾ ಜಗದೀಶ್, ಹಿಂದುಳಿದ ವರ್ಗಗಳ ಜಿಲ್ಲಾಧ್ಯಕ್ಷ ಜೆ.ಅನೂಪ್ ಗೌಡ, ತಾಪಂ ಮಾಜಿ ಅಧ್ಯಕ್ಷ ಮಲ್ಲಿಕಾರ್ಜುನಸ್ವಾಮಿ, ಗುರುಮಲ್ಲ, ತ್ರಿಪುರ ಸುಂದರಿ ದೇವಾಲಯದ ಪಾರುಪತ್ತೇದಾರ ಎಂ.ಬಿ.ಸಾಗರ್, ತಾಪಂ ಸದಸ್ಯ ಕುಕ್ಕೂರು ಗಣೇಶ್, ಆಪ್ತ ಸಹಾಯಕ ಬಿ.ಬಸವರಾಜು, ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳಾದ ಹೆಚ್.ಸಿ.ರತೀಶ್, ಪಿ.ಎನ್.ಚರಿತ, ಕೆ.ಶಿವರಾಜು, ಸತೀಶ್ ಚಂದ್ರನ್, ಸೆಸ್ಕ್ ಎಇಇ ವೀರೇಶ್ ಮುಖಂಡರಾದ ತೇಜು, ಅಶ್ವಿನ್, ಕಾರ್ಯಕರ್ತರು, ಮುಖಂಡರು ಹಾಜರಿದ್ದರು.



ಶುದ್ಧ ಕುಡಿಯುವ ನೀರಿನ ಘಟಕಕ್ಕೆ ಸಂಸದ ಸುನೀಲ್ ಬೋಸ್ ಭೂಮಿ ಪೂಜೆ ನೆರವೇರಿಸಿದರು.

ರಾಜೀನಾಮೆ ನೀಡುವಂತೆ ತಾಕೀತು

ಕಾರ್ಯಕ್ರಮಕ್ಕೆ ಆಗಮಿಸಿದ್ದ ಸಂಸದ ಸುನೀಲ್ ಬೋಸ್ ಅವರು ಸ್ಥಳದಲ್ಲಿದ್ದ ಪುರಸಭಾಧ್ಯಕ್ಷೆ ವಸಂತ ಶ್ರೀಕಂಠ ಅವರಿಗೆ ಇನ್ನೂ ಯಾಕೆ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿಲ್ಲ. ರಾಜೀನಾಮೆ ಕೊಟ್ಟು ಏಕೆ ವಾಪಸ್ ಪಡೆದಿದ್ದೀರಾ ಎಂದಾಗ ಪುರಸಭಾಧ್ಯಕ್ಷೆ ವಸಂತ ಉಪಾಧ್ಯಕ್ಷರು ಕೊಡಲಿಲ್ಲ ಹಾಗಾಗಿ ನಾನು ರಾಜೀನಾಮೆ ನೀಡಿಲ್ಲ. ಅವರು ಕೊಟ್ಟ ತಕ್ಷಣ ನಾನು ರಾಜೀನಾಮೆ ನೀಡುತ್ತೇನೆ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಸಂಸದರು ಹಿಂದುಳಿದ ವರ್ಗದವರು ನೀವಾಗಿದ್ದು, ಮುಂದಿನವರೆಗೆ ಅವಕಾಶ ಮಾಡಿಕೊಡಬೇಡವೇ ಎಂದಾಗ ವಸಂತ ಈ ತಿಂಗಳು ನನ್ನ ಮಗಳ ಮದುವೆ ಇದೆ. ಮುಗಿದ ಬಳಿಕ ರಾಜೀನಾಮೆ ನೀಡುತ್ತೇನೆ ಎಂದರು. ಈ ವೇಳೆ ಸಂಸದ ಸುನೀಲ್ ಬೋಸ್ ಉಪಾಧ್ಯಕ್ಷೆ ರಾಜೇಶ್ವರಿ ರಾಘವೇಂದ್ರ ಅವರಿಗೂ ಹೇಳುತ್ತೇನೆ ಒಟ್ಟಾಗಿ ಕೊಡಿ ಎಂದು ತಾಕೀತು ಮಾಡಿದರು.

ನಿಂತಿದ್ದ ಶಾಲಾ ವಾಹನಕ್ಕೆ ಬೈಕ್ ಡಿಕ್ಕಿ: ಸವಾರ ಸಾವು



ಹೆಚ್.ಡಿ.ಕೋಟೆ, ಮೇ 15– ನಿಂತಿದ್ದ ಶಾಲಾ ವಾಹನಕ್ಕೆ ಬೈಕ್ ಡಿಕ್ಕಿ ಹೊಡೆದ ಪರಿಣಾಮ ಸವಾರ ಸಾವನ್ನಪ್ಪಿ, ಹಿಂಬದಿ ಸವಾರ ಗಾಯಗೊಂಡಿರುವ ಘಟನೆ ತಾಲೂಕಿನ ಮೈಸೂರು–ಮಾನಂದವಾಡಿ ರಸ್ತೆಯ ಹ್ಯಾಂಡ್‌ಪೋಸ್ಟ್ ಬಳಿ ಬುಧವಾರ ನಡೆದಿದೆ.

ತಾಲೂಕಿನ ಕೊಲ್ಲೇಗೌಡನಹಳ್ಳಿ ಗ್ರಾಮದ ಮುದ್ದಮಲ್ಲಯ್ಯ ಅವರ ಮಗ ಯೋಗೇಶ್ (25) ಸಾವನ್ನಪ್ಪಿದವರು. ಅದೇ ಗ್ರಾಮದ ಚಿನ್ನಯ್ಯ ಅವರ ಪುತ್ರ ನಂದೀಶ್ ಗಾಯಗೊಂಡವರು. ಬುಧ ವಾರ ಸಂಜೆ ಯೋಗೇಶ್ ಹಾಗೂ ನಂದೀಶ್ ಸ್ವಗ್ರಾಮದಿಂದ ಬೈಕ್‌ನಲ್ಲಿ ಗದ್ದಿಗೆಗೆ ತೆರಳಿ ವಾಪಸ್ ಬರುತ್ತಿದ್ದ ವೇಳೆ ಹ್ಯಾಂಡ್‌ಪೋಸ್ಟ್ ಬಳಿ ರಸ್ತೆ ಮಧ್ಯೆ ನಿಂತಿದ್ದ ಖಾಸಗಿ ಶಾಲಾ ವಾಹನಕ್ಕೆ ಹಿಂದಿನಿಂದ ಡಿಕ್ಕಿ ಹೊಡೆದಿದ್ದಾರೆ. ಪರಿಣಾಮ ತೀವ್ರ ಗಾಯಗೊಂಡ ಇಬ್ಬರನ್ನು ಆಂಬುಲೆನ್ಸ್ ಮೂಲಕ ಮೈಸೂರಿನ ಖಾಸಗಿ ಆಸ್ಪತ್ರೆಗೆ ರವಾನಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೇ ಗುರುವಾರ ಯೋಗೇಶ್ ಸಾವನ್ನಪ್ಪಿದ್ದಾನೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಹೆಚ್.ಡಿ.ಕೋಟೆ ಠಾಣೆ ಪೊಲೀಸರು ಪರಿಶೀಲನೆ ನಡೆಸಿ, ಶಾಲಾ ವಾಹನ, ಬೈಕ್ ಅನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

ಶ್ರೀದುರ್ಗಾದೇವಿ ವಿಗ್ರಹ ಕೊಡುಗೆ



ಭಾರತ ಮಾತೆಗೆ ಜಯವಾಗಲಿ. ಭಾರತ ಸೇನೆಗೆ ಜಯವಾಗಲಿ. ಮೋದಿ ನೇತೃತ್ವದ ಕೇಂದ್ರ ಸರ್ಕಾರಕ್ಕೆ ಜಯವಾಗಲಿ. ಉಗ್ರರಿಂದ ಹತರಾದ ನಾಗರಿಕರ ಆತ್ಮಕ್ಕೆ ಶಾಂತಿ ದೊರೆಯಲಿ. ಪಾಪಿ ಪಾಕಿಸ್ತಾನಕ್ಕೆ ಸದ್ಬುದ್ಧಿ ಕೊಡಲೆಂದು ತಿ.ನರಸೀಪುರ ತಾಲೂಕಿನ ತಲಕಾಡು ಹಸ್ತಕೇರಿ ಮಠಕ್ಕೆ ಮೈಸೂರಿನ ಪಿ.ರುದ್ರಸ್ವಾಮಿ ಅವರ ಪತ್ನಿ ಪ್ರೇಮ ಅವರು ಶ್ರೀದುರ್ಗಾದೇವಿ ವಿಗ್ರಹ ಕೊಡುಗೆ ನೀಡಿದರು. ಈ ವೇಳೆ ಮಠದ ಪೀಠಾಧ್ಯಕ್ಷ ಡಾ.ಶ್ರೀಸಿದ್ಧಮಲ್ಲಿಕಾರ್ಜುನ ಸ್ವಾಮೀಜಿ, ಶಿವಾನಂದ ಶಿವಾಚಾರ್ಯ ಸ್ವಾಮೀಜಿ, ಯಜಮಾನ್ ಪಾಪಣ್ಣ, ಸಮಾಜ ಸೇವಕ ಸೋಮಣ್ಣ, ಮಲ್ಲೇಶ್, ಶಂಕರ್, ದತ್ತಾತ್ರೇಯ, ಸದಾನಂದ ಇದ್ದರು.

ಚಾಮುಂಡೇಶ್ವರಿ ಕ್ಷೇತ್ರ ವ್ಯಾಪ್ತಿಯ ಫಲಾನುಭವಿಗಳಿಗೆ ಹೊಲಿಗೆ ಯಂತ್ರ, ಬಿ-ಖಾತೆ ವಿತರಣೆ

ಮೈಸೂರು, ಮೇ 15(ಎಂಕೆ)- ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ವಾರ್ಡ್‌ಗಳ ಫಲಾನುಭವಿಗಳಿಗೆ ಹೊಲಿಗೆ ಯಂತ್ರ(ಟೈಲರಿಂಗ್ ಮಷಿನ್) ಹಾಗೂ ಬಿ-ಖಾತೆಗಳನ್ನು ಮಾಜಿ ಸಚಿವರೂ ಆದ ಶಾಸಕ ಜಿ.ಟಿ.ದೇವೇಗೌಡರು ಗುರುವಾರ ವಿತರಣೆ ಮಾಡಿದರು.

ಮೈಸೂರಿನ ಶಾರದಾದೇವಿನಗರ ತಿಬ್ಬಾದೇವಿ ಸರ್ಕಲ್ ಸಮೀಪದಲ್ಲಿರುವ ನಗರಪಾಲಿಕೆ ವಲಯ ಕಚೇರಿ-3ರ ಆವರಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ 86 ಮಂದಿಗೆ ಹೊಲಿಗೆ ಯಂತ್ರ ಹಾಗೂ 100ಕ್ಕೂ ಹೆಚ್ಚು ಮಂದಿಗೆ ಬಿ-ಖಾತಾ ವಿತರಣೆ ಮಾಡಲಾಯಿತು.

ಬಳಿಕ ಮಾತನಾಡಿದ ಜಿಟಿಡಿ, ಮೈಸೂರು ನಗರದ ಚಾಮರಾಜ, ನರಸಿಂಹರಾಜ ಮತ್ತು ಕೃಷ್ಣರಾಜ ವಿಧಾನಸಭಾ ಕ್ಷೇತ್ರ ಸುತ್ತಲೂ ಇರೋದು ಚಾಮುಂಡೇಶ್ವರಿ ಕ್ಷೇತ್ರ. ನಾಲ್ಕು ಪಟ್ಟಣ ಪಂಚಾಯ್ತಿ, ಒಂದು ನಗರಸಭೆ, ಐದು ವಾರ್ಡ್, 18 ಗ್ರಾಮ ಪಂಚಾಯ್ತಿ ಇರುವ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರ ಭಾರಿ ದೊಡ್ಡದು. ಎರಡ್ಮೂರು ಜನ ಎಂಎಲ್‌ಎಗಳು ಮಾಡೋಷ್ಟು ಕೆಲಸ ಇದೆ. ಆದರೂ ಕೂಡ ನಮ್ಮ ಶಕ್ತಿ ಕೆಲಸ ಮಾಡುತ್ತಿದ್ದು, ಸಮಸ್ಯೆಗಳು ಹೆಚ್ಚಾಗಿರುವುದೇ ನಮ್ಮ ಕ್ಷೇತ್ರದಲ್ಲಿ. ಹಾಗಾಗಿ ಸರ್ಕಾರ, ನಗರಾಭಿವೃದ್ಧಿ ಸಚಿವರಿಗೆ 5 ಪರ್ಸೆಂಟ್ ತೆರಿಗೆ ರಿಯಾಯ್ತಿ ಅವಧಿ ವಿಸ್ತರಣೆಗೆ ಅವಕಾಶ ಕೇಳಿದ ಕೂಡಲೇ 2 ತಿಂಗಳು ವಿಸ್ತರಣೆ ಮಾಡಿದರು. ಎರಡು ತಿಂಗಳು ರಿಯಾಯ್ತಿಯಲ್ಲಿ ತೆರಿಗೆ ಕಟ್ಟೋದಕ್ಕೆ ಅನುಕೂಲವಾಗಿದೆ. ಬಿ-ಖಾತೆ ಕೊಡಲು ಸ್ವಲ್ಪ ತೊಡಕುಗಳಿದ್ದು, ನಮ್ಮೆಲ್ಲರ ಒತ್ತಾಯಕ್ಕೆ ಬಡವರ ಕೆಲಸವಾಗಬೇಕು ಎಂದು ಸರ್ಕಾರ ಕೂಡ ಬಿ-ಖಾತೆ ವಿತರಣೆ ಅವಧಿಯನ್ನು ವಿಸ್ತರಣೆ ಮಾಡಿದೆ ಎಂದು ತಿಳಿಸಿದರು.

ನಮ್ಮ ಕ್ಷೇತ್ರವೂ ದೊಡ್ಡದು; ಸಮಸ್ಯೆಯೂ ದೊಡ್ಡದಾಗಿದೆ: ಜಿಟಿಡಿ



ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ವಾರ್ಡ್‌ಗಳ ಫಲಾನುಭವಿಗಳಿಗೆ ಹೊಲಿಗೆ ಯಂತ್ರ ಹಾಗೂ ಬಿ-ಖಾತೆಗಳನ್ನು ಶಾಸಕ ಜಿ.ಟಿ.ದೇವೇಗೌಡರು ಗುರುವಾರ ವಿತರಣೆ ಮಾಡಿದರು. ನಗರಪಾಲಿಕೆ ಉಪ ಆಯುಕ್ತ(ಕಂದಾಯ) ಸೋಮಶೇಖರ್, ಮಾಜಿ ಸದಸ್ಯೆ ಸವಿತಾ ಸುರೇಶ್, ವಲಯ ಆಯುಕ್ತ ಸತ್ಯಮೂರ್ತಿ ಮತ್ತಿತರರಿದ್ದರು.

ಮಹಿಳೆಯರ ಆರ್ಥಿಕ ಸ್ವಾವಲಂಬನೆಗೆ ಟೈಲರಿಂಗ್ ಮಷಿನ್: ಮಹಿಳೆಯರಲ್ಲಿ ನಾವು ಆರ್ಥಿಕವಾಗಿ ಸ್ವಾವಲಂಬಿಯಾಗಬೇಕು, ದುಡಿಯಬೇಕು ಎಂಬ ಭಾವನೆ ಇದೆ. ಆದರೆ ದುಡಿಮೆಗೆ ತಕ್ಕಂತೆ ಅವಕಾಶಗಳು ಕಡಿಮೆ. ಆದ್ದರಿಂದ ಮಹಿಳೆಯರಿಗೆ ಸರ್ಕಾರದ ಪ್ರೋತ್ಸಾಹ ಯೋಜನೆಗಳು ದೊರೆಯುವಂತೆ ಮಾಡಬೇಕು. ದುಡಿದು ಕುಟುಂಬವನ್ನು ಕಾಪಾಡುವ ಮಹಿಳೆಯರು ಆರ್ಥಿಕವಾಗಿ ಸಬಲರಾಗಬೇಕು. ಮಹಿಳೆಯರು ಆರ್ಥಿಕವಾಗಿ ಸಬಲರಾದರೆ, ಮಕ್ಕಳಿಗೆ ಒಳ್ಳೆಯ ವಿದ್ಯಾಭ್ಯಾಸ ಕೊಡಿಸುತ್ತಾರೆ. ಈ ನಿಟ್ಟಿನಲ್ಲಿ ಸರ್ಕಾರದ ಹಲವಾರು ಯೋಜನೆಗಳಿದ್ದು, ಎಲ್ಲವನ್ನು ಮಹಿಳೆಯರು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಕಂದಾಯ ಕಟ್ಟುವಲ್ಲಿ ಚಾಮುಂಡೇಶ್ವರಿ ಕ್ಷೇತ್ರವೇ ಮುಂದು: ಕ್ಷೇತ್ರದ ಪ್ರತಿಯೊಬ್ಬರು ನಿಮ್ಮ ನಿಮ್ಮ ಮನೆಗಳ ಖಾತೆ ಮಾಡಿಸಿಕೊಳ್ಳಿ. ದಾಖಲೆ ಇಲ್ಲದೆ ವಾಸಮಾಡುತ್ತಿರುವವರಿಗೆ ದಾಖಲೆಗಳಾಗಬೇಕು. ಈ ನಿಟ್ಟಿನಲ್ಲಿ ಸರ್ಕಾರ ಖಾತೆ ಮಾಡಿಸಿಕೊಳ್ಳುವ ಅವಕಾಶ ಕೊಟ್ಟಿದೆ. 5 ಪರ್ಸೆಂಟ್ ರಿಯಾಯ್ತಿಯಲ್ಲಿ ತೆರಿಗೆ ಕಟ್ಟಲು ಹೆಚ್ಚಿನ ಅವಕಾಶ ನೀಡಲಾಗಿದೆ. ಅಲ್ಲದೆ ಕಂದಾಯ ಕಟ್ಟುವಲ್ಲಿ ಚಾಮುಂಡೇಶ್ವರಿ ಕ್ಷೇತ್ರ ಮುಂದಿದ್ದು, ಕ್ಷೇತ್ರದ ಜನತೆ ಶಿಸ್ತು ಪಾಲನೆ ಮಾಡಿದ್ದಾರೆ. ತಪ್ಪದೇ ನಿಮ್ಮ ನಿಮ್ಮ ಮನೆಗಳನ್ನು ನಿಮ್ಮ ಹೆಸರಿಗೆ ಮಾಡಿಕೊಳ್ಳಲು ಮನವಿ. ಕಂದಾಯವನ್ನು ಹೆಚ್ಚಾಗಿ ಕಟ್ಟಿರುವುದು ಕೂಡ ಚಾಮುಂಡೇಶ್ವರಿ ಕ್ಷೇತ್ರದ ಜನತೆ ಶೇ.96 ರಷ್ಟು ತೆರಿಗೆ ಸಂಗ್ರಹ ಆಗಿದೆ ಎಂದು ಹೇಳಲಾಗಿದೆ. ಶೇ.96 ರಷ್ಟು ತೆರಿಗೆ ಸಂಗ್ರಹವಾಗಿದೆ ಎಂದರೆ ಅಭಿನಂದನಾರ್ಹ. ಇದೇ ರೀತಿ ಮುಂದುವರೆದುಕೊಂಡು ಹೋಗಲಿ ಎಂದು ಆಶಿಸಿದರು.

ವಲಯ ಕಚೇರಿ-3ರಲ್ಲೇ ಹೆಚ್ಚು ಕೆಲಸ: ನಗರಪಾಲಿಕೆ ಉಪ ಆಯುಕ್ತ(ಕಂದಾಯ) ಸೋಮಶೇಖರ್ ಮಾತನಾಡಿ, ಮೈಸೂರು ನಗರಪಾಲಿಕೆಯ 9 ವಲಯ ಕಚೇರಿಗಳಲ್ಲಿಯೇ ಅತಿ ಹೆಚ್ಚು ಕೆಲಸ ನಡೆಯುತ್ತಿರುವುದು ವಲಯ ಕಚೇರಿ 3ರಲ್ಲಿ. ಮೈಸೂರು ನಗರ ವ್ಯಾಪ್ತಿಯಲ್ಲಿ ಒಟ್ಟು 30 ಸಾವಿರ ಅನಧಿಕೃತ ಆಸ್ತಿಗಳಿದ್ದು, ಅವುಗಳಲ್ಲಿ ಅತೀ ಹೆಚ್ಚು ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಇದೆ. ಬಿ-ಖಾತೆ ವಿತರಣೆ ಮಾಡುವಂತೆ ವಿಧಾನಸಭೆಯಲ್ಲಿ ಒತ್ತಾಯಿಸಿದ್ದಲ್ಲದೆ ಈಗ ಅವಧಿ ವಿಸ್ತರಣೆಗೂ ಶಾಸಕರು ಸಹಕಾರ ನೀಡಿದ್ದಾರೆ ಎಂದರು.

ನಗರಪಾಲಿಕೆ ಮಾಜಿ ಸದಸ್ಯರಾದ ಸವಿತಾ ಸುರೇಶ್, ವಲಯ ಆಯುಕ್ತ ಸತ್ಯಮೂರ್ತಿ, ಕಂದಾಯ ಅಧಿಕಾರಿ ಎಂ.ಬಸವಣ್ಣ ಬೋಗಾದಿ 2ನೇ ಹಂತದ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಸುರೇಶ್, ಮುಖಂಡರಾದ ವಿಜಯನಗರ ಮಂಜು, ಸಿ.ಶೇಖರ್, ಸೊಸೈಟಿ ಕುಮಾರ್, ವಾರ್ಡ್ ಅಧ್ಯಕ್ಷ ಕುಮಾರ್, ಪಾಲಿಕೆ ಸಹಾಯಕ ಕಂದಾಯ ಅಧಿಕಾರಿ ಸಂತೋಷ್, ಅಧೀಕ್ಷಕ ಮಲ್ಲೇಶ್, ಪರಿಸರ ಇಂಜಿನಿಯರ್ ಕೃಷ್ಣಮೂರ್ತಿ, ಸಿಬ್ಬಂದಿಗಳಾದ ಅರ್ಪಿತಾ, ಮಂಜುಳಾ, ಮೇಘನಾ ರಾಜ್ ಮತ್ತಿತರರಿದ್ದರು.

ಗ್ರೇಟರ್ ಮೈಸೂರು ಬೆಂಬಲಿಸಿ....

ಅನುದಾನ ಇಲ್ಲದೆ ಕ್ಷೇತ್ರದಲ್ಲಿ ಕಾಮಗಾರಿ ನಡೆಯುತ್ತಿಲ್ಲ. ಹಾಗಾಗಿ ಗ್ರೇಟರ್ ಮೈಸೂರು ಮಾಡಲೇಬೇಕು ಎಂದು ನಾನು ಮುಖ್ಯಮಂತ್ರಿಗಳಿಗೆ ಹಲವಾರು ಬಾರಿ ಮನವಿ ಮಾಡಿ, ಒತ್ತಾಯಿಸಿದರೆ ಕೆಲವರು ಬೇಡ ಬೇಡ ಎನ್ನುತ್ತಿದ್ದಾರೆ. ಆದರೂ ಕೂಡ ಅಧ್ಯಯನಗಳು ನಡೆಯುತ್ತಿವೆ. ಮುಖ್ಯಮಂತ್ರಿಗಳು, ನಗರಾಭಿವೃದ್ಧಿ ಸಚಿವರು ಗ್ರೇಟರ್ ಮೈಸೂರು ಮಾಡೋಣ ಎಂದು ಹೇಳಿದ್ದಾರೆ. ಮೈಸೂರಿಗೆ ಹಲವಾರು ಸೌಲಭ್ಯಗಳು ಬರಬೇಕು. ಮೆಟ್ರೊ ಬರಬೇಕು. ಮೈಸೂರು ಪ್ರವಾಸಿ ನಗರವಾಗುತ್ತಿದೆ. ಹೈವೇ ಆಗಿದೆ. ರೈಲುಗಳ ಸಂಖ್ಯೆ ಜಾಸ್ತಿಯಾಗಿದೆ. ಏರ್‌ಪೋರ್ಟ್ ಕೂಡ ದೊಡ್ಡದಾಗುತ್ತಿದೆ. ಪೆರಿಫೆರಲ್ ರಿಂಗ್ ರಸ್ತೆ ಮಾಡಬೇಕು ಎಂಬುದೆಲ್ಲಾ ಇದೆ. ಇಷ್ಟೆಲ್ಲಾ ಇರುವ ಮೈಸೂರು ನಗರ ಯೋಜನಾಬದ್ಧವಾಗಿ ಬೆಳೆಯಬೇಕು ಎಂಬುದೇ ಎಲ್ಲರ ಗುರಿಯಾಗಿದ್ದು, ಗ್ರೇಟರ್ ಮೈಸೂರ್‌ಗೆ ಬೆಂಬಲಿಸಿ.

- ಜಿ.ಟಿ.ದೇವೇಗೌಡ, ಶಾಸಕರು, ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರ

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಮಾಮನ್ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
ಹಿಟ್ (ಕ) + ಹಿಟ್ (ತೆ)	2+2 ಪ್ರದರ್ಶನಗಳು
ಬಾಲಾಜಿ	(ದೂ: 2497199)
ಹಿಟ್ (ಹಿಂ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
ರೆಟ್ರೋ (ಕ)	4 ಪ್ರದರ್ಶನಗಳು
ಗಾಯಿತ್ರಿ	
ರೆಟ್ರೋ (ತ)	4 ಪ್ರದರ್ಶನಗಳು
ರಾಜಕಮಲ್	
ಡೆವಿಲ್ಸ್ ಡಬಲ್ ನೆಕ್ಸ್ಟ್ ಲೆವಲ್ (ತ)	4 ಪ್ರದರ್ಶನಗಳು
ಸಂಗಂ	
ರೆಟ್ರೋ (ತ)	4 ಪ್ರದರ್ಶನಗಳು
ಲಿಡೋ	
ಯುದ್ಧಕಾಂಡ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ರೆಟ್ರೋ (ತ): ಬೆ.9.40ಕ್ಕೆ, ಮ.1ಕ್ಕೆ, ರಾ.7ಕ್ಕೆ, ಥಂಡರ್‌ಬೋಲ್ಟ್ಸ್ (3ಡಿ)(ಇಂ): ಸಂ.4.20ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 2	ಥಂಡರ್‌ಬೋಲ್ಟ್ಸ್ (3ಡಿ)(ಇಂ): ಬೆ.10.25ಕ್ಕೆ, ಯುದ್ಧಕಾಂಡ 2 (ಕ): ಮ.1.05ಕ್ಕೆ, ಸಂ.4.05ಕ್ಕೆ, ತುಡಾರಂ (ಮ): ರಾ.7ಕ್ಕೆ, ರಾ.10.20ಕ್ಕೆ.
ಸ್ಕ್ರೀನ್ 3	ಹಿಟ್ ದಿ ಥರ್ಡ್ ಕೇಸ್ (ತೆ): ಬೆ.10ಕ್ಕೆ, ಮ.3.55ಕ್ಕೆ, ರಾ.7.05ಕ್ಕೆ, ರಾ.10.15ಕ್ಕೆ, ಟೂರಿಸ್ಟ್ ಫ್ಯಾಮಿಲಿ (ತ): ಮ.1.10ಕ್ಕೆ.
ಸ್ಕ್ರೀನ್ 4	ಪಪ್ಪಿ (ಕ): ಬೆ.10.30ಕ್ಕೆ, ರೈಡ್ 2 (ಹಿಂ): ಮ.1ಕ್ಕೆ, ರಾ.7.25ಕ್ಕೆ, ರಾ.10.25ಕ್ಕೆ, ರೆಟ್ರೋ (ತ): ಸಂ.4.05ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821-2973519

ಸ್ಕ್ರೀನ್ 1	ಪ್ರೀತಿಯ ಹುಚ್ಚ (ಕ): ಬೆ.11ಕ್ಕೆ, ರಿಕ್ಷಾ ಚಾಲಕ (ಕ): ಮ.1.35ಕ್ಕೆ, ಕೋರ (ಕ): ಸಂ.6.35ಕ್ಕೆ, ಖದೀಮ (ಕ): ಸಂ.6.35ಕ್ಕೆ, ಟೆನ್ ಅವರ್ಸ್ (ತ): ರಾ.9.15ಕ್ಕೆ.
ಸ್ಕ್ರೀನ್ 2	ಯುದ್ಧಕಾಂಡ 2 (ಕ): ಮ.1ಕ್ಕೆ, ಸಂ.6.35ಕ್ಕೆ, ಒಡೆಲ್ಲಾ (ತೆ): ಮ.3.45ಕ್ಕೆ, ರಾ.9.20ಕ್ಕೆ.
ಸ್ಕ್ರೀನ್ 3	ವೀರ ಚಂದ್ರಹಾಸ (ಕ): ಮ.1ಕ್ಕೆ, ಮ.3.55ಕ್ಕೆ, ಗುಡ್ ಬ್ಯಾಡ್ ಅಗ್ಲಿ (ತ): ಸಂ.6.50ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಯುದ್ಧಕಾಂಡ 2 (ಕ): ಬೆ.10.50ಕ್ಕೆ, ವಾಮನ (ಕ): ಮ.1.35ಕ್ಕೆ, ಸಂ.4.10ಕ್ಕೆ, ಅರ್ಜುನ್ s/o ವೈಜಯಂತಿ (ತೆ): ಸಂ.6.45ಕ್ಕೆ, ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಡಿ.ಕೆ.ಶಿವಕುಮಾರ್ ಕಾರ್ಯಕರ್ತರ ಒಂದು ಶಕ್ತಿ: ಜಿ.ಶ್ರೀನಾಥ್‌ಬಾಬು



ಮೈಸೂರು, ಮೇ 15- ಕೆಪಿಸಿಸಿ ಅಧ್ಯಕ್ಷರು ಹಾಗೂ ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅಭಿಮಾನಿ ಬಳಗದ ವತಿಯಿಂದ ಮೈಸೂರು ನ್ಯಾಯಾಲಯದ ಮುಂಭಾಗದ ಉದ್ಯಾನವನದಲ್ಲಿ ವಿವಿಧ ಜಾತಿಯ ಗಿಡಗಳನ್ನು ನೆಡುವ ಮೂಲಕ ಕೆಪಿಸಿಸಿ ರಾಜ್ಯಾಧ್ಯಕ್ಷರು ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹುಟ್ಟುಹಬ್ಬವನ್ನು ಅವರ ಆದೇಶದಂತೆ ದುಂದುವೆಚ್ಚ ಮಾಡದೆ ಪರಿಸರ ಸ್ನೇಹಿ ಸಂದೇಶದೊಂದಿಗೆ ಸರಳವಾಗಿ ಆಚರಿಸಲಾಯಿತು

ಈ ಸಂದರ್ಭದಲ್ಲಿ ಮಾತನಾಡಿದ ಕೆಪಿಸಿಸಿ ಸದಸ್ಯ ಜಿ .ಶ್ರೀನಾಥ್ ಬಾಬು, ಡಿ.ಕೆ.ಶಿವಕುಮಾರ ಎಂದರೆ ಕಾಂಗ್ರೆಸ್ ಕಾರ್ಯಕರ್ತರ ಒಂದು ಶಕ್ತಿ. ನಾವು ಅವರ ಬಲದಿಂದಲೇ ಇಂದು ರಾಜ್ಯದೆಲ್ಲೆಡೆ ವಿದ್ಯಾರ್ಥಿಗಳು ಮತ್ತು ಯುವಕರ ಪ್ರತಿಭಟನೆ, ಚಳುವಳಿ, ಸತ್ಯಾಗ್ರಹದಂತಹ ಹೋರಾಟ ಮಾಡುವ ಮನೋಭಾವನೆ ಬಂದಿದ್ದು. ಡಿ.ಕೆ.ಶಿವಕುಮಾರ್ ಅವರು ಕೇವಲ ರಾಜಕೀಯವಾಗಿ ಅಲ್ಲದೆ ಸಾಮಾಜಿಕವಾಗಿ ಸಾಕಷ್ಟು ಕೆಲಸ ಮಾಡುತ್ತಾ ಬಂದಿದ್ದಾರೆ ಎಂದರು.

ಭಯೋತ್ಪಾದನೆ ವಿರುದ್ಧ ನಮ್ಮ ಯೋಧರು ಪ್ರಾಣ ಪಣಕ್ಕಿಟ್ಟು ಹೋರಾಡುತ್ತಿರುವ ಸಂದರ್ಭದಲ್ಲಿ ಜನ್ಮದಿನವನ್ನು ಆಚರಣೆ ಮಾಡುವುದು ಬೇಡ ಎಂದು ಕರೆ ಕೊಟ್ಟಿರುವ ಹಿನ್ನೆಲೆಯಲ್ಲಿ ಸರಳವಾಗಿ ಆಚರಿಸುತ್ತಿದ್ದೇವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಚಾಮುಂಡೇಶ್ವರಿ ಕ್ಷೇತ್ರದ ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್, ಡಿ ಕೆ ಶಿವಕುಮಾರ್ ಅಭಿಮಾನಿ ಬಳಗದ ಜಿ. ರಾಘವೇಂದ್ರ, ಪಂಚಾಯತ್ ರಾಜ್ ಕಾರ್ಯದರ್ಶಿ ಲೋಕೇಶ್, ದಿನೇಶ್ ಪಾಂಡುಪುರ,ಪರಿಸರ ಬಳಗದ ಕೃಷ್ಣಪ್ಪ, ಎಪಿಎಂಸಿ ರಾಮಚಂದ್ರ, ಸೇವಾದಳ ಮೋಹನ್, ಹರೀಶ್ ನಾಯ್ಡು, ರಮೇಶ ರಾಮಪ್ಪ, ಹಿನಕಲ್ ಉದಯ್, ಡೈರಿ ವೆಂಕಟೇಶ ಉಪಸ್ಥಿತರಿದ್ದರು.

ಎನ್. ಮಹೇಶಗೆ ಪಿಹೆಚ್.ಡಿ ಪದವಿ



ಮೈಸೂರು, ಮೇ 15- ಡಾ. ಜಿ. ಕರಿಯಪ್ಪ ಅವರ ಮಾರ್ಗದರ್ಶನದಲ್ಲಿ ಎನ್. ಮಹೇಶ್ ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಮಾಜಿ ಪ್ರಧಾನಿ ದಿವಂಗತ ರಾಜೀವ್ ಗಾಂಧಿಯವರ ಸದ್ಭಾವನ ಜ್ಯೋತಿಗೆ ಸ್ವಾಗತ

ಮೆರವಣಿಗೆ ಬಳಿಕ ಬೀಳ್ಕೊಡುಗೆ



ಮೈಸೂರಿಗೆ ಆಗಮಿಸಿದ ಮಾಜಿ ಪ್ರಧಾನಿ ದಿವಂಗತ ರಾಜೀವ್ ಗಾಂಧಿ ಅವರ 34ನೇ ಸದ್ಭಾವನ ಜ್ಯೋತಿಯನ್ನು ಸ್ವಾಗತಿಸಿ, ಮೆರವಣಿಗೆ ನಡೆಸಲಾಯಿತು.

ಮೈಸೂರು, ಮೇ 15(ಎಂಕೆ)- ಮೈಸೂರಿಗೆ ಆಗಮಿಸಿದ ಮಾಜಿ ಪ್ರಧಾನಿ ದಿವಂಗತ ರಾಜೀವ್ ಗಾಂಧಿ ಅವರ 34ನೇ ಸದ್ಭಾವನ ಜ್ಯೋತಿಯನ್ನು ಸ್ವಾಗತಿಸಿ, ಮೆರವಣಿಗೆ ಮೂಲಕ ಬೀಳ್ಕೊಡಲಾಯಿತು.

ಮೈಸೂರಿನ ಅರಮನೆ ಕೋಟೆ ಶ್ರೀ ಆಂಜನೇಯಸ್ವಾಮಿ ದೇವಸ್ಥಾನದ ಎದುರು ಗುರುವಾರ ಸಂಜೆ ಆಗಮಿಸಿದ ಮಾಜಿ ಪ್ರಧಾನಿ ದಿವಂಗತ ರಾಜೀವ್ ಗಾಂಧಿ ಅವರ 34ನೇ ಸದ್ಭಾವನ ಜ್ಯೋತಿಯನ್ನು ನಗರ ಮತ್ತು ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಸ್ವಾಗತಿಸಲಾಯಿತು. ನಂತರ ಕೆ.ಆರ್.ವೃತ್ತದವರೆಗೆ ಜ್ಯೋತಿ ಹಿಡಿದು ಮೆರವಣಿಗೆ ನಡೆಸಿದ ಕಾಂಗ್ರೆಸ್ ಮುಖಂಡರು, ನಂತರ ಬೀಳ್ಕೊಟ್ಟರು.

ಈ ವೇಳೆ ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್ ಮಾತನಾಡಿ, ರಾಜೀವ್ ಗಾಂಧಿ ಅವರು ನಮ್ಮನ್ನು ಅಗಲಿ ಇಂದಿಗೆ 34 ವರ್ಷಗಳು ಕಳೆದಿದ್ದರೂ ಸಹ ಅವರು ದೇಶಕ್ಕೆ ಕೊಟ್ಟಂತಹ ಕೊಡುಗೆಗಳು ಚಿರಸ್ಥಾಯಿಯಾಗಿ ಉಳಿದಿವೆ. ಸಂಪರ್ಕ ಕ್ರಾಂತಿಯ ಮೂಲಕ ಭಾರತಕ್ಕೆ ತಂತ್ರಜ್ಞಾನದ ಆಧುನಿಕ ಸ್ಪರ್ಶವನ್ನು ಕೊಟ್ಟು, 18 ವರ್ಷಕ್ಕೆ ಮತದಾನದ ಹಕ್ಕನ್ನು ಜಾರಿಗೊಳಿಸಿ, 73 ಮತ್ತು 74ನೇ ಸಂವಿಧಾನಾತ್ಮಕ ತಿದ್ದುಪಡಿಗೆ ಅಡಿಗಲ್ ಹಾಕಿದ ಮೇರು ಚಿಂತಕರಾಗಿದ್ದಾರೆ ಎಂದರು.

ಭಾರತ ಇಂದು ಭಯೋತ್ಪಾದನೆ ವಿರುದ್ಧ ಸಿಡಿದೆದ್ದು ಜಯ ಸಾಧಿಸಿದೆ. ಈ ಅಭೂತಪೂರ್ವ ಜಯಕ್ಕೆ ಕಾರಣೀಕರ್ತರಾದ ಎಲ್ಲಾ ಸೈನಿಕ ಬಾಂಧವರಿಗೆ ಕೃತಜ್ಞತೆಗಳನ್ನು ಸಲ್ಲಿಸಬೇಕು. ಭಯೋತ್ಪಾದನೆ ಎಂಬುದು ಅಶಾಂತಿ ಮತ್ತು ಅಸ್ಥಿರತೆಯ ಸಂಕೇತ. ಹಾಗಾಗಿ ದಿವಂಗತ ರಾಜೀವ್ ಗಾಂಧಿ ಅವರು ಮಡಿದ ದಿನವನ್ನು ರಾಷ್ಟ್ರೀಯ ಭಯೋತ್ಪಾದನಾ ವಿರೋಧಿ ದಿನ ಎಂದು ಘೋಷಣೆ ಮಾಡಿ, ಭಯೋತ್ಪಾದನೆಯ ವಿರುದ್ಧ ಸಮರ ಸಾರಿ ಶಾಂತಿ ಮತ್ತು ಸ್ಥಿರತೆಯನ್ನು ರಾಷ್ಟ್ರದಲ್ಲಿ ನಿರ್ಮಾಣ ಮಾಡುವ ಸಂಕಲ್ಪವನ್ನು ಈ ರಥಯಾತ್ರೆ ಹೊಂದಿದೆ ಎಂದು ತಿಳಿಸಿದರು.

ಸದ್ಭಾವನ ಯಾತ್ರಾ ಸಮಿತಿ ರಾಜ್ಯ ಸಂಚಾಲಕ ದೊರೆ, ಗ್ಯಾರಂಟಿ ಯೋಜನೆಗಳ ಜಿಲ್ಲಾಧ್ಯಕ್ಷ ಅರುಣ್ ಕುಮಾರ್, ನಗರ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ಶಿವಣ್ಣ, ಡಿಸಿಸಿ ಉಪಾಧ್ಯಕ್ಷರಾದ ಎಡತಲೆ ಮಂಜುನಾಥ್, ಪುಷ್ಪಲತಾ ಚಿಕ್ಕಣ್ಣ ಮಾಜಿ ಮೇಯರ್ ಚಿಕ್ಕಣ್ಣ, ಎಂ.ಶಿವಪ್ರಸಾದ್, ಹುಣಸೂರು ಬಸವಣ್ಣ, ಡೈರಿ ವೆಂಕಟೇಶ್, ಸಾ.ಮಾ.ಯೋಗೇಶ್, ನಾಗೇಶ್, ಶಿವಶಂಕರಮೂರ್ತಿ, ಡಾ.ನಾಗರಾಜು, ಜಿ.ಮಹದೇವು, ಕಾಂತರಾಜು, ತಿಮ್ಮಯ್ಯ, ಗಂಟಯ್ಯ, ಪುಟ್ಟಸ್ವಾಮಿ, ಸಿದ್ದರಾಜು, ಲಕ್ಷ್ಮಿ, ಕೃಷ್ಣಪ್ಪ ಮತ್ತಿತರರಿದ್ದರು.

ಪಾರ್ಟ್‌ಟೈಂ ಕೆಲಸದ ನೆಪದಲ್ಲಿ ಗೃಹಿಣಿಗೆ ಆನ್‌ಲೈನ್‌ನಲ್ಲಿ 17.20 ಲಕ್ಷ ವಂಚನೆ

ಕ್ರೈಂ ಬಾಕ್ಸ್

ಮೈಸೂರು, ಮೇ 15(ಎಸ್‌ಬಿಡಿ)- ಪಾರ್ಟ್‌ಟೈಂ ಕೆಲಸದ ನೆಪದಲ್ಲಿ ಗೃಹಿಣಿಗೆ 17.20 ಲಕ್ಷ ರೂ. ವಂಚಿಸಿರುವ ಬಗ್ಗೆ ಮೈಸೂರಿನ ಸೆನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ನಗರದ ಹೆಬ್ಬಾಳು ಬಡಾವಣೆ, ಸುಬ್ರಮಣ್ಯನಗರದ ಮಹಿಳೆಯೊಬ್ಬರು ಇನ್ಸ್ಟಾಗ್ರಾಮ್‌ನಲ್ಲಿ ಕಾಣಿಸಿದ ಪಾರ್ಟ್‌ಟೈಂ ಜಾಬ್ ಜಾಹೀರಾತು ಮೇಲೆ ಕ್ಲಿಕ್ ಮಾಡಿದ್ದಾರೆ. ಕೂಡಲೇ ಅವರನ್ನು ವಿಲಿಯಮ್ಸ್ ಸೋನೋಮಾ ಟೆಲಿಗ್ರಾಂ ಗ್ರೂಪ್‌ಗೆ ಸೇರಿಸಲಾಗಿದೆ. ಬಳಿಕ ವಾಟ್ಸಾಪ್ ಮೂಲಕ ಸಂಪರ್ಕಿಸಿ, ವೆಬ್‌ಸೈಟ್‌ಗಳಲ್ಲಿ ರಿವ್ಯೂ ನೀಡುವ ಪಾರ್ಟ್ ಟೈಂ ಕೆಲಸದ ಮೂಲಕ ಸಾಕಷ್ಟು ಹಣ ಗಳಿಸಬಹುದು ಎಂದು ತಿಳಿಸಿದ್ದಾರೆ.

ಇದನ್ನು ನಂಬಿದ ಮಹಿಳೆ ರಿವ್ಯೂ ನೀಡುವ ಕೆಲಸ ಆರಂಭಿಸಿದ್ದಾರೆ. ಅದಕ್ಕೆ ಒಂದಷ್ಟು ಲಾಭ ನೀಡಲಾಗಿದೆ. ಹಣ ಹೂಡಿಕೆ ಮಾಡಿದರೆ ಹೆಚ್ಚು ಲಾಭ ಸಿಗುತ್ತದೆ ಎಂದು ನಂಬಿಸಿ, ಹಂತ ಹಂತವಾಗಿ 17,20,287 ರೂ. ವರ್ಗಾವಣೆ ಮಾಡಿಸಿಕೊಂಡಿದ್ದಾರೆ. ನಂತರ ಯಾವುದೇ ಲಾಭ ನೀಡಿಲ್ಲ. ಬದಲಾಗಿ ಇನ್ನೂ ಹೆಚ್ಚಿನ ಹಣ ಪಾವತಿಸಿದರೆ ಒಟ್ಟಿಗೆ ಲಾಭ ನೀಡುವುದಾಗಿ ಹೇಳಿದ್ದಾರೆ. ಇದರಿಂದ ಅನುಮಾನಗೊಂಡ ಮಹಿಳೆ, ವಂಚಕರ ಪತ್ತೆಗೆ ಪೊಲೀಸರ ಮೊರೆ ಹೋಗಿದ್ದಾರೆ.

ಗೋವಾ ಪ್ರವಾಸ ಹೋಗಿದ್ದ ವೈದ್ಯರ ಮನೆ ಬಾಗಿಲು ಮೀಟಿ ಚಿನ್ನಾಭರಣ, ನಗದು ಕಳವು

ಮೈಸೂರು, ಮೇ 15(ಎಸ್‌ಬಿಡಿ)- ಕುಟುಂಬದೊಂದಿಗೆ ಗೋವಾ ಪ್ರವಾಸಕ್ಕೆ ಹೋಗಿದ್ದ ವೈದ್ಯರ ಮನೆಯಲ್ಲಿ ಚಿನ್ನಾಭರಣ ಹಾಗೂ ನಗದು ಕಳುವಾಗಿರುವ ಘಟನೆ ಮೈಸೂರಿನ ಮಾನಸಿನಗರದಲ್ಲಿ ನಡೆದಿದೆ.

ಮಾನಸಿನಗರ ಕೆಎಸ್‌ಎಫ್‌ಸಿ ಲೇಔಟ್ ನಿವಾಸಿ ಡಾ.ಸಿದ್ದರಾಮು ಅವರ ಮನೆಯ ಟೆರೇಸ್ ಬಾಗಿಲು ಮೀಟಿ ಒಳನುಗ್ಗಿರುವ ಖದೀಮರು, ಸುಮಾರು 7 ಲಕ್ಷ ಮೌಲ್ಯದ 128 ಗ್ರಾಂ ಚಿನ್ನಾಭರಣ ಹಾಗೂ 20 ಸಾವಿರ ನಗದನ್ನು ಕಳವು ಮಾಡಿದ್ದಾರೆ.

ಡಾ.ಸಿದ್ದರಾಮು ಅವರು ಪತ್ನಿ ಹಾಗೂ ಪುತ್ರಿಯೊಂದಿಗೆ ಮೇ 9ರಂದು ಗೋವಾ ಪ್ರವಾಸಕ್ಕೆ ಹೋಗಿದ್ದರು. ಮರುದಿನ ಇವರ ನಾದಿನಿ ಫಿಶ್‌ಟ್ಯಾಂಕ್‌ನಲ್ಲಿದ್ದ ಮೀನುಗಳಿಗೆ ಆಹಾರ ಹಾಕಿ, ಬೀಗ ಹಾಕಿಕೊಂಡು ಹೋಗಿದ್ದರು. ಮೇ 11ರಂದು ಹೋದಾಗ ಟೆರೇಸ್‌ನ ಬಾಗಿಲನ್ನು ಮೀಟಿರುವುದು ಗಮನಕ್ಕೆ ಬಂದಿತು. ಅಲ್ಲದೆ ಕೊಠಡಿಯಲ್ಲಿ ವಸ್ತುಗಳು ಚೆಲ್ಲಾಪಿಲ್ಲಿಯಾಗಿ ಬಿದ್ದಿದ್ದವು. ಆಗ ಗಾಬರಿಯಿಂದ ಸಿದ್ದರಾಮು ಅವರಿಗೆ ಕರೆ ಮಾಡಿ, ವಿಷಯ ತಿಳಿಸಿದರು.

ಡಾ.ಸಿದ್ದರಾಮು ಅವರ ಕುಟುಂಬ ಮೇ 13ರಂದು ಪ್ರವಾಸದಿಂದ ವಾಪಸ್ಸಾಗಿ, ಮನೆಯನ್ನು ಪರಿಶೀಲಿಸಿದಾಗ ಬೆಡ್ ರೂಂನ ವಾರ್ಡ್ರೋಬ್‌ನಲ್ಲಿದ್ದ ಚಿನ್ನಾಭರಣ ಹಾಗೂ 2 ಸಾವಿರ ರೂ. ನಗದು, ಮತ್ತೊಂದು ವಾರ್ಡ್ರೋಬ್‌ನಲ್ಲಿದ್ದ 8 ಸಾವಿರ ಹಾಗೂ ಲಾಕರ್‌ನಲ್ಲಿದ್ದ 10 ಸಾವಿರ ರೂ. ಕಳ್ಳತನವಾಗಿರುವುದು ತಿಳಿಯಿತು. ಈ ಸಂಬಂಧ ಆಲನಹಳ್ಳಿ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಮೈಮುಲ್‌ನಿಂದ ನಂದಿನಿ ಇಡ್ಲಿ, ದೋಸೆ ಹಿಟ್ಟು ಮಾರುಕಟ್ಟೆಗೆ ಬಿಡುಗಡೆ

• ಮೈಸೂರು ಡೈರಿಯಲ್ಲಿ ಪನ್ನೀರ್ ಘಟಕ ಸ್ಥಾಪನೆಗೆ ತೀರ್ಮಾನ • ಮೈಮುಲ್ ಅಧ್ಯಕ್ಷ ಚೆಲುವರಾಜು ಮಾಹಿತಿ

ಮೈಸೂರು, ಮೇ15(ಬಿಎಲ್‌ಯು)- ಮೈಸೂರು ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತ (ಮೈಮುಲ್), ನಂದಿನಿ ಇಡ್ಲಿ ಮತ್ತು ದೋಸೆ ಹಿಟ್ಟನ್ನು ಇಂದು ಮಾರುಕಟ್ಟೆಗೆ ಬಿಡುಗಡೆ ಮಾಡಿತು.

ನಗರದ ಖಾಸಗಿ ಹೋಟೆಲ್‌ನಲ್ಲಿ ಇಂದು ಒಕ್ಕೂಟದ ಅಧ್ಯಕ್ಷ ಚೆಲುವರಾಜು, ನಂದಿನಿ ಇಡ್ಲಿ ಮತ್ತು ದೋಸೆ ಹಿಟ್ಟನ್ನು ಮಾರುಕಟ್ಟೆಗೆ ಬಿಡುಗಡೆ ಮಾಡಿದರು.

ಸಂಪ್ರದಾಯದೊಂದಿಗೆ ಬೆಸೆದ ರುಚಿ ಧ್ಯೇಯದೊಂದಿಗೆ ಇಡ್ಲಿ ಮತ್ತು ದೋಸೆ ಹಿಟ್ಟನ್ನು ಇಂದು ಬಿಡುಗಡೆ ಮಾಡಲಾಗಿದ್ದು, ಉನ್ನತ ಗುಣಮಟ್ಟವನ್ನು ಕಾಪಾಡಿಕೊಳ್ಳಲಾಗಿದೆ. ಈ ಇಡ್ಲಿ ಮತ್ತು ದೋಸೆ ಹಿಟ್ಟಿನಲ್ಲಿ ಸೋಡಾ ಬಳಸಿಲ್ಲ. ಆರೋಗ್ಯಕರ ಮತ್ತು ರುಚಿಕರವಾಗಿರುವ ಇದು ನೈಸರ್ಗಿಕವಾಗಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಈಗಾಗಲೇ ಮಾರುಕಟ್ಟೆಯಲ್ಲಿರುವ 70 ವಿವಿಧ ಬಗೆಯ ನಂದಿನಿ ಉತ್ಪನ್ನಗಳ ಜೊತೆಗೆ ಈಗ ಇಡ್ಲಿ ಮತ್ತು ದೋಸೆ ಹಿಟ್ಟು ಸೇರಿದೆ. 450 ಗ್ರಾಂ ಇಡ್ಲಿ ಹಿಟ್ಟಿನಲ್ಲಿ 150 ಗ್ರಾಂ ಅಕ್ಕಿ, 50 ಗ್ರಾಂ ಉದ್ದಿನ ಬೇಳೆ, 2 ಗ್ರಾಂ ಮೆಂತ್ಯ, 10 ಗ್ರಾಂ ಉಪ್ಪು, 229 ಮಿಲಿ ಲೀಟರ್ ಆರ್.ಓ. ನೀರು, 7 ಗ್ರಾಂ ವೇ ಪೌಡರ್ ಮಿಶ್ರಣವಿದೆ. ಇಡ್ಲಿ ಮತ್ತು ದೋಸೆ ಹಿಟ್ಟಿನ ಗುಣಮಟ್ಟದಲ್ಲಿ ಒಕ್ಕೂಟ ಯಾವ ರಾಜೀ ಮಾಡಿಕೊಂಡಿಲ್ಲ.

ಹಾಲು ಮತ್ತು ಮೊಸರು ಮಾತ್ರ ಮಾರುವುದರಿಂದ ಹೈನುಗಾರಿಕೆ ಕ್ಷೇತ್ರ ಬೆಳೆಯುವುದಿಲ್ಲ. ಮೈಸೂರು ಜಿಲ್ಲೆಯಲ್ಲಿ 9 ಲಕ್ಷ ಲೀಟರ್ ಹಾಲು ಉತ್ಪಾದನೆಯಾಗುತ್ತಿದ್ದು, ಇದರಲ್ಲಿ 3.5 ಲಕ್ಷ ಲೀಟರ್, ಹಾಲು ಮತ್ತು ಮೊಸರಿಗೆ ಬಳಕೆಯಾದರೆ, ಉಳಿದ ಹಾಲು ಇತರೆ ಉಪ ಉತ್ಪನ್ನಗಳಿಗೆ ಬಳಸಿಕೊಳ್ಳಲಾಗುತ್ತಿದೆ ಎಂದರು.



ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಗುರುವಾರ ನಂದಿನಿ ಇಡ್ಲಿ, ದೋಸೆ ಹಿಟ್ಟನ್ನು ಮೈಮುಲ್ ಅಧ್ಯಕ್ಷ ಚೆಲುವರಾಜ್ ಬಿಡುಗಡೆ ಮಾಡಿದರು.

ಇನ್ನು ಕರ್ನಾಟಕದಾದ್ಯಂತ ಒಂದು ದಿನಕ್ಕೆ ಒಂದು ಕೋಟಿ ಲೀಟರ್ ಹಾಲು ಉತ್ಪಾದನೆಯಾಗುತ್ತಿದೆ. ಇದರಲ್ಲಿ 50 ಲಕ್ಷ ಲೀಟರ್ ಹಾಲು ಮತ್ತು ಮೊಸರಿಗೆ ಬಳಕೆಯಾದರೆ ಉಳಿದ ಹಾಲು ನಂದಿನಿಯ ಇನ್ನಿತರೆ ಉಪ ಉತ್ಪನ್ನಗಳಿಗೆ ಬಳಕೆಯಾಗುತ್ತದೆ ಎಂದು ತಿಳಿಸಿದರು.

ಈಗ ಮೈಸೂರು ಡೈರಿಯಲ್ಲಿ ಪ್ರತ್ಯೇಕವಾಗಿ ಪನ್ನೀರ್ ಉತ್ಪಾದನಾ ಘಟಕ ನಿರ್ಮಾಣಕ್ಕೆ ತೀರ್ಮಾನ ಮಾಡಲಾಗಿದೆ. ಇದಕ್ಕಾಗಿ ಡಿಪಿಆರ್ ಸಿದ್ಧವಾಗುತ್ತಿದೆ ಎಂದು ಚೆಲುವರಾಜು ತಿಳಿಸಿದರು.

ಇದೇ ವೇಳೆ ಮಾತನಾಡಿದ ಒಕ್ಕೂಟದ ನಿರ್ದೇಶಕ ಸೋಮಶೇಖರ್, ಈಗ ಬಹಳಷ್ಟು ಕಡೆ ಕಲಬೆರಕೆ ಆಹಾರ ಪದಾರ್ಥಗಳು ಮಾರಾಟವಾಗುತ್ತಿವೆ. ಇಂತಹ ಸಂದರ್ಭದಲ್ಲಿ ಗುಣಮಟ್ಟಕ್ಕೆ ಮತ್ತೊಂದು ಹೆಸರಾದ ನಂದಿನಿ ಆಹಾರ ಉತ್ಪನ್ನಗಳು ಮಾರುಕಟ್ಟೆಯಲ್ಲಿ ದೊರೆಯುತ್ತಿದ್ದು, ಗ್ರಾಹಕರು ವಿಶ್ವಾಸವಿಟ್ಟು ನಮ್ಮ ಉತ್ಪನ್ನಗಳನ್ನು ಖರೀದಿ ಮಾಡುವಂತೆ ಮನವಿ ಮಾಡಿದರು.

ಒಕ್ಕೂಟದ ಮತ್ತೊಬ್ಬ ನಿರ್ದೇಶಕ ಸದಾನಂದ ಮಾತನಾಡಿ, ಖಾಸಗಿ ಕಂಪನಿಗಳಿಗೆ ಲಾಭವೇ ಮೂಲ ಧ್ಯೇಯವಾಗಿರುತ್ತದೆ ಆದರೆ ನಮ್ಮ ನಂದಿನಿ ಉತ್ಪನ್ನಗಳಲ್ಲಿ ಲಾಭಕ್ಕಿಂತ ಜನರಿಗೆ ಗುಣಮಟ್ಟದ ಆಹಾರ ನೀಡುವುದು ಮೂಲ ಉದ್ದೇಶವಾಗಿರುತ್ತದೆ ಎಂದರು.

ಜನರ ಆರೋಗ್ಯಕ್ಕೆ ಮೊದಲ ಆದ್ಯತೆ ನೀಡಲಾಗುವುದು. ನಂತರವಷ್ಟೇ ಲಾಭದತ್ತ ಗಮನಹರಿಸಲಾಗುವುದು. ಸಂಸ್ಥೆಯನ್ನು ನಡೆಸಬೇಕಾಗಿರುವುದರಿಂದ ಲಾಭವನ್ನು ಎರಡನೇ ಆದ್ಯತೆಯಾಗಿ ಪರಿಗಣಿಸಲಾಗುವುದು ಎಂದು ಸದಾನಂದ ಸ್ಪಷ್ಟಪಡಿಸಿದರು.

ಒಕ್ಕೂಟದ ನಿರ್ದೇಶಕರಾದ ಉಮಾಶಂಕರ್, ಮಹೇಶ್, ಓಂಪ್ರಕಾಶ್, ದಾಕ್ಷಾಯಿಣಿ, ನೀಲಾ ನಾಗರಾಜ್, ಶಿವಗಾಮಿನಿ, ಮಲ್ಲಿಕಾ ರವಿಕುಮಾರ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಚಲಿಸುತ್ತಿದ್ದ ಬಸ್‌ನಲ್ಲಿ ಏಕಾಏಕಿ ಬೆಂಕಿ; ಇಬ್ಬರು ಮಕ್ಕಳು ಸೇರಿ ಐವರು ಸಜೀವ ದಹನ



ಲಕ್ನೋ, ಮೇ 15– ಚಲಿಸುತ್ತಿದ್ದ ಬಸ್‌ನಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡ ಪರಿಣಾಮ ಇಬ್ಬರು ಮಕ್ಕಳು ಸೇರಿ ಐವರು ಪ್ರಾಣ ಕಳೆದುಕೊಂಡಿರುವ ಘಟನೆ ಲಕ್ನೋದಲ್ಲಿ ನಡೆದಿದೆ. ಬಸ್ ಸಂಪೂರ್ಣ ಸುಟ್ಟು ಭಸ್ಮವಾಗಿದೆ.

ಬಿಹಾರದಿಂದ ದೆಹಲಿಗೆ ತೆರಳುತ್ತಿದ್ದ ಬಸ್ಸಿನಲ್ಲಿ ಬೆಳಗ್ಗೆ 5 ಗಂಟೆ ಸುಮಾರಿಗೆ ಮೋಹನ್ ಲಾಲ್ ಗಂಜ್ ಬಳಿಯ ಕಿಸಾನ್ ಪಥ್ ನಲ್ಲಿ ಹಾತ್ತನೆ ಬೆಂಕಿ ಕಾಣಿಸಿಕೊಂಡಿದೆ ಎಂದು ಸ್ಥಳೀಯ ಪೊಲೀಸರು ತಿಳಿಸಿದ್ದಾರೆ. ಈ ಸಮಯದಲ್ಲಿ ಪ್ರಯಾಣಿಕರು ನಿದ್ರೆ ಮಂಪರಿನಲ್ಲಿದ್ದರು. ಬಸ್‌ನಲ್ಲಿ ಹೊಗೆ ತುಂಬಲು ಪ್ರಾರಂಭಿಸಿದ ನಂತರವೇ ಅವರು ಎಚ್ಚರಗೊಂಡರು. ಆಘಾತಕಾರಿ ಸಂಗತಿಯೆಂದರೆ, ಚಾಲಕ ಕಿಟಕಿ ಒಡೆದು ಸ್ಥಳದಿಂದ ಪರಾರಿಯಾಗಿದ್ದಾನೆ ಎಂದು ವರದಿಯಾಗಿದೆ. ಅಗ್ನಿಶಾಮಕ ದಳದ ಸಿಬ್ಬಂದಿ 30 ನಿಮಿಷಗಳಲ್ಲಿ ಬೆಂಕಿಯನ್ನು ನಿಯಂತ್ರಿಸುವಲ್ಲಿ ಯಶಸ್ವಿಯಾದರು, ಆದರೆ ಆ ಹೊತ್ತಿಗೆ ಇಡೀ ಬಸ್ ಸುಟ್ಟು ಭಸ್ಮವಾಗಿತ್ತು.

ಇನ್ನೂ ಘಟನೆ ಬಗ್ಗೆ ಉತ್ತರ ಪ್ರದೇಶ ಸಿಎಂ ಯೋಗಿ ಆದಿತ್ಯನಾಥ್ ಸಂತಾಪ ಸೂಚಿಸಿದ್ದಾರೆ. ಗಾಯಳುಗಳನ್ನು ಆಸ್ಪತ್ರೆಗೆ ದಾಖಲಿಸಿ ಸೂಕ್ತ ಚಿಕಿತ್ಸೆ ಕೊಡಿಸುವಂತೆ ಅಧಿಕಾರಿಗಳಿಗೆ ತಿಳಿಸಿದ್ದಾರೆ.

ಸಾರ್ವಜನಿಕ ಪ್ರಕಟಣೆ

ನಮ್ಮ ಕಕ್ಷಿದಾರರಾದ ಮೈಸೂರು–570023. ಅರವಿಂದನಗರ, 1ನೇ ಹಂತ, 3ನೇ ಮೇನ್, 9ನೇ ಕ್ರಾಸ್, ಮನ ನಂ. 559 ರಲ್ಲಿ ವಾಸವಾಗಿರುವ ಲೇಟ್ ಬೆಟ್ಟಯ್ಯ ರವರ ಮಗನಾದ ಸುಮಾರು 62 ವರ್ಷದ ಶ್ರೀ ರಾಜಮುಡಿ. ಹೆಚ್.ಬಿ. ರವರು ಷೆಡ್ಯೂಲ್ ನಲ್ಲಿ ನಮೂದಿಸಿರುವ ಸ್ವತ್ತನ್ನು ಲೇ॥ ಬಿ.–ಎಂ.ಬಸವರಾಜು ಅವರ ಮಕ್ಕಳಾದ 1. ಶ್ರೀಮತಿ. ವಿಜಯಕುಮಾರಿ, 2. ಶ್ರೀ. ರಾಜಶೇಖರಮೂರ್ತಿ 3. ಶ್ರೀ. ಸತೀಶ್ ಕುಮಾರ್, 4. ಶ್ರೀಮತಿ. ಲಕ್ಷ್ಮೀ ಬಾಯಿ (ರಾಣಿ) ಮತ್ತು 5. ಶ್ರೀಮತಿ ಲಕ್ಷ್ಮಿ ರವರಿಂದ ಖರೀದಿಸಲು ಇಚ್ಚಿಸಿದ್ದು ಸದರಿ ವಿಷಯಕ್ಕೆ ಸಂಬಂದಿಸಿದಂತೆ ಯಾರಿಗಾದರೂ ಯಾವುದೇ ಹಕ್ಕು, ಹಿತಾಸಕ್ತಿ ಇದ್ದಲ್ಲಿ ಹಕ್ಕು ಮತ್ತು ಹಿತಾಸಕ್ತಿಗೆ ಪೂರಕವಾದ ಅಗತ್ಯ ದಾಖಲೆಗಳೊಂದಿಗೆ ಈ ಪತ್ರಿಕಾ ಪ್ರಕಟಣೆಯ ದಿನದಿಂದ 7 ದಿನಗಳ ಒಳಗಾಗಿ ನಮಗೆ ಸಲ್ಲಿಸತಕ್ಕದ್ದು ತಪ್ಪಿದಲ್ಲಿ ನಮ್ಮ ಕಕ್ಷಿದಾರರು ಷಡ್ಯೂಲ್ ಸ್ವತ್ತಿಗೆ ಸಂಬಂದಿಸಿದಂತೆ ಯಾವುದೇ ರೀತಿಯ ತಕರಾರು ಇಲ್ಲವೆಂದು ಪರಿಗಣಿಸಿ ಸದರಿ ಸ್ವತ್ತನ್ನು ಖರೀದಿಸಲು ಹಕ್ಕುಳ್ಳವರಾಗಿರುತ್ತಾರೆ. ನಂತರ ಬಂದಂತಹ ಯಾವುದೇ ತಕರಾರುಗಳಿಗೆ ನನ್ನ ಕಕ್ಷಿದಾರರು ಭಾದ್ಯರಾಗಿರುವುದಿಲ್ಲ.

ಅನುಸೂಚಿ ಸ್ವತ್ತಿನ ವಿವರ :ಮೈಸೂರು ತಾಲ್ಲೂಕು, ವರುಣ ಹೋಬಳಿ, ದೇವಲಾಪುರ ಗ್ರಾಮದ ಸರ್ವೆನಂ. 36/3 ವಿಸ್ತೀರ್ಣ 1 ಎಕರೆ 16 ಗುಂಟೆ ಖುಷ್ಕಿ ಜಮೀನಿಗೆ ಚಕ್ಕುಬಂದಿ : ಪೂರ್ವಕ್ಕೆ: ರಸ್ತೆ, ಪಶ್ಚಿಮಕ್ಕೆ : ಗಿಡ್ಡ ಮಾದಪ್ಪ ಲಿಂಗಪ್ಪನ ಜಮೀನು, ಉತ್ತರಕ್ಕೆ : ಲಿಂಗಪ್ಪನ ಜಮೀನು, ದಕ್ಷಿಣಕ್ಕೆ : ಮೇಗಲಹಟ್ಟಿ ನಿಂಗಪ್ಪನ ಜಮೀನು.

Sd/- O. SHAMA BHAT, BA.LL.B.. -Reg. No. KAR 417/77 ,O. SATHISHA, B.SC. LL B.. Reg. No. KAR 721/89 ADVOCATES No. 20/c. 2nd Floor, Near Airlines Hotel, Jayalakshmi Vilas Road, Chamarajapuram, Mysuru-570005.
Mobile No: 99007 88245
Date: 15-05-2025

ಸಾರ್ವಜನಿಕ ತಿಳುವಳಿಕೆ

ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ನಮ್ಮ ಕಕ್ಷಿದಾರಾರು, ಇದೇ ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ಮೈಸೂರು ಕಸಬಾ, ಸರ್ವೇ ನಂ. 86. ಸದರಿ ಸ್ವತ್ತಿನ ಪೂರ್ವಕ್ಕೆ ಚಾಮುಂಡಿ ಬೆಟ್ಟಕ್ಕೆ ಹೋಗುವ ದಾರಿ (ಹಾಗೂ ಹಾಲಿ ಸ್ಮಶಾನ) ಹಾಗೂ ಸರ್ವೇ ನಂ. 85 ಮತ್ತು 90 ರ ಜಮೀನು, ಪಶ್ಚಿಮಕ್ಕೆ: ಮೈಸೂರು–ನಂಜನಗೂಡು ಊಟಿ ರಸ್ತೆ, ದಕ್ಷಿಣಕ್ಕೆ: ಜೆ.ಎಸ್.ಎಸ್. ವಿದ್ಯಾ ಸಂಸ್ಥೆಯ ಆಸ್ತಿ ಹಾಗೂ ಉತ್ತರಕ್ಕೆ: ಸರ್ವೇ ನಂ. 82ರ ಜಮೀನು ಈ ಮಧ್ಯೆ ಇರುವ 15 ಎಕರೆ 17 ಗುಂಟೆ (0–30 ಗುಂಟೆ ಖರಾಬು ಒಳಗೊಂಡು) ಪೂರ್ಣ ಸ್ವತ್ತನ್ನು ದಿನಾಂಕ: 17–02–1964ನೇ ಇಸವಿಯಂದು ಮೈಸೂರು ದಕ್ಷಿಣ, ಮಾನಂದವಾಡಿ ರಸ್ತೆ, ಮನೆ ನಂ. 1131/6 ರಲ್ಲಿ ವಾಸವಾಗಿದ್ದ, ಟಿಂಬರ್ ವ್ಯಾಪಾರದ ಸಿದ್ದಯ್ಯನವರ ಮಕ್ಕಳಾದ ಎಂ.ಎಸ್.ಚಂದ್ರಶೇಖರ್ ರವರು ನೋಂದಾಯಿತ ಕ್ರಯ ಪತ್ರದ ಮೂಲಕ ಅಂದಿನ ಮಾರುಕಟ್ಟೆ ಬೆಲೆಗನುಗುಣವಾಗಿ ಖರೀದಿಸಿದ ಸ್ವತ್ತಾಗಿದ್ದು, ಸದರಿ ಕ್ರಯ ಪತ್ರದ ದಿನದಿಂದ ತಹಲ್ ವರೆವಿಗೂ ಎಂ.ಎಸ್. ಚಂದ್ರಶೇಖರ್ ರವರೇ ಸಂಪೂರ್ಣ ಮಾಲೀಕರಾಗಿ ಅನುಭವಿಸಿಕೊಂಡು ಬಂದಿದ್ದು, ಸದರಿಯವರು ಆ ಮಧ್ಯದಲ್ಲಿ ಅಕಾಲ ಮರಣ ಹೊಂದಿದ ಕಾರಣ, ಅನುಸೂಚಿ ಸ್ವತ್ತಿನ ಸಂಬಂಧ ಪೌತಿ ಖಾತೆ ವಗೈರೆಗಳನ್ನು ಬದಲಾಯಿಸಿಕೊಳ್ಳಲು ಅವರ ಕಾನೂನು ಬದ್ಧ ವಾರಸುದಾರರಾದ ನಮ್ಮ ಕಕ್ಷಿದಾರರುಗಳಿಗೆ ಸಕಾಲದಲ್ಲಿ ಸಾಧ್ಯವಾಗಿರುವುದಿಲ್ಲ. ಈ ಸಂದರ್ಭವನ್ನು ದುರುಪಯೋಗ ಪಡಿಸಿಕೊಂಡ ಕೆಲವೊಂದು ವ್ಯಕ್ತಿಗಳು ಈ ಮೇಲ್ಕಂಡ ಸ್ವತ್ತಿಗೆ ಸಂಬಂಧಿಸಿದಂತೆ ಹಲವಾರು ದಾಖಲೆಗಳನ್ನು ಸೃಷ್ಟಿಸಿಕೊಂಡು ಅಪರಿಚಿತ ವ್ಯಕ್ತಿಗಳೊಡನೆ ಕಾನೂನು ಬಾಹಿರವಾಗಿ ವ್ಯವಹರಿಸುತ್ತಿರುವುದು ನಮ್ಮ ಕಕ್ಷಿದಾರುಗಳ ಗಮನಕ್ಕೆ ಬಂದಿದ್ದು, ಈ ಸಂಬಂಧ ನಮ್ಮ ಕಕ್ಷಿದಾರರು ಈ ಮೇಲೆ ಹೇಳಿದ ಸಂಪೂರ್ಣ ಸ್ವತ್ತಿಗೆ ಕಾನೂನು ಬದ್ದ ಮಾಲೀಕರಾಗಿದ್ದು, ಸದರಿಯವರನ್ನು ಹೊರತುಪಡಿಸಿ ಮತ್ಯಾರಿಗೂ ಯಾವುದೇ ರೀತಿಯ ಹಕ್ಕು, ಅಧಿಕಾರ ಹಾಗೂ ಹಿತಾಸಕ್ತಿಗಳು ಈ ಮೇಲೆ ತಿಳಿಸಿದ ಸ್ವತ್ತಿನ ಮೇಲೆ ಇಲ್ಲದೇ ಇರುವ ಕಾರಣ, ಸಾರ್ವಜನಿಕರು ನಮ್ಮ ಕಕ್ಷಿದಾರರ ಮಾಲೀಕತ್ವಕ್ಕೆ ಒಳಪಟ್ಟ ಈ ಮೇಲ್ಕಂಡ ಸ್ವತ್ತಿನ ಸಂಬಂಧ ಯಾವುದೇ ರೀತಿಯಲ್ಲಿ ನಮ್ಮ ಕಕ್ಷಿದಾರರನ್ನು ಹೊರತು ಪಡಿಸಿ ಮತ್ಯಾವುದೇ ವ್ಯಕ್ತಿಗಳೊಡನೆ ವ್ಯವಹರಿಸಬಾರದೆಂದು ಈ ಮೂಲಕ ಸಾರ್ವಜನಿಕರಲ್ಲಿ ತಿಳಿಯಪಡಿಸಲಾಗಿದೆ ಹಾಗೊಂದು ವೇಳೆ ಈ ಸಾರ್ವಜನಿಕ ತಿಳುವಳಿಕೆಯನ್ನು ಲೆಕ್ಕಿಸದೇ ಮೇಲ್ಕಂಡ ಸ್ವತ್ತಿನ ಸಂಬಂಧ ವ್ಯವಹರಿಸಿದ್ದಲ್ಲಿ ಅದರಿಂದ ಉಂಟಾಗುವ ಯಾವುದೇ ನಷ್ಟ ಹಾಗೂ ಕಷ್ಟಗಳಿಗೆ ಆ ರೀತಿ ವ್ಯವಹರಿಸಿದ ವ್ಯಕ್ತಿಗಳೇ ಖುದ್ದು ಜವಾಬ್ದಾರರೆಂದು ತಿಳಿಯತಕ್ಕದ್ದು.

Sd/- N. MAHADEVASWAMY, BAL, LLB ADVOCATE. Address: 376/A, 'Aashirwad' 12th Cross, 'G' Block, Ramakrishna Nagar, Mysuru-570023. E-Mail: mahadev1976@hotmail.com Mob: 9448038689, Office: 0821-7969279
ದಿನಾಂಕ: 15–05–2025
ಸ್ಥಳ: ಮೈಸೂರು

ಪಟ್ಟಣ ಪಂಚಾಯಿತಿ ಕಾರ್ಯಾಲಯ, ಬೋಗಾದಿ

ಮೈಸೂರು ತಾಲ್ಲೂಕು ಮತ್ತು ಮೈಸೂರು ಜಿಲ್ಲೆ –570026
ದೂರವಾಣಿ ಸಂ: 0821–2331099
Web : www.bogaditown.mrc.gov.in
E. mail : itstaff_ulb_bogadi@yahoo.com

ಸಂ: ಪ.ಪಂ.ಬೋಗಾದಿ/ತಾ.ಶಾ./ಟೆಂಡರ್.ಸಿ.ಆರ್.03/2025–26
ದಿನಾಂಕ:08.05.2025

ಟೆಂಡರ್ ಪ್ರಕಟಣೆ

2024–25ನೇ ಸಾಲಿನ ಮುನಿಸಿಪಲ್ ನಿಧಿಯಲ್ಲಿ ಬೋಗಾದಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಬೇಸಿಗೆ ಸಮಯದಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿನ ಸರಬರಾಜಿಗೆ ತೊಂದರೆ ಉಂಟಾಗದಂತೆ, ನೀರಿನ ಟ್ಯಾಂಕರ್‌ಗಳನ್ನು ಬಾಡಿಗೆ ಆಧಾರದ ಮೇಲೆ ಪಡೆಯಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧ್ಯಾದೇಶ 1999 ಮತ್ತು ನಿಯಮಗಳು 2000ದಂತೆ, ಕರ್ನಾಟಕ ಲೋಕೋಪಯೋಗಿ ಇಲಾಖೆಯಲ್ಲಿ ನೋಂದಾಯಿತ ಅರ್ಹ ಸಿವಿಲ್ ಗುತ್ತಿಗೆದಾರರಿಂದ (ಕೆ.ಜಿ–1 ಡಾಕ್ಯೂಮೆಂಟ್‌ನಂತೆ) ಟೆಂಡರ್ ಆಹ್ವಾನಿಸಲಾಗಿದೆ. 1) ಬೋಗಾದಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಬಸವನಪುರ ಗ್ರಾಮಕ್ಕೆ ಟ್ಯಾಂಕರ್‌ಗಳ ಮೂಲಕ ಕುಡಿಯುವ ನೀರನ್ನು ಸರಬರಾಜು ಮಾಡುವುದು. ಅಂದಾಜು ಮೊತ್ತ **ರೂ.3.00 ಲಕ್ಷಗಳು,** ಇ.ಎಂ.ಡಿ **ರೂ.7,500/–, 2)** ಬೋಗಾದಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಬಸವನಪುರ ಗ್ರಾಮಕ್ಕೆ ಟ್ಯಾಂಕರ್‌ಗಳ ಮೂಲಕ ಕುಡಿಯುವ ನೀರನ್ನು ಸರಬರಾಜು ಮಾಡುವುದು. ಅಂದಾಜು ಮೊತ್ತ **ರೂ.3.00 ಲಕ್ಷಗಳು,** ಮುಂಗಡ ಠೇವಣಿ **ರೂ.7,500/–** ಟೆಂಡರ್ ಫಾರಂ ಬೆಲೆ **ರೂ.500/–** ಖಾಲಿ ಟೆಂಡರ್ ಫಾರಂಗೆ/ಅರ್ಜಿ ಸಲ್ಲಿಸಲು ಮತ್ತು ಖಾಲಿ ಟೆಂಡರ್ ಫಾರಂಗಳನ್ನು ವಿತರಿಸಲು ಕೊನೆಯ **ದಿನಾಂಕ:22.05.2025** ಸಾಯಂಕಾಲ 3.00 ಗಂಟೆಯವರೆಗೆ. ಭರ್ತಿ ಮಾಡಿದ ಟೆಂಡರ್‌ಗಳನ್ನು ಸ್ವೀಕರಿಸುವ **ದಿನಾಂಕ:22.05.2025** ಸಾಯಂಕಾಲ **5.00** ಗಂಟೆಯೊಳಗೆ. ಟೆಂಡರ್ ತೆರೆಯುವ **ದಿನಾಂಕ:23.05.2025** ಬೆಳಿಗ್ಗೆ **11.00** ಗಂಟೆಗೆ. (ಸಾಧ್ಯವಾಗದಿದ್ದಲ್ಲಿ ಮುಂದಿನ ದಿನಾಂಕವನ್ನು ತಿಳಿಸಿ ಟೆಂಡರ್ ತೆರೆಯಲಾಗುವುದು).

ಸಹಿ/– ಮುಖ್ಯಾಧಿಕಾರಿ, ಪಟ್ಟಣ ಪಂಚಾಯಿತಿ, ಬೋಗಾದಿ
DIPR/DDMYS/ 169/KSMCA/142/2025-26